ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜೂನ್ 14 ಬುಧವಾರ 2023

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 44 | ಸಂಚಿಕೆ: 59 | ಪುಟಗಳು: 12

ಸುದ್ದಿ ಮತ್ತು ಫೋಟೋಗೆ: news@mysurumithra.com ಜಾಹೀರಾತು: ad@mysurumithra.com

ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರಿಂದ ರೋಜ್ಗಾರ್ ಮೇಳ ಉದ್ಘಾಟನೆ

● ಮೈಸೂರಲ್ಲಿ 25 ಮಂದಿಗೆ ಸಾಂಕೇತಿಕವಾಗಿ ಉದ್ಯೋಗ ಆದೇಶ ಪ್ರತಿ ವಿತರಣೆ
● ದೇಶಾದ್ಯಂತ 70 ಸಾವಿರ ಮಂದಿಗೆ ಒಂದೇ ದಿನ ಉದ್ಯೋಗ ಭಾಗ್ಯ

ಮೈಸೂರು, ಜೂ. 13(ಆರ್‌ಕೆ)– ಮೈಸೂರಿನ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ (ಆಯಿಷ್)ಯಲ್ಲಿ ಮಂಗಳವಾರ ಏರ್ಪಡಿಸಿದ್ದ ರೋಜ್ಗಾರ್ ಮೇಳವನ್ನು ಕೇಂದ್ರದ ಕೃಷಿ ಮತ್ತು ರೈತ ಕಲ್ಯಾಣ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಅವರು ಉದ್ಘಾಟಿಸಿದರು.

ಕೇಂದ್ರದ ಶಿಕ್ಷಣ, ರೈಲ್ವೆ, ಹಣಕಾಸು, ಕಂದಾಯ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಆಟೋಮಿಕ್ ಎನರ್ಜಿ, ಆಡಿಟ್ ಅಂಡ್ ಅಕೌಂಟ್ಸ್ ಇಲಾಖೆ, ಅಂಚೆ, ಬ್ಯಾಂಕಿಂಗ್ ರಕ್ಷಣಾ ಇಲಾಖೆಗಳಲ್ಲಿ ನೇಮಕಗೊಂಡಿರುವ 25 ಮಂದಿಗೆ ಸಚಿವರು ಆದೇಶ ಪತ್ರಗಳನ್ನು ವಿತರಿಸಿದರು.

ಈ ಸಂದರ್ಭ ಮಾತನಾಡಿದ ಶೋಭಾ ಕರಂದ್ಲಾಜೆ, ಪ್ರಧಾನಮಂತ್ರಿಗಳು ನುಡಿದಂತೆ ನಡೆಯುತ್ತಿದ್ದಾರೆ. 10 ಲಕ್ಷ ಉದ್ಯೋಗ ಸೃಷ್ಟಿ ಮಾಡುವುದಾಗಿ ಹೇಳಿದ್ದ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ, ಈವರೆಗೆ ದೇಶದಾದ್ಯಂತ 3.59 ಲಕ್ಷ ಮಂದಿಗೆ ಉದ್ಯೋಗ ನೀಡಿದೆ. ಇಂದು 5ನೇ ರೋಜ್ಗಾರ್ ಮೇಳಗಳಲ್ಲಿ 70 ಸಾವಿರ ಮಂದಿಗೆ ನೇಮಕಾತಿ ಆದೇಶ ಪತ್ರ ನೀಡಲಾಗುತ್ತಿದೆ ಎಂದರು.

ಶಂಕುಸ್ಥಾಪನೆ ಮಾಡಿದ ಸಂಸತ್ ಭವನ, ರಾಷ್ಟ್ರೀಯ ಹೆದ್ದಾರಿಗಳು, ಸೇತುವೆಗಳು, ಐಐಟಿ ಸೇರಿದಂತೆ ಹಲವು ಪ್ರಮುಖ ಯೋಜನೆಗಳನ್ನು ಪ್ರಧಾನಿ ನರೇಂದ್ರ ಮೋದಿ ಅವರೇ ಉದ್ಘಾಟಿಸಿದ್ದಾರೆ. ವಿರಮಿಸದೇ ದೇಶಕ್ಕಾಗಿ ಅತೀ ವೇಗವಾಗಿ ಕೆಲಸ ಮಾಡುತ್ತಿರುವ ಪ್ರಧಾನಿಗಳು ಯಾವ ಇಲಾಖೆಯಲ್ಲೂ ಹುದ್ದೆಗಳನ್ನು ಖಾಲಿ ಬಿಡಬಾರದೆಂದು ಭರ್ತಿ ಮಾಡುವ ಮೂಲಕ ಆಡಳಿತ ಕಾರ್ಯಕ್ಷಮತೆಯನ್ನು ಸದೃಢಪಡಿಸುತ್ತಿದ್ದಾರೆ ಎಂದು ಶೋಭಾ ಕರಂದ್ಲಾಜೆ ತಿಳಿಸಿದರು.

10 ಲಕ್ಷ ಉದ್ಯೋಗ ನೀಡುವುದಾಗಿ ನೀಡಿದ ಭರವಸೆಯನ್ನು ವಿವಿಧ ಇಲಾಖೆಗಳಿಗೆ ನೇಮಕ ಮಾಡುವುದು, ಕೌಶಲ್ಯಾಭಿವೃದ್ಧಿ, ಸ್ಟಾರ್ಟಪ್‌ಗಳ ಮೂಲಕ ಈಡೇರಿಸಲಾಗುತ್ತಿದೆ. 72 ವರ್ಷದ ಪ್ರಧಾನ ಮಂತ್ರಿಗಳು, ತಮ್ಮ ಆರೋಗ್ಯವನ್ನೂ ಲೆಕ್ಕಿಸದೇ ದೇಶದ ಹಿತಕ್ಕಾಗಿ ವಿರಮಿಸದೇ ದುಡಿಯುತ್ತಿದ್ದಾರೆ ಎಂದು ಅವರು ಇದೇ ಸಂದರ್ಭದಲ್ಲಿ ನುಡಿದರು.

100 ವರ್ಷದ ಅಮೃತ ಮಹೋತ್ಸವದ ವೇಳೆಗೆ ಭಾರತವನ್ನು ಎತ್ತರದ ಸ್ಥಾನಕ್ಕೆ ಕೊಂಡೊಯ್ಯುತ್ತಿರುವ ನರೇಂದ್ರ ಮೋದಿ ಅವರ ಸಂಕಲ್ಪ ಸಾಕಾರಗೊಳಿಸಲು ನವ ಉದ್ಯೋಗಿಗಳೂ ಸೇರಿದಂತೆ ಎಲ್ಲರೂ ಕೈಜೋಡಿಸುವಂತೆ ಸಚಿವೆ ಶೋಭಾ ಕರಂದ್ಲಾಜೆ ಕರೆ ನೀಡಿದರು.

ಕೆ.ಆರ್.ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ, ಮೇಯರ್ ಶಿವಕುಮಾರ್, ಹಣಕಾಸು ಸೇವೆಗಳ ಇಲಾಖೆ ನಿರ್ದೇಶಕ ಸಂಜಯ್ ಕುಮಾರ್, ವಿಭಾಗೀಯ ರೈಲ್ವೆ ವ್ಯವಸ್ಥಾಪಕಿ ಶಿಲ್ಪಿ ಅಗರವಾಲ್, ಆಯಿಷ್ ನಿರ್ದೇಶಕಿ ಡಾ.ಎಂ. ಪುಷ್ಪಾವತಿ, ಕೆನರಾ ಬ್ಯಾಂಕ್ ಎಕ್ಸಿಕ್ಯೂಟಿವ್ ಡೈರೆಕ್ಟರ್ ದೆಬಾಶಿಷ್ ಮುಖರ್ಜಿ ಹಾಗೂ ಇನ್ನಿತರರು ರೋಜ್ಗಾರ್ ಮೇಳದಲ್ಲಿ ಪಾಲ್ಗೊಂಡಿದ್ದರು. ಮಂಗಳವಾರ ಮೈಸೂರು ಭಾಗದ 253 ಮಂದಿಗೆ ನೇಮಕಾತಿ ಆದೇಶ ಪತ್ರಗಳನ್ನು ವಿತರಿಸಲಾಯಿತು.



ಮೈಸೂರಿನ ಆಯಿಷ್ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ರೋಜ್ಗಾರ್ ಮೇಳದಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ 25 ಮಂದಿಗೆ ಕೇಂದ್ರ ಸರ್ಕಾರದ ವಿವಿಧ ಇಲಾಖೆಗಳ ಉದ್ಯೋಗ ನೇಮಕಾತಿ ಪತ್ರ ವಿತರಿಸಿದರು. ಶಾಸಕ ಟಿ.ಎಸ್.ಶ್ರೀವತ್ಸ, ಮೇಯರ್ ಶಿವಕುಮಾರ್, ಹಣಕಾಸು ಸೇವಾ ಇಲಾಖೆ ನಿರ್ದೇಶಕ ಸಂಜಯ್‌ಕುಮಾರ್, ರೈಲ್ವೆ ಡಿಆರ್‌ಎಂ ಶಿಲ್ಪಿ ಅಗರ್‌ವಾಲ್, ಆಯಿಷ್ ನಿರ್ದೇಶಕಿ ಡಾ.ಎಂ.ಪುಷ್ಪಾವತಿ, ಕೆನರಾ ಬ್ಯಾಂಕ್ ಎಕ್ಸಿಕ್ಯೂಟಿವ್ ಡೈರೆಕ್ಟರ್ ದೆಬಾಶಿಷ್ ಮುಖರ್ಜಿ ಇನ್ನಿತರರಿದ್ದಾರೆ.

200 ಯೂನಿಟ್ ಉಚಿತ ಕರೆಂಟ್ ಕೊಟ್ಟು ಅದರ ಹಿಂದೆಯೇ ಸರ್ಕಾರ ದರ ಏರಿಕೆ ಶಾಕ್ ಕೂಡ ಕೊಟ್ಟಿದೆ

ಗ್ಯಾರಂಟಿಗಳಿಗೆ ಎಲ್ಲಿಂದ ಹಣ ಹೊಂದಿಸುತ್ತೀರಿ ಎಂದು ಜನರಿಗೆ ಮಾಹಿತಿ ನೀಡುವಂತೆ ಶೋಭಾ ಕರಂದ್ಲಾಜೆ ಆಗ್ರಹ

ಮೈಸೂರು, ಜೂ.13 (ಬಿಎಲ್‌ಯು) –ಕಾಂಗ್ರೆಸ್ ಸರ್ಕಾರ ಒಂದು ಕೈಯ್ಯಲ್ಲಿ ಕೊಟ್ಟು, ಮತ್ತೊಂದು ಕೈಯ್ಯಲ್ಲಿ ಕಿತ್ತುಕೊಳ್ಳುವ ಕೆಲಸ ಮಾಡುತ್ತಿದೆ. ಗ್ಯಾರಂಟಿ ಸ್ಕೀಮ್‌ನಲ್ಲಿ ಫ್ರೀ ಕೊಡಲು ಆರಂಭಿಸಿದೆ. ಅದರಂತೆ 200 ಯೂನಿಟ್ ಫ್ರೀ ಕರೆಂಟ್ ಕೊಟ್ಟು, ಅದರ ಹಿಂದೆಯೇ ವಿದ್ಯುತ್ ದರ ಹೆಚ್ಚಳದ ಮೂಲಕ 'ಶಾಕ್' ಕೊಟ್ಟಿದೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಟೀಕಿಸಿದ್ದಾರೆ.

ಮೈಸೂರಿನಲ್ಲಿ ಮಂಗಳವಾರ ಮಾಧ್ಯಮದವರ ಜೊತೆ ಮಾತನಾಡಿದ ಅವರು, ಕರ್ನಾಟಕ ರಾಜ್ಯದ ಹಣಕಾಸಿನ ಸ್ಥಿತಿ ಹೇಗಿದೆ. ರಾಜ್ಯದ ಮೇಲೆ ಒಟ್ಟು ಎಷ್ಟು ಸಾಲದ ಹೊರೆ ಇದೆ. ಪ್ರತಿ ವರ್ಷ ಎಷ್ಟು ಬಡ್ಡಿ ಕಟ್ಟಬೇಕು ಎಂಬುದನ್ನು ಆಲೋಚನೆ ಮಾಡಿ, ಗ್ಯಾರಂಟಿ ಸ್ಕೀಮ್ ಘೋಷಿಸಬೇಕಿತ್ತು. ಆದರೆ ಇದರ ಬಗ್ಗೆ ಚಿಂತೆಯನ್ನೇ ಮಾಡದೆ ಕಾಂಗ್ರೆಸ್ ಬಹಳ ಧೈರ್ಯವಾಗಿ ಗ್ಯಾರಂಟಿ ಘೋಷಣೆ ಮಾಡಿದೆ ಎಂದು ಹೇಳಿದರು.

ಚುನಾವಣೆ ವೇಳೆ ಗ್ಯಾರಂಟಿಗಳಿಗೆ ಯಾವುದೇ ಕಂಡಿಷನ್ ಇರಲಿಲ್ಲ. ಆದರೆ ಈಗ ಒಂದೊಂದೇ ಷರತ್ತು ವಿಧಿಸುತ್ತಿದ್ದಾರೆ. ಜನರಿಗೆ ಶಾಕ್ ಕೊಟ್ಟಂತೆ ಕರೆಂಟ್ ಬಿಲ್ ಜಾಸ್ತಿ ಮಾಡಿದ್ದಾರೆ. ಒಂದು ಕಡೆ ಕೊಟ್ಟು, ಮತ್ತೊಂದು ಕಡೆ ಕಿತ್ತುಕೊಳ್ಳುವ ಕೆಲಸ ಮಾಡುತ್ತಿದ್ದಾರೆ ಎಂದು ಶೋಭಾ ಕರಂದ್ಲಾಜೆ ದೂರಿದರು.

ಬಿಟ್ಟಿ ಯೋಜನೆಗೆ ಹಣಕಾಸನ್ನು ಹೇಗೆ ಹೊಂದಿಸಿಕೊಳ್ಳುತ್ತೀರಾ ಎಂಬುದನ್ನು ಜನರಿಗೆ ತಿಳಿಸಬೇಕು. ರಾಜ್ಯದಲ್ಲಿ ಹೆಚ್ಚುವರಿ ತೆರಿಗೆ ವಿಧಿಸುತ್ತೀರಾ ಅಥವಾ ಸಾಲ ಮಾಡುತ್ತೀರಾ ಎಂಬುದನ್ನು ಮೊದಲು ತಿಳಿಸಿ. ರಾಜ್ಯದಲ್ಲಿ ಮಹಿಳೆಯರು ಬಹಳ ಖುಷಿಯಿಂದ ಬಸ್ಸಿನಲ್ಲಿ ಓಡಾಡುತ್ತಿದ್ದಾರೆ. ಆದರೆ ಕೆಎಸ್‌ಆರ್‌ಟಿಸಿಗೆ ಆಗುವ ನಷ್ಟವನ್ನು ಹೇಗೆ ಭರಿಸುತ್ತೀರಾ ಎಂಬುದನ್ನು ತಿಳಿಸಿ ಎಂದು ಆಗ್ರಹಿಸಿದರು.

ದೇಶದಲ್ಲಿ ಮುಂಗಾರು ಈಗಾಗಲೇ ಆರಂಭವಾಗಬೇಕಿತ್ತು, ಆದರೆ ತಡವಾಗಿದೆ. ರೈತರು ಎಲ್ಲಾ ತಯಾರಿ ಮಾಡಿಕೊಂಡಿದ್ದಾರೆ. ಕೇಂದ್ರ ಸರ್ಕಾರ ಕೂಡ ರಾಜ್ಯದ ಕೃಷಿ ಇಲಾಖೆಯ ಅಧಿಕಾರಿಗಳ ಜೊತೆ ನಿರಂತರ ಸಭೆ ನಡೆಸುತ್ತಿದೆ. ದೇಶದಲ್ಲಿ ಯಾವ ರಾಜ್ಯಕ್ಕೆ ಎಷ್ಟು ಬಿತ್ತನೆ ಬೀಜ ಬೇಕು, ಎಷ್ಟು ರಸಗೊಬ್ಬರ ಬೇಕು ಎಂಬುದನ್ನು ನಿಗದಿ ಮಾಡಿ, ಅದನ್ನು ಬಿಡುಗಡೆ ಮಾಡಲಾಗುವುದು. ದೇಶದಲ್ಲಿ ರಸಗೊಬ್ಬರ ಹಾಗೂ ಬಿತ್ತನೆ ಬೀಜ ಸಮಸ್ಯೆ ಸದ್ಯಕ್ಕೆ ಇಲ್ಲ ಎಂದು ಸಚಿವೆ ಶೋಭಾ ಕರದ್ಲಾಂಜೆ ಸ್ಪಷ್ಟಪಡಿಸಿದರು.

ವಿದ್ಯುತ್ ದರ ಏರಿಕೆ ಆದೇಶ ಮರುಪರಿಶೀಲಿಸಿ

ಮುಖ್ಯಮಂತ್ರಿಗಳಿಗೆ ಶಾಸಕ ತನ್ವೀರ್ ಸೇಠ್ ಆಗ್ರಹ



ತನ್ವೀರ್ ಸೇಠ್

ಮೈಸೂರು,ಜೂ.13(ಆರ್‌ಕೆ)– ಸಾರ್ವಜನಿಕರ ಹಿತದೃಷ್ಟಿಯಿಂದ ವಿದ್ಯುತ್ ದರ ಏರಿಕೆ ಆದೇಶವನ್ನು ಮರು ಪರಿಶೀಲಿಸುವಂತೆ ಎನ್.ಆರ್. ಕ್ಷೇತ್ರದ ಶಾಸಕ ತನ್ವೀರ್ ಸೇಠ್ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಈ ಕುರಿತು ಜೂನ್ 11ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿರುವ ಶಾಸಕರು, ಸಾರ್ವಜನಿಕರ ಹಿತದೃಷ್ಟಿಯಿಂದ ವಿದ್ಯುತ್ ದರ ಏರಿಕೆ ಆದೇಶವನ್ನು ಮರುಪರಿಶೀಲಿಸಿ, ಜನಸಾಮಾನ್ಯರಿಗೆ ಹೊರೆಯಾಗದಂತೆ ಜಾರಿಗೊಳಿಸಬೇಕೆಂದು ಮನವಿ ಮಾಡಿದ್ದಾರೆ.

ಚುನಾವಣಾ ಪೂರ್ವದಲ್ಲಿ ಕಾಂಗ್ರೆಸ್ ಪಕ್ಷದಿಂದ ಕೆಲ ಜನಪರ ಯೋಜನೆಗಳನ್ನು ಪ್ರಣಾಳಿಕೆಯಲ್ಲಿ ಘೋಷಿಸಿದ್ದರಿಂದ ಪೂರಕವಾಗಿ ಸ್ಪಂದಿಸಿ ಮತದಾರರು ಕಾಂಗ್ರೆಸ್ ಪಕ್ಷವನ್ನು ಪ್ರಚಂಡ ಬಹುಮತದೊಂದಿಗೆ ಗೆಲ್ಲಿಸಿದ್ದಾರೆ. ಐದು ಗ್ಯಾರಂಟಿಗಳನ್ನು ಸರ್ಕಾರ ರಚನೆಯಾದ ದಿನವೇ ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ. ಆ ಪೈಕಿ ಪ್ರತಿ ಮನೆಗೆ 200 ಯೂನಿಟ್ ವಿದ್ಯುತ್ ಉಚಿತವಾಗಿ ನೀಡುವ ಯೋಜನೆ ಮಾತ್ರ ವ್ಯತಿರಿಕ್ತವಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಕೆಇಆರ್‌ಸಿಯು ಏಪ್ರಿಲ್ 2023ರಿಂದ ಪೂರ್ವಾನ್ವಯವಾಗುವಂತೆ ಎಲ್ಲಾ ಎಸ್ಕಾಂಗಳು ಪೂರೈಸುವ ವಿದ್ಯುತ್ ದರವನ್ನು ಹೆಚ್ಚಿಸಿವೆ. ಇದು ಹಿಂದಿನ ಸರ್ಕಾರದಲ್ಲಿ ಮಾಡಿದ ಆದೇಶವಾಗಿದ್ದು, ಅದರಿಂದಾಗಿ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಚೇತರಿಸಿಕೊಳ್ಳದ ಜನರ ಗಾಯದ ಮೇಲೆ ಬರೆ ಎಳೆದಂತಾಗಿದೆ ಎಂದು ತನ್ವೀರ್ ಸೇಠ್ ಮುಖ್ಯಮಂತ್ರಿಗಳಿಗೆ ಬರೆದಿರುವ ಪತ್ರದಲ್ಲಿ ತಿಳಿಸಿದ್ದಾರೆ.

ಪ್ರಸ್ತುತ ಸರ್ಕಾರ ಘೋಷಿಸಿರುವ 200 ಯೂನಿಟ್ ಉಚಿತ ವಿದ್ಯುತ್ ಸೌಲಭ್ಯವನ್ನು ಜನಸಾಮಾನ್ಯರಿಗೆ ನೀಡಿ, ಮತ್ತೊಂದು ಕಡೆ ಕಿತ್ತುಕೊಂಡಂತಾಗಿದೆ. ವಿದ್ಯುತ್ ದರ ಏರಿಸಲು ನಿಗಮಗಳು 2022ರ ನವೆಂಬರ್ 30ರಂದು ಮಂಡಳಿಗೆ ಪ್ರಸ್ತಾವನೆ ಸಲ್ಲಿಸಿದ್ದು, ಬೆಲೆ ಏರಿಕೆ ಆದೇಶವನ್ನು ಮೇ 2023ರಲ್ಲಿ ಏಪ್ರಿಲ್ 2023ರಿಂದ ಪೂರ್ವಾನ್ವಯವಾಗುವಂತೆ ನೀಡಲಾಗಿದೆ ಎಂದು ಶಾಸಕ ತನ್ವೀರ್ ಸೇಠ್ ತಿಳಿಸಿದ್ದಾರೆ.

ಮೈಸೂರಲ್ಲಿ ಫಿಲ್ಮ್ ಸಿಟಿ ನಿರ್ಮಾಣಕ್ಕೆ ಮನವಿ; ಬಜೆಟ್ ನಂತರ ಪ್ರಸ್ತಾಪ: ಸಿಎಂ ಭರವಸೆ



ಬೆಂಗಳೂರು. ಜೂ.13(ಬಿಎಲ್‌ಯು) –ಮೈಸೂರಿನ ಕಡಕೊಳ ಬಳಿಯ ಇಮ್ಮಾವಿನಲ್ಲಿ ಫಿಲ್ಮ್ ಸಿಟಿ ನಿರ್ಮಾಣ ಮಾಡುವ ಯೋಜನೆಯನ್ನು ಸಿದ್ದರಾಮಯ್ಯ ಅವರೇ ರೂಪಿಸಿದ್ದರು. ಬಜೆಟ್‌ನಲ್ಲಿ ಘೋಷಣೆ ಕೂಡ ಮಾಡಿದ್ದರು. ಇದಕ್ಕಾಗಿ 100 ಎಕರೆ ಭೂ ಸ್ವಾಧೀನವಾದರೂ ಫಿಲ್ಮ್ ಸಿಟಿ ಯೋಜನೆ ನನೆಗುದಿಗೆ ಬಿದ್ದಿತ್ತು. ಈಗ ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿ ಆಗಿರುವ ಕಾರಣ ಚಿತ್ರ ನಗರಿ ಯೋಜನೆಗೆ ಚಾಲನೆ ಸಿಗುವ ಸಾಧ್ಯತೆ ಇದೆ.

ಚಲನಚಿತ್ರ ನಿರ್ದೇಶಕ ಎಸ್.ವಿ. ರಾಜೇಂದ್ರಸಿಂಗ್ ಬಾಬು ನೇತೃತ್ವದಲ್ಲಿ ರಾಷ್ಟ್ರ ಪ್ರಶಸ್ತಿ ವಿಜೇತ ಚಲನಚಿತ್ರ ಕಲಾವಿದರ ನಿಯೋಗವು ಇಂದು ಬೆಂಗಳೂರಿನಲ್ಲಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಮೈಸೂರಿನಲ್ಲಿ ಚಿತ್ರನಗರಿ ನಿರ್ಮಾಣ ಮಾಡುವಂತೆ ಮನವಿ ಮಾಡಿದರು.

ಮೈಸೂರಿನಲ್ಲಿ ಫಿಲ್ಮ್ ಸಿಟಿ ನಿರ್ಮಾಣ ಮಾಡಿದರೆ ಸಿನಿಮಾ ರಂಗಕ್ಕೆ ಏನೆಲ್ಲಾ ಅನುಕೂಲ ಆಗುತ್ತದೆ ಎಂದು ಈ ವೇಳೆ ಸಿನಿಮಾ ನಟರು, ನಿರ್ದೇಶಕರು ಹಾಗೂ ನಿರ್ಮಾಪಕರು ಸಿದ್ದರಾಮಯ್ಯ ಅವರಿಗೆ ವಿವರಿಸಿದರು. ಫಿಲ್ಮ್ ಸಿಟಿ ನಿರ್ಮಾಣದ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಸಿದ್ದರಾಮಯ್ಯ, ಬಜೆಟ್ ಮುಗಿದ ನಂತರ ಮೈಸೂರಿನ ವರುಣಾ ಕ್ಷೇತ್ರದ ಇಮ್ಮಾವಿನಲ್ಲಿ ಚಿತ್ರ ನಗರಿ ನಿರ್ಮಾಣಕ್ಕಾಗಿ ಮತ್ತೊಂದು ಸುತ್ತಿನ ಸುದೀರ್ಘ ಚರ್ಚೆ ನಡೆಸುವುದಾಗಿ ಭರವಸೆ ನೀಡಿದರು. ನಿಯೋಗ ಸಲ್ಲಿಸಿದ ಸಿನಿಮಾ ರಂಗದ ಇತರೆ ಮನವಿಗಳ ಬಗ್ಗೆಯೂ ಕ್ರಮ ಕೈಗೊಳ್ಳುವುದಾಗಿ ಆಶ್ವಾಸನೆ ನೀಡಿದರು.

ಚಲನಚಿತ್ರ ನಿರ್ದೇಶಕರಾದ ಗಿರೀಶ್ ಕಾಸರವಳ್ಳಿ, ಟಿ.ಎನ್.ಸೀತಾರಾಮ್, ಲಿಂಗದೇವರು, ನಂಜುಂಡೇಗೌಡ, ಹಿರಿಯ ನಟ ಶ್ರೀನಿವಾಸಮೂರ್ತಿ, ನಟಿ ವಿಜಯಲಕ್ಷ್ಮಿ ಸಿಂಗ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಆಯುಕ್ತ ಹೇಮಂತ್ ನಿಂಬಾಳ್ಕರ್ ಉಪಸ್ಥಿತರಿದ್ದರು.

ಚಾಮುಂಡೇಶ್ವರಿ ದರ್ಶನ ಪಡೆದ ಕಿಚ್ಚ ಸುದೀಪ್

ಮೈಸೂರು, ಜೂ.13(ಬಿಎಲ್‌ಯು) –ಸಾಂಸ್ಕೃತಿಕ ನಗರಿ ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿದ ಕಿಚ್ಚ ಸುದೀಪ್ ನಾಡದೇವತೆ ಚಾಮುಂಡೇಶ್ವರಿ ದೇವಿಯ ದರ್ಶನ ಪಡೆದರು.

ದೇವಸ್ಥಾನದ ಪ್ರವೇಶ ದ್ವಾರಕ್ಕೆ ಬರುತ್ತಿದ್ದಂತೆ ಅಭಿಮಾನಿಗಳು ಕಿಚ್ಚ ಸುದೀಪ್ ನೋಡಲು ಮುಗಿಬಿದ್ದರು. ಜನರನ್ನು ಪಕ್ಕಕ್ಕೆ ಸರಿಸಿ ಸುದೀಪ್ ದೇವಸ್ಥಾನದ ಒಳಗೆ ಹೋಗಲು ಅನುವು ಮಾಡಿಕೊಡುವಷ್ಟರಲ್ಲಿ ಪೊಲೀಸರು ಹರಸಾಹಸಪಟ್ಟರು. ತಮ್ಮನ್ನು ಸುತ್ತುವರೆದ ಅಭಿಮಾನಿಗಳ ಮಧ್ಯೆ ಪ್ರಯಾಸಪಟ್ಟ ಸುದೀಪ್ ನಾಡದೇವತೆ ತಾಯಿ ಚಾಮುಂಡೇಶ್ವರಿ ದೇವಿ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.



ದೇವರ ದರ್ಶನ ಪಡೆಯಲು ತಮ್ಮ ಮೇಲೆ ಮುಗಿಬೀಳುತ್ತಿದ್ದ ಅಭಿಮಾನಿಗಳ ವರ್ತನೆಯಿಂದ ಚಿತ್ರನಟ ಸುದೀಪ್ ಇರಿಸುಮುರಿಸುಗೊಂಡರು.

ಉಪ–ಲೋಕಾಯುಕ್ತರ ಜಿಲ್ಲಾ ಪ್ರವಾಸ


ಮೈಸೂರು, ಜೂ.13– ಜೂ.16ರಿಂದ 20ರವರೆಗೆ ಉಪ–ಲೋಕಾಯುಕ್ತ ಕೆ.ಎನ್. ಫಣೀಂದ್ರ ಮೈಸೂರು ಜಿಲ್ಲಾ ಪ್ರವಾಸ ಹಮ್ಮಿಕೊಂಡಿದ್ದು, ಜೂ.17ರ ಬೆಳಗ್ಗೆ 10ರಿಂದ 1:30ರವರೆಗೆ ಮತ್ತು 2:30ರಿಂದ 5ರವರೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸಾರ್ವಜನಿಕರ ಕುಂದುಕೊರತೆಗಳ ಅಹವಾಲು ಸ್ವೀಕಾರ ಮತ್ತು ವಿಚಾರಣೆಯನ್ನು ಹಮ್ಮಿಕೊಂಡಿದ್ದಾರೆ.

ಜಿಲ್ಲೆಯಲ್ಲಿ ಯಾರಿಗಾದರೂ ಸರ್ಕಾರಿ ಅಧಿಕಾರಿ ಅಥವಾ ನೌಕರರಿಂದ ತಮಗೆ ಕಾನೂನು ರೀತಿಯ ಆಗಬೇಕಾದ ಕೆಲಸದಲ್ಲಿ ವಿಳಂಬವಾಗಿದ್ದರೆ ಅಥವಾ ಅಧಿಕಾರಿ, ನೌಕರರು ನ್ಯಾಯಯುತವಾಗಿ ಮಾಡಿಕೊಡಬೇಕಾದ ಕೆಲಸಗಳಲ್ಲಿ ವೃಥಾ ತೊಂದರೆ ಕೊಡುವುದು ಅಥವಾ ಇನ್ನಾವುದೇ ತರಹದ ದುರಾಡಳಿತದಲ್ಲಿ ತೊಡಗಿದ್ದರೆ, ಅದರಿಂದ ತೊಂದರೆಗೊಳಗಾದ ಸಾರ್ವಜನಿಕರು ಉಪ ಲೋಕಾಯುಕ್ತರ ಮುಂದೆ ತಮ್ಮ ಅಹವಾಲುಗಳನ್ನು ಲಿಖಿತ ರೂಪದಲ್ಲಿ ಸಲ್ಲಿಸಬಹುದಾಗಿದೆ. ಜೂ.19ರ ಬೆಳಗ್ಗೆ 10ರಿಂದ 1:30ರವರೆಗೆ ಮತ್ತು 2:30ರಿಂದ 4:30ರವರೆಗೆ "ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲೆಗೆ ಸಂಬಂಧಪಟ್ಟಂತೆ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿರುವ (ಉಪಲೋಕಾಯುಕ್ತರ ಕಾರ್ಯವ್ಯಾಪ್ತಿಗೊಳಪಡುವ ಪ್ರಕರಣಗಳಲ್ಲಿ) ತನಿಖೆ ಅಥವಾ ವಿಚಾರಣೆಗೆ ಬಾಕಿ ಇರುವ ಪ್ರಕರಣಗಳಿಗೆ ಸಂಬಂಧಿಸಿದ ದೂರುದಾರು ಹಾಗೂ ಎದುರುದಾರರ ಸಮ್ಮುಖದಲ್ಲಿ ಕಾನೂನು ರೀತಿ ವಿಚಾರಣೆ ನಡೆಸಲಾಗುತ್ತದೆ. ದೂರುದಾರರು ಮತ್ತು ಎದುರುದಾರರು ನಿಗದಿತ ಸಮಯದಲ್ಲಿ ಹಾಜರಿದ್ದು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮೈಸೂರು ವಿಭಾಗದಲ್ಲಿನ ಲೋಕಾಯುಕ್ತ ಪೊಲೀಸ್ ವಿಭಾಗದ ಅಧೀಕ್ಷಕ ಸುರೇಶ್ ಬಾಬು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೆಆರ್‌ಎಸ್ ಹಿನ್ನೀರಲ್ಲಿ ಇಂಜಿನಿಯರಿಂಗ್ ವಿದ್ಯಾರ್ಥಿಗಳು ನೀರುಪಾಲು

ಮೈಸೂರು. ಜೂ.13(ಬಿಎಲ್‌ಯು)– ಕೆಆರ್‌ಎಸ್ ಹಿನ್ನೀರಿನಲ್ಲಿ ಈಜಲು ಹೋದ ಇಂಜಿನಿಯರಿಂಗ್ ವಿದ್ಯಾರ್ಥಿಗಳು ನೀರುಪಾಲಾದ ಘಟನೆ ನಡೆದಿದೆ.

ಹಾಸನ ಮೂಲದ ಚಿರಂತ್ (22) ಹಾಗೂ ಬೀದರ್ ಮೂಲದ ಸುನೀಲ್ (22) ಮೃತ ವಿದ್ಯಾರ್ಥಿಗಳಾಗಿದ್ದಾರೆ. ಮೈಸೂರಿನ ಖಾಸಗಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿದ್ದ ಇವರು, ಸ್ನೇಹಿತರ ಜೊತೆ ಜಾಲಿ ರೈಡ್ ಹೋಗಿದ್ದರು. ಮೈಸೂರು ತಾಲೂಕು ಮೀನಾಕ್ಷಿಪುರದ ಕೆಆರ್‌ಎಸ್ ಹಿನ್ನೀರಿನಲ್ಲಿ ಈಜಲು ಕಾವೇರಿ ನದಿಗೆ ಇಳಿದಿದ್ದಾರೆ. ಸುಮಾರು ಅರ್ಧ ಗಂಟೆ ಜಾಲಿಯಾಗಿ ಈಜಿದ್ದಾರೆ. ಆದರೆ ನೋಡ ನೋಡುತ್ತಿದ್ದಂತೆ ನೀರಿನ ಸೆಳೆತಕ್ಕೆ ಮುಳುಗಿದ್ದಾರೆ. ಭಯಗೊಂಡ ಸ್ನೇಹಿತರು ಪೊಲೀಸರಿಗೆ ವಿಷಯ ತಿಳಿಸಿದರು. ಇಲವಾಲ ಪೊಲೀಸರು ಈಜು ಪರಿಣಿತರ ಮೂಲಕ ಶವ ಪತ್ತೆಯಲ್ಲಿ ತೊಡಗಿದರು.



ಪರಿಶಿಷ್ಟ ಜಾತಿಗಳ ರಾಷ್ಟ್ರೀಯ ಆಯೋಗದ ಅಧೀನ ಕಾರ್ಯದರ್ಶಿ ಜಿಲ್ಲಾ ಪ್ರವಾಸ

ಮೈಸೂರು, ಜೂ.13– ಜೂನ್ 16 ಮತ್ತು 17ರಂದು ಪರಿಶಿಷ್ಟ ಜಾತಿಗಳ ರಾಷ್ಟ್ರೀಯ ಆಯೋಗದ ಅಧೀನ ಕಾರ್ಯದರ್ಶಿ ದಿಲೀಪ್‌ಕುಮಾರ್ ಗುಪ್ತ ಜಿಲ್ಲಾ ಪ್ರವಾಸ ಕೈಗೊಂಡಿದ್ದು, ಜೂನ್ 16 ರಂದು ಮಧ್ಯಾಹ್ನ 2 ಗಂಟೆಗೆ ಕೇಂದ್ರೀಯ ಆಹಾರ ತಾಂತ್ರಿಕ ಸಂಶೋಧನಾ ಸಂಸ್ಥೆಯ ಪರಿಶಿಷ್ಟ ಜಾತಿ ನೌಕರರ ಪ್ರತಿನಿಧಿಗಳೊಂದಿಗೆ ಸಭೆ ನಡೆಸುವರು.

ಮಧ್ಯಾಹ್ನ 12 ಗಂಟೆಗೆ ಕೇಂದ್ರೀಯ ಆಹಾರ ತಂತ್ರಜ್ಞಾನ ಸಂಶೋಧನಾ ಸಂಸ್ಥೆಯ ನಿರ್ದೇಶಕರು ಮತ್ತು ಎಲ್ಲಾ ಹಿರಿಯ ಅಧಿಕಾರಿಗಳೊಂದಿಗೆ ಸಂಸ್ಥೆಯ ಎಸ್‌ಸಿ ನೌಕರರ ಸಮಸ್ಯೆ, ನೇಮಕಾತಿ ಮತ್ತು ಬಡ್ತಿಯಲ್ಲಿ ಮೀಸಲಾತಿ ನೀತಿ ಮತ್ತು ಸೇವಾ ಸುರಕ್ಷತೆ, ಕೇಂದ್ರ ಹಾಗೂ ರಾಜ್ಯ ಅನುದಾನಿತ ಕಲ್ಯಾಣ ಯೋಜನೆಗಳ ಅನುಷ್ಠಾನದ ಬಗ್ಗೆ ಹಾಗೂ ಎಸ್ಸಿ ಜನರ ಯೋಗಕ್ಷೇಮಕ್ಕೆ ಸಂಬಂಧಿಸಿದ ಇತರ ಸಮಸ್ಯೆಗಳ ಕುರಿತು ಚರ್ಚಿಸುವರು.

ಜೂ.17ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲೆಯ ಎಸ್‌ಸಿ ನೌಕರರ ಸಮಸ್ಯೆಗಳ ಕುರಿತು, ನೇಮಕಾತಿ ಮತ್ತು ಬಡ್ತಿಯಲ್ಲಿ ಮೀಸಲಾತಿ ನೀತಿ ಮತ್ತು ಸೇವಾ ಸುರಕ್ಷತೆ, ಕೇಂದ್ರ ಹಾಗೂ ರಾಜ್ಯ ಅನುದಾನಿತ ಕಲ್ಯಾಣ ಯೋಜನೆಗಳ ಅನುಷ್ಠಾನದ ಬಗ್ಗೆ ಹಾಗೂ ಎಸ್ಸಿ ಜನರ ಯೋಗಕ್ಷೇಮಕ್ಕೆ ಸಂಬಂಧಿಸಿದ ಇತರ ಸಮಸ್ಯೆಗಳ ಕುರಿತು ಜಿಲ್ಲಾಧಿಕಾರಿ ಹಾಗೂ ಇತರ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸುವರು.

ನಾಳೆ ಉದ್ಯೋಗ ಮೇಳ

ಮೈಸೂರು,ಜೂ.13– ಬೆಂಗಳೂರಿನ ಡೈರಿ ಸರ್ಕಲ್‌ನಲ್ಲಿರುವ ಕೌಶಲ್ಯ ಭವನದ ಕೆಎಸ್‌ಡಿಸಿ ಕಚೇರಿಯಲ್ಲಿ ಜೂ.15ರಂದು ಬೆಂಗಳೂರು ಹೋಟೆಲ್ ಅಸೋಸಿಯೇಷನ್ ವತಿಯಿಂದ ಉದ್ಯೋಗ ಮೇಳ ಏರ್ಪಡಿಸಲಾಗಿದೆ. ಸ್ಟೀವರ್ಡ್, ಕ್ಯಾಪ್ಟನ್, ಅಡುಗೆ ಸಹಾಯಕ, ಮಾಣಿ, ಮೇಲ್ವಿಚಾರಕ ಹಾಗೂ ಬಾಣಸಿಗ ಹುದ್ದೆಗಳಿಗೆ ಉದ್ಯೋಗದಾತರು ನೇರ ಸಂದರ್ಶನ ನಡೆಸಲಿದ್ದಾರೆ.

ಈ ಹುದ್ದೆಗಳಿಗೆ ಎಸ್‌ಎಸ್‌ಎಲ್‌ಸಿ, ಪಿಯುಸಿ ಅಥವಾ ಡಿಪ್ಲೊಮಾ ಉತ್ತೀರ್ಣ/ಅನುತ್ತೀರ್ಣ ಅಥವಾ ಆಸಕ್ತರು ಯಾರಾದರೂ ಅರ್ಜಿ ಸಲ್ಲಿಸಬಹುದು. ಸದರಿ ಹುದ್ದೆಗಳಿಗೆ 13 ಸಾವಿರ ರೂ.ಗಳಿಂದ 16 ಸಾವಿರ ರೂ.ಗಳ ವರೆಗೆ ಸಂಬಳ ದೊರೆಯುತ್ತದೆ. ಮಾಹಿತಿಗಾಗಿ ನಗರದಲ್ಲಿರುವ ಜಿಲ್ಲಾ ಕೌಶಲ್ಯ ಅಭಿವೃದ್ಧಿ ಕಚೇರಿ ಅಥವಾ ದೂ.ಸಂ. 0821–2970815 ಸಂಪರ್ಕಿಸಬಹುದು.

ಕಲ್ಯಾಣ ನಿಧಿ: ವಿವಿಧ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಮೈಸೂರು,ಜೂ.13–ಹೂಟಗಳ್ಳಿ ನಗರಸಭಾ ವ್ಯಾಪ್ತಿಯಲ್ಲಿ ವಾಸವಾಗಿರುವವರಿಗೆ ಎಸ್‌ಎಫ್‌ಸಿ ಮುಕ್ತ ನಿಧಿ ಮತ್ತು ನಗರಸಭಾ ಸಾಮಾನ್ಯ ನಿಧಿಯಡಿಯಲ್ಲಿ 2023–24ನೇ ಸಾಲಿನ ಶೇ.24.10ರ ಪರಿಶಿಷ್ಟ ಜಾತಿ ಮತ್ತು ಪಂಗಡದವರ, ಶೇ.7.25ರ ಇತರೆ ಹಿಂದುಳಿದ ವರ್ಗದ ಬಡಜನರು ಹಾಗೂ ಶೇ.5ರ ವಿಶೇಷಚೇತನರ ಕಲ್ಯಾಣ ನಿಧಿಯ ಕಾರ್ಯಕ್ರಮಗಳಡಿಯಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಸದರಿ ವೈಯಕ್ತಿಕ ಸೌಲಭ್ಯಗಳನ್ನು ಪಡೆದುಕೊಳ್ಳಲು ಅರ್ಹ ಫಲಾನುಭವಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಸದರಿ ಸೌಲಭ್ಯ ಪಡೆಯಲಿಚ್ಛಿಸುವ ಫಲಾನುಭವಿಗಳು ಅಗತ್ಯ ದಾಖಲಾತಿಗಳೊಂದಿಗೆ ಜು.15ರ ಸಾಯಂಕಾಲ 5ರೊಳಗೆ ನಗರಸಭಾ ಕಚೇರಿಗೆ ನಿಗದಿತ ನಮೂನೆಯಲ್ಲಿ ಮಾಹಿತಿಗಳನ್ನು ಭರ್ತಿ ಮಾಡಿ ಅರ್ಜಿ ಸಲ್ಲಿಸಬಹುದು. ಮಾಹಿತಿಗೆ ಕಚೇರಿ ವೇಳೆಯಲ್ಲಿ ವಿಷಯ ನಿರ್ವಾಹಕರನ್ನು ಸಂಪರ್ಕಿಸಬಹುದು.

ಡಿಪ್ಲೊಮಾ ಕೋರ್ಸ್‌ಗೆ ಅರ್ಜಿ ಆಹ್ವಾನ

ಮೈಸೂರು, ಜೂ.13– ಮೈಸೂರಿನ ಸರ್ಕಾರಿ ಸಿಪಿಸಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ 2023–24ನೇ ಸಾಲಿನ ದ್ವಿತೀಯ ವರ್ಷದ ಡಿಪ್ಲೊಮಾಗೆ ಲ್ಯಾಟರ್ ಎಂಟ್ರಿ ಮೂಲಕ ಪ್ರವೇಶ ಪಡೆಯಲು ಐಟಿಐ, ದ್ವಿತೀಯ ಪಿಯುಸಿ (ವಿಜ್ಞಾನ), ತಾಂತ್ರಿಕ ವಿಷಯಗಳಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಜೂ.20ರವರೆಗೆ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದೆ. ಹೆಚ್ಚಿನ ಮಾಹಿತಿಗಾಗಿ dtek.karnataka.gov.in ವೆಬ್‌ಸೈಟ್ ವೀಕ್ಷಿಸಬಹುದು ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

14.6.2023 ಬುಧವಾರ, ಮಳೆ ನಕ್ಷತ್ರ: ಮೃಗಶಿರ, 08.06.2023 ರಿಂದ 21.06.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ, ಕೃಷ್ಣ ಪಕ್ಷ,
ತಿಥಿ: ಏಕಾದಶಿ, ನಕ್ಷತ್ರ: ಅಶ್ವಿನಿ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಚರ್ಮರೋಗಿಗಳಿಗೆ ಚಿಕಿತ್ಸಾ ಶಿಬಿರ, 'ಆಯುರ್ವೇದ ಪಂಚಕರ್ಮ', ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ, ಆಲನಹಳ್ಳಿ, ಬೆಳಗ್ಗೆಯಿಂದ.

■ **ವಕೀಲರ ಸಂಘ ಮೈಸೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ನ್ಯಾಯಾಂಗ ಇಲಾಖೆ ನೌಕರರ ಸಂಘ, ಭಾರತೀಯ ರೆಡ್ ಕ್ರಾಸ್ ಸೊಸೈಟಿ :** ವಿಶ್ವ ರಕ್ತದಾನ ದಿನಾಚರಣೆ ಪ್ರಯುಕ್ತ ರಕ್ತದಾನ ಶಿಬಿರ, ಉದ್ಘಾಟನೆ : ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಜಿ.ಎಸ್. ಸಂಗ್ರೇಶಿ, ಅಧ್ಯಕ್ಷತೆ : ವಕೀಲರ ಸಂಘದ ಅಧ್ಯಕ್ಷ ಎಂ. ಮಹದೇವಸ್ವಾಮಿ, ಮುಖ್ಯ ಅತಿಥಿಗಳು : ಮೈಸೂರು ಜಿಲ್ಲಾಧಿಕಾರಿ ಹಾಗೂ ಭಾರತೀಯ ರೆಡ್ ಕ್ರಾಸ್ ಸೊಸೈಟಿ ಅಧ್ಯಕ್ಷ ಡಾ. ಕೆ.ವಿ. ರಾಜೇಂದ್ರ, ಜಿಪಂ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಶ್ರೀಮತಿ ಕೆ.ಎಂ. ಗಾಯತ್ರಿ, ಎಂಎಂಸಿ ಮತ್ತು ಆರ್‌ಐ ಡೀನ್ ಮತ್ತು ನಿರ್ದೇಶಕರಾದ ಡಾ. ಕೆ.ಆರ್. ದಾಕ್ಷಾಯಿಣಿ, ಹಿರಿಯ ನ್ಯಾಯಾಧೀಶ ಬಿ.ಜಿ. ದಿನೇಶ್, ಕರ್ನಾಟಕ ರಾಜ್ಯ ವಕೀಲರ ಪರಿಷತ್ ಸದಸ್ಯ ಬಿ.ಆರ್. ಚಂದ್ರಮೌಳಿ, ಸಂಘದ ಕಾರ್ಯದರ್ಶಿ ಎಸ್. ಉಮೇಶ್, ಸಂಘದ ಉಪಾಧ್ಯಕ್ಷ ಪುಟ್ಟಸಿದ್ದೇಗೌಡ, ಸ್ಥಳ: ಮೈಸೂರು ಜಿಲ್ಲಾ ನ್ಯಾಯಾಲಯ ವಕೀಲರ ಸಂಘದ ಆವರಣ, ಬೆಳಗ್ಗೆ 10ಕ್ಕೆ.

■ **ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕ, ಲಯನ್ಸ್ ಬ್ಲಡ್ ಸೆಂಟರ್ ಜೀವಧಾರ, ಎನ್‌ಐಇ ಕಾಲೇಜು :** ವಿಶ್ವ ರಕ್ತದಾನಿಗಳ ದಿನಾಚರಣೆ, ಉದ್ಘಾಟನೆ: ಶಾಸಕ ಟಿ.ಎಸ್.ಶ್ರೀವತ್ಸ ಉಪಸ್ಥಿತರು: ಶಾಸಕರಾದ ಹರೀಶ್‌ಗೌಡ, ತನ್ವೀರ್ ಸೇಠ್, ಮೇಯರ್ ಶಿವಕುಮಾರ್, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಕೆ.ಹೆಚ್.ಪ್ರಸಾದ್, ಸಿ.ಜಿ.ಮುತ್ತಣ್ಣ, ಡಾ.ಮೊಹಮ್ಮದ್ ಶಿರಾಜ್ ಅಹಮದ್, ಕೆ.ಆರ್.ಆಸ್ಪತ್ರೆ ವೈದ್ಯಾಧಿಕಾರಿ ಡಾ.ಮಂಜುನಾಥ್, ಎನ್‌ಐಇ ಕಾಲೇಜು ಉಪ ಪ್ರಾಂಶುಪಾಲ ಡಾ.ಎಂ.ಎಸ್.ಗಣೇಶ್‌ಪ್ರಸಾದ್, ಅಧ್ಯಕ್ಷತೆ : ಲಯನ್ಸ್ ಬ್ಲಡ್ ಸೆಂಟರ್ ಜೀವಧಾರ ಮ್ಯಾನೇಜಿಂಗ್ ಟ್ರಸ್ಟಿ ಎಸ್.ಇ. ಗಿರೀಶ್, ಸ್ಥಳ:ಎನ್‌ಐಇ ಕಾಲೇಜು ಸಭಾಂಗಣ, ಮಾನಂದವಾಡಿ ರಸ್ತೆ, ಬೆಳಗ್ಗೆ 10.30ರಿಂದ.

■ **ಸುಯೋಗ್ ಆಸ್ಪತ್ರೆ, ಸುಯೋಗ್ ಸಮೂಹ ಶಿಕ್ಷಣ ಸಂಸ್ಥೆಗಳು:** ವಿಶ್ವ ರಕ್ತದಾನ ದಿನಾಚರಣೆ ಅಂಗವಾಗಿ ರಕ್ತದಾನ ಶಿಬಿರ, ಉದ್ಘಾಟನೆ: ಶಾಸಕ ಟಿ.ಎಸ್.ಶ್ರೀವತ್ಸ ಅಧ್ಯಕ್ಷತೆ: ಸುಯೋಗ್ ಆಸ್ಪತ್ರೆ ಅಧ್ಯಕ್ಷ ಡಾ. ಎಸ್.ಪಿ. ಯೋಗಣ್ಣ, ಕೆ.ಆರ್. ಆಸ್ಪತ್ರೆ ಬ್ಲಡ್ ಬ್ಯಾಂಕ್ ಅಧಿಕಾರಿ ಡಾ. ಮಂಜುನಾಥ್ ಅವರಿಂದ ರಕ್ತದಾನದ ಮಹತ್ವ ಕುರಿತು ಉಪನ್ಯಾಸ, ಉಪಸ್ಥಿತರು : ಸುಯೋಗ್ ಆಸ್ಪತ್ರೆ ಟ್ರಸ್ಟಿ ಶ್ರೀಮತಿ ಸುಧಾ ಯೋಗಣ್ಣ, ಸ್ಥಳ: ಸುಯೋಗ್ ಆಸ್ಪತ್ರೆ ಸಭಾಂಗಣ, ರಾಮಕೃಷ್ಣನಗರ, ಬೆಳಗ್ಗೆ 10.30ಕ್ಕೆ.

■ **ಪ್ರಾಚ್ಯ ವಿದ್ಯಾ ಸಂಶೋಧನಾಲಯ, ಇಂದಿರಾ ಗಾಂಧಿ ರಾಷ್ಟ್ರೀಯ ಕಲಾ ಕೇಂದ್ರ :** ಡಾ. ರಾ. ಗಣೇಶ (ಶತಾವಧಾನಿ) ಅವರಿಂದ ಪಂಚತಂತ್ರದಲ್ಲಿನ ಸಾಂಸ್ಕೃತಿಕ ಸ್ವಾರಸ್ಯಗಳು ಕುರಿತು ಉಪನ್ಯಾಸ ಕಾರ್ಯಕ್ರಮ, ಸ್ಥಳ: ವಿಜ್ಞಾನ ಭವನ ಸಭಾಂಗಣ, ಮಾನಸಗಂಗೋತ್ರಿ, ಮಧ್ಯಾಹ್ನ 3ಕ್ಕೆ.

■ **ಮೆಗ್ನಪ್ರೋ ಪ್ಯಾಕರ್ಸ್ ಅಂಡ್ ಪ್ರಿಂಟರ್ಸ್ :** ಉದ್ಘಾಟನಾ ಸಮಾರಂಭ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಸಮ್ಮುಖ : ಶ್ರೀ ಎಂ.ಎಲ್. ವರ್ಚಸ್ವಿ ಶ್ರೀಕಂಠ ಸಿದ್ದಲಿಂಗರಾಜೇ ಅರಸು, ಶ್ರೀ ತ್ರಿನೇತ್ರ ಮಹಂತ ಶಿವಯೋಗಿ ಸ್ವಾಮೀಜಿ, ಡಾ. ಶ್ರೀ ಬಿ.ಎಸ್. ವರುಣಲಿಂಗ ರಾಜೇ ಅರಸು, ಪಂಚಾಂಗಕರ್ತರಾದ ಡಾ. ಮೂಗೂರು ಮಧುದೀಕ್ಷಿತ್ ಗುರೂಜಿ, ಉದ್ಘಾಟನೆ : ಶಾಸಕ ಟಿ.ಎಸ್. ಶ್ರೀವತ್ಸ ಮುಖ್ಯ ಅತಿಥಿಗಳು : ಮಾಜಿ ಶಾಸಕ ಎಂ.ಕೆ. ಸೋಮಶೇಖರ್, ಪಾಲಿಕೆ ಸದಸ್ಯೆ ಆರ್. ಶಾಂತಮ್ಮ, ಸ್ಥಳ: ಇಂಡಸ್ಟ್ರಿಯಲ್ ಸಬರ್ಬ್, ವಿಶ್ವೇಶ್ವರನಗರ, ಸಂಜೆ 5.30ಕ್ಕೆ

■ **ರೋಟರಿ ಮೈಸೂರು ಮಿಡ್‌ಟೌನ್ :** ರೋಟರಿ ಮೈಸೂರು ಮಿಡ್‌ಟೌನ್–ವೀಕ್ರಿಯೇಟ್ ಸ್ಪೋರ್ಟ್ಸ್ ಪ್ರಶಸ್ತಿ ಪ್ರದಾನ ಸಮಾರಂಭ, ಮುಖ್ಯ ಅತಿಥಿಗಳು: ಡಾ. ಉಷಾ ಹೆಗ್ಡೆ, ಪ್ರಶಸ್ತಿ ಪುರಸ್ಕೃತರು : ಭರವಸೆಯ ಗಾಲ್ಫರ್ ವಿದಾತ್ರಿ ಕೆ. ಅರಸ್, ಸ್ಥಳ: ರೋಟರಿ ಸಭಾಂಗಣ, ಜೆಎಲ್‌ಬಿ ರಸ್ತೆ, ಸಂಜೆ 6ಕ್ಕೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.30 ಮೈಸೂರಿನ ಯೋಗ ವಿದ್ಯಾ ಪರಂಪರೆ–ಬಾನುಲಿ ಸರಣಿ, ಪ್ರಸ್ತುತಿ– ಡಾ. ಎ.ಎಸ್. ಚಂದ್ರಶೇಖರ್, 6.35 ನಮ್ಮ ನದಿಗಳು, ಲೇಖನ– ಎ.ಆರ್. ರಘುರಾಂ, ಪ್ರಸ್ತುತಿ– ಬಿ. ದಿಗ್ವಿಯ್, 6.40 ಪದ ಸಂಸ್ಕೃತಿ, ಪ್ರಸ್ತುತಿ– ಡಾ. ಬಿ. ಶ್ರೀರಾಂ ಭಟ್, 9.00 ವೃತ್ತಿ ಮಾರ್ಗದರ್ಶನ – ಜೀವ ವಿಜ್ಞಾನಗಳು ಅಂದರೆ ಬಯೋಸೈನಸ್ ವಿಷಯದಲ್ಲಿ ಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು ಕುರಿತು ಡಾ. ಶಕುಂತಲಾ ಹರಿದಾಸ್ ಅವರೊಂದಿಗೆ ಮಾತುಕತೆ, 9.30 ಚಿತ್ರಗೀತೆ, 10.00 ಹಿಂದೂಸ್ಥಾನಿ ಸಂಗೀತ –ಅಜಯ್ ಚಕ್ರವರ್ತಿ – ಗಾಯನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ

ಮಧ್ಯಾಹ್ನ: 12.30 ದೇವರನಾಮ–ಎಂ.ಎ. ಶೋಭ, 1.00 ಪ್ರಗತಿ ಪಥ–ಕೇಂದ್ರ ಸರ್ಕಾರದ ಅಭಿವೃದ್ಧಿ ಯೋಜನೆಗಳನ್ನು ಕುರಿತ ಕಾರ್ಯಕ್ರಮ, 1.20 ಭಾವಗೀತೆಗಳು–ಎ.ಎನ್. ಶೀಲಾ, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 3.00 ಲಯ ಸಂಭ್ರಮ:– "ಮೃದಂಗದ ಪ್ರಾಚೀನತೆ ಮತ್ತು ಇತಿಹಾಸ ಮತ್ತು ಪರಂಪರೆ", ಪ್ರಸ್ತುತಿ– ಹೆಚ್.ಎಲ್. ಶಿವಶಂಕರಸ್ವಾಮಿ, 4.00 ಮಹಿಳಾರಂಗ–ಸ್ತ್ರೀ ಚೇತನ. ಭಾಗವಹಿಸುವವರು ಮೀರಾ ಶಂಕರ್, ಲೇಖಕಿ ಹಾಗೂ ಏಕಾಂಗಿ ಪ್ರವಾಸಿ, 4.45 ಹಿಂದಿ ಪಾಠ –ಡಾ. ಸ್ಮಿತಾ ಚಿಪ್ಲೂಣ್‌ಕರ್, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.55 ಕೃಷಿರಂಗ–ಕಿಸಾನ್‌ವಾಣಿ –ಬೀಜೋತ್ಪಾದನೆಯಲ್ಲಿ ರೈತರಿಗೆ ಮುನ್ನೆಚ್ಚರಿಕಾ ಕ್ರಮಗಳನ್ನು ಕುರಿತು ಡಾ.ಹೆಚ್.ವಿ. ದಿವ್ಯಾ ಅವರೊಂದಿಗೆ ಸಂದರ್ಶನ, ಸಂದರ್ಶಕರು– ಜಿ.ಶಾಂತಕುಮಾರ್, 9.30 ಹಿಂದೂಸ್ಥಾನಿ ಸಂಗೀತ– ಡಾ. ಗಂಗೂಬಾಯಿ ಹಾನಗಲ್–ಗಾಯನ, 10.00 ಜನಪದ ಸಂಗೀತ, 10.30 ಸವಿನೆನಪು



ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಜೂನ್ 14 ಬುಧವಾರ 2023

ಸಂಪುಟ: 44 | ಸಂಚಿಕೆ: 59 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ನೀಟ್ ಫಲಿತಾಂಶದಲ್ಲಿ ಪರಿಶ್ರಮ ವಿದ್ಯಾರ್ಥಿಗಳ ಯಶಸ್ಸು


ಪ್ರದೀಪ್ ಈಶ್ವರ್

ಮೈಸೂರು:2023–24ನೇ ಸಾಲಿನ ನೀಟ್ (ರಾಷ್ಟ್ರೀಯ ವೈದ್ಯಕೀಯ ಅರ್ಹತಾ ಪರೀಕ್ಷೆ) ಫಲಿತಾಂಶ ಪ್ರಕಟವಾಗಿದ್ದು, ಇದರಲ್ಲಿ ಪರಿಶ್ರಮ ನೀಟ್ ಅಕಾಡೆಮಿಯ ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಯಶಸ್ಸು ಗಳಿಸಿದ್ದಾರೆ. ಈ ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೂ ವೈದ್ಯಕೀಯ ಸೀಟು ಲಭಿಸುವ ನಿರೀಕ್ಷೆ ಇದೆ ಎಂದು ಚಿಕ್ಕಬಳ್ಳಾಪುರ ಶಾಸಕರೂ ಆದ ಪರಿಶ್ರಮ ನೀಟ್ ಅಕಾಡೆಮಿ ಸಂಸ್ಥಾಪಕರಾದ ಪ್ರದೀಪ್ ಈಶ್ವರ್ ತಿಳಿಸಿದ್ದಾರೆ.



ರಾಜ್ಯದ ಎಲ್ಲಾ ತಾಲೂಕು ಆಸ್ಪತ್ರೆಯಲ್ಲಿ ಸ್ಕ್ಯಾನಿಂಗ್, ಡಯಾಲಿಸಿಸ್ ಯಂತ್ರ ಅಳವಡಿಸಲು

3 ತಿಂಗಳ ಗಡುವು

- ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಾಕೀತು
- ಗಡುವಿನೊಳಗೆ ಈ ಕಾರ್ಯವಾಗದಿದ್ದರೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮದ ಎಚ್ಚರಿಕೆ







ಬೆಂಗಳೂರು, ಜೂ.13(ಕೆಎಂಶಿ)– ರಾಜ್ಯದ ಎಲ್ಲಾ ತಾಲೂಕು ಆಸ್ಪತ್ರೆಗಳಲ್ಲಿ ಎಂಆರ್‌ಐ ಸ್ಕ್ಯಾನಿಂಗ್ ಹಾಗೂ ಡಯಾಲಿಸಿಸ್ ಯಂತ್ರಗಳನ್ನು ಇನ್ನು ಮೂರು ತಿಂಗಳೊಳಗಾಗಿ ಅಳವಡಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ಆದೇಶಿಸಿದ್ದಾರೆ.

ಈ ಎಲ್ಲಾ ಸೇವೆಗಳನ್ನು ಒದಗಿಸಲು ತಂತ್ರಜ್ಞರನ್ನು ನೇಮಕ ಮಾಡಬೇಕು ಹಾಗೂ ಅಗತ್ಯವಿರುವ ತಜ್ಞ ವೈದ್ಯರನ್ನು ನೇಮಕ ಮಾಡುವಂತೆಯೂ ಸೂಚಿಸಿದ್ದಾರೆ.

ಗೃಹ ಕಚೇರಿ ಕೃಷ್ಣಾದಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನ ಅಡಿ ಸವಲತ್ತುಗಳ ಬಳಕೆಗೆ ಸಂಬಂಧಿಸಿದಂತೆ ಪರಿಶೀಲನಾ ಸಂದರ್ಭದಲ್ಲಿ ಈ ಕಟ್ಟಾದೇಶ ಹೊರಡಿಸಿದ್ದಾರೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಬಡವರಿಗೆ ಈ ವಿಶೇಷ ಸೇವೆಗಳನ್ನು ಉತ್ತಮ ಆರೋಗ್ಯ ಸೇವೆ ಒದಗಿಸದಿದ್ದರೆ ಹೇಗೆ? ಎಂದು ಅಧಿಕಾರಿಗಳನ್ನು ಪ್ರಶ್ನಿಸಿದರು. ಕೇಂದ್ರದ ಸವಲತ್ತುಗಳನ್ನು ಸಮರ್ಪಕವಾಗಿ ಏಕೆ ಬಳಸಿಕೊಳ್ಳುತ್ತಿಲ್ಲ ಎಂದು ಪ್ರಶ್ನಿಸಿ, ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಮೂರು ತಿಂಗಳಲ್ಲಿ ಮತ್ತೊಮ್ಮೆ ಪರಿಶೀಲನೆ ನಡೆಸುತ್ತೇನೆ. ಇದೇ ಪರಿಸ್ಥಿತಿ ಮುಂದುವರೆದರೆ ಅಧಿಕಾರಿಗಳನ್ನೇ ಜವಾಬ್ದಾರಿ ಮಾಡುವುದಾಗಿ ಎಚ್ಚರಿಸಿದರು. ಈ ಯೋಜನೆ ಅಡಿ ಶೇ.52 ರಷ್ಟು ತಜ್ಞ ವೈದ್ಯರ ಕೊರತೆ ಇದೆ. ಶೇ.31 ರಷ್ಟು ಎಂಬಿಬಿಎಸ್ ವೈದ್ಯರ ಕೊರತೆ ಹಾಗೂ ಶೇ.18ರಷ್ಟು ●9ನೇ ಪುಟಕ್ಕೆ

ಶಾಸಕರು, ಸಂಘ ಸಂಸ್ಥೆಗಳು, ಸಾರ್ವಜನಿಕರ ವಿರೋಧದ ಹಿನ್ನೆಲೆ

'ಪೇ ಅಂಡ್ ಪಾರ್ಕ್' ಟೆಂಡರ್ ಪ್ರಕ್ರಿಯೆಗೆ ತಡೆ

ಸಭೆ ನಡೆಸಿ ಎಲ್ಲರಿಗೂ ಮನವರಿಕೆ ಮಾಡಿಕೊಟ್ಟು ಎಲ್ಲರ ವಿಶ್ವಾಸ ಪಡೆದ ನಂತರವೇ ಮತ್ತೆ ಪ್ರಕ್ರಿಯೆ ಆರಂಭ: ಮೇಯರ್ ಶಿವಕುಮಾರ್ ಸ್ಪಷ್ಟನೆ





ಮೈಸೂರು, ಜೂ.13(ಆರ್‌ಕೆ)– ಶಾಸಕ ಕೆ.ಹರೀಶ್ ಗೌಡ, ಮೈಸೂರು ರಕ್ಷಣಾ ವೇದಿಕೆ ಹಾಗೂ ಸಾರ್ವಜನಿಕರು ತೀವ್ರ ಆಕ್ಷೇಪ ವ್ಯಕ್ತಪಡಿಸಿರುವ ಹಿನ್ನೆಲೆಯಲ್ಲಿ (ಸೋಮವಾರ) ಕರೆಯಬೇಕಿದ್ದ ಮೈಸೂರಿನ 6 ರಸ್ತೆಗಳ 'ಪೇ ಅಂಡ್ ಪಾರ್ಕ್' (ಪ್ರಾಯೋಗಿಕ ಜಾರಿಗೆ) ಟೆಂಡರ್ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ತಡೆ ಹಿಡಿಯಲಾಗಿದೆ ಎಂದು ಮೇಯರ್ ಶಿವಕುಮಾರ್ ತಿಳಿಸಿದ್ದಾರೆ.

'ಮೈಸೂರು ಮಿತ್ರ'ನಿಗೆ ಈ ಕುರಿತು ಪ್ರತಿಕ್ರಿಯೆ ನೀಡಿರುವ ಅವರು, ಡಿ. ದೇವರಾಜ ಅರಸು ರಸ್ತೆಯ ಇಕ್ಕೆಲಗಳಲ್ಲಿ ಕೆಲವರು ಕಾರು ಮತ್ತು ದ್ವಿಚಕ್ರ ವಾಹನಗಳನ್ನು ಬೆಳಗ್ಗೆಯಿಂದ ರಾತ್ರಿವರೆಗೂ ನಿಲ್ಲಿಸುತ್ತಿರುವುದರಿಂದ ಸಾರ್ವಜನಿಕರಿಗೆ ತಮ್ಮ ವಾಹನ ನಿಲ್ಲಿಸಿ, ಅಂಗಡಿ–ಮುಂಗಟ್ಟುಗಳಲ್ಲಿ ವಹಿವಾಟು ನಡೆಸಲು ಸಾಧ್ಯವಾಗದೇ ಇರುವುದರಿಂದ ಇಲ್ಲಿ 'ಪೇ ಅಂಡ್ ಪಾರ್ಕ್' ವ್ಯವಸ್ಥೆ ಜಾರಿ ಮಾಡಬೇಕೆಂದು ಅಂಗಡಿ ಮಾಲೀಕರು, ಕೆಲ ಸಂಘಟನೆ ಪ್ರಮುಖರು ಪಾಲಿಕೆಗೆ ಮನವಿ ಮಾಡಿದ್ದರಿಂದ ತಾವು ಈ ಎಲ್ಲಾ ವಿಚಾರವನ್ನು ಕೌನ್ಸಿಲ್ ಸಭೆಗೆ ತಂದು ನಿರ್ಣಯ ಕೈಗೊಂಡಿದ್ದೆವು ಎಂದು ಅವರು ತಿಳಿಸಿದರು. ಡಿ.ದೇವರಾಜ ಅರಸು ರಸ್ತೆ ಸೇರಿದಂತೆ ●9ನೇ ಪುಟಕ್ಕೆ

ಉಚಿತ ಬಸ್ ಪ್ರಯಾಣ: ಪುಣ್ಯಕ್ಷೇತ್ರಗಳಲ್ಲಿ ಮಹಿಳಾ ಭಕ್ತರ ಜಂಗುಳಿ



ಮೈಸೂರು, ಜೂ.13(ಆರ್‌ಕೆ)–ಸಾರಿಗೆ ಬಸ್ಸುಗಳಲ್ಲಿ ಉಚಿತ ಪ್ರಯಾಣ ಅವಕಾಶವಿರುವುದರಿಂದ ಮಹಿಳೆಯರು ಇಷ್ಟದೇವರ ಸನ್ನಿಧಿ, ಯಾತ್ರಾಸ್ಥಳಗಳಿಗೆ ಹೆಚ್ಚಾಗಿ ಹೋಗಲಾರಂಭಿಸಿದ್ದಾರೆ.

ಕಳೆದ ಭಾನುವಾರದಿಂದ ಸರ್ಕಾರ 'ಶಕ್ತಿ' ಯೋಜನೆಗೆ ಚಾಲನೆ ನೀಡುತ್ತಿದ್ದಂತೆಯೇ ಸೋಮವಾರದಿಂದಲೇ ಮಹಿಳೆಯರು, ಚಾಮುಂಡಿಬೆಟ್ಟ, ನಂಜನಗೂಡು, ಶ್ರೀರಂಗಪಟ್ಟಣ, ಮೇಲುಕೋಟೆ, ತಲಕಾಡು, ಮುಡುಕುತೊರೆಗಳಂತಹ ಸ್ಥಳಗಳಿಗೆ ಸಾರಿಗೆ ಬಸ್ಸಿನಲ್ಲಿ ತೆರಳುತ್ತಿದ್ದಾರೆ. ಅದೇ ರೀತಿ ದೂರದ ಧರ್ಮಸ್ಥಳ, ಶೃಂಗೇರಿ, ಹೊರನಾಡು, ಉಡುಪಿ, ಕೊಲ್ಲೂರು, ಕಟೀಲು, ಮುರುಡೇಶ್ವರ, ಗೋಕರ್ಣಗಳಂತಹ ಯಾತ್ರಾಸ್ಥಳಗಳಿಗೂ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಉಚಿತವಾಗಿ ಕೆಎಸ್‌ಆರ್‌ಟಿಸಿ ಬಸ್ಸುಗಳಲ್ಲಿ ತೆರಳುತ್ತಿದ್ದಾರೆ.

ಪರಿಣಾಮ ಶ್ರೀ ಚಾಮುಂಡೇಶ್ವರಿ ದೇವಸ್ಥಾನ, ನಂಜನಗೂಡಿನ ಶ್ರೀ ನಂಜುಂಡೇಶ್ವರ ದೇವಾಲಯಗಳಲ್ಲಿ ಸೋಮವಾರ ಮತ್ತು ಮಂಗಳವಾರ ಮಹಿಳಾ ಭಕ್ತಾದಿಗಳ ಸಂಖ್ಯೆ ಹೆಚ್ಚಾಗಿದ್ದುದು ಕಂಡುಬಂದಿತು. ಈ ಮಾರ್ಗ ಸಂಚರಿಸುವ ಸಿಟಿ ಬಸ್‌ಗಳಲ್ಲಿ ಮಹಿಳಾ ಪ್ರಯಾಣಿಕರ ನೂಕು–ನುಗ್ಗಲು ಏರ್ಪಟ್ಟಿತ್ತು. ಸೀಟ್ ಖಾಲಿ ಇರದಿದ್ದರೆ ಬಸ್ ಏರಲು ಹಿಂದು–ಮುಂದು ನೋಡುತ್ತಿದ್ದ ಮಹಿಳೆಯರು ಉಚಿತವಾದ ಮೇಲೆ ಸಾರಿಗೆ ಬಸ್ ಸೀಟು ಭರ್ತಿಯಾಗಿದ್ದರೂ ನಿಂತುಕೊಂಡೇ ಚಾಮುಂಡಿಬೆಟ್ಟಕ್ಕೆ ಹೋಗಿ–ಬರುತ್ತಿದ್ದಾರೆ. ಅದೇ ರೀತಿ ಹೊರ ಜಿಲ್ಲೆಗಳ ಪ್ರಸಿದ್ಧ ದೇವಸ್ಥಾನಗಳಿರುವ ಸ್ಥಳಗಳಿಗೂ ಮಹಿಳೆಯರ ಭೇಟಿ ಹೆಚ್ಚಾಗಿದೆ.

ಅದರ ಪರಿಣಾಮ ಧರ್ಮಸ್ಥಳ ಶ್ರೀ ಮಂಜುನಾಥ ಸ್ವಾಮಿ ಸನ್ನಿಧಿ, ಉಡುಪಿಯ ಶ್ರೀ ಕೃಷ್ಣ ದೇವಾಲಯ, ಶೃಂಗೇರಿಯ ಶಾರದಾಂಬೆ ದೇವಸ್ಥಾನ, ಕೊಲ್ಲೂರಿನ ಶ್ರೀ ಮೂಕಾಂಬಿಕಾ, ಕಟೀಲಿನ ಶ್ರೀ ದುರ್ಗಾ ಪರಮೇಶ್ವರಿ, ●9ನೇ ಪುಟಕ್ಕೆ

ಬಿಜೆಪಿಯ ಕೆಲ ಅತಿರಥ ನಾಯಕರ

'ಅಡ್ಜೆಸ್ಟ್‌ಮೆಂಟ್ ಪಾಲಿಟಿಕ್ಸ್'

ಸ್ವಪಕ್ಷದ ನಾಯಕರ ವಿರುದ್ಧ ಘರ್ಜಿಸಿದ 'ಸಿಂಹ'

ಬಿಜೆಪಿ ಸೋಲಿಗೆ ಕೆಲ ಬಿಜೆಪಿ ನಾಯಕರೇ ಕಾರಣ



"ಎಲ್ಲಾ ಕಾಲದಲ್ಲೂ ಹೊಂದಾಣಿಕೆ ರಾಜಕಾರಣ ಪಕ್ಷಾತೀತವಾಗಿ ನಡೆದುಕೊಂಡೇ ಬಂದಿದೆ. ಇದರ ಬಗ್ಗೆ ಯಾರೂ ಕೂಡ ಮಾತನಾಡುವುದಕ್ಕೆ ಹೋಗುವುದಿಲ್ಲ ಮಾತನಾಡಿದರೆ ಅವರೇ ಕೆಟ್ಟರಾಗಬೇಕಾಗುತ್ತದೆ.


–ಸಿ.ಟಿ.ರವಿ, ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ




ಮೈಸೂರು, ಜೂ.13 (ಬಿಎಲ್‌ಯು)–ರಾಜ್ಯ ಬಿಜೆಪಿಯ ಕೆಲವು ಅತಿರಥ ಮಹಾ ನಾಯಕರು ಕಾಂಗ್ರೆಸ್ ನಾಯಕರ ಜೊತೆ 'ಅಡ್ಜೆಸ್ಟ್‌ಮೆಂಟ್ ಪಾಲಿಟಿಕ್ಸ್' ಮಾಡಿದ್ದಾರೆ ಎಂದು ಸಂಸದ ಪ್ರತಾಪ್ ಸಿಂಹ ಸ್ಫೋಟಕ ಹೇಳಿಕೆ ನೀಡುವ ಮೂಲಕ ಸ್ವಪಕ್ಷದ ನಾಯಕರ ವಿರುದ್ಧವೇ ಸಿಡಿದೆದ್ದಿದ್ದಾರೆ. ಮೈಸೂರಿನಲ್ಲಿ ಮಂಗಳವಾರ ಮಾಧ್ಯಮದವರ ಜೊತೆ ಮಾತನಾಡಿದ ಅವರು, ನಮ್ಮ ಪಕ್ಷದ ನಾಯಕರು ಕಾಂಗ್ರೆಸ್‌ನವರ ಜೊತೆ 'ಅಡ್ಜೆಸ್ಟ್‌ಮೆಂಟ್ ಪಾಲಿಟಿಕ್ಸ್' ಮಾಡಿದ ●9ನೇ ಪುಟಕ್ಕೆ

ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ವೇ ಟೋಲ್ ಕೂಡ 'ಫ್ರೀ' ಮಾಡಿ

ಮೈಸೂರು, ಜೂ.13 (ಬಿಎಲ್‌ಯು)– ಗ್ಯಾರಂಟಿ ಸ್ಕೀಂನಲ್ಲಿ ಎಲ್ಲಾ ಫ್ರೀ ಕೊಟ್ಟಿದ್ದೀರಾ. ಮೈಸೂರು– ಬೆಂಗಳೂರು ಎಕ್ಸ್‌ಪ್ರೆಸ್ ವೇ ಟೋಲ್ ಸೇರಿದಂತೆ ಕರ್ನಾಟಕದ ಎಲ್ಲಾ ಹೆದ್ದಾರಿಗಳ ಟೋಲ್ ಫ್ರೀ (ಮುಕ್ತ) ಮಾಡಿಬಿಡಿ. ಹೀಗೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಲಹೆ ನೀಡಿದವರು ಸಂಸದ ಪ್ರತಾಪ್ ಸಿಂಹ. ಎಲ್ಲವನ್ನೂ ಫ್ರೀ ಕೊಡುತ್ತೇವೆ ಅಂತೀರಲ್ಲ. ಟೋಲ್ ಅನ್ನು ಫ್ರೀ ಮಾಡಿ ಬಿಡಿ. ಗ್ಯಾರಂಟಿ ಸ್ಕೀಮ್‌ನಲ್ಲಿ ಇದನ್ನು ಸೇರಿಸಿ ಬಿಡಿ ಎಂದು ಆಗ್ರಹಿಸಿದರು. ಎಕ್ಸ್‌ಪ್ರೆಸ್ ವೇಗಾಗಿ ಬ್ಯಾಂಕ್‌ನಿಂದ ತೆಗೆದುಕೊಂಡಿರುವ ಸಾಲ ಪಾವತಿಸಿ, ಹೆದ್ದಾರಿ ನಿರ್ಮಾಣಕ್ಕೆ ಮಾಡಿರುವ ಉಳಿದ ಖರ್ಚನ್ನು ರಾಜ್ಯ ಸರ್ಕಾರವೇ ಭರಿಸಿ, ಎಲ್ಲಾ ಗ್ಯಾರಂಟಿ ಸ್ಕೀಮ್‌ನಂತೆ ಟೋಲ್ ಅನ್ನು ಕೂಡ ಫ್ರೀ ಮಾಡಿ ಬಿಡಿ ಎಂದು ಸಲಹೆ ನೀಡಿದರು. ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ವೇನಲ್ಲಿ ಶೇ.22ರಷ್ಟು ಟೋಲ್ ದರ ಹೆಚ್ಚಳ ಮಾಡಿರುವ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಕ್ರಮವನ್ನು ಪ್ರತಾಪ್ ಸಿಂಹ ಸಮರ್ಥಿಸಿಕೊಂಡರು. ಹಾಕಾಸು ವರ್ಷದ ಆರಂಭದಲ್ಲಿ ಇಂತಹ ಪ್ರಕ್ರಿಯೆ ಸಹಜ ಎಂದು ಸ್ಪಷ್ಟಪಡಿಸಿದರು. ಜಗತ್ತಿನ ಎಲ್ಲಾ ಎಕ್ಸ್‌ಪ್ರೆಸ್‌ವೇನಲ್ಲಿ ಟೋಲ್ ಸಂಗ್ರಹ ಕಡ್ಡಾಯವಾಗಿ ಮಾಡಲಾಗುತ್ತಿದೆ. ಮೈಸೂರು– ಬೆಂಗಳೂರು ಎಕ್ಸ್‌ಪ್ರೆಸ್ ವೇ ಒಂದರಲ್ಲಿ ಮಾತ್ರ ವಿಶೇಷವಾಗಿ ಟೋಲ್ ಸಂಗ್ರಹ ಮಾಡುತ್ತಿಲ್ಲ ಎಂದು ಟೋಲ್ ವಿರೋಧಿಗಳಿಗೆ ಪ್ರತಾಪ್ ಸಿಂಹ ತಿರುಗೇಟು ನೀಡಿದರು.





ನಕ್ಕರೆ ಅದೇ ಸ್ವರ್ಗ

ಟೆಕ್ನಿಷಿಯನ್ : "ನಿಮ್ಮನೇಲಿ ಏನೋ ರಿಪೇರಿ ಆಗಬೇಕಾಗಿದೆ ಅಂತ ಫೋನು ಮಾಡಿದ್ದು ನೀವೇನಾ?"

ಮನೆಯಾಕೆ : "ಹೌದಪ್ಪಾ, ಯಜಮಾನರು ರೂಂನಲ್ಲಿದ್ದಾರೆ ನೋಡು!"

ಮೈಸೂರು ಮಿತ್ರ

ಬುಧವಾರ, 14 ಜೂನ್ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ತನ್ನ ಗಂಡನ ಕೀರ್ತಿಗೆ ಕಳಂಕ ಬಾರದಂತೆ ಕಾಪಾಡುವುದು ಹೆಂಡತಿಯ ಧರ್ಮ. ಅದಕ್ಕಾಗಿ ಅವಳು ಸುಳ್ಳು ಹೇಳುವುದರಲ್ಲಿ ತಪ್ಪಿಲ್ಲ. –ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಜನಕ್ಕಂಜದಿದ್ದರೂ ಮನಕ್ಕಂಜು

ನಿಮ್ಮ ಪತ್ರಗಳು

'ಪೇ ಅಂಡ್ ಪಾರ್ಕಿಂಗ್' ಜಾರಿ ಉತ್ತಮ ನಿರ್ಣಯ



ಮಾನ್ಯರೆ,

ಮೈಸೂರು ಮಹಾನಗರ ಪಾಲಿಕೆ ನಗರದ ಪ್ರಮುಖ ರಸ್ತೆಗಳಲ್ಲಿ "ಪೇ ಅಂಡ್ ಪಾರ್ಕಿಂಗ್" (ಹಣ ಪಾವತಿಸಿ ವಾಹನ ನಿಲ್ಲಿಸಿ) ವ್ಯವಸ್ಥೆಯನ್ನು ಜಾರಿಗೆ ತರಲು ಇತ್ತೀಚಿನ ಕೌನ್ಸಿಲ್ ಸಭೆಯಲ್ಲಿ ನಿರ್ಣಯ ತೆಗೆದುಕೊಂಡಿರುವುದು ಉತ್ತಮ ನಿರ್ಧಾರ

ಮೈಸೂರಿನ ಕೆಲವು ಪ್ರಮುಖ ರಸ್ತೆಗಳಾದ, ದೇವರಾಜ ಅರಸು ರಸ್ತೆ, ಸಯ್ಯಾಜಿರಾವ್ ರಸ್ತೆ, ಅಶೋಕ ರಸ್ತೆ, ಧನ್ವಂತರಿ ರಸ್ತೆ, ಶಿವರಾಂ ಪೇಟೆ ರಸ್ತೆ ಹೀಗೆ ಪ್ರಮುಖ ವಾಣಿಜ್ಯ ಕೇಂದ್ರದ ರಸ್ತೆಯಲ್ಲಿರುವ ಅಂಗಡಿಗಳ ಮಾಲೀಕರು ತಮ್ಮ-ತಮ್ಮ ಅಂಗಡಿಗಳ ಮುಂಭಾಗದಲ್ಲಿ ಬೆಳಗ್ಗೆ ಹತ್ತರಿಂದ ರಾತ್ರಿ ಹತ್ತು ಗಂಟೆಯ ತನಕವೂ ತಮ್ಮ ಕಾರುಗಳನ್ನು ನಿಲ್ಲಿಸಿ, ಸಾರ್ವಜನಿಕರು ಖರೀದಿಗೆ ಇಲ್ಲವೆ ಯಾವುದಾದರೂ ಕೆಲಸದ ನಿಮಿತ್ತ ಈ ರಸ್ತೆಗಳಿಗೆ ಹೋದರೆ, ತಮ್ಮ ವಾಹನಗಳನ್ನು ಪಾರ್ಕಿಂಗ್ ಮಾಡುವುದೇ ಬಹು ದೊಡ್ಡ ಸಮಸ್ಯೆಯಾಗಿದೆ.

ಕೆಲವು ಅಂಗಡಿಗಳ ಮಾಲೀಕರು ತಮ್ಮ ಅಂಗಡಿಗಳ ಮುಂಭಾಗದ ರಸ್ತೆಯನ್ನು ತಮ್ಮ ಸ್ವಂತ ಜಾಗವೆಂದೇ ಭಾವಿಸಿದ್ದಾರೆ. ಇಲ್ಲಿ ವಾಹನ ನಿಲ್ಲಿಸಲು ಸಾರ್ವಜನಿಕರಿಗೆ ಕಿರಿಕಿರಿ ಉಂಟು ಮಾಡುತ್ತಾರೆ. ಕಳೆದ ನಾಲ್ಕೈದು ವರ್ಷಗಳ ಹಿಂದೆಯೇ ಪೇ ಅಂಡ್ ಪಾರ್ಕ್ ಯೋಜನೆ ಜಾರಿಗೆ ತರಲು, ಅಂದಿನ ಕೌನ್ಸಿಲ್ ಸಭೆಯಲ್ಲಿ ನಿರ್ಣಯ ಮಾಡಿದ್ದರು. ಆದರೆ ಕೆಲವು ಪಟ್ಟಭದ್ರ ಹಿತಾಸಕ್ತಿಗಳಿಂದ ಅದು ಸಾಧ್ಯವಾಗಿರಲಿಲ್ಲ. ಈಗ ಪೇ ಅಂಡ್ ಪಾರ್ಕಿಂಗ್ ವ್ಯವಸ್ಥೆ ಕಟ್ಟುನಿಟ್ಟಾಗಿ ಜಾರಿಗೆ ಬರುವಂತಾಗಲಿ, ಟೆಂಡರ್ ಕರೆದು ಪಾರದರ್ಶಕತೆ ಕಾಪಾಡಲಿ, ಇದರಿಂದ ಸಾರ್ವಜನಿಕರಿಗೂ ಅನುಕೂಲ ಮತ್ತು ನಗರ ಪಾಲಿಕೆಗೂ ಆದಾಯ ಬರುತ್ತದೆ.

–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು

'ಪೇ ಅಂಡ್ ಪಾರ್ಕ್' ಸರ್ಕಾರದ ತತ್ವ ಸಿದ್ಧಾಂತಕ್ಕೆ ವಿರುದ್ಧವಾದುದು

ಮಾನ್ಯರೆ,

ಸೋಮವಾರದ 'ಸ್ಟಾರ್ ಆಫ್ ಮೈಸೂರ್' ಪತ್ರಿಕೆಯಲ್ಲಿ ಕೆಬಿ. ಗಣಪತಿಯವರ ಮೈಸೂರು ಮಹಾನಗರ ಪಾಲಿಕೆಯ 'ಪೇ ಅಂಡ್ ಪಾರ್ಕ್ ವ್ಯವಸ್ಥೆ – ಅಂಗಡಿ ಮಾಲೀಕರ ಪ್ರತಿಭಟನೆ; ಪಾರ್ಕಿಂಗ್ ಜಾಗದ ಮೇಲಿನ ಒತ್ತಡವನ್ನು ಕಡಿಮೆ ಮಾಡಲು ಯಾವುದೇ ದಾರಿ ಇಲ್ಲ' (MCC's 'Pay and Park' system -shoppers protest; No way to ease pressure on parking space) ಶೀರ್ಷಿಕೆಯಡಿ ಪ್ರಕಟವಾದ ಭೂಮಂತ್ರ ಮತ್ತು ಅದಕ್ಕೆ ಸಂಬಂಧಿಸಿದ ಸುದ್ದಿಗಳಿಗೆ ಸಂಬಂಧಿಸಿದಂತೆ; ಮೈಸೂರು ಮಹಾನಗರ ಪಾಲಿಕೆಗೆ ನನ್ನ ಪ್ರಶ್ನೆ ಏನೆಂದರೆ ಈಗಿನ ಉಚಿತಗಳ ಕಾಲದಲ್ಲಿ ಯಾರೊಬ್ಬರೂ ಹೇಗೆ ತಾನೆ 'ಪೇ ಅಂಡ್ ಪಾರ್ಕ್' ಬಗ್ಗೆ ಯೋಚಿಸುತ್ತಾರೆ.

ಹೊಸ ಸರ್ಕಾರದಡಿ ಪಾವತಿಯಿಂದ ಸ್ವಾತಂತ್ರ್ಯಕ್ಕಾಗಿ ಜನರು ಮತ ಹಾಕಿದ್ದಾರೆ. ಮೈಸೂರು ನಗರ ಪಾಲಿಕೆ ಮೇಯರ್ ಮತ್ತು ಆಯುಕ್ತರು ಇದರತ್ತ ಗಮನಹರಿಸುವರೇ?

– ಕೆ. ವಿಜಯಕುಮಾರ್,
ಮೈಸೂರು. ತಾ.13.6.2023

ಗ್ಯಾರಂಟಿಗಳಿಗೆ ಷರತ್ತು ಏಕೆ?

ಮಾನ್ಯರೆ,

2023ರ ವಿಧಾನಸಭಾ ಚುನಾವಣೆಯಲ್ಲಿ ಸ್ಪಷ್ಟ ಬಹುಮತ ಪಡೆದು ರಚನೆಯಾದ ಕಾಂಗ್ರೆಸ್ ಸರ್ಕಾರ ಐದು ಗ್ಯಾರಂಟಿಗಳನ್ನು ಷರತ್ತುಬದ್ಧವಾಗಿ ಜಾರಿಗೊಳಿಸಿದೆ. ಅದರಲ್ಲಿ ಮಹಿಳೆಯರಿಗೆ ಬಸ್ ಪ್ರಯಾಣ ಉಚಿತ ಎಂದು ಘೋಷಿಸಿದೆ. ಇದಕ್ಕೆ ಮೂರು ತಿಂಗಳ ಅವಧಿಗೆ ಸ್ಮಾರ್ಟ್ ಕಾರ್ಡ್ ಪಡೆಯ ಬೇಕೆಂದು ಸೂಚಿಸಿದೆ. ಇದರ ಅವಶ್ಯಕತೆ ಇಲ್ಲ. ಎಲ್ಲಾ ಮಹಿಳೆಯರಿಗೆ ಕರ್ನಾಟಕದ ಎಲ್ಲಾ ಊರುಗಳಿಗೆ ಉಚಿತವಾಗಿ ಪ್ರಯಾಣಿಸಲು ಸರ್ಕಾರ ಅನುಮತಿ ನೀಡಿರುವಾಗ ಸ್ಮಾರ್ಟ್ ಕಾರ್ಡ್ ಬಸ್ ಪಾಸ್ ಅವಶ್ಯಕತೆ ಇಲ್ಲ. ಇದರಿಂದ ಪ್ರಯಾಣಿಕರ ಜೇಬಿಗೆ ಕತ್ತರಿ ಬೀಳುತ್ತದೆ. ಇದೇ ರೀತಿ ವಿದ್ಯುತ್ ದರ ವಿನಾಯ್ತಿಗೆ ಹೆಸರು ನೋಂದಣಿ ಅವಶ್ಯಕತೆ ಇಲ್ಲ. ಎಲ್ಲರಿಗೂ 200 ಯೂನಿಟ್ ವಿದ್ಯುತ್ ಉಚಿತ ಇರುವುದರಿಂದ ಈ ಗ್ಯಾರಂಟಿ ಎಲ್ಲರಿಗೂ ಅನ್ವಯಿಸುತ್ತದೆ. ಆದ್ದರಿಂದ ಷರತ್ತು ಇಲ್ಲದ ಗ್ಯಾರಂಟಿ ಜನರಿಗೆ ಬೇಕಾಗಿದೆ.

–ನಾಗರಿಕರು, ಮೈಸೂರು.

'ಗೀತ್ ಗಾತಾ ಚಲ್' ತಂಡಕ್ಕೆ ಅಭಿನಂದನೆ

ಮಾನ್ಯರೇ,

ಇತ್ತೀಚೆಗೆ ನಗರದ ಜೆ.ಕೆ.ಮೈದಾನದಲ್ಲಿರುವ ಅಮೃತ ಮಹೋತ್ಸವ ಭವನ ಸಭಾಂಗಣದಲ್ಲಿ ಆಯೋಜಿಸಿದ್ದ 'ಗೀತ್ ಗಾತಾ ಚಲ್' ಹಿಂದಿ ಹಾಗೂ ಕನ್ನಡ ಚಲನ ಚಿತ್ರಗಳ ಕಾರ್ಯಕ್ರಮ ತುಂಬಾ ಮನಮೋಹಕವಾಗಿತ್ತು. 21 ವರ್ಷಗಳ ಸುದೀರ್ಘ ಪಯಣವಾಗಿತ್ತು. ಸುಮಾರು 60ರಿಂದ 90ರ ದಶಕದ ಗೀತೆಗಳು ಪ್ರೇಕ್ಷಕರನ್ನು ಹಿಮಾಲಯದ ಎತ್ತರಕ್ಕೆ ಕೊಂಡೊಯ್ದಿತು. ಗಾಯಕ-ಗಾಯಕಿಯರು ತಮ್ಮಲ್ಲಿರುವ ಪ್ರತಿಭೆಯನ್ನು ಅನಾವರಣಗೊಳಿಸಿದರು. ಇಲ್ಲಿ ಆಗಮಿಸಿದ್ದ ಕಲಾಭಿಮಾನಿಗಳೂ ಸಹ 60ರಿಂದ 90ರ ವಯಸ್ಸಿನ ಆಸುಪಾಸಿನವರೇ ಆಗಿದ್ದರು. ಕಳೆದ ವರ್ಷ ಕೋವಿಡ್ ಪ್ರಯುಕ್ತ ಸ್ಥಗಿತಗೊಂಡಿದ್ದ ಈ ಕಾರ್ಯಕ್ರಮಕ್ಕೆ ಸಂಗೀತಾಸಕ್ತರು ಎಂದು ಶುರುವಾಗುತ್ತದೋ ಎಂದು ಕಾತರದಿಂದ ಎದುರು ನೋಡುತ್ತಿದ್ದರು.

ಈ ಕಾರ್ಯಕ್ರಮದ ಮತ್ತೊಂದು ವಿಶೇಷ ಎಂದರೆ ಕೆಬಿಜಿ ದಂಪತಿಗಳಿಗೆ ಸನ್ಮಾನ ಮಾಡಿದ್ದು. ನಾನು ಕೆಬಿಜಿಯವರ ಅಭಿಮಾನಿ. ಅವರು ಬರೆಯುವ 'ಭೂ ಮಂತ್ರ' ಅಂಕಣ ತಪ್ಪದೇ ಓದುತ್ತೇನೆ. ಅವರು ಮಾತನಾಡಿ, ಇಂದು 16ನೇ ವಯಸ್ಸಿಗೆ ಕ್ರಿಕೆಟಿಗೆ ಪಾದಾರ್ಪಣೆ ಮಾಡಿ ಸಾಕಷ್ಟು ಸಾಧನೆ ಮಾಡುತ್ತಾನೆ, ನಾನು ಸ್ವಲ್ಪ ತಡವಾಗಿ ಸಾಧನೆ ಮಾಡಿದ್ದೇನೆ ಎಂದರು. ಇದು ಅವರಲ್ಲಿರುವ ದೊಡ್ಡ ಗುಣ. ಇದರ ಪ್ರಾಯೋಜಕತ್ವವನ್ನು ವಹಿಸಿದ್ದ ಡಾ.ಜಗನ್ನಾಥ್ ಶೆಣೈ ಹಾಗೂ ಭಾಗವಹಿಸಿದ್ದ ಎಲ್ಲರಿಗೂ ನನ್ನ ಹೃತ್ಪೂರ್ವಕ ಅಭಿವಂದನೆಗಳು, ಅಭಿನಂದನೆಗಳು. 'ಗೀತ್ ಗಾತಾ ಚಲ್' 25ನೇ ವರ್ಷದ ಬೆಳ್ಳಿ ಹಬ್ಬ ಆದಷ್ಟು ಬೇಗ ಬಂದು ಇತಿಹಾಸ ನಿರ್ಮಿಸಲಿ ಎಂದು ಹಾರೈಸುತ್ತೇನೆ.

–ಸಿ.ವಿ.ಶ್ರೀನಿವಾಸ ರಾವ್, ವಿ.ವಿ.ಮೊಹಲ್ಲಾ, ಮೈಸೂರು



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು

ಸಂಸ್ಕೃತಿ ಚಿಂತನಾ


ಮಂಕುತಿಮ್ಮನ ಕಗ್ಗದ ಇಂಗ್ಲಿಷ್ ಅನುವಾದ

ಡಿವಿಜಿ ಅವರ ಅತ್ಯಂತ ಜನಪ್ರಿಯ ಕೃತಿ ಮಂಕುತಿಮ್ಮನ ಕಗ್ಗ ಇಪ್ಪತ್ತನೆಯ ಶತಮಾನದ ಭಗವದ್ಗೀತೆ ಎಂದು ಪ್ರಸಿದ್ಧವಾಗಿದೆ. ಅದರ ಮೇಲೆ ರಚಿತವಾದ ವ್ಯಾಖ್ಯಾನಗಳಿಗೆ ಲೆಕ್ಕ ವನ್ನಿಡಲು ಯಾರು ಶಕ್ತರು? ಭಗವದ್ಗೀತೆ ಹೇಗೆ ಜಗತ್ತಿನ ಎಲ್ಲ ಮುಖ್ಯ ಭಾಷೆಗಳಲ್ಲಿ ಅನುವಾದವನ್ನು ಕಂಡಿದೆಯೋ ಹಾಗೆ ಕಗ್ಗವೂ ಕಂಡು ವಿಶ್ವದ ಎಲ್ಲ ಜನರೂ ಅದರಲ್ಲಿರುವ ಜ್ಞಾನದ ಮಾಧುರ್ಯವನ್ನು ಸವಿಯಬೇಕು ಎಂಬ ಆಕಾಂಕ್ಷೆ ಕನ್ನಡಿಗರದು. ಅದಕ್ಕಿರುವ ಏಕೈಕ ಮಾರ್ಗ ಅನುವಾದ. ಪ್ರಪಂಚದಲ್ಲಿರುವ ಎಲ್ಲರೂ ಕನ್ನಡವನ್ನು ಕಲಿತು ಕಗ್ಗವನ್ನು ಓದಲಿ ಎಂಬ ಆಸೆ ನಮಗಿದ್ದರೂ ಅದು ವಾಸ್ತವದಲ್ಲಿ ಪ್ರಾಯೋಗಿಕ ಸತ್ಯವಲ್ಲ ಎಂಬ ಅರಿವೂ ನಮಗಿದೆ. ಬೇರೆ ಬೇರೆ ಭಾಷೆಗಳನ್ನು ಚೆನ್ನಾಗಿ ಬಲ್ಲ ಕನ್ನಡಿಗರು ಕಗ್ಗವನ್ನು ಆ ಭಾಷೆಗಳಲ್ಲಿ ಅನುವಾದಿಸುವುದೇ ಸರಿಯಾದ ದಾರಿ. ಈ ದಿಶೆಯಲ್ಲಿ ಮೊದಲನೇ ಹೆಜ್ಜೆಯಾಗಿ ಕಗ್ಗದ ಇಂಗ್ಲಿಷ್ ಅನುವಾದ ಅತ್ಯುತ್ತಮವಾಗಿ ಮೂಡಿಬಂದಿದೆ.

ಈ ಇಂಗ್ಲೀಷ್ ಅನುವಾದವನ್ನು ಮಾಡಿರುವವರು **ಡಾ. ಉಮಾರಾಮ್** ಮತ್ತು **ಕೆ.ಎಸ್. ರಾಮ್**. ಇಬ್ಬರೂ ಇಂಗ್ಲೀಷ್‌ನಲ್ಲಿ ನುರಿತವರು, ಅನುವಾದದಲ್ಲಿ ಸಿದ್ಧಹಸ್ತರು. ಅನೇಕ ಗ್ರಂಥಗಳನ್ನು ರಚಿಸಿದವರು. ಉಮಾರಾಮ್ ಛತ್ತೀಸ್‌ಘಡ ರಾಜ್ಯದ ಜಗದಲ್‌ಪುರದಲ್ಲಿರುವ ಕಾಕತೀಯ ಕಾಲೇಜಿನಲ್ಲಿ ದೀರ್ಘ ಕಾಲ ಇಂಗ್ಲಿಷ್ ಸಾಹಿತ್ಯವನ್ನು ಬೋಧಿಸಿ ಆ ಭಾಷೆಯ ನಾಡಿಯ ಮಿಡಿತವನ್ನು ಬಲ್ಲವರು. ಅವರು 2020ರಲ್ಲಿ ಯೂ ಟ್ಯೂಬ್‌ನಲ್ಲಿ ಮಂಕುತಿಮ್ಮನ ಕಗ್ಗದ ಸರಾಗ ವಾಚನವನ್ನು ಕೇಳಿ ಪ್ರಭಾವಿತರಾಗಿ ಅದರ ಇಂಗ್ಲಿಷ್ ಭಾಷಾನುವಾದವನ್ನು ಮಾಡಬೇಕೆಂಬ ಸಂಕಲ್ಪವನ್ನು ಮಾಡಿದ್ದಾರೆ. ಅದರ ಫಲವಾಗಿ ಈ ಪುಸ್ತಕ ನಮ್ಮ ಮುಂದಿದೆ. ಇದರಲ್ಲಿ ಸಂಪೂರ್ಣ ಮಂಕುತಿಮ್ಮನ ಕಗ್ಗವನ್ನು ಕನ್ನಡ ಲಿಪಿಯಲ್ಲಿ ಕೊಟ್ಟು ಪಕ್ಕದಲ್ಲಿ ಅದರ ಇಂಗ್ಲಿಷ್ ಪದ್ಯಾನುವಾದವನ್ನು ಕೊಟ್ಟಿದ್ದಾರೆ. ಎರಡು ಭಾಷೆಗಳನ್ನೂ ಬಲ್ಲವರು ಹೀಗೆಯೇ ಶ್ರೇಷ್ಠ ಕನ್ನಡ ಗ್ರಂಥಗಳ ಉತ್ಕೃಷ್ಟವಾದ ಅನುವಾದವನ್ನು ಮಾಡಿದರೆ ಕನ್ನಡ ತಾಯಿಯ ಸೌಭಾಗ್ಯವು ಹೆಚ್ಚುತ್ತದೆ. ಕನ್ನಡದ ಕಂಪು ವಿಶ್ವವ್ಯಾಪಿಯಾಗುತ್ತದೆ.

ಅನುವಾದ ಕಲೆ ಅತಿಗಹನವಾದುದು, ಅತಿ ಸೂಕ್ಷ್ಮವಾದುದು. ಅದರಲ್ಲಿ ಸಿದ್ಧಿ ಪಡೆಯುವುದು ಕಷ್ಟ. ಮೂಲದ ಪದಗಳನ್ನೇ ಅವಲಂಬಿಸಿ ಅನುವಾದ ಮಾಡಲು ಹೊರಟರೆ, ಭಾವವೇ ಹೊಮ್ಮುವುದಿಲ್ಲ. ಭಾವಾನುವಾದವನ್ನೇ ಮಾಡಿದರೆ, ಮೂಲಕ್ಕೂ ಅನುವಾದಕ್ಕೂ ಸಂಬಂಧವೇ ಇಲ್ಲ ಎಂದು ವಿಮರ್ಶಕರು ಮೂದಲಿಸುತ್ತಾರೆ. ಎರಡನ್ನೂ ಹೊಂದಿಸುವುದು ಕತ್ತಿಯ ಮೊನೆಯ ಮೇಲೆ ನಡೆಯುವಷ್ಟು ಕಷ್ಟ. ಹೊಸ ಪದ್ಯವನ್ನು ಬರೆಯಲು ಒಂದು ಭಾಷೆಯ ಜ್ಞಾನವೇ ಸಾಕು. ಅನುವಾದವನ್ನು ಮಾಡಲು ಎರಡು ಭಾಷೆಗಳ ಮೇಲೆ ಪ್ರಭುತ್ವ ಇರಬೇಕು.

ಇನ್ನೊಂದು ಸಮಸ್ಯೆ ಏನೆಂದರೆ ಮೂಲದಲ್ಲಿರುವ ಕೆಲವು ಪದಗಳಿಗೆ ಬೇರೆ ಭಾಷೆಯಲ್ಲಿ ಸಮಾನಾರ್ಥಕ ಪದವೇ ದೊರಕದು. ಉದಾಹರಣೆಗೆ ಮಂಕುತಿಮ್ಮನ ಕಗ್ಗದ ಮೊದಲನೆಯ ಪದ್ಯವನ್ನೇ ತೆಗೆದುಕೊಳ್ಳೋಣ!



ಶ್ರೀ ವಿಷ್ಣು ವಿಶ್ವಾದಿಮೂಲ ಮಾಯಾಲೋಲ
ದೇವ ಸರ್ವೇಶ ಪರಬೊಮ್ಮನೆಂದು ಜನಂ।
ಆವುದನು ಕಾಣದೊಡಮಳ್ತಿಯಿಂ ನಂಬಿಹುದೊ
ಆ ವಿಚಿತ್ರಕೆ ನಮಿಸೊ ಮಂಕುತಿಮ್ಮ ॥

ಇಲ್ಲಿರುವ ಮಾಯಾ ಎಂಬ ಶಬ್ದವನ್ನು ಇಂಗ್ಲೀಷಿಗೆ ತರ್ಜುಮೆ ಮಾಡಲು ಸಾಧ್ಯವೇ? ಭಾರತದ ಅಧ್ಯಾತ್ಮಶಾಸ್ತ್ರದಲ್ಲಿ ನೂರಾರು ವರ್ಷಗಳ ಚಿಂತನೆಯಿಂದ ಹುಟ್ಟಿದ ಆ ಶಬ್ದಕ್ಕೆ ಸರಿಸಮಾನ ಶಬ್ದವಿಲ್ಲ. ಅನುವಾದಕರೂ ಅದೇ ಶಬ್ದವನ್ನು ಬಳಸಬೇಕಾಗುತ್ತದೆ. ಈಗ ಪ್ರಸ್ತುತ ಪುಸ್ತಕದಲ್ಲಿ ಮೇಲಿನ ಪದ್ಯದ ಅನುವಾದವನ್ನು ನೋಡೋಣ.

Sri Vishnu ! Hailed by
folk as the cause
Of creation and maya;
as the Supreme God,
Supreme spirit! who, though
invisible, inspires belief;
salute that Marvel,
Mankutimma ||

ಅನುವಾದದಲ್ಲಿ ಮಾಯಾ ಎಂಬುದನ್ನು maya ಎಂದೇ ಉಳಿಸಿಕೊಂಡಿರುವುದನ್ನು ಗಮನಿಸಬೇಕು. ಮಾಯಾಲೋಲ ಎಂದರೆ ಮಾಯೆಯಲ್ಲಿ ಆನಂದದಿಂದ ವಿಹರಿಸುವನು ಎಂಬ ಅರ್ಥವನ್ನು ನಾನು ಗ್ರಹಿಸುತ್ತೇನೆ. ಅನುವಾದಕರು Cause of creation and maya ಎಂದಿದ್ದಾರೆ. ಡಿವಿಜಿ ಅವರು ಈಗ ಇದ್ದಿದ್ದರೆ ಯಾವ ಅಭಿಪ್ರಾಯ ಸರಿ ಎಂದು ಅವರನ್ನೇ ಕೇಳಬಹುದಾಗಿತ್ತು.

ಕಗ್ಗದ ವಿಶೇಷವೇನೆಂದರೆ ಅದರಲ್ಲಿರುವ ಕೆಲವು ವಾಕ್ಯಗಳು ಗಾದೆಗಳಂತೆ ಮನೆ ಮಾತಾಗಿವೆ. ಉದಾಹರಣೆಗೆ –

ಇಳೆಯ ಬಿಟ್ಟಿನ್ನುಮೆತ್ತಲು ಮೈದದ ಪ್ರೇತ–
ವಲೆವಂತೆ ಲೋಕ ತಲ್ಲಣಿಸುತಿಹುದಿಂದು ।
ಹಳೆಧರ್ಮ ಸತ್ತಿಹುದು ಹೊಸ ಧರ್ಮ ಹುಟ್ಟಿಲ್ಲ
ತಳಮಳಕೆ ಕಡೆಯೆಂದೊ ಮಂಕುತಿಮ್ಮ ॥

ಈ ಪದ್ಯದ ಉತ್ತರಾರ್ಧ, ಅದರಲ್ಲೂ ಮೂರನೆಯ ಸಾಲು ಅನೇಕ ಕನ್ನಡಿಗರ ನಾಲಿಗೆಯ ಮೇಲೆ ನಲಿದಾಡುತ್ತಿರುವುದನ್ನು ನಾನು ಕೇಳಿದ್ದೇನೆ. ಯುವಕರೂ ಮಾತನಾಡುವಾಗ ಈ ಸಾಲುಗಳನ್ನು ಹೇಳುತ್ತಾರೆ. ಈ ಪದ್ಯದ ಅನುವಾದವು ಮೂಲಕ್ಕೆ ಸಮಾನವಾಗಿ, ಮೂಲದಷ್ಟೇ ಪ್ರಭಾವಯುತವಾಗಿ ಮೂಡಿ ಬಂದಿರುವುದನ್ನು ನೋಡಬಹುದು –

Like a spirit, exiting here,
arriving
Nowhere, the restive world
wanders today
The old oder is dead; the
new, unborn;
when will this turmoil cease,
Mankutimma?

ಇಷ್ಟು ಚೆನ್ನಾಗಿ ಮೂಲದ ಭಾವವನ್ನು ಅಭಿವ್ಯಕ್ತಗೊಳಿಸಿರುವ ಅನುವಾದಕರು ಅಭಿನಂದನಾರ್ಹರು. ಇಲ್ಲಿ ನಮಗೆ ಸಂತೋಷದ ಕಾರಣವೇನೆಂದರೆ, ಮೂಲದಲ್ಲಿಲ್ಲದ ಏನನ್ನೂ ಅನುವಾದಕರು ಸ್ವಕಪೋಲಕಲ್ಪಿತವಾದುದನ್ನು ಸೇರಿಸಿಲ್ಲ, ಮೂಲದಲ್ಲಿರುವ ಯಾವ ಅಂಶವನ್ನೂ ಬಿಟ್ಟಿಲ್ಲ, ಅನಪೇಕ್ಷಿತವಾದ ಯಾವ ಪದವೂ ಅನುವಾದದಲ್ಲಿ ಸೇರಿಲ್ಲ.

'ನಾಮೂಲಂ ಲಿಖ್ಯತೇ ಕಿಂಚಿನ್ನಾನಪೇಕ್ಷಿತ ಮುಚ್ಯತೆ' ಎಂಬ ಮಲ್ಲಿನಾಥನ ಸೂತ್ರವನ್ನು ಈ ಅನುವಾದಕರು ಮೈಗೂಡಿಸಿಕೊಂಡಿದ್ದಾರೆಂದು ಹೇಳಬಹುದು.

ಡಿವಿಜಿ ಅವರು ದಾರ್ಶನಿಕ ಕವಿ. ದ್ವೈತ, ಅದ್ವೈತ, ವಿಶಿಷ್ಟಾದ್ವೈತ ಮುಂತಾದ ದರ್ಶನಗಳೆಲ್ಲ ಅವರಿಗೆ ಕರತಲಾಮಲಕ. ಕಗ್ಗದಲ್ಲಿ ಈ ಮತಗಳ ತತ್ತ್ವಗಳು ಸಹಜವಾಗಿ ಸೇರಿ ಹೋಗಿವೆ. ಉದಾಹರಣೆಗೆ–

ನೀರಧಿಬ್ರಹ್ಮ, ನೀರ್ಗಲ್ ಜೀವವೆನುತೊಂದು
ಕ್ಷೀರವದು, ಘೃತವಿದದರೊಳಗೆನ್ನು ತೊಂದು.
ಕೀರು ಪರಮಾನ್ನವದು, ದ್ರಾಕ್ಷೆಯಿದೆನುತ್ತೊಂದು
ಮೂರಿಂತು ಮತವಿವರ ಮಂಕುತಿಮ್ಮ ॥

ನೀರಧಿ ಎಂದರೆ ಕಡಲು, ನೀರ್ಗಲ್ ಎಂದರೆ ಮಂಜಿನಗಡ್ಡೆ. ಪರಬ್ರಹ್ಮವು ಸಮುದ್ರ, ಜೀವವು ಮಂಜಿನಗಡ್ಡೆ, ಹಿಮದ ಕಲ್ಲು. ಮಂಜು ನೀರಿಗಿಂತ ಬೇರೆಯಲ್ಲ. ಸಮುದ್ರದ ನೀರಿನಲ್ಲಿ ಸ್ವಲ್ಪ ಭಾಗ ಅಧಿಕ ಚಳಿಯ ಕಾರಣದಿಂದ ನೀರ್ಗಲ್ಲಾಗಿ ಕಾಣಿಸಿಕೊಳ್ಳುತ್ತದೆ. ಕೊನೆಗೆ ಕರಗಿ ಹೋಗಿ ಸಮುದ್ರವೇ ಆಗುತ್ತದೆ. 'ಜೀವೋ ಬ್ರಹ್ಮೈವ ನಾಪರಃ' ಎಂಬ ಅದ್ವೈತ ಸಿದ್ಧಾಂತ ಈ ತತ್ತ್ವವನ್ನವಲಂಬಿಸಿದೆ. ಬ್ರಹ್ಮವು ಹಾಲು, ಈ ಜೀವ ತುಪ್ಪ. ಹಾಲಿಲ್ಲದೆ ತುಪ್ಪವಿಲ್ಲ. ಹಾಗೆ ಬ್ರಹ್ಮವೊಂದು ಸ್ವತಂತ್ರ, ಜೀವನು ಪರತಂತ್ರ. ಜೀವನು ಪರಮಾತ್ಮನ ಅಂಶ.

'ಮಮೈವಾಂಶೋ ಜೀವಲೋಕೇ ಜೀವ ಭೂತಃ ಸನಾತನಃ' ಎಂಬ ತತ್ತ್ವವನ್ನು ಅಳವಡಿಸಿಕೊಂಡ ವಿಶಿಷ್ಟಾದ್ವೈತ ಸಿದ್ಧಾಂತವು ಇಲ್ಲಿ ಅಡಗಿದೆ. ಅದು (ಪರಮಾತ್ಮವು) ಕೀರು, ಪಾಯಸ. ಇದು (ಜೀವವು) ದ್ರಾಕ್ಷಿ. ಎರಡೂ ಬೇರೆ, ಆದರೆ ಜೀವನು ಭಗವಂತನನ್ನು ಅವಲಂಬಿಸಿರುವ ದಾಸ ಎಂಬ ತತ್ತ್ವ ದ್ವೈತ ಸಿದ್ಧಾಂತಾನುಸಾರವಾಗಿ ಇಲ್ಲಿ ಸೂಚಿಸಲಾಗಿದೆ. ಇದನ್ನು ಅರ್ಥ ಮಾಡಿಕೊಂಡು ಅನುವಾದಕರು ಸಮರ್ಥವಾಗುವಂತೆ ಇಂಗ್ಲೀಷ್‌ನಲ್ಲಿ ಹೇಳಿದ್ದಾರೆ –

The sea is Brahman; iceberg
is jiva-one view.
The that is milk; ghee, native
to it- a second view.
The Supreme soul is kheer;
the this, raisins; a third!
Thus are the triple views,
Mankutimma!

ಕನ್ನಡದಲ್ಲಿಲ್ಲದ, ಆದರೆ ಇಂಗ್ಲೀಷಿನಲ್ಲಿರುವ ವಿಶೇಷವೇನೆಂದರೆ capital letters. ಮೇಲಿನ ಅನುವಾದದಲ್ಲಿ the that ಮತ್ತು the this ಎಂಬ ಪದಗಳಲ್ಲಿ ಅನುವಾದಕರು ಇದನ್ನು ಚೆನ್ನಾಗಿ ಬಳಸಿಕೊಂಡಿದ್ದಾರೆ. ಒಂದು ಪರಬ್ರಹ್ಮವನ್ನೂ ಇನ್ನೊಂದು ಸಾಮಾನ್ಯ ಜೀವನವನ್ನೂ ಸೂಚಿಸುವುದು ಇಲ್ಲಿ ಭಾಷೆಯ ಅಥವಾ ಲಿಪಿಯ ವಿಶೇಷ.

ಅನೇಕ ಸಂದರ್ಭಗಳಲ್ಲಿ ಭಾರತ ಸಂಸ್ಕೃತಿಯ ಹಿನ್ನೆಲೆಯ ಪರಿಚಯ ಇಲ್ಲದವರಿಗೆ ಕಗ್ಗದ ಅನುವಾದ ಮಾತ್ರ ಸಾಕಾಗದಿರಬಹುದು. ಅವರಿಗೆ ಅನುಕೂಲವಾಗಲೆಂದು ಗ್ರಂಥದ ಕೊನೆಯಲ್ಲಿ ಅನುವಾದಕರು ಟಿಪ್ಪಣಿ (Notes) ಕೊಟ್ಟಿದ್ದಾರೆ. ಈ ಟಿಪ್ಪಣಿಗಳು ಕಗ್ಗವನ್ನು ಗಂಭೀರವಾಗಿ ಅಧ್ಯಯನ ಮಾಡುವ ಸಕಲರಿಗೂ ಅತ್ಯಂತ ಉಪಯುಕ್ತವಾಗಿವೆ. ಒಂದು ಪದ್ಯದ ಅನುವಾದವನ್ನೂ ಟಿಪ್ಪಣಿಯನ್ನೂ ನೋಡೋಣ;

ಚಲನೆ ವಿಶ್ವಾಸ್ತರಣೆಯದುವೆ
ಮಾಯಾಭ್ರಮಣೆ
ಸಲೆ ಬಗೆಯಲದು ಪರ ಬ್ರಹ್ಮ ವಿಸ್ಫುರಣೆ.
ಥಳಥಳಕೆ ವಜ್ರದಲಿ ನೈಜವಿರುವಂತೆಯು–
ಜ್ಜ್ವಲತೆ ಬೊಮ್ಮಗೆ ನೈಜ ಮಂಕುತಿಮ್ಮ ॥

The dynamics of this
complex world are Maya's
Make-believe. Deeper
thought suggests: Maya
Radiates God! Like
diamond dazzling
intuitively,
Radiance is innate go God,
Mankutimma!

NOTES : The relation between God and Maya is a very complex subject, viewed differently by different schools of thoughts in India. The view in this verse is close to the view of Advaita, Monism whose most illustrious exponent was Adi Shankaracharya. Godis diamond; the dazzle is Maya! Aren't the two one?

ಈ ವಿವರಣೆ ಎಲ್ಲ ಜಿಜ್ಞಾಸುಗಳಿಗೂ ಬೇಕಾದುದಲ್ಲವೆ? ಮತ್ತೆ ಅನುವಾದಕರಿಗೆ ಇಂಗ್ಲಿಷ್ ಸಾಹಿತ್ಯದ ಅಂತರಾಳದ ಪರಿಚಯ ಇರುವುದರಿಂದ ಟಿಪ್ಪಣಿಗಳಲ್ಲಿ ಹಲವರು ಕವಿಗಳ, ವಿಜ್ಞಾನಿಗಳ, ದಾರ್ಶನಿಕರ ಸೂಕ್ತಿಗಳನ್ನು ಸಂದರ್ಭೋಚಿತವಾಗಿ ಕೊಟ್ಟಿದ್ದಾರೆ.

'Shape without form, shade
without colour,
Paralysed force, gesture
without motion (T.S. Eliot)
"Art initates life (Aristotle)."
"Literature matters because
life matters" (F.R. Leavis).

ಮುಂತಾದ ಉತ್ತಮ ಸೂಕ್ತಿಗಳು ಇಲ್ಲಿ ಲಭ್ಯ. ಒಟ್ಟಿನಲ್ಲಿ ಓಂಕಾರ್ ಪಬ್ಲಿಷರ್ಸ್, ಬೆಂಗಳೂರು, ಅವರು ಪ್ರಕಟಿಸಿರುವ ಈ ಗ್ರಂಥ ಅಮೂಲ್ಯ, ಅನರ್ಘ್ಯ. ಉಮಾರಾಮ್ ಮತ್ತು ಕೆ.ಎಸ್. ರಾಮ್ ಅವರಿಗೆ ನನ್ನ ವಂದನೆಗಳು.

ಅನುವಾದಕಲೆಯೆಂಬುದೊಂದು ಮಾಣಿಕ್ಯ
ಮನುಜಕುಲಕಿದು ಚೊಕ್ಕ ಚಿನ್ನದಾಭರಣ
ಅನುವಾಗಿ ಪರಭಾಷೆಯಲ್ಲಿ ಕಗ್ಗವ ತಿಳಿಸಿ
ಜನುಮಕರ್ಥವ ಕೊಟ್ಟ ನಿಮಗೆ ನಮನ॥

ಏಪ್ರಿಲ್‌ನಲ್ಲಿ ಏರಿಕೆಯಾದ ವಿದ್ಯುತ್ ದರದ ಬಿಲ್ ಜೂನ್‌ನಲ್ಲಿ ನೀಡಲಾಗಿದೆ

ಸೆಸ್ಕ್ ವ್ಯವಸ್ಥಾಪಕ ನಿರ್ದೇಶಕ ಜಯವಿಭವಸ್ವಾಮಿ ಸ್ಪಷ್ಟನೆ

ಮೈಸೂರು, ಜೂ.13(ಆರ್‌ಕೆ)–ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ (KERC)ದಿಂದ ಅನುಮೋದಿತವಾಗಿ, 2023ರ ಏಪ್ರಿಲ್ ತಿಂಗಳಲ್ಲಿ ಏರಿಕೆಯಾದ ವಿದ್ಯುತ್ ದರವು ಪೂರ್ವಾನ್ವಯವಾಗುವಂತೆ ಮೇ 12ರಂದು ಆದೇಶ ಹೊರಡಿಸಲಾಗಿದೆ ಎಂದು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ (CESC)ದ ವ್ಯವಸ್ಥಾಪಕ ನಿರ್ದೇಶಕ ಜಯವಿಭವಸ್ವಾಮಿ ಸ್ಪಷ್ಟಪಡಿಸಿದ್ದಾರೆ.

ರಾಜ್ಯದ ಗೃಹ ಬಳಕೆ ಸಂಪರ್ಕ ಹೊಂದಿರುವ ಗ್ರಾಹಕರಿಗೆ ಹೊಸ ಆದೇಶದನ್ವಯ ಪ್ರತಿ ಯೂನಿಟ್‌ಗೆ 70 ಪೈಸೆ ವಿದ್ಯುತ್ ದರ ಹೆಚ್ಚಳವಾಗಿದೆ. ಆ ಪರಿಷ್ಕೃತ ದರ (70 ಪೈಸೆ)ವನ್ನು ಜೂನ್ ತಿಂಗಳ ಬಿಲ್‌ನಲ್ಲಿ ಸೇರಿಸಿ ಸಂಗ್ರಹಿಸುತ್ತಿರುವುದರಿಂದ ಬಿಲ್‌ಗಳ ಮೊತ್ತ ಅಧಿಕವಾಗಿದೆ ಎಂದು ಸೆಸ್ಕ್ ಎಂಡಿ ತಿಳಿಸಿದ್ದಾರೆ.

2023ರ ಏಪ್ರಿಲ್ 1ರಿಂದ ಪೂರ್ವಾನ್ವಯವಾಗುವಂತೆ ದರ ಏರಿಕೆ ಆದೇಶ ಹೊರಡಿಸಿರುವುದರಿಂದ ಬಾಕಿ ಬಿಲ್ ಮೊತ್ತವನ್ನು ಜೂನ್ ತಿಂಗಳಿನ ವಿದ್ಯುತ್ ಬಿಲ್‌ನೊಂದಿಗೆ ಸೇರಿಸಿ ಸಂಗ್ರಹಿಸಲಾಗುತ್ತಿದೆ. ನಿಗದಿತ ಶುಲ್ಕವನ್ನು ಗೃಹ ಬಳಕೆಗೆ 100 ಕಿ.ವ್ಯಾ.ಗೆ 100ರಿಂದ 110 ರೂ.ವರೆಗೆ ಏಪ್ರಿಲ್ 1ರಿಂದ ಪೂರ್ವಾನ್ವಯವಾಗುವಂತೆ ಕೆಇಆರ್‌ಸಿ ಪರಿಷ್ಕೃತ ದರ ನಿಗದಿಪಡಿಸಿದೆ ಎಂದು ತಿಳಿಸಿದ್ದಾರೆ.



ಕಳೆದ ತಿಂಗಳವರೆಗೆ ವಿವಿಧ ವರ್ಗದ ಇಂಧನ ಶುಲ್ಕವನ್ನು ಲೆಕ್ಕ ಹಾಕಲಾಗುತ್ತಿತ್ತು. 0 ಯಿಂದ 50, 51 ರಿಂದ 100, 101ರಿಂದ 200 ಹಾಗೂ 200ಕ್ಕಿಂತ ಹೆಚ್ಚು ಯೂನಿಟ್ ಎಂದು ವರ್ಗವಾರು ದರ ವಿದ್ಯುತ್ ಬಿಲ್‌ನಲ್ಲಿ ನಮೂದಾಗುತ್ತಿತ್ತು. ಆದರೆ ಈಗ ಕೆಇಆರ್‌ಸಿಯಿಂದ ಟೆಲಿಸ್ಕೋಪಿಕ್ ದರಗಳು ಅನುಮೋದನೆಯಾಗಿವೆ. ಅದರರ್ಥ ಗ್ರಾಹಕ 0 ಯಿಂದ 100 ಯೂನಿಟ್ ಬಳಸಿದರೆ ಪ್ರತಿ ಯೂನಿಟ್ ವಿದ್ಯುತ್‌ಗೆ 4.75 ರೂ. ನಂತೆ ಶುಲ್ಕ ವಿಧಿಸಲಾಗುತ್ತದೆ. ಆದರೆ 100 ಯೂನಿಟ್ ಮೀರಿದರೆ 0 ಯೂನಿಟ್‌ನಿಂದಲೂ ಪ್ರತಿ ಯೂನಿಟ್‌ಗೆ 7 ರೂ.ನಂತೆ ಕಡೇ ಯೂನಿಟ್‌ವರೆಗೂ ಲೆಕ್ಕ ಹಾಕಲಾಗುತ್ತದೆ ಎಂದರು.

ಫ್ಯೂಯಲ್ ಅಡ್ಜೆಸ್ಟ್‌ಮೆಂಟ್ ಚಾರ್ಜ್: ಥರ್ಮಲ್ ಮತ್ತು ಡೀಸೆಲ್ ಪ್ಲಾಂಟ್‌ಗಳಲ್ಲಿ ವಿದ್ಯುತ್ ಉತ್ಪಾದನೆಗೆ ಬಳಸುವ ಕಲ್ಲಿದ್ದಲು ಮತ್ತು ಡೀಸೆಲ್ ದರದಲ್ಲಿ ವ್ಯತ್ಯಾಸವಾಗುವ ಶುಲ್ಕವನ್ನು ಫ್ಯೂಯಲ್ ಅಡ್ಜೆಸ್ಟ್‌ಮೆಂಟ್ ಚಾರ್ಜಸ್ ಆಗಿ ಸಂಗ್ರಹಿಸಲಾಗುತ್ತಿದೆ. ಅದನ್ನು ಈಗ ಲೆಕ್ಕ ಹಾಕಿ ಮೂರು ತಿಂಗಳ ಬಾಕಿಯನ್ನು ಪ್ರಸ್ತುತ ತಿಂಗಳ ಬಿಲ್‌ನಲ್ಲಿ ಸೇರಿಸಲಾಗಿದೆ ಎಂದು ತಿಳಿಸಿದ್ದಾರೆ. ಅದರಂತೆ ನಾವು ಕಳೆದ ತಿಂಗಳವರೆಗೆ ಪ್ರತಿ ಯೂನಿಟ್‌ಗೆ 0.53 ಪೈಸೆಯಂತೆ ಸಂಗ್ರಹಿಸುತ್ತಿದ್ದೆವು. ಆದರೆ ಎಫ್‌ಎಸಿಯು ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಜಾಸ್ತಿಯಾಗಿದ್ದು, ಜೂನ್ ತಿಂಗಳ ಬಿಲ್‌ನಲ್ಲಿ ಅದು 2.42 ರೂ. ನಂತೆ ನಮೂದಾಗಿದೆ ಎಂದು ತಿಳಿಸಿದ್ದಾರೆ.

50 ರೂ. ಸೋಲಾರ್ ರಿಯಾಯಿತಿ ರದ್ದು

"ಸೋಲಾರ್ ಯೂನಿಟ್ ಅಳವಡಿಸಿಕೊಂಡಿರುವ ಗ್ರಾಹಕರಿಗೆ ನೀಡುತ್ತಿದ್ದ 50 ರೂ. ರಿಯಾಯಿತಿಯನ್ನು ಈಗ ಹಿಂಪಡೆಯಲಾಗಿದೆ. ಸರ್ಕಾರ 200 ಯೂನಿಟ್ ವರೆಗೆ ವಿದ್ಯುತ್ ಅನ್ನು ಉಚಿತವಾಗಿ ನೀಡುತ್ತಿರುವುದರಿಂದ ಬಿಲ್‌ನಲ್ಲಿ 50 ರೂ. ರಿಯಾಯಿತಿ ನೀಡುವ ಪ್ರಶ್ನೆಯೇ ಇಲ್ಲ. 200 ಯೂನಿಟ್‌ಗಿಂತ ಹೆಚ್ಚು ವಿದ್ಯುತ್ ಬಳಸುವ ಗ್ರಾಹಕರ 2500 ರಿಂದ 3,000 ರೂ.ವರೆಗೆ ಬಿಲ್ ಬಂದರೆ ಅವರಿಗೆ 50 ರೂ. ರಿಯಾಯಿತಿ ನೀಡಿದರೆ ಅರ್ಥವಿಲ್ಲದಾಗಿದೆಯಾದ್ದರಿಂದ ರಿಯಾಯಿತಿ ರದ್ದುಪಡಿಸಲಾಗಿದೆ.

–ಜಯವಿಭವಸ್ವಾಮಿ, ಸೆಸ್ಕ್ ಎಂಡಿ.

ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನ

ಮೈಸೂರು, ಜೂ.13– 2022–23ನೇ ಸಾಲಿಗೆ ಪೋಷಕರ ವಾರ್ಷಿಕ ವರಮಾನ 2.5 ಲಕ್ಷದೊಳಗಿರುವ ಮೈಸೂರು ತಾಲೂಕಿನ ಮೆಟ್ರಿಕ್ ನಂತರದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ವಿದ್ಯಾರ್ಥಿವೇತನಕ್ಕಾಗಿ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ssp.postmatric.karnataka.gov.in ನಲ್ಲಿ ಅರ್ಜಿ ಸಲ್ಲಿಸಲು ಜೂ.20 ಅಂತಿಮ ದಿನಾಂಕವಾಗಿದ್ದು, ವೈದ್ಯಕೀಯ, ಇಂಜಿನಿಯರಿಂಗ್, ಎಂ.ಬಿ.ಎ ಮತ್ತು ಎಂ.ಸಿ.ಎ ಕೋರ್ಸುಗಳ ಅರ್ಹ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು.

ವಿದ್ಯಾರ್ಥಿಗಳು ಬ್ಯಾಂಕಿಗೆ ಭೇಟಿ ನೀಡಿ, ಅವರ ಆಧಾರ್ ಸಂಖ್ಯೆಯನ್ನು NPCI (National Payment Corporation of India)ರಲ್ಲಿ ಕಡ್ಡಾಯವಾಗಿ ಬ್ಯಾಂಕ್ ಖಾತೆಗೆ ಆಧಾರ್ ಸೀಡಿಂಗ್ ಮಾಡಿಸುವುದು. ಹೆಚ್ಚಿನ ಮಾಹಿತಿಗಾಗಿ ಒಂಟಿಕೊಪ್ಪಲು ಪೂರ್ವ, ಬಡಾವಣೆ ಪಡುವಾರಹಳ್ಳಿಯಲ್ಲಿನ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರನ್ನು ಅಥವಾ ದೂ.ಸಂ: 0821–2520910 ಅನ್ನು ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ವಿಶೇಷ ಪೂಜೆ ಮೂಲಕ ಕಷ್ಟ ನಿವಾರಣೆ ಭರವಸೆ ಗೃಹಿಣಿಯಿಂದ ಆನ್‌ಲೈನ್‌ನಲ್ಲಿ 6.24 ಲಕ್ಷ ವರ್ಗಾವಣೆ ಮಾಡಿಸಿಕೊಂಡು ವಂಚನೆ

ಮೈಸೂರು,ಜೂ.13–ವಿಶೇಷ ಪೂಜೆ ಮಾಡಿ ಕಷ್ಟ ಪರಿಹರಿಸುವುದಾಗಿ ನಂಬಿಸಿ ಆನ್‌ಲೈನ್ ಮೂಲಕ 6.24 ಲಕ್ಷ ರೂ. ವರ್ಗಾವಣೆ ಮಾಡಿಸಿಕೊಂಡು ಗೃಹಿಣಿಯನ್ನು ವಂಚಿಸಿರುವ ಬಗ್ಗೆ ವರದಿಯಾಗಿದೆ. ಮೈಸೂರಿನ ಸರಸ್ವತಿಪುರಂ ನಿವಾಸಿ ರೂಪಾ(45) ವಂಚನೆಗೊಳಗಾದವರಾಗಿದ್ದು, ಇವರ ಮೊಬೈಲ್‌ಗೆ ಕರೆ ಮಾಡಿದ ಆನಂದ ಎಂಬ ವ್ಯಕ್ತಿ ತಾನು ರಾಜ್ಯದ ಪ್ರಸಿದ್ಧ ಮಠಕ್ಕೆ ಸೇರಿದವನೆಂದು ಪರಿಚಯಿಸಿಕೊಂಡು ರೂಪಾ ಅವರ ಕಷ್ಟಗಳನ್ನು ಪರಿಹರಿಸಿಕೊಡುವುದಾಗಿ ಹೇಳಿದ್ದಾನೆ.



ಪದೇ ಪದೆ ಕರೆ ಮಾಡುತ್ತಿದ್ದ ಈತ ರೂಪಾ ಅವರಿಗೆ ನಂಬಿಕೆ ಬರುವಂತೆ ಚಾಣಾಕ್ಷತನದಿಂದ ಮಾತನಾಡಿದ್ದಾನೆ. ಈ ವೇಳೆ ತಮ್ಮ ಪತಿ ಆತ್ಮಹತ್ಯೆ ಮಾಡಿಕೊಂಡಿದ್ದು, ನ್ಯಾಯಾಲಯದಲ್ಲಿ ಕೇಸ್ ನಡೆಯುತ್ತಿದೆ ಎಂದು ರೂಪಾ ಹೇಳಲಾಗಿ, ವಿಶೇಷ ಪೂಜೆ ನಡೆಸಿ ಕೇಸ್ ನಿಮ್ಮ ಪರವಾಗಿ ಆಗುವಂತೆ ಮಾಡುತ್ತೇನೆ. ಹಾಗೂ ನಿಮ್ಮ ಎಲ್ಲಾ ಕಷ್ಟಗಳು ಪರಿಹಾರವಾಗುವಂತೆ ಮಾಡುತ್ತೇನೆ ಎಂದು ತಿಳಿಸಿ, ವಿಶೇಷ ಪೂಜೆಗಾಗಿ ಲಕ್ಷಾಂತರ ರೂ. ವೆಚ್ಚವಾಗುತ್ತದೆ ಎಂದು ಬ್ಯಾಂಕ್ ಖಾತೆ ಸಂಖ್ಯೆಯೊಂದನ್ನು ನೀಡಿ, ಅದಕ್ಕೆ ಹಣ ಜಮೆ ಮಾಡುವಂತೆ ಹೇಳಿದ್ದಾನೆ. ಹಂತ ಹಂತವಾಗಿ 6,24,500 ರೂ.ಗಳನ್ನು ಖಾತೆಗೆ ಜಮೆ ಮಾಡಿಸಿಕೊಂಡು ತನ್ನನ್ನು ಆನಂದ ಎಂಬಾತ ವಂಚಿಸಿದ್ದಾನೆ ಎಂದು ರೂಪಾ ನೀಡಿದ ದೂರನ್ನು ದಾಖಲಿಸಿಕೊಂಡಿರುವ ಮೈಸೂರು ನಗರ ಸೆನ್ ಠಾಣೆ ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

ನೆರವಿನ ನೆಪದಲ್ಲಿ ಮಾಹಿತಿ ಸಂಗ್ರಹಿಸಿ ಆನ್‌ಲೈನ್ ಮೂಲಕ ಲಕ್ಷಾಂತರ ರೂ. ವಂಚನೆ

ಮೈಸೂರು, ಜೂ.13–ಲೋನ್ ಕೊಡುವುದಾಗಿ ನಂಬಿಸಿ ಆನ್‌ಲೈನ್ ಮೂಲಕ ವ್ಯಕ್ತಿಯೋರ್ವರಿಂದ 44,750 ರೂ. ವರ್ಗಾವಣೆ ಮಾಡಿಸಿಕೊಂಡು ವಂಚಿಸಿರುವ ಬಗ್ಗೆ ವರದಿಯಾಗಿದೆ. ಮೈಸೂರಿನ ಗಾಂಧಿನಗರದ ನಿವಾಸಿ ಸಿ.ಚಂದ್ರಹಾಸ(46) ಎಂಬುವರು ಧನಿ ಆ್ಯಪ್‌ನಲ್ಲಿ ಲೋನ್ ಕೊಡುವ ಬಗ್ಗೆ ಜಾಹೀರಾತನ್ನು ನೋಡಿ ಅದರಲ್ಲಿದ್ದ ನಂಬರ್‌ಗೆ ಕರೆ ಮಾಡಲಾಗಿ ಲೋನ್ ಪಡೆಯಲು ಇನ್ಶೂರೆನ್ಸ್ ಮತ್ತು ಜಿಎಸ್‌ಟಿ ಶುಲ್ಕವೆಂದು 44,750 ರೂ. ವರ್ಗಾವಣೆ ಮಾಡಿಸಿಕೊಂಡು ವಂಚಿಸಲಾಗಿದೆ.



ಮತ್ತೊಂದು ಪ್ರಕರಣದಲ್ಲಿ ಎಟಿಎಂ ಕಾರ್ಡ್ ನವೀಕರಿಸಿಕೊಡುವುದಾಗಿ ಎನ್.ಆರ್.ಮೊಹಲ್ಲಾದ ಟೈಲರ್ ಅಸ್ಮಾಬೇಗಂ(38) ಎಂಬುವರಿಗೆ ಕರೆ ಮಾಡಿದ ವಂಚಕ ಅವರ ಎಟಿಎಂ ಕಾರ್ಡ್‌ನ ವಿವರಗಳನ್ನು ಪಡೆದು 1,46,979 ರೂ.ಗಳನ್ನು ಅಕ್ರಮವಾಗಿ ವರ್ಗಾವಣೆ ಮಾಡಿಕೊಂಡು ವಂಚಿಸಿದ್ದಾನೆ.

ಇನ್ನೊಂದು ಪ್ರಕರಣದಲ್ಲಿ ಕೂರ್ಗಳ್ಳಿಯ ಕೆ.ಜೆ.ಗೋವರ್ಧನ್(41) ಎಂಬುವರು ಆನ್‌ಲೈನ್ ಇನ್ವೆಸ್ಟ್‌ಮೆಂಟ್ ಮಾಡಿ ಲಾಭ ಗಳಿಸಲು ಎಸ್ ಬ್ಯಾನ್ ಎಂಬ ಖಾತೆಗೆ 1.51 ಲಕ್ಷ ರೂ. ವರ್ಗಾವಣೆ ಮಾಡಿ ವಂಚನೆಗೊಳಗಾಗಿದ್ದಾರೆ. ಈ ಮೂರೂ ಪ್ರಕರಣಗಳು ಮೈಸೂರು ನಗರ ಸೆನ್ ಠಾಣೆಯಲ್ಲಿ ದಾಖಲಾಗಿದೆ.

ಪಿಜಿಯಲ್ಲಿ ಇನ್‌ಫೋಸಿಸ್ ಉದ್ಯೋಗಿ ಲ್ಯಾಪ್‌ಟಾಪ್ ಕಳವು

ಮೈಸೂರು, ಜೂ.13–ಬಾಯ್ಸ್ ಪಿಜಿಯಲ್ಲಿ ಇನ್ಫೋಸಿಸ್ ಕಂಪನಿಯ ಎಂಜಿನಿಯರ್‌ನ ಲ್ಯಾಪ್‌ಟಾಪ್ ಕಳವು ಮಾಡಿರುವ ಬಗ್ಗೆ ಮೈಸೂರಿನ ಹೆಬ್ಬಾಳ್ 1ನೇ ಹಂತದಿಂದ ವರದಿಯಾಗಿದೆ.



ಇನ್ಫೋಸಿಸ್ ಇಂಜಿನಿಯರ್ ರೂಪಕ್ ಕುಮಾರ್ ದೇ(24) ಲ್ಯಾಪ್‌ಟಾಪ್ ಕಳೆದುಕೊಂಡವರಾಗಿದ್ದು, ಇವರು ಹೆಬ್ಬಾಳ್ 1ನೇ ಹಂತದ 16ನೇ ಎಸ್‌ಎಲ್‌ವಿ ಬಾಯ್ಸ್ ಪಿಜಿ ರೂಂ ನಂ.11ರಲ್ಲಿ ವಾಸವಿದ್ದು, ಜೂ.4ರಂದು ರಾತ್ರಿ ಲ್ಯಾಪ್‌ಟಾಪ್‌ನಲ್ಲಿ ಕೆಲಸ ಮಾಡಿದ ನಂತರ ಅದನ್ನು ಬ್ಯಾಗ್‌ನಲ್ಲಿ ಹಾಕಿ ತಮ್ಮ ಬೆಡ್ ಪಕ್ಕದಲ್ಲಿಟ್ಟು ಮಲಗಿದ್ದಾರೆ. ಮರು ದಿನ ಬೆಳಗ್ಗೆ ಎದ್ದಾಗ ಲ್ಯಾಪ್‌ಟಾಪ್ ಕಳುವಾಗಿರುವುದು ಗೊತ್ತಾಗಿದೆ. ಇವರ ಲ್ಯಾಪ್‌ಟಾಪ್ ಅನ್ನು ವ್ಯಕ್ತಿಯೋರ್ವ ಕಳವು ಮಾಡಿರುವುದು ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದೆಯಾದರೂ, ಆತ ಯಾರು ಎಂಬುದು ಪತ್ತೆಯಾಗಿಲ್ಲ ಎಂದು ರೂಪಕ್‌ಕುಮಾರ್ ಜೂ.11ರಂದು ನೀಡಿದ ದೂರನ್ನು ದಾಖಲಿಸಿಕೊಂಡಿರುವ ಹೆಬ್ಬಾಳ್ ಠಾಣೆ ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

ಪ್ರತ್ಯೇಕ ಪ್ರಕರಣಗಳಲ್ಲಿ ಸ್ಕೂಟರ್ ಡಿಕ್ಕಿಯಾಗಿ ಇಬ್ಬರ ಸಾವು

ಮೈಸೂರು,ಜೂ.13–ಪ್ರತ್ಯೇಕ ಪ್ರಕರಣಗಳಲ್ಲಿ ಸ್ಕೂಟರ್ ಡಿಕ್ಕಿ ಹೊಡೆದು ಇಬ್ಬರು ಪಾದಚಾರಿಗಳು ಸಾವನ್ನಪ್ಪಿರುವ ಘಟನೆ ಮೈಸೂರು ನಗರದಲ್ಲಿ ಸಂಭವಿಸಿದೆ.



ಚಾಮರಾಜನಗರ ತಾಲೂಕು ಅಮಚವಾಡಿ ಗ್ರಾಮದ ರಂಗನಾಯಕ(65) ಎಂಬುವರು ಜೂ.11ರಂದು ಮಧ್ಯಾಹ್ನ 1 ಗಂಟೆ ಸಮಯದಲ್ಲಿ ಮೈಸೂರಿನ ಗೋಕುಲಂನಲ್ಲಿರುವ ವಿಶ್ವ ಎಂಬುವರ ಮನೆ ಗೃಹ ಪ್ರವೇಶಕ್ಕೆ ಹಾಜರಾದ ನಂತರ ತಮ್ಮ ಸ್ನೇಹಿತನೊಂದಿಗೆ ತಮ್ಮ ಊರಿನಿಂದ ಬಂದಿದ್ದ ಬಸ್ ಹತ್ತಲು ಮೈಸೂರು–ಕೆಆರ್‌ಎಸ್ ಮುಖ್ಯ ರಸ್ತೆಯನ್ನು ಸಿಇಜಿ ಆಸ್ಪತ್ರೆ ಮುಂಭಾಗ ದಾಟುತ್ತಿದ್ದಾಗ ಒಂಟಿಕೊಪ್ಪಲು ವೆಂಕಟರಮಣಸ್ವಾಮಿ ದೇವಸ್ಥಾನದ ಕಡೆಯಿಂದ ವೇಗವಾಗಿ ಬಂದ ಹೋಂಡಾ ಆಕ್ಟೀವಾ (ಕೆಎ 09 ಹೆಚ್‌ಸಿ 6844) ಇವರಿಗೆ ಡಿಕ್ಕಿ ಹೊಡೆದಿದೆ. ತೀವ್ರವಾಗಿ ಗಾಯಗೊಂಡಿದ್ದ ಇವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿ ಚಿಕಿತ್ಸೆ ಫಲಕಾರಿಯಾಗದೇ ಅಂದು ಸಂಜೆ 5.15ರಲ್ಲಿ ಮೃತಪಟ್ಟಿದ್ದಾರೆ. ಈ ಸಂಬಂಧ ವಿವಿ ಪುರಂ ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣ: ಮೈಸೂರಿನ ಅಶೋಕಪುರಂ ನಿವಾಸಿ ರಾಜೇಂದ್ರಸ್ವಾಮಿ (54) ಎಂಬುವರು ಬಲ್ಲಾಳ್ ಸರ್ಕಲ್ ಹತ್ತಿರ ನ್ಯೂ ಕಾಂತರಾಜ ಅರಸ್ ರಸ್ತೆಯಲ್ಲಿರುವ ಹಾಲಿನ ಬೂತ್ ಬಳಿ ನಡೆದುಕೊಂಡು ಹೋಗುತ್ತಿದ್ದಾಗ ಮಹದೇವಪುರ ನಿವಾಸಿ ಸೋಮಸುಂದರ್ ಎಂಬುವರು ಚಾಲನೆ ಮಾಡಿಕೊಂಡು ಬಂದ ಸುಜುಕಿ ಆಕ್ಸಿಸ್ ಸ್ಕೂಟರ್ (ಕೆಎ 09 ಹೆಚ್‌ಕ್ಯೂ 6254) ಇವರಿಗೆ ಜೂ.9ರಂದು ಸಂಜೆ 7.30ರ ವೇಳೆಯಲ್ಲಿ ಡಿಕ್ಕಿ ಹೊಡೆದಿದೆ. ತನಗೆ ಯಾವುದೇ ಗಂಭೀರವಾದ ಗಾಯಗಳಾಗಿಲ್ಲ. ತಲೆಯಲ್ಲಿ ಸ್ವಲ್ಪ ನೋವಿದೆ ಎಂದು ಹೇಳಿದ ರಾಜೇಂದ್ರ ಸ್ವಾಮಿ ಆಸ್ಪತ್ರೆಗೆ ಹೋಗದೇ ಮನೆಗೆ ಹೋಗಿ ಊಟ ಮಾಡಿ ಮಲಗಿದ್ದಾರೆ. ಜೂ.10ರಂದು ಬೆಳಗಿನ ಜಾವ ಅವರ ತಲೆ ಸ್ವಲ್ಪ ಊದಿಕೊಂಡಂತೆ ಕಂಡುಬಂದಿದ್ದು, ಅವರ ಸಹೋದರ ವಿ.ವೆಂಕಟಸ್ವಾಮಿ ಅವರು ಎಬ್ಬಿಸಲಾಗಿ ರಾಜೇಂದ್ರಸ್ವಾಮಿ ಮಾತನಾಡುತ್ತಿರಲಿಲ್ಲ ಎಂದು ಹೇಳಲಾಗಿದೆ. ತಕ್ಷಣವೇ ಅವರನ್ನು ಖಾಸಗಿ ಆಸ್ಪತ್ರೆಗೆ ಕರೆದೊಯ್ದಾಗ ಮಾರ್ಗ ಮಧ್ಯದಲ್ಲೇ ಅವರು ಮೃತಪಟ್ಟಿದ್ದಾರೆ ಎಂದು ವೈದ್ಯರು ತಿಳಿಸಿದ್ದಾರೆ. ಈ ಸಂಬಂಧ ಕೆ.ಆರ್. ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಗಾಂಜಾ ಮಾರಾಟ: ಇಬ್ಬರ ಬಂಧನ

ಮೈಸೂರು,ಜೂ.13–ಇಬ್ಬರು ಗಾಂಜಾ ಮಾರಾಟಗಾರರನ್ನು ಬಂಧಿಸಿ, ಸ್ಕೂಟರ್ ಮತ್ತು ಗಾಂಜಾವನ್ನು ಎನ್.ಆರ್.ಠಾಣೆ ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಎನ್.ಆರ್.ಠಾಣೆ ಸಬ್ ಇನ್ಸ್‌ಪೆಕ್ಟರ್ ಸಿ.ಎನ್.ಸುನೀಲ್ ಅವರು ತಮ್ಮ ಸಿಬ್ಬಂದಿಯೊಂದಿಗೆ ಜೂ.12ರಂದು ಬೆಳಗ್ಗೆ 11 ಗಂಟೆ ಸುಮಾರಿನಲ್ಲಿ ರಾಜೀವ್‌ನಗರ 2ನೇ ಹಂತದ ಎಸ್‌ಎನ್‌ಎಸ್ ದೇವಸ್ಥಾನದ ವೃತ್ತದಿಂದ ಗಣೇಶ ನಗರಕ್ಕೆ ಹೋಗುವ ರಸ್ತೆಯಲ್ಲಿ ಹೋಂಡಾ ಆಕ್ಟೀವಾ ಸ್ಕೂಟರ್‌ನಲ್ಲಿ ನಿಂತಿದ್ದ ಇಬ್ಬರು, ಪೊಲೀಸ್ ಜೀಪನ್ನು ನೋಡಿ ಓಡಿದ್ದಾರೆ. ಅವರನ್ನು ಬೆನ್ನತ್ತಿ ಹಿಡಿದ ಪೊಲೀಸರು ವಿಚಾರಣೆ ನಡೆಸಿದಾಗ ಅವರು ಗಾಂಜಾ ಮಾರಾಟ ಮಾಡುತ್ತಿರುವ ಬಗ್ಗೆ ಗೊತ್ತಾಗಿದೆ. ಹಾಗೂ ಅವರ ಬಳಿ ಗಾಂಜಾ ಪತ್ತೆಯಾಗಿದೆ. ಬಂಧಿತರನ್ನು ರಾಜೀವ್‌ನಗರದ ಜಿ.ಶಾನ್ ತನ್ವೀರ್ (44) ಮತ್ತು ಮಂಡಿಮೊಹಲ್ಲಾದ ಸಯ್ಯದ್ ಮೊಬಾರಕ್ ಪಾಷಾ ಅಲಿಯಾಸ್ ರಾಹುಲ್ ಎಂದು ಗುರುತಿಸಲಾಗಿದೆ. ಇವರಿಬ್ಬರ ವಿರುದ್ಧ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

ನಾಳೆಯಿಂದ ಯೋಗ ತರಬೇತಿ

ಮೈಸೂರು, ಜೂ. 13– ಶ್ರೀ ಪತಂಜಲಿ ಯೋಗ ಶಿಕ್ಷಣ ಸಮಿತಿ ವತಿಯಿಂದ ಜೂ.15ರಿಂದ 45 ದಿನಗಳ ಕಾಲ ವಿವಿಧ ಬಡಾವಣೆಗಳಲ್ಲಿ ಯೋಗ ತರಬೇತಿ ಆಯೋಜಿಸಲಾಗಿದೆ. ತರಗತಿಗಳಲ್ಲಿ ಯೋಗಾಭ್ಯಾಸ, ಪ್ರಾಣಾಯಾಮ, ಧ್ಯಾನ, ಅಭ್ಯಾಸಗಳನ್ನು ಹೇಳಿಕೊಡಲಾಗುವುದು. ತರಬೇತಿ ಪ್ರತಿದಿನ ಬೆಳಗ್ಗೆ 6ರಿಂದ 7ರವರೆಗೆ ನಡೆಯಲಿದೆ. ಮಾಹಿತಿಗೆ ಮೊ. 7975340190 ಸಂಪರ್ಕಿಸಬಹುದು.

ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯಡಿ ಇನ್ನೂ ಇ–ಕೆವೈಸಿ ಆಗದ ಮೈಸೂರು ಜಿಲ್ಲೆಯ 70 ಸಾವಿರ ರೈತರು

- ಕೇಂದ್ರ, ರಾಜ್ಯ ಸರ್ಕಾರಗಳ ಸಹಾಯ ಧನ ಪಡೆಯಲು ಈ ದಾಖಲೆ ಕಡ್ಡಾಯ
- ಇಂತಹ ರೈತರ ಇ–ಕೆವೈಸಿ ಮಾಡಿಸಲು ಕೃಷಿ ಅಧಿಕಾರಿಗಳ ಹರಸಾಹಸ–ಅಲೆದಾಟ







ಪಿರಿಯಾಪಟ್ಟಣ ತಾಲೂಕಿನ ಮೇಲೂರು ಹಾಗೂ ಬಸವನಹಳ್ಳಿ ಗ್ರಾಮಗಳಲ್ಲಿ ಕೃಷಿ ಇಲಾಖೆ ಅಧಿಕಾರಿಗಳು ರೈತರಿಗೆ ಇ–ಕೆವೈಸಿ ಮಾಡಿಕೊಡುತ್ತಿರುವುದು.

ಮೈಸೂರು,ಜೂ.13(ಎಸ್‌ಬಿಡಿ)– ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯಡಿ ಹೆಸರು ನೋಂದಾಯಿಸಿಕೊಂಡಿರುವ ರೈತರಲ್ಲಿ ಮೈಸೂರು ಜಿಲ್ಲೆಯ ಸುಮಾರು 70 ಸಾವಿರ ಮಂದಿ ಇನ್ನೂ ಇ–ಕೆವೈಸಿ ಮಾಡಿಸಿಲ್ಲ.

ಕಿಸಾನ್ ಸಮ್ಮಾನ್ ಯೋಜನೆಯಡಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಆರ್ಥಿಕ ಸಹಾಯ ಪಡೆಯಲು ಫಲಾನುಭವಿಗಳು ಇ–ಕೆವೈಸಿ ಮಾಡಿಸುವುದು ಕಡ್ಡಾಯ. ಈ ನಿಟ್ಟಿನಲ್ಲಿ ಕೃಷಿ ಇಲಾಖೆ ಅಧಿಕಾರಿಗಳು ಜಾಗೃತಿ ಮೂಡಿಸುವುದರ ಜೊತೆಗೆ ವಿಶೇಷ ಅಭಿಯಾನ ಹಮ್ಮಿಕೊಂಡಿದ್ದರೂ ಶೇ.100ರಷ್ಟು ಸಾಧನೆ ಸಾಧ್ಯವಾಗಿಲ್ಲ. ಈಗಲಾದರೂ ಇ–ಕೆವೈಸಿ ಮಾಡಿಸದಿದ್ದರೆ ಮುಂದಿನ ತಿಂಗಳು ಹಂಚಿಕೆಯಾಗಬಹುದಾದ ಕೇಂದ್ರ ಸರ್ಕಾರದ 15ನೇ ಕಂತಿನ ಧನ ಸಹಾಯ ಸಿಗುವುದಿಲ್ಲ.

ಬಿತ್ತನೆ, ಪೋಷಣೆ, ಒಕ್ಕಣೆ ಹೀಗೆ ಕೃಷಿ ಚಟುವಟಿಕೆಗಳ ಸಂದರ್ಭದಲ್ಲಿ ರೈತರು ಆರ್ಥಿಕ ಸಂಕಷ್ಟದಿಂದ ವಿಚಲಿತರಾಗಬಾರದು ಎಂಬ ಸದುದ್ದೇಶದಿಂದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ಯೋಜನೆ ಜಾರಿಗೆ ತರಲಾಗಿದೆ. ವರ್ಷದಲ್ಲಿ ಕೇಂದ್ರ ಸರ್ಕಾರದಿಂದ ಮೂರು ಸಮಾನ ಕಂತುಗಳಲ್ಲಿ ಒಟ್ಟು 6 ಸಾವಿರ ಆರ್ಥಿಕ ಸಹಾಯ ಮಾಡಲಾಗುತ್ತಿದೆ. ಜೊತೆಗೆ ರಾಜ್ಯ ಸರ್ಕಾರವೂ ಎರಡು ಕಂತುಗಳಲ್ಲಿ ಒಟ್ಟು 4 ಸಾವಿರ ರೂ. ನೀಡುತ್ತಿದೆ. ಈ ಯೋಜನೆಯಡಿ ಒಟ್ಟು 10 ಸಾವಿರ ಧನ ಸಹಾಯ ಸಿಗಲಿದೆ. ಮೈಸೂರು ಜಿಲ್ಲೆಯಲ್ಲಿ ಸುಮಾರು 2.48 ಲಕ್ಷ ರೈತರು ಕಿಸಾನ್ ಸಮ್ಮಾನ್ ಯೋಜನೆಯಡಿ ನೋಂದಣಿ ಮಾಡಿಸಿದ್ದು, ಇವರಲ್ಲಿ ಇನ್ನೂ 70 ಸಾವಿರ ಮಂದಿ ಇ–ಕೆವೈಸಿ ಮಾಡಿಸಬೇಕಿದೆ.

ಗ್ರಾಮಕ್ಕೆ ಅಧಿಕಾರಿ: ವಿವಿಧ ರೀತಿಯಲ್ಲಿ ಜಾಗೃತಿ ಮೂಡಿಸಿದರೂ ರೈತರು ಇ–ಕೆವೈಸಿ ಸಾಧನೆ ಸುಧಾರಣೆಯಾಗದ ಕಾರಣ ಕೃಷಿ ಅಧಿಕಾರಿಗಳೇ ಗ್ರಾಮಗಳಿಗೆ ತೆರಳಿ, ಅಂತಹ ರೈತರನ್ನು ಸಂಪರ್ಕಿಸುತ್ತಿದ್ದಾರೆ. ಈವರೆಗೆ ಇ–ಕೆವೈಸಿ ಮಾಡಿಸದಿರುವ ರೈತರ ಪಟ್ಟಿ ಮಾಡಿಕೊಂಡು ವಿಶೇಷ ಅಭಿಯಾನ ನಡೆಸುತ್ತಿದ್ದಾರೆ. ಯಾವ ಗ್ರಾಮದಲ್ಲಿ ಹೆಚ್ಚಿನ ಸಂಖ್ಯೆಯ ರೈತರು ಇ–ಕೆವೈಸಿ ಮಾಡಿಸಿಲ್ಲವೋ ಆ ಗ್ರಾಮಕ್ಕೆ ಬೆಳಗ್ಗೆಯೇ ಭೇಟಿ ನೀಡುತ್ತಿದ್ದಾರೆ. ಹಾಲಿನ ಡೈರಿ ಕಾರ್ಯನಿರ್ವಹಿಸುವ ಸಮಯಕ್ಕೆ ಸರಿಯಾಗಿ ಅಲ್ಲಿಗೆ ಹೋಗಿ ಪಟ್ಟಿಯಲ್ಲಿರುವ ರೈತರ ಹೆಸರನ್ನು ಸಂಪರ್ಕಿಸಿ, ಸ್ಥಳದಲ್ಲೇ ಇ–ಕೆವೈಸಿ ಮಾಡಿಸುತ್ತಿದ್ದಾರೆ. ಪಟ್ಟಿಯಲ್ಲಿರುವ ರೈತರು ಹಾಲಿನ ಡೈರಿ ಬಳಿ ಸಿಗದಿದ್ದರೆ ಅವರ ಮನೆ ಬಳಿಯೇ ತೆರಳಿ ಪ್ರಕ್ರಿಯೆ ಪೂರ್ಣಗೊಳಿಸಲಾಗುತ್ತಿದೆ.

15 ದಿನದಲ್ಲಿ 20 ಸಾವಿರ: ಇ–ಕೆವೈಸಿ ಮಾಡಿಸದಿರುವ ರೈತರು ಹೆಚ್ಚಿನ ಸಂಖ್ಯೆಯಲ್ಲಿರುವ ಗ್ರಾಮಗಳಿಗೆ ಕೃಷಿ ಅಧಿಕಾರಿ ಹಾಗೂ ಸಹಾಯಕ ತಾಂತ್ರಿಕ ವ್ಯವಸ್ಥಾಪಕ (ಎಟಿಎಂ) ಭೇಟಿ ನೀಡುತ್ತಿದ್ದಾರೆ. ಬೆಳಗ್ಗೆ 7 ಗಂಟೆಗೇ ಗ್ರಾಮದ ಹಾಲಿನ ಡೈರಿ ಬಳಿ ಹೋಗಿ ಇ–ಕೆವೈಸಿ ಮಾಡಿಸದ ರೈತರನ್ನು ಸಂಪರ್ಕಿಸುವುದರ ಜೊತೆಗೆ ಮೃತಪಟ್ಟಿರುವ ರೈತರ ನೋಂದಣಿಯನ್ನು ರದ್ದುಪಡಿಸಲಾಗುತ್ತಿದೆ. ಇ–ಕೆವೈಸಿ ಮಾಡಿಸದಿದ್ದರೆ ಸರ್ಕಾರದ ಆರ್ಥಿಕ ಸಹಾಯ ಸಿಗುವುದಿಲ್ಲ ಎಂದು ತಿಳಿವಳಿಕೆ ನೀಡಿ, ಕೂಡಲೇ ಆಧಾರ್ ಕಾರ್ಡ್ ಹಾಗೂ ಮೊಬೈಲ್ ಸಂಖ್ಯೆ ಜೋಡಣೆ ಮಾಡಿ, ಆ ಮೊಬೈಲ್‌ಗೆ ಬರುವ ಓಟಿಪಿಯನ್ನು ನಮೂದಿಸಿ ಸ್ಥಳದಲ್ಲೇ ಇ–ಕೆವೈಸಿ ಪ್ರಕ್ರಿಯೆ ಪೂರ್ಣಗೊಳಿಸಲಾಗುತ್ತಿದೆ. ಜಿಲ್ಲೆಯ 7 ತಾಲೂಕುಗಳಲ್ಲೂ ಈ ಅಭಿಯಾನ ಮುಂದುವರೆದಿದ್ದು, ರಜಾ ದಿನಗಳಲ್ಲೂ ನಮ್ಮ ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದಾರೆ. ಈ ಮೂಲಕ ಕಳೆದ 15 ದಿನಗಳಲ್ಲಿ 20 ಸಾವಿರಕ್ಕೂ ಹೆಚ್ಚು ರೈತರಿಗೆ ಇ–ಕೆವೈಸಿ ಮಾಡಿಕೊಡಲಾಗಿದೆ ಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕ ಡಾ.ಬಿ.ಎಸ್.ಚಂದ್ರಶೇಖರ್ ತಿಳಿಸಿದ್ದಾರೆ.

ಇಲ್ಲಿಗೆ ಭೇಟಿ ನೀಡಿ: ಕೃಷಿ ಅಧಿಕಾರಿಗಳು ಏಕಕಾಲಕ್ಕೆ ಎಲ್ಲಾ ಗ್ರಾಮಗಳಿಗೂ ಭೇಟಿ ನೀಡುವುದು ಕಷ್ಟಸಾಧ್ಯ. ಹಾಗಾಗಿ ಇ–ಕೆವೈಸಿ ಮಾಡಿಸದ ರೈತರ ಸಂಖ್ಯೆ ಹೆಚ್ಚಿರುವ ಗ್ರಾಮಗಳಲ್ಲಿ ಅಭಿಯಾನ ನಡೆಸಿದ್ದಾರೆ. ಹಾಗಾಗಿ ಇತರೆ ವ್ಯವಸ್ಥೆಯಡಿ ಶೀಘ್ರ ಇ–ಕೆವೈಸಿ ಮಾಡಿಸಿಕೊಳ್ಳುವುದು ಸೂಕ್ತ. ಸಮೀಪದ ರೈತ ಸಂಪರ್ಕ ಕೇಂದ್ರ, ಗ್ರಾಮ ಒನ್ ಕೇಂದ್ರ, ಸಾಮಾನ್ಯ ಗ್ರಾಹಕ ಸೇವಾ ಕೇಂದ್ರಗಳಿಗೆ ಭೇಟಿ ನೀಡಿ ಬಯೋ ಮೆಟ್ರಿಕ್ ಅಥವಾ ಓಟಿಪಿ ಮೂಲಕ ಇ–ಕೆವೈಸಿ ಮಾಡಿಸಬಹುದು. ಇಲ್ಲವೇ ಪಿಎಂ ಕಿಸಾನ್ ಪೋರ್ಟಲ್‌ನಲ್ಲಿ ರೈತರೆ ನೇರವಾಗಿ ಈ ಪ್ರಕ್ರಿಯೆ ನಡೆಸಬಹುದು. ಪ್ಲೇ ಸ್ಟೋರ್‌ನಿಂದ ಪಿಎಂ ಕಿಸಾನ್ ಮೊಬೈಲ್ ಆ್ಯಪ್ ಅನ್ನು ಇನ್‌ಸ್ಟಾಲ್ ಮಾಡಿಕೊಂಡು ಮುಖ ಚಹರೆ ಮೂಲಕವೂ ಇ–ಕೆವೈಸಿ ಮಾಡಿಸಬಹುದು. ಈ ಬಗ್ಗೆ ರೈತ ಸಂಪರ್ಕ ಕೇಂದ್ರ ಹಾಗೂ ತಾಲೂಕು ಸಹಾಯಕ ಕೃಷಿ ಅಧಿಕಾರಿಗಳಿಂದಲೂ ಮಾರ್ಗದರ್ಶನ ಪಡೆಯಬಹುದು. ಆರಂಭದಲ್ಲಿ 2 ಹೆಕ್ಟೇರ್‌ಗಿಂತ ಹೆಚ್ಚು ಭೂಮಿ ಹೊಂದಿರುದ ರೈತರಿಗೆ ಮಾತ್ರ ಕಿಸಾನ್ ಸಮ್ಮಾನ್ ಯೋಜನೆ ಅನ್ವಯವಾಗುತ್ತಿತ್ತು. ನಂತರದಲ್ಲಿ ಈ ನಿಬಂಧನೆಯನ್ನು ರದ್ದು ಮಾಡಲಾಗಿದ್ದು, ಹೆಚ್ಚು ಪ್ರಮಾಣದ ಭೂಮಿ ಹೊಂದಿರುವ ರೈತರೂ ಫಲಾನುಭವಿಗಳಾಗಬಹುದು.


ಸಮಸ್ಯೆಗಳೂ ಇವೆ: ಆಧಾರ್ ಸಂಖ್ಯೆ ಮತ್ತು ಮೊಬೈಲ್ ಸಂಖ್ಯೆ ಜೋಡಣೆ ಆಗದಿರುವುದು ಇ–ಕೆವೈಸಿ ಅಡ್ಡಿಯಾಗುತ್ತಿದೆ. ಮೃತಪಟ್ಟ ರೈತರ ಮಕ್ಕಳಿಗೆ ಜಮೀನು ಖಾತೆಯಾಗದಿರುವುದು, ವ್ಯಾಜ್ಯಗಳಿರುವ ಕಾರಣಗಳಿಂದ ಇ–ಕೆವೈಸಿ ಮಾಡಲು ಸಾಧ್ಯವಾಗುತ್ತಿಲ್ಲ. ಗ್ರಾಮ ಒನ್ ಕೇಂದ್ರಗಳಲ್ಲಿ ಬೆರಳಚ್ಚು ಬಾರದೆ ಹಲವು ರೈತರು ತೊಂದರೆ ಅನುಭವಿಸುತ್ತಿದ್ದಾರೆ.

> “ಇ–ಕೆವೈಸಿ ಮಾಡಿಸದಿದ್ದರೆ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯಡಿ ಸರ್ಕಾರದ ಆರ್ಥಿಕ ಸಹಾಯ ಸಿಗುವುದಿಲ್ಲ. ಹಾಗಾಗಿ ಮೈಸೂರು ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲೂ ಆಯ್ದ ಗ್ರಾಮಗಳಿಗೆ ನಮ್ಮ ಅಧಿಕಾರಿಗಳೇ ಭೇಟಿ ನೀಡುತ್ತಿದ್ದಾರೆ. ಇ–ಕೆವೈಸಿ ಮಾಡಿಸದ ಹೆಚ್ಚು ರೈತರಿರುವ ಗ್ರಾಮಕ್ಕೆ ತೆರಳಿ ಸ್ಥಳದಲ್ಲೇ ಇ–ಕೆವೈಸಿ ಮಾಡಿಸುತ್ತಿದ್ದಾರೆ. ಎಲ್ಲಾ ರೈತರು ಇದರ ಪ್ರಯೋಜನ ಪಡೆಯಬೇಕು. ಕಳೆದ 15 ದಿನದಲ್ಲಿ ಸುಮಾರು 20 ಸಾವಿರ ರೈತರ ಇ–ಕೆವೈಸಿ ಮಾಡಿಸಿದ್ದು, ಇನ್ನೂ 69 ಸಾವಿರ ಬಾಕಿ ಇದೆ.
>
> –ಡಾ.ಬಿ.ಎಸ್.ಚಂದ್ರಶೇಖರ್, ಕೃಷಿ ಇಲಾಖೆ ಜಂಟಿ ನಿರ್ದೇಶಕ

ಇದು ಸಿದ್ದರಾಮಯ್ಯ ಸರಕಾರವೋ... ಹೈಕಮಾಂಡಿನ ಹಂಗಿನ ಸರಕಾರವೋ...

- ಸರಕಾರದ ವಿರುದ್ಧ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಟೀಕೆ
- ಹತ್ತನೇ ನಂಬರಿನ ಹಂಗಿನ ಸರಕಾರ ಎಂದು ಕುಟುಕಿದ ಮಾಜಿ ಸಿಎಂ

ಬೆಂಗಳೂರು, ಜೂ.13– ರಾಜ್ಯದಲ್ಲಿ ಸಿದ್ದರಾಮಯ್ಯ ಅವರ ಸರ್ಕಾರದ ಬದಲಿಗೆ ಹೈಕಮಾಂಡಿನ ಹಂಗಿನ ಸರಕಾರ ಇದೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಕಟುವಾಗಿ ಟೀಕಿಸಿದ್ದಾರೆ.



ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ರಂದೀಪ್ ಸುರ್ಜೆವಾಲಾ ಅವರು ಸಚಿವರು ಹಾಗೂ ಹಿರಿಯ ಅಧಿಕಾರಿಗಳ ಸಭೆ ನಡೆಸಿರುವ ಬಗ್ಗೆ ಸರಕಾರದ ವಿರುದ್ಧ ಟೀಕಾಪ್ರಹಾರ ನಡೆಸಿರುವ ಅವರು, ಈ ಬಗ್ಗೆ ಸರಣಿ ಟ್ವೀಟ್ ಮಾಡಿದ್ದಾರೆ. ರಾಜ್ಯದಲ್ಲಿರುವುದು ಸಿದ್ದರಾಮಯ್ಯನವರ ನೇತೃತ್ವದ ಸರಕಾರವೋ ಅಥವಾ ದಿಲ್ಲಿಯ ಜನಪಥ ರಸ್ತೆಯ 10ನೇ ನಂಬರಿನ ಹಂಗಿನ ಸರಕಾರವೋ? ಕನ್ನಡಿಗರು ಮತ ಹಾಕಿದ್ದು ಕೈ ಸರಕಾರಕ್ಕೋ? ಅಥವಾ ಕೈಗೊಂಬೆ ಸರಕಾರಕ್ಕೋ? ಪಾಪ.. ಜನರ ವೋಟು ಹಂಗಿನ ಸರಕಾರದ ಪಾಲಾಗಿದೆ. ಸರಕಾರಕ್ಕೆ ತಿಂಗಳು ತುಂಬುವ ಮೊದಲೇ ಅದು ಸಾಬೀತಾಗಿದೆ ಎಂದು ಕುಮಾರಸ್ವಾಮಿ ಟೀಕಿಸಿದ್ದಾರೆ.

ಅಲ್ಲದೆ, 'ಹತ್ತನೇ ನಂಬರಿನ ಹಂಗಿನ ಸರಕಾರ' ಎಂದು ಹ್ಯಾಷ್ ಟ್ಯಾಗ್ ಹಾಕಿ ಸರಕಾರವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಸರಕಾರದ ಅಧಿಕೃತ ಸಭೆಗಳನ್ನು ಹೈಕಮಾಂಡಿನ ನಿಲಯದ ಕಲಾವಿದರೇ ನಡೆಸುವ ಕರ್ಮ ಕರ್ನಾಟಕದ್ದು! ನಾನು ಟ್ಯಾಗ್ ಮಾಡಿರುವ ಫೋಟೋ ಆ ದೈನೇಸಿ ಸ್ಥಿತಿಗೆ ಸಾಕ್ಷಿ. ಎಐಸಿಸಿ ಪ್ರಧಾನ ಕಾರ್ಯದರ್ಶಿ ರಂದೀಪ್ ಸುರ್ಜೆ ವಾಲಾ ಅವರಿಗೆ ಸರಕಾರದ ಸಭೆಗಳನ್ನು ನಡೆಸುವ ಜವಾಬ್ದಾರಿ, ಅವಕಾಶ ಕೊಟ್ಟವರು ಯಾರು? ಎಂದು ಅವರು ಪ್ರಶ್ನಿಸಿದ್ದಾರೆ.

ಸಭೆಯಲ್ಲಿ ಹಿರಿಯ ಸಚಿವರಿದ್ದಾರೆ! ಹಿರಿಯ ಐಎಎಸ್ ಅಧಿಕಾರಿಗಳೂ ಹಾಜರಿದ್ದಾರೆ!! ಅಲ್ಲಿಗೆ ಇದು ಅಧಿಕೃತ ಸಭೆಯೇ ಆಯಿತು. ಆದರೆ, ಅಲ್ಲಿ ಸುರ್ಜೆವಾಲಾ ಸೆಂಟರ್ ಸೀಟಿನಲ್ಲಿದ್ದಾರೆ! ಸಚಿವರು ಸೈಡು ಕುರ್ಚಿಗಳ ಪಾಲಾಗಿದ್ದಾರೆ!! ಇದೇನು ವಿಚಿತ್ರ? ಮಾನ್ಯ ಮುಖ್ಯಮಂತ್ರಿಗಳೇ ಉತ್ತರಿಸಬೇಕು ಎಂದು ಕುಮಾರಸ್ವಾಮಿ ಅವರು ಒತ್ತಾಯ ಮಾಡಿದ್ದಾರೆ.

ಆಷಾಢ ಮಾಸದ ಹಿನ್ನೆಲೆ ಮೈಸೂರು ತಾಲೂಕು ಗ್ರಾಪಂ ಸಿಬ್ಬಂದಿಯಿಂದ ಚಾಮುಂಡಿಬೆಟ್ಟದ ಸ್ವಚ್ಛತೆ



ಮೈಸೂರು, ಜೂ.13(ಎಂಕೆ)– ಆಷಾಢ ಮಾಸದ ಹಿನ್ನೆಲೆಯಲ್ಲಿ ಚಾಮುಂಡಿಬೆಟ್ಟದಲ್ಲಿ ಮೈಸೂರು ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯಿತಿ ಸಿಬ್ಬಂದಿಗಳಿಂದ ಸ್ವಚ್ಛತಾ ಕಾರ್ಯ ನೆರವೇರಿಸಲಾಯಿತು.

ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಹೆಚ್.ಡಿ.ಗಿರೀಶ್ ಅವರ ನೇತೃತ್ವದಲ್ಲಿ ನಡೆದ ಸ್ವಚ್ಛತಾ ಕಾರ್ಯದಲ್ಲಿ ಬೆಟ್ಟದ ಪಾದದಿಂದ ದೇವಾಲಯದವರೆಗೂ ಮೆಟ್ಟಿಲುಗಳನ್ನು ಗುಡಿಸಿ, ಮುಳ್ಳಿನ ಗಿಡ–ಗಂಟಿ ತೆರವುಗೊಳಿಸಿ, ಮಾರ್ಗ ಮಧ್ಯದಲ್ಲಿ ಬಿಸಾಡಿದ್ದ ನೀರಿನ ಬಾಟಲ್, ಪ್ಲಾಸ್ಟಿಕ್ ಪೇಪರ್ ಸೇರಿದಂತೆ ಇನ್ನಿತರ ತ್ಯಾಜ್ಯವನ್ನು ಸಂಗ್ರಹಿಸಿ ವಿಲೇವಾರಿ ಮಾಡಲಾಯಿತು.

ಬಳಿಕ ಮಾತನಾಡಿದ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಹೆಚ್.ಡಿ.ಗಿರೀಶ್, ಆಷಾಢ ಮಾಸದ ದಿನಗಳಂದು ವಾಡಿಕೆಯಂತೆ ಭಕ್ತರು ಹಾಗೂ ವಿವಿಧ ಹರಕೆ ಹೊತ್ತವರು ಮೆಟ್ಟಿಲುಗಳ ಮೂಲಕ ಬೆಟ್ಟ ಹತ್ತಿ ಚಾಮುಂಡೇಶ್ವರಿ ದರ್ಶನ ಪಡೆಯುತ್ತಾರೆ. ಈ ಹಿನ್ನೆಲೆ ಬೆಟ್ಟವು ಸ್ವಚ್ಛವಾಗಿರಬೇಕು ಹಾಗೂ ಪರಿಸರಕ್ಕೆ ಹಾನಿಕಾರಕವಾಗಿರುವ ಪ್ಲಾಸ್ಟಿಕ್ ವಸ್ತುಗಳಿಂದ ಮುಕ್ತಗೊಳಿಸಬೇಕು ಎಂಬ ನಿಟ್ಟಿನಲ್ಲಿ ನಮ್ಮ ಗ್ರಾಮ ಪಂಚಾಯಿತಿಗಳ ಪೌರ ಕಾರ್ಮಿಕರು, ಅಧಿಕಾರಿ ವರ್ಗ ಹಾಗೂ ಸಿಬ್ಬಂದಿ ಜೊತೆಗೂಡಿ ಸ್ವಚ್ಛಗೊಳಿಸಲಾಗಿದೆ ಎಂದು ತಿಳಿಸಿದರು.

ಜಿಪಂ ಸಿಇಓ ಮಾರ್ಗದರ್ಶನದಂತೆ ಈ ಹಿಂದೆಯೂ ಚಾಮುಂಡಿಬೆಟ್ಟದಲ್ಲಿ ವರ್ತಕರ ಸಭೆ ನಡೆಸಿ ಪ್ಲಾಸ್ಟಿಕ್ ವಸ್ತುಗಳನ್ನು ಬಳಕೆಗೆ ನೀಡದಂತೆ ಮನವರಿಕೆ ಮಾಡಲಾಗಿದೆ. ಅದರಂತೆ ಬೆಟ್ಟವನ್ನು ಪ್ಲಾಸ್ಟಿಕ್ ಮುಕ್ತವಾಗಿಸಲು ಹಾಗೂ ಸ್ವಚ್ಛತೆ ಕಾಪಾಡುವ ಉದ್ದೇಶದಿಂದ ನಮ್ಮ ಪೌರಕಾರ್ಮಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸ್ವಚ್ಛಗೊಳಿಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕ್ರಿಮಿನಲ್ ಕೇಸ್ ಮುಗಿಯುವವರೆಗೆ ಜನಾರ್ದನ ರೆಡ್ಡಿ ಆಸ್ತಿ ಜಪ್ತಿ: ಸಿಬಿಐ ವಿಶೇಷ ಕೋರ್ಟ್ ಆದೇಶ

ಬೆಂಗಳೂರು: ಕ್ರಿಮಿನಲ್ ಕೇಸ್ ಮುಗಿಯುವವರೆಗೆ ಶಾಸಕ ಜನಾರ್ದನ ರೆಡ್ಡಿ ಮತ್ತು ಪತ್ನಿ ಲಕ್ಷ್ಮೀ ಅರುಣಾ ರೆಡ್ಡಿಗೆ ಸೇರಿದ 82 ಸ್ಥಿರಾಸ್ತಿ ಜಪ್ತಿ ಮಾಡುವಂತೆ ಸಿಬಿಐ ವಿಶೇಷ ಕೋರ್ಟ್ ಆದೇಶ ಹೊರಡಿಸಿದೆ.



ಜನಾರ್ದನ ರೆಡ್ಡಿ ವಿರುದ್ಧ ದಾಖಲಾಗಿರುವ ಕ್ರಿಮಿನಲ್ ಕೇಸ್ ಮುಗಿಯುವವರೆಗೆ ಒಟ್ಟು 82 ಆಸ್ತಿಗಳನ್ನು ಜಪ್ತಿ ಮಾಡುವಂತೆ ಸಿಬಿಐ ವಿಶೇಷ ಕೋರ್ಟ್ ಆದೇಶ ಹೊರಡಿಸಿದೆ. ಜನಾರ್ದನ ರೆಡ್ಡಿ ದಂಪತಿಗೆ ಸೇರಿದ ಒಟ್ಟು 124 ಆಸ್ತಿಗಳ (ಜನಾರ್ದನ ರೆಡ್ಡಿ ಅವರ 6 ಆಸ್ತಿಗಳು ಮತ್ತು ಲಕ್ಷ್ಮಿ ಅರುಣಾ ಹೆಸರಿನಲ್ಲಿ 118 ಆಸ್ತಿಗಳು) ಜಪ್ತಿ ಕೋರಿ ಸಿಬಿಐ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿತ್ತು. ಇದೀಗ ನ್ಯಾಯಾಲಯ ಭ್ರಷ್ಟಾಚಾರ ತಡೆ ಕಾಯ್ದೆ, ಕ್ರಿಮಿನಲ್ ಲಾ ತಿದ್ದುಪಡಿ ಕಾಯ್ದೆಯಡಿಯಲ್ಲಿ ಲಕ್ಷ್ಮಿ ಅರುಣಾಗೆ ಸೇರಿದ ಒಟ್ಟು 82 ಆಸ್ತಿಗಳನ್ನು ಜಪ್ತಿ ಮಾಡುವಂತೆ ಆದೇಶಿಸಿದೆ. ಆದರೆ ಸಿಬಿಐ ಪಟ್ಟಿ ಮಾಡಿರುವ ಆರರಲ್ಲಿ ಒಂದು ಆಸ್ತಿ ರೆಡ್ಡಿ ಹೆಸರಿನಲ್ಲಿ ಇಲ್ಲದ ಕಾರಣ ರೆಡ್ಡಿ ಹೆಸರಿನಲ್ಲಿದ್ದ 5 ಆಸ್ತಿಗಳನ್ನು ಜಪ್ತಿ ಮಾಡಲು ಕೋರ್ಟ್ ಅನುಮತಿ ನೀಡಿದೆ.

ಈ ಹಿಂದೆ ಕೂಡ 2023ರ ಜನವರಿ 12 ರಂದು ಜನಾರ್ದನ ರೆಡ್ಡಿ ಆಸ್ತಿ ಜಪ್ತಿಗೆ ಕರ್ನಾಟಕ ಗೃಹ ಇಲಾಖೆ ಅನುಮತಿ ನೀಡಿ ಆದೇಶಿಸಿತ್ತು. ಹೈಕೋರ್ಟ್ ಚಾಟಿ ಬೀಸಿದ ಬಳಿಕ ಎಚ್ಚೆತ್ತುಕೊಂಡಿದ್ದ ಬಸವರಾಜ ಬೊಮ್ಮಾಯಿ ಅವರ ನೇತೃತ್ವದ ಸರ್ಕಾರ ಜನವರಿ 12ರಂದು ಜನಾರ್ದನ ರೆಡ್ಡಿ ಆಸ್ತಿ ಜಪ್ತಿಗೆ ಪ್ರತಿಕ್ರಿಯೆಗೆ ಅನುಮತಿ ನೀಡಿತ್ತು. ಕಳೆದ ವರ್ಷ ಆಗಸ್ಟ್ ತಿಂಗಳಲ್ಲಿ ತೆಲಂಗಾಣ, ಆಂಧ್ರಪ್ರದೇಶದಲ್ಲಿನ ಜನಾರ್ದನ ರೆಡ್ಡಿ ಆಸ್ತಿ ಜಪ್ತಿಗೆ ಸಿಬಿಐ ಅನುಮತಿ ಕೇಳಿತ್ತು. ಜನಾರ್ದನ ರೆಡ್ಡಿ ಆಸ್ತಿ ಜಪ್ತಿಗೆ ಕರ್ನಾಟಕ ಸರ್ಕಾರ ಅನುಮತಿ ನೀಡದ ಹಿನ್ನೆಲೆ ಸಿಬಿಐ ಹೈಕೋರ್ಟ್ ಮೆಟ್ಟಿಲೇರಿತ್ತು

ಕೆ.ಆರ್.ಆಸ್ಪತ್ರೆ ಕಾಯಕಲ್ಪ: ಭರದಿಂದ ಸಾಗಿದ ನವೀಕರಣ ಕಾಮಗಾರಿ

ಸಂಸದ ಪ್ರತಾಪ್ ಸಿಂಹ ಪರಿಶೀಲನೆ; 15 ದಿನದಲ್ಲಿ ಎಂಆರ್‌ಐ ಸ್ಕ್ಯಾನಿಂಗ್ ಸೆಂಟರ್ ಸೇವೆಗೆ ಲಭ್ಯ

ಮೈಸೂರು, ಜೂ.13(ಬಿಎಲ್‌ಯು)– ಶತಮಾನದ ಹೊಸ್ತಿಲಲ್ಲಿರುವ ಮೈಸೂರಿನ ಕೆ.ಆರ್. ಆಸ್ಪತ್ರೆ ಹಾಗೂ ಚೆಲುವಾಂಬ ಆಸ್ಪತ್ರೆಗೆ ಕಾಯಕಲ್ಪ ನೀಡುವ ಸಲುವಾಗಿ ಕೈಗೆತ್ತಿಕೊಳ್ಳಲಾಗಿರುವ ನವೀಕರಣ ಕಾರ್ಯ ಪ್ರಗತಿಯಲ್ಲಿದ್ದು, ಸಂಸದ ಪ್ರತಾಪ್ ಸಿಂಹ ಮಂಗಳವಾರ ಆಸ್ಪತ್ರೆಗೆ ಭೇಟಿ ನೀಡಿ ಕಾಮಗಾರಿ ಪರಿಶೀಲನೆ ನಡೆಸಿದರು.

ಇದೇ ವೇಳೆ ಇನ್ನು 15 ದಿನದಲ್ಲಿ ಎಂಆರ್‌ಐ ಸ್ಕ್ಯಾನಿಂಗ್ ಸೆಂಟರ್ ರೋಗಿಗಳ ಸೇವೆಗೆ ಲಭ್ಯವಾಗಲಿದೆ ಎಂದು ಅವರು ತಿಳಿಸಿದರು.

ಎಂಆರ್‌ಐ ಸ್ಕ್ಯಾನಿಂಗ್ ಸೆಂಟರ್, ಟ್ರಾಮಾ ಸೆಂಟರ್, ಚೆಲುವಾಂಬ ಆಸ್ಪತ್ರೆಗೆ ಭೇಟಿ ನೀಡಿ ಕಾಮಗಾರಿ ಪ್ರಗತಿ ಕುರಿತಂತೆ ಅಧಿಕಾರಿಗಳಿಂದ ಮಾಹಿತಿ ಪಡೆದರು. ಎಂಆರ್‌ಐ ಸ್ಕ್ಯಾನಿಂಗ್‌ಗೆ ಒಬ್ಬ ರೋಗಿಗೆ 2,500 ರೂಪಾಯಿ ದರ ನಿಗಧಿ ಮಾಡ ಲಾಗಿದೆ. 1 ದಿನಕ್ಕೆ 30 ಸ್ಕ್ಯಾನಿಂಗ್ ಮಾಡಬಹುದು ಎಂದು ಕೆ.ಆರ್.ಆಸ್ಪತ್ರೆಯ ಡೀನ್ ಮತ್ತು ಡೈರೆಕ್ಟರ್ ಡಾ.ದಾಕ್ಷಾಯಿಣಿ ವಿವರಿಸಿದರು.



ಎಂಆರ್‌ಐ ಸ್ಕ್ಯಾನಿಂಗ್ ನಿರ್ವಹಣೆಗೆ ಒಂದು ವರ್ಷಕ್ಕೆ 80 ಲಕ್ಷ ರೂಪಾಯಿ ವೆಚ್ಚವಾಗುತ್ತದೆ. ರೋಗಿಗಳಿಗೆ ನಿಗದಿ ಮಾಡಿರುವ 2,500 ರೂ. ನಿರ್ವಹಣಾ ವೆಚ್ಚ ಭರಿಸಲಾಗುವುದು. ಖಾಸಗಿ ಆಸ್ಪತ್ರೆಯಲ್ಲಿ 1 ಸ್ಕ್ಯಾನಿಂಗ್ ಮಾಡಲು 8ರಿಂದ 13 ಸಾವಿರ ರೂ. ವೆಚ್ಚವಾಗುತ್ತದೆ. ನಾವು 2,500 ರೂ.ಗೆ ಸ್ಕ್ಯಾನಿಂಗ್ ಮಾಡಿಕೊಡುತ್ತೇವೆ ಎಂದು ತಿಳಿಸಿದರು.

ಕಾಮಗಾರಿ ಗುಣಮಟ್ಟದಲ್ಲಿ ರಾಜೀ ಆಗದೆ ನವೀಕರಣ ಕಾರ್ಯ ಮುಗಿಸುವಂತೆ ಇದೇ ವೇಳೆ ಪ್ರತಾಪ್ ಸಿಂಹ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಂತರ ಮಾತನಾಡಿದ ಪ್ರತಾಪ್ ಸಿಂಹ, ಈ ಹಿಂದೆ ಬಿಜೆಪಿ ಸರ್ಕಾರ ಇದ್ದಾಗ ನವೀಕರಣ ಯೋಜನೆ ರೂಪಿಸಿತು. ಕಾಮಗಾರಿ ಕೂಡ ಅರಂಭವಾಯಿತು. ನವೀಕರಣಕ್ಕೆ 89 ಕೋಟಿ ಹಾಗೂ ಎಂಆರ್‌ಐ ಸ್ಕ್ಯಾನಿಂಗ್ ಖರೀದಿಗಾಗಿ 10 ಕೋಟಿಯನ್ನು ಸರ್ಕಾರ ನೀಡಿದೆ. ಇನ್ನು 15 ದಿನದಲ್ಲಿ ಎಂಆರ್‌ಐ ಸ್ಕ್ಯಾನಿಂಗ್ ಸೆಂಟರ್ ಕಾರ್ಯಾರಂಭ ಮಾಡಲಿದೆ ಎಂದರು.

ಕೆ.ಆರ್.ಆಸ್ಪತ್ರೆಯಲ್ಲಿ ಹೊಸದಾಗಿ ಒಪಿಡಿ ತೆರೆಯುವ ಚಿಂತನೆ ಇದೆ. ಜೊತೆಗೆ 100 ಬೆಡ್ ಇರುವ ಡಯಾಲಿಸಿಸ್ ಘಟಕ ನಿರ್ಮಾಣ ಕೂಡ ಮಾಡಬೇಕಿದೆ. ಇದಕ್ಕಾಗಿ ಎರಡು ಸ್ಥಳ ಗುರುತಿಸಲಾಗಿದೆ ಎಂದರು.

ಈ ವೇಳೆ ಕೆ.ಆರ್.ಆಸ್ಪತ್ರೆಯ ಸೂಪರಿಂಟೆಂಡೆಂಟ್ ಡಾ.ನಂಜುಂಡಸ್ವಾಮಿ, ಸ್ಥಾನಿಕ ವೈದ್ಯಾಧಿಕಾರಿ ಡಾ.ರಾಜೇಶ್ ಈ ವೇಳೆ ಉಪಸ್ಥಿತರಿದ್ದರು.

ವಿದ್ಯುತ್ ಸ್ಪರ್ಶ: ರೈತ, ಜಾನುವಾರು ಸಾವು

ಮದ್ದೂರು, ಜೂ.13– ಜಮೀನಿನಲ್ಲಿ ಉಳುಮೆ ಮಾಡುತ್ತಿದ್ದ ವೇಳೆ ತುಂಡಾಗಿ ಬಿದ್ದಿದ್ದ ವಿದ್ಯುತ್ ತಂತಿ ತುಳಿದು ರೈತ ಮತ್ತು ಜಾನುವಾರು ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ತಾಲೂಕಿನ ಬ್ಯಾಡರಹಳ್ಳಿ ಗ್ರಾಮದಲ್ಲಿ ಮಂಗಳವಾರ ಬೆಳಗ್ಗೆ ಜರುಗಿದೆ.

ಮಾಲಗಾರನಹಳ್ಳಿ ಗ್ರಾಮದ ಮುತ್ತುರಾಜ್ (45) ಸಾವನ್ನಪ್ಪಿದವರು. ಈತ ಸೋಮವಾರ ತನ್ನ ಮಾವನ ಮನೆಗೆ ಹೋಗಿದ್ದರು. ಮಂಗಳವಾರ ಬೆಳಗ್ಗೆ ಜಮೀನನ್ನು ಉಳುಮೆ ಮಾಡಲು ತೆರಳಿದಾಗ ಜಮೀನಿನ ನಡುವೆ ಹಾದು ಹೋಗಿದ್ದ ವಿದ್ಯುತ್ ತಂತಿ ಆಕಸ್ಮಿಕವಾಗಿ ತುಂಡಾಗಿ ಬಿದ್ದಿತ್ತು. ಇದನ್ನು ಗಮನಿಸದೆ ವಿದ್ಯುತ್ ತಂತಿ ತುಳಿದು ಮುತ್ತುರಾಜ್ ಮತ್ತು ಜಾನುವಾರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಈ ವೇಳೆ ಜಮೀನಿನ ಪಕ್ಕದಲ್ಲೇ ಕೃಷಿ ಚಟುವಟಿಕೆಯಲ್ಲಿ ಭಾಗಿಯಾಗಿದ್ದ ಅದೇ ಗ್ರಾಮದ ಪ್ರಸನ್ನ ತಕ್ಷಣ ವಿದ್ಯುತ್ ಸಂಪರ್ಕ ಕಡಿತಗೊಳಿಸಿ, ಮುತ್ತುರಾಜ್ ನನ್ನು ಕೆ.ಹೊನ್ನಲಗೆರೆ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ರವಾನಿಸಿ ದ್ದಾರೆ. ಆದರೆ ವಿದ್ಯುತ್ ಶಾಕ್‌ನಿಂದ ಸ್ಥಳದಲ್ಲೇ ಕೊನೆಯುಸಿರೆಳೆದಿದ್ದಾರೆ ಎಂದು ವೈದ್ಯರು ತಿಳಿಸಿದರು.

ವಿದ್ಯುತ್ ತಂತಿ ತುಳಿದು ಮುತ್ತುರಾಜ್ ಹಾಗೂ ಜಾನುವಾರು ಸಾವನ್ನಪ್ಪಿರುವ ಹಿನ್ನೆಲೆಯಲ್ಲಿ ಸೆಸ್ಕಾಂ ವತಿಯಿಂದ 50 ಲಕ್ಷ ರೂ. ಪರಿಹಾರ ನೀಡಬೇಕೆಂದು ಗ್ರಾಮಸ್ಥರು ಮತ್ತು ಸಂಬಂಧಿಕರು ಆಗ್ರಹಿಸಿದ್ದು, ಈ ಸಂಬಂಧ ಮದ್ದೂರು ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿ, ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಸಾರಿಗೆ ಬಸ್ ಡಿಕ್ಕಿ: ಬಾಲಕ ಸಾವು

ಮಳವಳ್ಳಿ, ಜೂ.13– ಸೈಕಲ್‌ಗೆ ಸಾರಿಗೆ ಬಸ್ ಡಿಕ್ಕಿ ಹೊಡೆದ ಪರಿಣಾಮ ಬಾಲಕ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಪಟ್ಟಣದ ಕನಕಪುರ ರಸ್ತೆಯಲ್ಲಿ ನಡೆದಿದೆ.

ಪೇಟೆಬೀದಿ ನಿವಾಸಿ ಸಣ್ಣಪ್ಪ ಅವರ ಪುತ್ರ ಎ.ಎಸ್.ವಿನೀಶ್‌ಗೌಡ(10) ಮೃತಪಟ್ಟ ಬಾಲಕ. ಕನಕಪುರ ಕಡೆಯಿಂದ ಬಂದ ಸಾರಿಗೆ ಬಸ್, ರಸ್ತೆ ಬದಿಯಲ್ಲಿ ಸೈಕಲ್‌ನಲ್ಲಿ ಹೋಗುತ್ತಿದ್ದ ಬಾಲಕನಿಗೆ ಡಿಕ್ಕಿ ಹೊಡೆದು ಈ ಅವಘಡ ಸಂಭವಿಸಿದೆ ಎನ್ನಲಾಗಿದೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಪೊಲೀಸರು ಪರಿಶೀಲನೆ ನಡೆಸಿ, ಬಾಲಕನ ಶವವನ್ನು ಪಟ್ಟಣದ ಸಾರ್ವಜನಿಕ ಆಸ್ಪತ್ರೆ ಶವಾಗಾರಕ್ಕೆ ರವಾನಿಸಿದರು. ಈ ಸಂಬಂಧ ಮಳವಳ್ಳಿ ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸಾಲಬಾಧೆ: ರೈತ ಆತ್ಮಹತ್ಯೆ

ಕಿಕ್ಕೇರಿ, ಜೂ.13– ಸಾಲಬಾಧೆ ತಾಳಲಾರದೇ ರೈತನೋರ್ವ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಸೋಮವಾರ ಸಂಜೆ ಇಲ್ಲಿಗೆ ಸಮೀಪದ ಅಂಕನಹಳ್ಳಿ ಗ್ರಾಮದಲ್ಲಿ ನಡೆದಿದೆ.



ಗ್ರಾಮದ ನಿವಾಸಿ ಎ.ಎನ್.ಸುರೇಶ್(47) ಆತ್ಮಹತ್ಯೆ ಮಾಡಿಕೊಂಡವರು. ಇವರು ತಮ್ಮ ಹಾಗೂ ಪತ್ನಿ ಹೆಸರಿನಲ್ಲಿದ್ದ ಜಮೀನಿನಲ್ಲಿ ಶುಂಠಿ, ಜೋಳ, ಕಬ್ಬು ಬೆಳೆದಿದ್ದರು. ಅಲ್ಲದೇ ಕೆಲವರಿಂದ ಜಮೀನು ಗುತ್ತಿಗೆ ಪಡೆದು ಬೇಸಾಯ ಮಾಡುತ್ತಿದ್ದರು. ಇದಕ್ಕಾಗಿ ಅವರು, ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆಯಿಂದ 1 ಲಕ್ಷ ರೂ., ಗ್ರಾಮೀಣ ಕೂಟದಿಂದ 80 ಸಾವಿರ ರೂ., ಸ್ತ್ರೀಶಕ್ತಿ ಸಂಘಗಳಿಂದ 50 ಸಾವಿರ ರೂ., ಸತ್ಯ ಸಂಘದಿಂದ 50 ಸಾವಿರ ರೂ., ಬ್ಯಾಂಕ್ ಆಫ್ ಬರೋಡಾ ಸಾಸಲು ಶಾಖೆಯಲ್ಲಿ 3 ಲಕ್ಷ ರೂ. ಚಿನ್ನಾಭರಣ ಸಾಲ ಸೇರಿದಂತೆ ಖಾಸಗಿಯವರಿಂದ 12 ಲಕ್ಷ ರೂ. ಸಾಲ ಮಾಡಿದ್ದರು. ಆದರೆ ಸಮರ್ಪಕವಾಗಿ ಬೆಳೆ ಬಾರದೇ ನಷ್ಟಕ್ಕೊಳಗಾಗಿದ್ದರಿಂದ ಮಾಡಿದ ಸಾಲ ತೀರಿಸಲು ಸಾಧ್ಯವಾಗಿರಲಿಲ್ಲ. ಅಲ್ಲದೇ ಸಾಲಗಾರರ ಕಾಟ ಹೆಚ್ಚಾದ ಹಿನ್ನೆಲೆಯಲ್ಲಿ ಮನನೊಂದಿದ್ದ ಸುರೇಶ್ ತಮ್ಮ ಜಮೀನಿನಲ್ಲಿದ್ದ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಈ ಸಂಬಂಧ ಪತ್ನಿ ರತ್ನ ನೀಡಿದ ದೂರಿನ ಮೇರೆಗೆ ಕಿಕ್ಕೇರಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪ್ರೋತ್ಸಾಹಧನಕ್ಕೆ ಅರ್ಜಿ ಆಹ್ವಾನ

ಮಂಡ್ಯ, ಜೂ.13– 2023–24ನೇ ಸಾಲಿಗೆ ಪರಿಶಿಷ್ಟ ಜಾತಿ/ಪ.ವರ್ಗದ ಮೆಟ್ರಿಕ್ ನಂತರದ ಅರ್ಹ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಮಂಜೂರಾತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಆ.31 ಕೊನೆ ದಿನ. ಹೆಚ್ಚಿನ ಮಾಹಿತಿಗೆ ದೂ: 08232–298168 ಅನ್ನು ಸಂಪರ್ಕಿಸಿ ಎಂದು ಮದ್ದೂರು ತಾಲೂಕಿನ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೆಂಗಳೂರು–ಮೈಸೂರು ಹೆದ್ದಾರಿ

ಅಪೂರ್ಣ ಕಾಮಗಾರಿ ಶೀಘ್ರ ಪೂರ್ಣಗೊಳಿಸಿ

ಜಿಲ್ಲಾಧಿಕಾರಿ ಡಾ.ಹೆಚ್.ಎನ್.ಗೋಪಾಲಕೃಷ್ಣ ಸೂಚನೆ



ಮಂಡ್ಯ, ಜೂ.13– ಮಂಡ್ಯ ಜಿಲ್ಲಾ ವ್ಯಾಪ್ತಿಯ ಬೆಂಗಳೂರು–ಮೈಸೂರು ರಾಷ್ಟ್ರೀಯ ಹೆದ್ದಾರಿ ಅಪೂರ್ಣ ಕಾಮಗಾರಿ ಹಾಗೂ ಸಂಚಾರ ವ್ಯವಸ್ಥೆ ಸುಗಮಗೊಳಿಸಲು ಶೀಘ್ರ ಕ್ರಮ ಕೈಗೊಳ್ಳಬೇಕು ಎಂದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ಹೆಚ್.ಎನ್.ಗೋಪಾಲಕೃಷ್ಣ ಸೂಚಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ದಶಪಥ ರಸ್ತೆಯ ಸರ್ವಿಸ್ ರಸ್ತೆ ಕಾಮಗಾರಿ ಪೂರ್ಣಗೊಳ್ಳದೆ ಇರುವುದರಿಂದ ಸಂಚಾರಕ್ಕೆ ಅನಾನುಕೂಲ ಉಂಟಾಗಿದ್ದು, ಮಂಡ್ಯ ಜಿಲ್ಲೆಗೆ ಒಳಪಡುವ 55 ಕಿಮೀ ವ್ಯಾಪ್ತಿಯಲ್ಲಿ ಕಳೆದ 3 ತಿಂಗಳಲ್ಲಿ ಹಲವಾರು ಅಪಘಾತವಾಗಿ ಸಾವು ನೋವು ಸಂಭವಿಸಿದೆ. ಇದನ್ನು ಸೂಕ್ಷ್ಮವಾಗಿ ಪರಿಗಣಿಸಿ ಸಮಸ್ಯೆ ಬಗೆಹರಿಸಲು ಪ್ರಯತ್ನಿಸಿ ಎಂದರು.

ರಸ್ತೆ ಗುಣಮಟ್ಟ ಕಾಪಾಡಿಕೊಳ್ಳಿ. ರಸ್ತೆ ಆಗಮನ ಮತ್ತು ನಿರ್ಗಮನದಲ್ಲಿ ಸೂಚನಾ ಫಲಕ ಅಳವಡಿಸಿ. ಸರ್ವಿಸ್ ರಸ್ತೆ ಜಂಕ್ಷನ್‌ನಲ್ಲಿ ದೀಪ ಅಳವಡಿಸಿ. ಹೈವೇಯಲ್ಲಿ ವೇಗ ಮಿತಿ ಪರೀಕ್ಷಾ ವಾಹನ ಒದಗಿಸಬೇಕು. ರಸ್ತೆಯ 2 ಬದಿಗಳಲ್ಲಿ ವಿದ್ಯುತ್ ಟವರ್ ಕಳ್ಳತನದ ಬಗ್ಗೆ ಸುರಕ್ಷಿತ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ರಾಷ್ಟ್ರೀಯ ಹೆದ್ದಾರಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ರಸ್ತೆ ಬದಿ ಬೇಲಿ ಕೀಳುವುದರಿಂದ ಅಪಘಾತವಾಗುವ ಸಂಭವ ಇರುತ್ತದೆ. ಬೇಲಿ ಕೀಳುವವರ ವಿರುದ್ಧ ಪ್ರಕರಣ ದಾಖಲಿಸಿ. ದಶಪಥ ರಸ್ತೆಗೆ ಒಳಪಡುವ ಮದ್ದೂರು, ಮಂಡ್ಯ, ಶ್ರೀರಂಗಪಟ್ಟಣ ವ್ಯಾಪ್ತಿಯ ಗ್ರಾಮಗಳಲ್ಲಿ ರಸ್ತೆ ಸುರಕ್ಷತೆ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಬೇಕು ಎಂದರು. ಲೋಕೋಪಯೋಗಿ, ಪಂಚಾಯತ್ ರಾಜ್, ನಗರ ಸ್ಥಳೀಯ ಸಂಸ್ಥೆಗಳ ರಸ್ತೆಗಳಲ್ಲಿರುವ ಗುಂಡಿ ಮುಚ್ಚಿ ಹಾಗೂ ರಸ್ತೆಯ ಅವ್ಯವಸ್ಥೆ ಸರಿಪಡಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಸಂಚಾರಿ ನಿಯಮ ಉಲ್ಲಂಘಿಸುವವರಿಗೆ ನಗರ ಸೇರಿದಂತೆ ಜಿಲ್ಲೆಯ ವಿವಿಧೆಡೆ ಸಿ.ಸಿ ಕ್ಯಾಮರಾ ಅಳವಡಿಸಿ ದಂಡ ವಿಧಿಸುವ ವ್ಯವಸ್ಥೆಯನ್ನು ಅಳವಡಿಸುವ ಬಗ್ಗೆ ಚಿಂತಿಸಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್.ಯತೀಶ್ ಮಾತನಾಡಿ, ಬೆಂಗಳೂರು–ಮೈಸೂರು ದಶಪಥ ಹೆದ್ದಾರಿಯ ಮಂಡ್ಯ ಸರ್ವಿಸ್ ರೋಡ್‌ನಿಂದ ಮದ್ದೂರಿನ ಮುಖ್ಯರಸ್ತೆಗೆ ಸೇರುವ ರಸ್ತೆಯಲ್ಲಿ ರಸ್ತೆ ಡುಬ್ಬ ಇಲ್ಲದ ಕಾರಣ ಮುಖ್ಯ ರಸ್ತೆಯಲ್ಲಿ ಅಪಘಾತಗಳು ಸಂಭವಿಸುತ್ತಿದ್ದು, ಕೂಡಲೇ ರಸ್ತೆ ಡುಬ್ಬ ನಿರ್ಮಾಣ ಮಾಡಿ ಅಲ್ಲಿನ ಅವ್ಯವಸ್ಥೆ ಸರಿಪಡಿಸಿ ಎಂದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಾದ ಎನ್.ಹೆಚ್ ಮೃತ್ಯುಂಜಯ, ರಾಜೇಂದ್ರ ಕುಮಾರ್, ಪ್ರಸಾದ್, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರ ಹರ್ಷ, ಪ್ರಾದೇಶಿಕ ಸಾರಿಗೆ ಅಧಿಕಾರಿ ವಿವೇಕಾನಂದ, ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣ ಅಧಿಕಾರಿ ನಾಗರಾಜು, ಜಿಪಂ ಅಭಿಯಂತರ ಶಿವಚಂದ್ರು, ನಗರಸಭೆ ಸಹಾಯಕ ಕಾರ್ಯಪಾಲಕ ಅಭಿಯಂತರ ರವಿಕುಮಾರ್ ಸೇರಿದಂತೆ ಇನ್ನಿತರರಿದ್ದರು.

ಬೀರುವಳ್ಳಿಯಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ



ಕೆ.ಆರ್.ಪೇಟೆ, ಜೂ.13– ರೈತರ ಜೀವನಾಡಿ ಕೋರಮಂಡಲ್ ಸಕ್ಕರೆ ಕಾರ್ಖಾನೆ ಗ್ರಾಮೀಣ ಭಾಗದ ಜನರ ಆರೋಗ್ಯದ ಹಿತದೃಷ್ಟಿಯಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಿದೆ ಎಂದು ಕಾರ್ಖಾನೆ ಹಿರಿಯ ಉಪಾಧ್ಯಕ್ಷ ರವಿರೆಡ್ಡಿ ತಿಳಿಸಿದರು.

ತಾಲೂಕಿನ ಬೀರುವಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾವರಣದಲ್ಲಿ ಕೋರಮಂಡಲ್ ಸಕ್ಕರೆ ಕಾರ್ಖಾನೆ, ಮಂಡ್ಯ ರೋಟರಿ ಸಂಸ್ಥೆ ಹಾಗೂ ಮೈಸೂರಿನ ನಾರಾಯಣ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಆರೋಗ್ಯ ಶಿಬಿರದ ಮೂಲಕ ತಾಲೂಕಿನ ಚೌಡೇನಹಳ್ಳಿ, ಮಾಕವಳ್ಳಿ, ಬಂಡಿಹೊಳೆ ಹಾಗೂ ಬೀರುವಳ್ಳಿ ಗ್ರಾಪಂ ವ್ಯಾಪ್ತಿಯ 50ಕ್ಕೂ ಹೆಚ್ಚು ಗ್ರಾಮಗಳ 2000ಕ್ಕೂ ಹೆಚ್ಚು ಜನರ ಆರೋಗ್ಯ ರಕ್ಷಣೆಗೆ ಕೋರಮಂಡಲ್ ಸಕ್ಕರೆ ಕಾರ್ಖಾನೆ ಬದ್ಧವಾಗಿದೆ. ಹೀಗಾಗಿ ಸಾರ್ವಜನಿಕರು ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.

ಕಾರ್ಖಾನೆ ಕಬ್ಬು ವಿಭಾಗದ ಹಿರಿಯ ಅಧಿಕಾರಿ ಕೆ.ಬಾಬುರಾಜ್ ಮಾತನಾಡಿ, ಕೋರಮಂಡಲ್ ಸಕ್ಕರೆ ಕಾರ್ಖಾನೆಯ ಸಮಾಜ ಸೇವಾ ಕಾರ್ಯಗಳು ತಾಲೂಕಿನ ರೈತರು, ಕಬ್ಬು ಬೆಳೆಗಾರರು ಹಾಗೂ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಗಿದೆ. ತಜ್ಞ ವೈದ್ಯರ ಮೂಲಕ ಉಚಿತ ಚಿಕಿತ್ಸೆ ಕೊಡಿಸಿ, ಆರೋಗ್ಯ ಕಾಪಾಡಿಕೊಳ್ಳಲು ಅನುಸರಿಸಬೇಕಾದ ಜೀವನ ಕ್ರಮ, ಆಹಾರ ಪದ್ಧತಿ, ಪೌಷ್ಟಿಕಾಂಶವುಳ್ಳ ಆಹಾರ ಪದಾರ್ಥ ಹಾಗೂ ಶುದ್ಧ ಕುಡಿಯುವ ನೀರಿನ ಬಳಕೆ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

ಶಿಬಿರದಲ್ಲಿ ತಾಪಂ ಮಾಜಿ ಸದಸ್ಯ ನಿಂಗೇಗೌಡ, ಬಂಡಿಹೊಳೆ ಗ್ರಾಪಂ ಅಧ್ಯಕ್ಷ ದರ್ಶನ್, ಬೀರುವಳ್ಳಿ ಪ್ರಭಾರ ಅಧ್ಯಕ್ಷ ಚಂದ್ರಪ್ಪ, ಮಾಜಿ ಅಧ್ಯಕ್ಷ ಕುಮಾರ್, ಪಿಡಿಓ ಶಿವಕುಮಾರ್, ಕಬ್ಬು ವಿಭಾಗದ ಅಧಿಕಾರಿ ದತ್ತಾತ್ರೇಯ, ಕಾರ್ಖಾನೆ ಭದ್ರತಾ ವಿಭಾಗದ ಮುಖ್ಯಸ್ಥ ಯಲ್ಲಪ್ಪ, ತಾಲೂಕು ಕಬ್ಬು ಬೆಳೆಗಾರರ ಸಂಘದ ನಿರ್ದೇಶಕ ಕುಮಾರ್, ಹಿರಿಯ ಮುಖಂಡರಾದ ಕಾಳೇಗೌಡ, ಬಿ.ಹೆಚ್.ತಿಮ್ಮೇಗೌಡ, ಕೃಷ್ಣೇಗೌಡ, ವಾಸು, ಎಸ್‌ಡಿಎಂಸಿ ಅಧ್ಯಕ್ಷ ನಟೇಶ್, ಬೀರುವಳ್ಳಿ ಸೊಸೈಟಿ ಅಧ್ಯಕ್ಷ ಈರೇಗೌಡ, ತಜ್ಞ ವೈದ್ಯರಾದ ಡಾ.ರವಿಕುಮಾರ್, ಡಾ.ಬಶೀರ್ ಹಷ್ಮಿ, ಡಾ.ಮಂಜುನಾಥ್, ಡಾ.ಸುಶ್ಮಿತ, ಡಾ.ಆಶಾರಾಣಿ ಸೇರಿದಂತೆ ಶಾಲಾ ಮುಖ್ಯ ಶಿಕ್ಷಕರು, ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷರು, ಸದಸ್ಯರು, ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು ಇನ್ನಿತರರಿದ್ದರು.

ಮಳೆಗಾಗಿ ಕೆಆರ್‌ಎಸ್‌ನಲ್ಲಿ ಪರ್ಜನ್ಯ ಹೋಮ



ಶ್ರೀರಂಗಪಟ್ಟಣ, ಜೂ.13– ಮಂಡ್ಯ ಜಿಲ್ಲೆ ಸೇರಿದಂತೆ ಕಾವೇರಿ ಜಲಾನಯನ ಪ್ರದೇಶದಲ್ಲಿ ಮುಂಗಾರು ಮಳೆ ಕೈಕೊಟ್ಟ ಹಿನ್ನೆಲೆಯಲ್ಲಿ ಕ್ಷೇತ್ರದ ಶಾಸಕ ರಮೇಶ್‌ಬಾಬು ಬಂಡಿಸಿದ್ದೇಗೌಡ ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳ ನೇತೃತ್ವದಲ್ಲಿ ಕೆಆರ್‌ಎಸ್ ಅಣೆಕಟ್ಟೆ ಬೃಂದಾವನದ ಕಾವೇರಿ ಮಾತೆ ಪ್ರತಿಮೆ ಎದುರು ಮಂಗಳವಾರ ಪರ್ಜನ್ಯ ಹೋಮ ನೆರವೇರಿಸಿದರು.

ಶ್ರೀರಂಗಪಟ್ಟಣದ ಪ್ರಸಿದ್ಧ ಜ್ಯೋತಿಷಿ ಹಾಗೂ ವೇದಬ್ರಹ್ಮ ಡಾ.ಭಾನುಪ್ರಕಾಶ್ ಶರ್ಮಾ ನೇತೃತ್ವದಲ್ಲಿ ವೈದಿಕರ ತಂಡ ಕೆಆರ್‌ಎಸ್ ಅಣೆಕಟ್ಟೆಯ ಬೃಂದಾವನದ ಮುಂದಿರುವ ಕಾವೇರಿ ಮಾತೆಯ ಪ್ರತಿಮೆ ಮುಂಭಾಗ ಧಾರ್ಮಿಕ ಕಾರ್ಯಗಳನ್ನು ನೆರವೇರಿಸಿದರು.

ಗಣಪತಿ ಹೋಮ, ಗುರು ಪೂಜೆ, ವೃಶ್ಯ ಶೃಂಗ ಪೂಜೆ, ಇಂದ್ರ–ವರುಣ ಆವಾಹನೆ, ಇಂದ್ರ ಮತ್ತು ವರುಣನ ಜಪ, ಕಾವೇರಿ ಮಾತೆಗೆ ಪೂಜೆ, ಪರ್ಜನ್ಯ ಆವಾಹನೆ, ನೀರಿನೊಳಗೆ ಕುಳಿತು ಪರ್ಜನ್ಯ ಒಂದು ಸಾವಿರ ಜಪ, ಪರ್ಜನ್ಯ ಹೋಮ ಅರ್ಪಿಸಿ ವರುಣನಿಗೆ ಪ್ರಾರ್ಥನೆ ಸಲ್ಲಿಸಿದರು. ಹನುಮನಿಗೂ ಸಹ ಹೋಮ, ಆರಾಧನೆ ನಡೆಯಿತು. ರಾಜ್ಯದ ಜನರು ರೈತಾಪಿ ಜನರ ಸುಭಿಕ್ಷೆಗಾಗಿ ಪ್ರಾರ್ಥನೆ ಸಲ್ಲಿಸಿ, ಹೋಮ ಕುಂಡಗಳಿಗೆ ದರ್ಪಣ ಅರ್ಪಿಸಿದರು. ಪೂಜಾ ಕಾರ್ಯದಲ್ಲಿ 13 ಮಂದಿ ವೈದಿಕರ ತಂಡ ಪಾಲ್ಗೊಂಡಿತ್ತು.

ಬಳಿಕ ಮಾತನಾಡಿದ ಶಾಸಕ ಎ.ಬಿ.ರಮೇಶ್‌ಬಾಬು ಬಂಡಿಸಿದ್ದೇಗೌಡ, ಕೆಆರ್‌ಎಸ್ ರೈತರ ಜೀವನಾಡಿಯಾಗಿದ್ದು, ಹವಾಮಾನ ವೈಪರೀತ್ಯದಿಂದ ಮಳೆ ತಡವಾಗಿದೆ. ಜನರ ಶ್ರೇಯೋಭಿವೃದ್ಧಿಗಾಗಿ ಕಾವೇರಿ ಅಚ್ಚುಕಟ್ಟು ಪ್ರದೇಶದ ಒಳಿತಿಗಾಗಿ ಅತಿ ಬೇಗ ಮಳೆಯಾಗಿ ಅಣೆಕಟ್ಟೆ ಸಂಪೂರ್ಣ ಭರ್ತಿಯಾಗಲಿ ಎಂದು ಪ್ರಾರ್ಥಿಸಿದ್ದೇನೆ ಎಂದರು. ವೇದಬ್ರಹ್ಮ ಡಾ.ಭಾನುಪ್ರಕಾಶ್ ಶರ್ಮಾ ಮಾತನಾಡಿದರು. ಈ ವೇಳೆ ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಕೆಎಂಎಫ್–ಅಮುಲ್ ವಿಲೀನ ಪ್ರಶ್ನೆಯೇ ಇಲ್ಲ

• ಸಹಕಾರ ಸಚಿವ ಕೆ.ಎನ್.ರಾಜಣ್ಣ ಸ್ಪಷ್ಟನೆ • ರೈತರಿಗೆ ಬಡ್ಡಿರಹಿತ ಸಾಲದ ಮಿತಿ 3 ರಿಂದ 5 ಲಕ್ಷಕ್ಕೆ ಏರಿಕೆ

ಬೆಂಗಳೂರು, ಜೂ.13(ಕೆಎಂಶಿ)–ವಿಧಾನಸಭಾ ಚುನಾವಣೆಗೂ ಮುನ್ನ ರಾಜ್ಯದಲ್ಲಿ ಭಾರೀ ವಿವಾದಕ್ಕೆ ಎಡೆ ಮಾಡಿಕೊಟ್ಟು ಆಡಳಿತ ಮತ್ತು ವಿರೋಧ ಪಕ್ಷಗಳ ನಡುವಿನ ಆರೋಪ–ಪ್ರತ್ಯಾರೋಪಕ್ಕೆ ಕಾರಣವಾಗಿದ್ದ ಕೆಎಂಎಫ್ ಮತ್ತು ಅಮುಲ್ ವಿಲೀನವನ್ನು ಯಾವುದೇ ಕಾರಣಕ್ಕೂ ಮಾಡದಿರಲು ರಾಜ್ಯ ಸರ್ಕಾರ ನಿರ್ಧರಿಸಿದೆ.



ರಾಜ್ಯದ ರೈತರ ಜೀವನಾಡಿಯಾಗಿರುವ ಕೆಎಂಎಫ್ ಮತ್ತು ಗುಜರಾತ್‌ನ ಅಮುಲ್ ಸಂಸ್ಥೆಗಳನ್ನು ಪರಸ್ಪರ ವಿಲೀನಗೊಳಿಸುವಂತೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಮಾಡಿದ್ದ ಪ್ರಸ್ತಾಪವನ್ನು ಒಪ್ಪುವ ಪ್ರಶ್ನೆಯೇ ಇಲ್ಲವೆಂದು ಕಾಂಗ್ರೆಸ್ ಸರ್ಕಾರ ಹೇಳಿದೆ.

ಸುದ್ದಿಗಾರರೊಂದಿಗೆ ಮಾತನಾಡಿದ ಸಹಕಾರ ಸಚಿವ ಕೆ.ಎನ್.ರಾಜಣ್ಣ, ಕೆಎಂಎಫ್ ಮತ್ತು ಅಮುಲ್ ಸಂಸ್ಥೆಗಳನ್ನು ಪರಸ್ಪರ ವಿಲೀನಗೊಳಿಸುವುದು ಅಸಾಧ್ಯದ ಕೆಲಸ. ಯಾವ ಕಾರಣಕ್ಕೂ ರಾಜ್ಯ ಸರ್ಕಾರ ಈ ವಿಲೀನದ ಪರವಾಗಿಲ್ಲ. ಬದಲಿಗೆ ಕೆಎಂಎಫ್ ಸಂಸ್ಥೆಯನ್ನು ಮತ್ತಷ್ಟು ಬಲಿಷ್ಠಗೊಳಿಸಿ ರೈತರಿಗೆ ಮತ್ತಷ್ಟು ಶಕ್ತಿ ನೀಡುವುದು ನಮ್ಮ ಉದ್ದೇಶ ಎಂದರು. ರೈತರಿಗೆ ಪಾವತಿಸಬೇಕಿರುವ ಹಾಲಿನ ಪ್ರೋತ್ಸಾಹ ಧನ ಬಾಕಿ ಇದೆ. ಆದಷ್ಟು ಶೀಘ್ರವಾಗಿ ಈ ಬಾಕಿಯನ್ನು ನೀಡುತ್ತೇವೆ. ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ ನೀಡುವ ಕೃಷಿ ಸಾಲದ ಪ್ರಮಾಣವನ್ನು ಮೂರು ಲಕ್ಷ ರೂಪಾಯಿಗಳಿಂದ ಐದು ಲಕ್ಷ ರೂಪಾಯಿಗಳಿಗೇರಿಸಲು ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದು ವಿವರಿಸಿದರು.

ಶೂನ್ಯ ಬಡ್ಡಿ ದರದಲ್ಲಿ ನೀಡುವ ಕೃಷಿ ಸಾಲದ ಪ್ರಮಾಣವನ್ನು ಹೆಚ್ಚಿಸುವ ಕುರಿತು ನಾವು ಚುನಾವಣಾ ಪ್ರಣಾಳಿಕೆಯಲ್ಲಿ ಹೇಳಿದ್ದೆವು. ಅದನ್ನು ಜಾರಿ ಮಾಡುವ ಬದ್ಧತೆ ನಮಗೆ ಇದೆ ಎಂದರು. ಇದೇ ರೀತಿ ರೈತರಿಗೆ ಮಧ್ಯಮಾವಧಿ ಸಾಲದ ರೂಪದಲ್ಲಿ ಶೇಕಡಾ ಮೂರರ ಬಡ್ಡಿ ದರದೊಂದಿಗೆ ಹತ್ತು ಲಕ್ಷ ರೂಪಾಯಿ ಸಾಲ ನೀಡಲಾಗುತ್ತಿದ್ದು, ಈ ಪ್ರಮಾಣವನ್ನು ಹತ್ತರಿಂದ ಇಪ್ಪತ್ತು ಲಕ್ಷ ರೂಪಾಯಿ ಗಳಿಗೆ ಹೆಚ್ಚಿಸಲಾಗುತ್ತದೆ.

ಸಹಕಾರ ಇಲಾಖೆಯಲ್ಲಿ ಕೆಲಸ ಮಾಡಲು ನನ್ನನ್ನು ನೇಮಕ ಮಾಡಲಾಗಿದೆ. ಹೀಗಾಗಿ ನನ್ನ ಮುಂದಿರುವ ಕೆಲಸ ಮಾಡುತ್ತೇನೆ. ತನಿಖೆಗಾಗಿ ಹೆಚ್ಚಿನ ಸಮಯ ವ್ಯಯ ಮಾಡುವುದಿಲ್ಲ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಸಹಕಾರ ಇಲಾಖೆಯಲ್ಲಿ ಅವ್ಯವಹಾರ ನಡೆದಿದ್ದರೆ ಸಹಜವಾಗಿಯೇ ಅದು ಇಲಾಖೆಯ ತನಿಖೆಗೆ ಒಳಪಡುತ್ತದೆ ಎಂದು ಅವರು ಸ್ಪಷ್ಟಪಡಿಸಿದರು. ದೇಶದಲ್ಲಿ ಅಂಬಾನಿ, ಅದಾನಿಗಳ ಸಾಲ ಮನ್ನಾ ಮಾಡಿದರೆ ವಿವಾದವಾಗುವುದಿಲ್ಲ. ಆದರೆ ಸಹಕಾರ ಇಲಾಖೆಯಲ್ಲಿ ಸಣ್ಣಪುಟ್ಟ ಅವ್ಯವಹಾರಗಳು ನಡೆದರೆ ದೊಡ್ಡ ಚರ್ಚೆಯಾಗುತ್ತದೆ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ಅಂತ್ಯೋದಯ, ಬಿಪಿಎಲ್, ಎಪಿಎಲ್ ಕಾರ್ಡ್‌ನಲ್ಲಿರುವ ಕುಟುಂಬದ ಯಜಮಾನಿಗೆ ಗೃಹಲಕ್ಷ್ಮಿ ಭಾಗ್ಯ

▸ ಸರ್ಕಾರದ ಆದೇಶ ಜಾರಿ
▸ ಕುಟುಂಬದಲ್ಲಿ ಎಷ್ಟೇ ಮಹಿಳೆಯರಿದ್ದರೂ ಒಬ್ಬರಿಗೆ ಮಾತ್ರ ಯೋಜನೆ ಲಾಭ

ಬೆಂಗಳೂರು, ಜೂ.13(ಕೆಎಂಶಿ)–ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ವಿತರಿಸಿರುವ ಅಂತ್ಯೋದಯ, ಬಿಪಿಎಲ್ ಹಾಗೂ ಎಪಿಎಲ್ ಪಡಿತರ ಚೀಟಿಗಳಲ್ಲಿ ಕುಟುಂಬದ ಯಜಮಾನಿ ಎಂದು ನಮೂದಿಸಿರುವ ಮಹಿಳೆಗೆ ಮಾತ್ರ ಗೃಹಲಕ್ಷ್ಮೀ ಯೋಜನೆಯಡಿ ಮಾಸಿಕ ಎರಡು ಸಾವಿರ ರೂ. ದೊರೆಯುತ್ತದೆ.



ಗೃಹಲಕ್ಷ್ಮೀ ಯೋಜನೆ ಜಾರಿಗೆ ಸಂಬಂಧಿಸಿದಂತೆ ಸರ್ಕಾರ ಆದೇಶ ಹೊರಡಿಸಿ ಒಂದೇ ಕುಟುಂಬದಲ್ಲಿ ಒಬ್ಬರಿಗಿಂತ ಹೆಚ್ಚು ಮಹಿಳೆಯರಿದ್ದರೆ ಒಬ್ಬರಿಗೆ ಮಾತ್ರ ಈ ಯೋಜನೆ ಲಾಭ ದೊರೆಯುತ್ತದೆ.

ಫಲಾನುಭವಿಗಳು ಜೂನ್ 15ರಿಂದ ಜುಲೈ 15ರವರೆಗೆ ಅರ್ಜಿ ಸಲ್ಲಿಸುವುದು. ಅವಧಿ ಮುಗಿದ ನಂತರ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ನಡೆದು ಆ.15ರಂದು ಅವರ ಬ್ಯಾಂಕ್ ಖಾತೆಗೆ ಹಣ ವರ್ಗಾವಣೆ ಮಾಡಲಾಗುವುದು.

ಅರ್ಜಿದಾರರು ಸೇವಾ ಸಿಂಧು ಪೋರ್ಟಲ್ ಮೂಲಕ ಅಥವಾ ಭೌತಿಕವಾಗಿ ಅರ್ಜಿ ಸಲ್ಲಿಸಲು ಅವಕಾಶವಿದೆ. ಅರ್ಜಿದಾರರು ಮಾಡುವ ಸ್ವಯಂ ಘೋಷಣೆ ಆಧಾರದ ಮೇಲೆ ಮಂಜೂರಾತಿ ನೀಡಲಾಗುವುದು. ತದನಂತರ ಪರಿಶೀಲನೆಯಲ್ಲಿ ಲೋಪ ಕಂಡುಬಂದಲ್ಲಿ ಅರ್ಜಿದಾರರಿಂದ ಹಣ ವಸೂಲಿ ಮಾಡಲಾಗುವುದು.

ಸರ್ಕಾರಿ ಸೌಲಭ್ಯ ಪಡೆಯಲು ಅರ್ಜಿದಾರರು ಬ್ಯಾಂಕ್ ಖಾತೆಯ ಜತೆಗೂ ಆಧಾರ್ ಸಂಖ್ಯೆ ಹೊಂದಾಣಿಕೆ ಮಾಡಬೇಕು. ತಾಲೂಕಿನಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ಅರ್ಜಿಗಳನ್ನು ಅನುಮೋದನೆ ನೀಡುವ ಅಧಿಕಾರವನ್ನು ಸರ್ಕಾರ ನೀಡಿದೆ.

ಹಬ್ಬ ಖ್ಯಾತಿಯ ಖಳನಟ ಕಜಾನ್‌ಖಾನ್ ಹೃದಯಾಘಾತದಿಂದ ನಿಧನ

ಮುಂಬೈ: ಹಬ್ಬ, ನಾಗದೇವತೆ ಸೇರಿದಂತೆ ದಕ್ಷಿಣ ಭಾರತದ ಹಲವು ಸಿನಿಮಾಗಳಲ್ಲಿ ನಟಿಸಿದ್ದ ಖ್ಯಾತ ಖಳನಟ ಕಜಾನ್ ಖಾನ್ ಹೃದಯಾಘಾತದಿಂದ ನಿಧನರಾಗಿದ್ದಾರೆ.



ದಕ್ಷಿಣ ಭಾರತದ ಅನೇಕ ಸಿನಿಮಾಗಳಲ್ಲಿ ಖಳ ನಟನಾಗಿ ಮಿಂಚಿದ್ದ ಮಲಯಾಳಂ ನಟ ಕಜಾನ್‌ಖಾನ್ (45) ಹೃದಯಾಘಾತದಿಂದ ಸೋಮವಾರ ಸಂಜೆ ನಿಧನರಾಗಿದ್ದಾರೆ ಎಂದು ಅವರ ಆಪ್ತ ಮೂಲಗಳು ತಿಳಿಸಿವೆ. ಮಲಯಾಳಂ ನಿರ್ಮಾಪಕ ಎನ್.ಎಂ. ಬಾದುಷಾ ಅವರು ಈ ಸುದ್ದಿಯನ್ನು ಸಾಮಾಜಿಕ ಜಾಲತಾಣ ಖಾತೆಯಲ್ಲಿ ತಿಳಿಸಿದ್ದಾರೆ.

ಕಜಾನ್‌ಖಾನ್ ಅವರು ಮಲಯಾಳಂ, ತಮಿಳು, ಕನ್ನಡ ಸೇರಿದಂತೆ 50ಕ್ಕೂ ಹೆಚ್ಚು ಚಿತ್ರಗಳಲ್ಲಿ ಅಭಿನಯಿಸಿದ್ದರು. ಕನ್ನಡದ 'ಹಬ್ಬ', 'ಚೆಲುವ', 'ನಾಗದೇವತೆ' ಸಿನಿಮಾಗಳಲ್ಲಿ ಅವರು ಖಳನಟರಾಗಿ ಕಾಣಿಸಿಕೊಂಡಿದ್ದರು. 1992 ರಲ್ಲಿ ಮಲಯಾಳಂ ಸಿನಿಮಾ ರಂಗಕ್ಕೆ ಕಾಲಿಟ್ಟಿದ್ದ ಕಜಾನ್‌ಖಾನ್ ಅವರು 'ಸಿಐಡಿ ಮೂಸಾ' ಎಂಬ ಚಿತ್ರದ ಮೂಲಕ ಹೆಚ್ಚು ಜನಪ್ರಿಯರಾಗಿದ್ದರು. ಖಾನ್ ನಿಧನಕ್ಕೆ ಚಿತ್ರರಂಗದ ಅನೇಕರು ಕಂಬನಿ ಮಿಡಿದಿದ್ದಾರೆ.

ಲಿಂಗಾಯತರ ಬಗ್ಗೆ ಅವಹೇಳನಕಾರಿ ಹೇಳಿಕೆ ಆರೋಪ

ಸಿದ್ದರಾಮಯ್ಯ ವಿರುದ್ಧದ ಮಾನನಷ್ಟ ಮೊಕದ್ದಮೆ ಅರ್ಜಿ ವಜಾ

ಬೆಂಗಳೂರು: ಲಿಂಗಾಯತರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ದಾಖಲಿಸಲಾಗಿದ್ದ ಮಾನನಷ್ಟ ಮೊಕದ್ದಮೆ ಅರ್ಜಿ ವಜಾಗೊಂಡಿದೆ.



ಶಂಕರ್ ಶೇಟ್ ಎಂಬುವವರು ಸಲ್ಲಿಸಿದ ಖಾಸಗಿ ದೂರನ್ನು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ಕೋರ್ಟ್ ವಜಾ ಮಾಡಿದೆ. ವಿಧಾನಸಭಾ ಚುನಾವಣೆಯ ವೇಳೆ ರಾಜ್ಯದ ಲಿಂಗಾಯತ ಮುಖ್ಯಮಂತ್ರಿಗಳು ಭ್ರಷ್ಟರು ಎಂದು ಹೇಳಿಕೆ ನೀಡಿದ್ದ ಸಿದ್ದರಾಮಯ್ಯ ಅವರ ವಿರುದ್ಧ ಮಾನನಷ್ಟ ಮೊಕದ್ದಮೆ ಹಾಕಲಾಗಿತ್ತು. ಈ ಬಗ್ಗೆ ವಿಚಾರಣೆ ನಡೆಸಿದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ನ್ಯಾಯಮೂರ್ತಿ ಪ್ರೀತ್.ಜೆ ಅವರು ಮಾನನಷ್ಟ ಮೊಕದ್ದಮೆ ಅರ್ಜಿಯನ್ನು ವಜಾಗೊಳಿಸಿ ಆದೇಶ ಹೊರಡಿಸಿದ್ದಾರೆ. ಇದರಿಂದ ಸಿಎಂ ಸಿದ್ದರಾಮಯ್ಯನವರಿಗೆ ಬಿಗ್ ರಿಲೀಫ್ ಸಿಕ್ಕಂತಾಗಿದೆ.

ಕರ್ನಾಟಕ ರಾಜ್ಯ ವಿಧಾನಸಭಾ ಚುನಾವಣೆ ವೇಳೆ ವಿರೋಧ ಪಕ್ಷದ ನಾಯಕರಾಗಿದ್ದ ಸಿದ್ದರಾಮಯ್ಯ ಅವರು ರಾಜ್ಯದ ಲಿಂಗಾಯತ ಸಿಎಂಗಳು ಭ್ರಷ್ಟರು ಎಂದು ಹೇಳಿಕೆ ನೀಡಿ ವಿವಾದವನ್ನು ಮೈಮೇಲೆ ಎಳೆದುಕೊಂಡಿದ್ದರು. ಇದು ರಾಜ್ಯ ರಾಜಕಾರಣದಲ್ಲಿ ಅಲ್ಲೋಲ ಕಲ್ಲೋಲ ಸೃಷ್ಟಿಸಿತ್ತು. ಇದನ್ನು ಬಿಜೆಪಿ ಚುನಾವಣೆಯ ಅಸ್ತ್ರವನ್ನಾಗಿ ಬಳಸಿಕೊಂಡಿತ್ತು. ಅಲ್ಲದೇ ಈ ಕುರಿತು ಅವರ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡಲಾಗಿತ್ತು.

ಮಾತ್ರವಲ್ಲದೇ ಲಿಂಗಾಯತ ಯುವ ವೇದಿಕೆಯ ಕಾನೂನು ಘಟಕದಿಂದ ಸಿದ್ದರಾಮಯ್ಯ ವಿರುದ್ಧ ರಾಜ್ಯ ಚುನಾವಣಾ ಆಯೋಗಕ್ಕೆ ದೂರು ನೀಡಲಾಗಿತ್ತು. ಲಿಂಗಾಯತ ಮುಖ್ಯಮಂತ್ರಿಗಳ ಬಗ್ಗೆ ಸಿದ್ದರಾಮಯ್ಯ ಹೇಳಿಕೆ ವಿಚಾರವಾಗಿ ಲಿಂಗಾಯತ ಯುವ ವೇದಿಕೆ ಮುಖಂಡ ಬಸವರಾಜ್ ಎನ್ನುವವರು ದೂರು ದಾಖಲಿಸಿದ್ದರು.

ಅಂದು ಸಿದ್ದರಾಮಯ್ಯ ಹೇಳಿದ್ದೇನು: ಕಳೆದ ತಿಂಗಳು ನಡೆದಿದ್ದ ವಿಧಾನಸಭೆ ಚುನಾವಣೆ ವೇಳೆ ಅಂದಿನ ವಿರೋಧ ಪಕ್ಷದ ನಾಯಕರಾಗಿದ್ದ ಸಿದ್ದರಾಮಯ್ಯ ಅವರು ವರುಣಾದಲ್ಲಿ ಚುನಾವಣಾ ಪ್ರಚಾರದ ವೇಳೆ ಮಾಧ್ಯಮಗಳೊಂದಿಗೆ ಮಾತನಾಡುತ್ತಿದ್ದಾಗ, ಈಗಾಗಲೇ ಲಿಂಗಾಯತ ಚೀಫ್ ಮಿನಿಸ್ಟರ್ ಇದ್ದಾರಲ್ಲಾ ಅವ್ರೇ ಭ್ರಷ್ಟಾಚಾರ ಮಾಡಿ ರಾಜ್ಯ ಹಾಳು ಮಾಡಿರೋದು ಎಂದು ಹೇಳಿಕೆ ನೀಡಿದ್ದರು. ಇದು ಭಾರೀ ವಿರೋಧಕ್ಕೆ ಕಾರಣವಾಗಿತ್ತು. ಹೇಳಿಕೆ ವಿವಾದಕ್ಕೆ ಕಾರಣವಾಗುತ್ತೆ ಎಂಬುದನ್ನು ಅರಿತ ಸಿದ್ದರಾಮಯ್ಯ ಅವರು ಮಾಧ್ಯಮ ಪ್ರಕಟಣೆ ಮೂಲಕ ಸ್ಪಷ್ಟನೆ ನೀಡಿದ್ದರು. ಲಿಂಗಾಯತರೆಲ್ಲ ಭ್ರಷ್ಟರೆಂದು ನಾನು ಹೇಳಿದ್ದೇನೆಂದು ತೋರಿಸಲು ಮಾಡುತ್ತಿರುವ ಪ್ರಯತ್ನ ರಾಜಕೀಯ ದುರುದ್ದೇಶದಿಂದ ಕೂಡಿದ್ದು. ಆ ರೀತಿ ನಾನು ಹೇಳಿಯೇ ಇಲ್ಲ ಎಂದಿದ್ದರು.

ಹೆತ್ತತಾಯಿ ಕೊಂದು ಸೂಟ್‌ಕೇಸ್‌ನಲ್ಲಿ ಪೊಲೀಸ್ ಠಾಣೆಗೆ ಶವ ತಂದ ಮಗಳು!

ಬೆಂಗಳೂರು: ತಾಯಿ ಪ್ರೀತಿಗಾಗಿ ಎಷ್ಟೋ ಜನ ಹಪಹಪಿಸುತ್ತಾರೆ. ಆದರೆ ಇಲ್ಲೊಬ್ಬ ಕ್ರೂರಿ ಮಗಳೇ ತನ್ನ ಹೆತ್ತ ತಾಯಿಯನ್ನು ಕೊಂದು ಸೂಟ್‌ಕೇಸ್‌ನಲ್ಲಿ ಪ್ಯಾಕ್ ಮಾಡಿ ನೇರವಾಗಿ ಪೊಲೀಸ್ ಠಾಣೆಗೆ ಬಂದಿದ್ದಾಳೆ.



ಸೇನಾಲಿ ಸೇನ್ ಎಂಬ 39 ವರ್ಷದ ಮಹಿಳೆ ತನ್ನ 70 ವರ್ಷದ ತಾಯಿ ಬೀವಾಪೌಲ್‌ನ ಕೊಲೆ ಮಾಡಿದ್ದಾಳೆ. ತಾಯಿ ಶವವನ್ನು ಸೂಟ್‌ಕೇಸ್‌ಗೆ ತುಂಬಿ ಹೊತ್ತುಕೊಂಡು ಪೊಲೀಸ್ ಠಾಣೆಗೆ ಬಂದಿದ್ದಾಳೆ. ಸೆನಾಲಿ ಸೇನ್ ಅಮ್ಮ ಮತ್ತು ಅತ್ತೆ ಒಂದೇ ಮನೆಯಲ್ಲಿದ್ದರು. ಇಬ್ಬರೂ ದಿನಾ ಗಲಾಟೆ ಮಾಡಿಕೊಳ್ಳುತ್ತಿದ್ದರು. ಬೀಗರ ಜಗಳಕ್ಕೆ ಬೇಸತ್ತು ಬೀವಾಪೌಲ್ ತನ್ನ ಮಗಳಿಗೆ ನಿದ್ದೆ ಮಾತ್ರೆ ಹಾಕಿ ಸಾಯಿಸುವುದಾಗಿ ಹೇಳಿದ್ದಾಳೆ. ಆದರೆ ಮಗಳೇ ಅಮ್ಮನಿಗೆ ಮುಂಜಾನೆ 20 ಮಾತ್ರೆಗಳನ್ನು ನುಂಗಿಸಿದ್ದಾಳೆ.

ನಂತರ ಸುಮಾರು 11 ಗಂಟೆಗೆ ತಾಯಿ ಹೊಟ್ಟೆ ನೋವು ಎಂದಾಗ ಆಸ್ಪತ್ರೆಗೆ ಸೇರಿಸಬೇಕಾದ ಮಗಳು ವೇಲ್‌ನಿಂದ ಕುತ್ತಿಗೆ ಬಿಗಿದು ಹತ್ಯೆ ಮಾಡಿದ್ದಾಳೆ. ಅಷ್ಟೇ ಅಲ್ಲದೇ ಟ್ರ್ಯಾಲಿ ಸೂಟ್‌ಕೇಸ್‌ನಲ್ಲಿ ತಾಯಿಯ ಶವ ಪ್ಯಾಕ್ ಮಾಡಿ, ತಂದೆ ಫೋಟೋ ಜೊತೆಗಿಟ್ಟು ನೇರವಾಗಿ ಮೈಕೋ ಲೇಔಟ್ ಠಾಣೆಗೆ ಬಂದಿದ್ದಾಳೆ. ಬಿಳೇಕಹಳ್ಳಿಯ ಎನ್‌ಎಸ್‌ಆರ್ ಗ್ರೀನ್ ಅಪಾರ್ಟ್‌ಮೆಂಟ್‌ನ ಫ್ಲಾಟ್‌ನಿಂದ ಆಟೋದಲ್ಲಿ ಠಾಣೆಗೆ ಬಂದು ಶವದ ಸಮೇತ ಶರಣಾಗಿದ್ದಾಳೆ. ಕೇಸ್ ದಾಖಲಿಸಿಕೊಂಡಿರುವ ಪೊಲೀಸರು ಆಕೆಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ. ಸದ್ಯ ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಸೆನಾಲಿ ಸೇನ್‌ಳನ್ನು ಬಂಧಿಸಿದ್ದಾರೆ.

ಮುಂಬೈ–ಪುಣೆ ಎಕ್ಸ್‌ಪ್ರೆಸ್‌ವೇಯಲ್ಲಿ ಹೊತ್ತಿ ಉರಿದ ಆಯಿಲ್ ಟ್ಯಾಂಕರ್, ನಾಲ್ವರು ಸಜೀವ ದಹನ

ಮುಂಬೈ: ಮಹಾರಾಷ್ಟ್ರದ ಲೋನಾವಾಲಾ ಬಳಿ ಮುಂಬೈ – ಪುಣೆ ಎಕ್ಸ್‌ಪ್ರೆಸ್‌ವೇಯಲ್ಲಿ ತೈಲ ಟ್ಯಾಂಕರ್‌ವೊಂದು ಭೀಕರ ಅಪಘಾತಕ್ಕೀಡಾಗಿ ಬೆಂಕಿಯಿಂದ ಹೊತ್ತಿಕೊಂಡಿದ್ದು, ಘಟನೆಯಲ್ಲಿ ನಾಲ್ವರು ಸಜೀವ ದಹನವಾಗಿದ್ದಾರೆ ಮತ್ತು ಮೂವರು ಗಾಯಗೊಂಡಿದ್ದಾರೆ.

ಲೋನಾವಾಲಾ ಮೇಲ್ಸೇತುವೆಯಲ್ಲಿ ಈ ಅಪಘಾತ ಸಂಭವಿಸಿದ್ದು, ಹೆದ್ದಾರಿಯ ಒಂದು ಬದಿ ಮಾತ್ರ ಬಳಕೆಯಲ್ಲಿದ್ದು, ವಾಹನ ಸಂಚಾರ ಸಂಪೂರ್ಣ ಅಸ್ತವ್ಯಸ್ತವಾಗಿದೆ ಎಂದು ಪುಣೆ ಗ್ರಾಮಾಂತರ ಪೊಲೀಸರು ತಿಳಿಸಿದ್ದಾರೆ. ಬೆಂಕಿಯ ಕೆನ್ನಾಲಗೆಗೆ ಸಿಲುಕಿದ್ದ ಟ್ಯಾಂಕರ್ ಅನ್ನು ತೆರವುಗೊಳಿಸಿ, ಬೆಂಕಿ ನಂದಿಸಲು ಅಗ್ನಿ ಶಾಮಕ ಸಿಬ್ಬಂದಿ ಹರಸಾಹಸಪಟ್ಟರು. ರಾಸಾಯನಿಕ ಪದಾರ್ಥ ತುಂಬಿದ್ದ ಟ್ಯಾಂಕರ್ ಉರುಳಿದ ಕೂಡಲೇ ಬೆಂಕಿ ಸ್ಫೋಟಗೊಂಡಿತು ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ಟ್ಯಾಂಕರ್‌ನ ಸಮೀಪದಲ್ಲಿ ಸಂಚರಿಸುತ್ತಿದ್ದ ವಾಹನಗಳಿಗೂ ಬೆಂಕಿ ತಗುಲಿತ್ತು. ಟ್ಯಾಂಕರ್‌ನಲ್ಲಿ ಸಂಗ್ರಹಿಸಿದ್ದ ರಾಸಾಯನಿಕಗಳು ಅತ್ಯಂತ ಸೂಕ್ಷ್ಮ ಪದಾರ್ಥಗಳಾಗಿದ್ದು, ಬೆಂಕಿ ತಗುಲುವ ಸಾಧ್ಯತೆ ಹೆಚ್ಚಾಗಿತ್ತು ಎಂದು ಅಗ್ನಿಶಾಮಕ ಸಿಬ್ಬಂದಿ ತಿಳಿಸಿದ್ದಾರೆ.

ಪತ್ರಕರ್ತರಿಗೆ ಯಶಸ್ವಿನಿ ಆರೋಗ್ಯ ವಿಮೆ ಸ್ಮಾರ್ಟ್ ಕಾರ್ಡ್ ವಿತರಣೆ, ವಾರ್ಷಿಕ ಪ್ರಶಸ್ತಿಗಳ ಪ್ರದಾನ ಸಮಾರಂಭ

ಮೈಸೂರು, ಜೂ. 13– ಮೈಸೂರು ಜಿಲ್ಲಾ ಪತ್ರಕರ್ತರ ಅಭ್ಯುದಯ ಸಹಕಾರ ಸಂಘ (ರಿ)ದ ವತಿಯಿಂದ ಪತ್ರಕರ್ತರಿಗಾಗಿ ಯಶಸ್ವಿನಿ ಆರೋಗ್ಯ ವಿಮೆ ಯೋಜನೆಯ ಸ್ಮಾರ್ಟ್ ಕಾರ್ಡ್ ವಿತರಣೆ ಮತ್ತು 'ಅಭ್ಯುದಯ ಸಹಕಾರಿ ಪತ್ರಕರ್ತ ವಾರ್ಷಿಕ ಪ್ರಶಸ್ತಿಗಳ ಪ್ರದಾನ ಸಮಾರಂಭವನ್ನು ಜೂನ್ 16ರಂದು (ಶುಕ್ರವಾರ) ಬೆಳಗ್ಗೆ 10.30ಕ್ಕೆ ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ದಿ. ರಾಜಶೇಖರ ಕೋಟಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಸಹಕಾರ ಸಂಘದ ಅಧ್ಯಕ್ಷ ಕೆ.ದೀಪಕ್ ಅಧ್ಯಕ್ಷತೆಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಡಾ. ಯತೀಂದ್ರ ಸಿದ್ದರಾಮಯ್ಯ ಪತ್ರಕರ್ತರಿಗೆ ಯಶಸ್ವಿನಿ ಆರೋಗ್ಯ ವಿಮೆಯ ಸ್ಮಾರ್ಟ್ ಕಾರ್ಡ್‌ಗಳನ್ನು ವಿತರಣೆ ಮಾಡುವರು. ಶಾಸಕ ಕೆ.ಎಸ್. ಶ್ರೀವತ್ಸ 'ಅಭ್ಯುದಯ ಸಹಕಾರಿ ಪತ್ರಕರ್ತ' ವಾರ್ಷಿಕ ಪ್ರಶಸ್ತಿಗಳನ್ನು ವಿತರಣೆ ಮಾಡುವರು. ಮುಖ್ಯ ಅತಿಥಿಗಳಾಗಿ ಮೈಸೂರು ಪ್ರಾಂತ ಸಹಕಾರ ಸಂಘಗಳ ಜಂಟಿ ನಿಬಂಧಕರಾದ ಡಾ. ಉಮೇಶ್ ಭಾಗವಹಿಸಿ ಯಶಸ್ವಿನಿ ಯೋಜನೆ ಕುರಿತು ಪತ್ರಕರ್ತರಿಗೆ ಮಾಹಿತಿ ನೀಡುವರು. ನವ ನಗರ ಬ್ಯಾಂಕ್‌ನ ಅಧ್ಯಕ್ಷ ಕೆ.ಎನ್. ಬಸಂತ್ ಮುಖ್ಯ ಅತಿಥಿಗಳಾಗಿ ಭಾಗವಹಿಸಿ, ಸಹಕಾರ ಕ್ಷೇತ್ರದ ಬಗ್ಗೆ ಪತ್ರಕರ್ತರಿಗೆ ಅರಿವು ಮೂಡಿಸುವರು.

ಪ್ರಶಸ್ತಿ ಪುರಸ್ಕೃತರು: ನೇರಳೆಕುಪ್ಪೆ ಮಹದೇವ್ (ವಿಜಯ ವಾಣಿ, ಹುಣಸೂರು), ಸಿ.ಎನ್.ರಘು (ಪ್ರಜಾನುಡಿ, ಹೆಚ್.ಡಿ.ಕೋಟೆ), ಎಸ್.ಆರ್. ನಾಗರಾಂ (ಪ್ರಜಾವಾಣಿ, ಸರಗೂರು), ಹೆಚ್.ಡಿ. ರಮೇಶ್ (ವಾರ್ತಾ ಭಾರತಿ, ಪಿರಿಯಾಪಟ್ಟಣ), ಕೆ.ಆರ್. ಶ್ರೀನಿವಾಸ್ (ನಗರಧೂತ, ಕೆ.ಆರ್.ನಗರ), ಬಿ.ಸಿ. ಶಿವರಾಂ (ಸಂಯುಕ್ತ ಕರ್ನಾಟಕ, ಸಾಲಿಗ್ರಾಮ), ನಂಜನಗೂಡು ಮಧು (ಮಹಾನಂದಿ, ನಂಜನಗೂಡು), ಎಸ್. ಬಸವರಾಜ್ (ಕನ್ನಡ ಪ್ರಭ, ಟಿ.ನರಸೀಪುರ) ಹಾಗೂ ಮೈಸೂರು ನಗರದಿಂದ ಎಂ.ಎನ್.ಕಿರಣ್ (ದಿನ ತಂತಿ).

ಇತಿಹಾಸ ಸೃಷ್ಟಿಸಿದ MRF: ಷೇರಿನ ಬೆಲೆ ರೂ. 1 ಲಕ್ಷ

ನವದೆಹಲಿ: ಟೈರ್ ತಯಾರಿಕಾ ಕಂಪನಿ ಎಂಆರ್‌ಎಫ್ ಷೇರುಗಳು ಮಂಗಳವಾರ ಹೊಸ ಇತಿಹಾಸ ಸೃಷ್ಟಿಸಿವೆ. ಮಂಗಳವಾರದ ಆರಂಭಿಕ ವಹಿವಾಟಿನಲ್ಲಿ ಕಂಪನಿಯ ಷೇರು ಬೆಲೆ (ಎಂಆರ್‌ಎಫ್ ಷೇರು ಬೆಲೆ) ಒಂದು ಲಕ್ಷದ ಗಡಿ ದಾಟಿದೆ ಈ ಮೂಲಕ 1 ಲಕ್ಷದ ಗಡಿ ದಾಟಿದ ಮೊದಲ ದಲಾಲ್ ಸ್ಟ್ರೀಟ್ ಷೇರು ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಎಂಆರ್‌ಎಫ್‌ನ ಷೇರು ಬೆಲೆ ಇಂದು ಬೆಳಗ್ಗೆ ಬಿಎಸ್‌ಇಯಲ್ಲಿ ಶೇ.1.37ರಷ್ಟು ಜಿಗಿತದೊಂದಿಗೆ 1,00,300 ರೂ. ಇದರೊಂದಿಗೆ ಷೇರು ಹೊಸ ಮೈಲಿಗಲ್ಲು ಸ್ಥಾಪಿಸಿತು.

ಬಿಪರ್ ಜಾಯ್ ಚಂಡಮಾರುತದ ಅಬ್ಬರ: ಗುಜರಾತ್ ಕರಾವಳಿ ಜಿಲ್ಲೆಗಳಿಂದ 21,000 ಜನರ ಸ್ಥಳಾಂತರ



ಅಹಮದಾಬಾದ್: ವ್ಯಾಪಕ ಹಾನಿಯುಂಟು ಮಾಡುವ ಸಾಮರ್ಥ್ಯ ಹೊಂದಿರುವ 'ಬಿಪರ್ ಜಾಯ್' ಚಂಡಮಾರುತ ಗುರುವಾರ ಸಂಜೆ ಗುಜರಾತ್‌ನ ಕಛ್ ಜಿಲ್ಲೆಗೆ ಅಪ್ಪಳಿಸುವ ಸಾಧ್ಯತೆ ಇದ್ದು, ಸರ್ಕಾರ ಮುನ್ನೆಚ್ಚರಿಕೆ ಕ್ರಮವಾಗಿ ವಿವಿಧ ಕರಾವಳಿ ಜಿಲ್ಲೆಗಳಿಂದ 21,000 ಜನರನ್ನು ತಾತ್ಕಾಲಿಕ ಆಶ್ರಯ ಕೇಂದ್ರಗಳಿಗೆ ಸ್ಥಳಾಂತರಿಸಿದೆ ಎಂದು ಮಂಗಳವಾರ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಕರಾವಳಿಯ 10 ಕಿಮೀ ವ್ಯಾಪ್ತಿಯ ಜನರನ್ನು ಸ್ಥಳಾಂತರಿಸುವ ಗುರಿಯನ್ನು ಸರ್ಕಾರ ಹೊಂದಿದೆ ಎಂದು ಅವರು ಹೇಳಿದ್ದಾರೆ. ಭಾರತೀಯ ಹವಾಮಾನ ಇಲಾಖೆ(IMD) ಪ್ರಕಾರ, ಈ ಚಂಡಮಾರುತದ ಪ್ರಭಾವದಿಂದ ಭಾರೀ ಮಳೆ ಮತ್ತು ಭೂಕುಸಿತ ಉಂಟಾಗಲಿದ್ದು, 'ಅತ್ಯಂತ ವೇಗವಾಗಿ ಅಂದರೆ ಗರಿಷ್ಠ ಗಂಟೆಗೆ 150 ಕಿಲೋಮೀಟರ್ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆ ಇದೆ ಎಂದು ಮುನ್ಸೂಚನೆ ನೀಡಿದೆ.

ಈ ಚಂಡಮಾರುತ ಗುಜರಾತ್‌ನ ಕಛ್, ದೇವಭೂಮಿ ದ್ವಾರಕಾ ಮತ್ತು ಜಾಮ್‌ನಗರ ಜಿಲ್ಲೆಗಳ ಮೇಲೆ ಹೆಚ್ಚು ಪರಿಣಾಮ ಬೀರುವ ಸಾಧ್ಯತೆಯಿದೆ.

'ನಾವು ಈಗಾಗಲೇ ಕರಾವಳಿಯ ಸಮೀಪದಲ್ಲಿ ವಾಸಿಸುವ ಜನರನ್ನು ಸ್ಥಳಾಂತರಿಸುತ್ತಿದ್ದೇವೆ. ಇಲ್ಲಿಯವರೆಗೆ, ವಿವಿಧ ಜಿಲ್ಲಾಡಳಿತಗಳು ಸುಮಾರು 21,000 ಜನರನ್ನು ತಾತ್ಕಾಲಿಕ ಆಶ್ರಯ ಕೇಂದ್ರಗಳಿಗೆ ಸ್ಥಳಾಂತರಿಸಿವೆ. ಸ್ಥಳಾಂತರಿಸುವ ಪ್ರಕ್ರಿಯೆಯು ಇನ್ನೂ ಮುಂದುವರೆದಿದೆ ಮತ್ತು ಅಪಾಯದಲ್ಲಿರುವ ಎಲ್ಲರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗುವುದು ಎಂದು ರಾಜ್ಯ ಪರಿಹಾರ ಆಯುಕ್ತ ಅಲೋಕ್ ಕುಮಾರ್ ಪಾಂಡೆ ತಿಳಿಸಿದ್ದಾರೆ.

ಆರೆಂಜ್ ಅಲರ್ಟ್: ಬಿಪರ್ ಜಾಯ್ ಚಂಡಮಾರುತವು ಜೂನ್ 15 ರ ಸಂಜೆಯ ವೇಳೆಗೆ ಗುಜರಾತ್‌ನ ಜಖೌ ಬಂದರನ್ನು ಅತಿ ತೀವ್ರ ಚಂಡಮಾರುತವಾಗಿ ದಾಟಲು ಸಿದ್ಧವಾಗಿರುವ ಕಾರಣ ಭಾರತೀಯ ಹವಾಮಾನ ಇಲಾಖೆ (IMD) ಇಂದು ಗುಜರಾತ್‌ನ ಸೌರಾಷ್ಟ್ರ ಮತ್ತು ಕಛ್ ಕರಾವಳಿಗೆ ಆರೆಂಜ್ ಅಲರ್ಟ್ ನೀಡಿದೆ. ಇದರ ಪರಿಣಾಮ ಗುಜರಾತ್‌ನ ಕಛ್ ಜಿಲ್ಲೆಯ ನಲಿಯಾ ಪಟ್ಟಣದಲ್ಲಿ ಲಘು ಮಳೆಯಾಗಿದೆ.

ಜನರು ಸಮುದ್ರಕ್ಕೆ ಇಳಿಯುವುದನ್ನು ತಡೆಯಲು ಗುಜರಾತ್‌ನ ನವಸಾರಿ ಕರಾವಳಿಯ ಬಳಿ ಪೊಲೀಸರನ್ನು ನಿಯೋಜಿಸಲಾಗಿದೆ. ಇಂದು ಬೆಳಗ್ಗೆ ಗುಜರಾತ್‌ನ ಓಖಾ ಬಳಿಯ ದ್ವಾರಕಾ ಕರಾವಳಿಯಿಂದ ಸುಮಾರು 50 ಭಾರತೀಯ ಕೋಸ್ಟ್ ಗಾರ್ಡ್ ಸೈನಿಕರನ್ನು ಎಎಲ್‌ಹೆಚ್ ಧ್ರುವ ಹೆಲಿಕಾಪ್ಟರ್‌ಗಳ ಮೂಲಕ ಸ್ಥಳಾಂತರಿಸಲಾಯಿತು. "ಭಾರತೀಯ ಕೋಸ್ಟ್ ಗಾರ್ಡ್ ಎಎಲ್ ಎಚ್ ಧ್ರುವ್ ಹೆಲಿಕಾಪ್ಟರ್‌ಗಳ ಮೂಲಕ ಗುಜರಾತ್‌ನ ಓಖಾ ಬಳಿಯ ದ್ವಾರಕಾ ಕರಾವಳಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಜಾಕ್-ಅಪ್ ರಿಗ್ 'ಕೀ ಸಿಂಗಾಪುರ'ದಿಂದ ಇಂದು ಬೆಳಿಗ್ಗೆ 50 ಸಿಬ್ಬಂದಿಯನ್ನು ಸ್ಥಳಾಂತರಿಸಲಾಗಿದೆ" ಎಂದು ಐಸಿಜಿ ಅಧಿಕಾರಿಗಳು ತಿಳಿಸಿದ್ದಾರೆ.

ಕೆಲವು ರೈಲು ಸೇವೆಗಳು ರದ್ದು: ಜೂನ್ 16 ರಂದು ವಾಯುವ್ಯ ರೈಲ್ವೆ (NWR) ಕೆಲವು ರೈಲು ಸೇವೆಗಳನ್ನು ರದ್ದುಗೊಳಿಸಿದೆ. ಸುರಕ್ಷತೆ ಮತ್ತು ಭದ್ರತೆಯನ್ನು ಗಮನದಲ್ಲಿಟ್ಟುಕೊಂಡು ರೈಲ್ವೇ ಸೇವೆಗಳನ್ನು ಭಾಗಶಃ ರದ್ದುಗೊಳಿಸಲಾಗಿದೆ ಎಂದು ಎನ್‌ಡಬ್ಲ್ಯುಆರ್ ಹೇಳಿಕೆಯಲ್ಲಿ ತಿಳಿಸಿದೆ.

ಗುಜರಾತ್ ಸಿಎಂ ಜೊತೆ ಪ್ರಧಾನಿ ಸಂಭಾಷಣೆ

ಬಿಪರ್ ಜಾಯ್ ಚಂಡಮಾರುತ ಆಗಮನ ಹಿನ್ನೆಲೆಯಲ್ಲಿ ನಿನ್ನೆ ಪ್ರಧಾನಿ ನರೇಂದ್ರ ಮೋದಿ ಗುಜರಾತ್ ಸಿಎಂ ಭೂಪೇಂದ್ರ ಪಟೇಲ್ ಜೊತೆ ದೂರವಾಣಿ ಮೂಲಕ ಮಾತುಕತೆ ನಡೆಸಿ ರಾಜ್ಯಕ್ಕೆ ಎಲ್ಲಾ ರೀತಿಯ ನೆರವನ್ನು ಕೇಂದ್ರದಿಂದ ನೀಡುವುದಾಗಿ ಭರವಸೆ ನೀಡಿದ್ದಾರೆ. ನಿನ್ನೆ ಪ್ರಧಾನಿಯವರು ಸಚಿವರು ಮತ್ತು ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳ ಜೊತೆ ದೆಹಲಿಯಲ್ಲಿ ಉನ್ನತ ಮಟ್ಟದ ಸಭೆ ನಡೆಸಿದ್ದರು.

ಕೇಂದ್ರ ಗೃಹ ವ್ಯವಹಾರಗಳ ಸಚಿವಾಲಯವು ಪರಿಸ್ಥಿತಿಯನ್ನು ದಿನದ 24X7 ಗಂಟೆಯೂ ಪರಿಶೀಲಿಸುತ್ತಿದೆ ಮತ್ತು ರಾಜ್ಯ ಸರ್ಕಾರ ಮತ್ತು ಕೇಂದ್ರೀಯ ಸಂಸ್ಥೆಗಳೊಂದಿಗೆ ಸಂಪರ್ಕದಲ್ಲಿದೆ ಎಂದು ತಿಳಿಸಿದೆ. ಈ ಪ್ರದೇಶಗಳಲ್ಲಿ ಎನ್.ಡಿ.ಆರ್.ಎಫ್. ತನ್ನ 12 ತಂಡಗಳನ್ನು ಈ ಮೊದಲೇ ಇರಿಸಿದ್ದು, ಅದರಲ್ಲಿ ದೋಣಿಗಳು, ಮರ ಕಡಿಯುವವರು, ಟೆಲಿಕಾಂ ಉಪಕರಣಗಳು ಇತ್ಯಾದಿಗಳನ್ನು ಅಳವಡಿಸಲಾಗಿದೆ ಮತ್ತು 15 ತಂಡಗಳನ್ನು ಹೆಚ್ಚುವರಿಯಾಗಿ(ಸ್ಟ್ಯಾಂಡ್ಬೈ) ಇರಿಸಲಾಗಿದೆ.



ಬಿಪರ್ ಜಾಯ್ ಚಂಡಮಾರುತ ಹಿನ್ನೆಲೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಷಾ ನವದೆಹಲಿಯಲ್ಲಿ ಉನ್ನತ ಮಟ್ಟದ ಸಭೆ ನಡೆಸಿದರು.

ಚಂಡಮಾರುತಕ್ಕೆ ಮುನ್ನವೇ ನಾಲ್ವರ ಬಲಿ

ಈಗಾಗಲೇ ಭಾರೀ ಬಿರುಗಾಳಿಗೆ ಗೋಡೆ ಕುಸಿದು ಇಬ್ಬರು ಸಾವಿಗೀಡಾದರೆ, ಭಾರೀ ಮರ ಧರೆಗುರುಳಿ ಬೈಕ್‌ನಲ್ಲಿ ಹೋಗುತ್ತಿದ್ದ ಯುವಕ ಬಲಿಯಾಗಿದ್ದಾನೆ. ಮತ್ತೊಂದು ಪ್ರಕರಣದಲ್ಲಿ ಮನೆಯ ಮೇಲ್ಛಾವಣಿ ಕುಸಿದು ಮಗುವೊಂದು ಸಾವಿಗೀಡಾಗಿದೆ.



ಮುಂದಿನ ನಾಲ್ಕು ವಾರ ಮುಂಗಾರು ದುರ್ಬಲ: ಖಾಸಗಿ ಹವಾಮಾನ ಸಂಸ್ಥೆ ಸ್ಕೈಮೆಟ್ ಕಳವಳ

ಬೆಂಗಳೂರು: ಭಾರತದಲ್ಲಿ ಮುಂದಿನ 4 ವಾರ ಮುಂಗಾರು ಮಾರುತಗಳು ದುರ್ಬಲವಾಗಿರಲಿದೆ ಎಂದು ಹವಾಮಾನದ ಬಗ್ಗೆ ಮುನ್ಸೂಚನೆ ನೀಡುವ ಖಾಸಗಿ ಸಂಸ್ಥೆ 'ಸ್ಕೈಮೆಟ್ ವೆದರ್' ತಿಳಿಸಿದೆ.

ದುರ್ಬಲ ಮುಂಗಾರು ಮಾರುತಗಳು ಕೃಷಿಯ ಮೇಲಿನ ಪರಿಣಾಮಗಳ ಬಗ್ಗೆಯೂ ಸ್ಕೈಮೆಟ್ ಕಳವಳ ವ್ಯಕ್ತಪಡಿಸಿದ್ದು, 'ಎಕ್ಸ್‌ಟೆಂಡೆಡ್ ರೇಂಜ್ ಪ್ರಿಡಿಕ್ಷನ್ ಸಿಸ್ಟಮ್ (ದೀರ್ಘ ಕಾಲದ ಹವಾಮಾನ ಮುನ್ಸೂಚನೆ ನೀಡುವ ವ್ಯವಸ್ಥೆ) 'ಇಆರ್ ಪಿಎಸ್' ಜುಲೈ 6ರವರೆಗೆ ಅಥವಾ ಮುಂದಿನ ನಾಲ್ಕು ವಾರಗಳವರೆಗೆ ನಿರಾಶಾದಾಯಕ ಸೂಚನೆಗಳನ್ನು ನೀಡಿದೆ.

ಇದು ಬಿತ್ತನೆಯ ನಿರ್ಣಾಯಕ ಸಮಯವಾಗಿದ್ದು, ಮಳೆ ನಿರೀಕ್ಷೆಯೊಂದಿಗೆ ರೈತರು ಭೂಮಿ ಹದಗೊಳಿಸುವ ಹೊತ್ತಾಗಿದೆ. ಮಧ್ಯ ಭಾರತ ಮತ್ತು ಪಶ್ಚಿಮ ಭಾಗಗಳು ಋತುವಿನ ಆರಂಭದಲ್ಲಿ ಅಸಮರ್ಪಕ ಮಳೆಯಿಂದಾಗಿ ಒಣ ಹವೆ ಎದುರಿಸಲಿವೆ ಎಂದು ಅದು ಹೇಳಿದೆ.

ಇನ್ನು ಅರಬ್ಬಿ ಸಮುದ್ರದಲ್ಲಿ ಸೃಷ್ಟಿಯಾಗಿರುವ ಬಿಪರ್ ಜಾಯ್ ಚಂಡಮಾರುತವು ಮೊದಲು ಮುಂಗಾರು ಪ್ರವೇಶವನ್ನು ವಿಳಂಬಗೊಳಿಸಿತ್ತು. ಇದೇ ಚಂಡಮಾರುತ ಈಗ ಮುಂಗಾರು ಮಾರುತಗಳ ವ್ಯವಸ್ಥೆಯ ಪ್ರಗತಿಗೆ ಅಡ್ಡಿಯಾಗುತ್ತಿದೆ. ಜತೆಗೆ ಮಾರುತಗಳ ಒಳನಾಡು ಪ್ರವೇಶವನ್ನೂ ತಡೆಯುತ್ತಿದೆ. ಮುಂಗಾರು ಮಾರುತಗಳು ಸಾಮಾನ್ಯವಾಗಿ ಮಹಾರಾಷ್ಟ್ರ ಒಡಿಶಾ, ತೆಲಂಗಾಣದ ಅರ್ಧಭಾಗ, ಛತ್ತೀಸ್‌ಗಢ, ಜಾರ್ಖಂಡ್ ಮತ್ತು ಬಿಹಾರವನ್ನು ಜೂನ್ 15ರ ವೇಳೆಗೆ ಆವರಿಸುತ್ತದೆ. ಈ ಬಾರಿ ಪಶ್ಚಿಮಘಟ್ಟ ದಾಟಿ ಒಳನಾಡು ಪ್ರವೇಶಿಸಲು ಹೆಣಗಾಡುತ್ತಿದೆ ಎಂದು ಸ್ಕೈಮೆಟ್ ಹೇಳಿದೆ.

ಸದ್ಯ ಮಾನ್ಸೂನ್ ಮಾರುತ ಈಶಾನ್ಯ ಮತ್ತು ಪಶ್ಚಿಮ ಕರಾವಳಿಗೆ ಮಾತ್ರವೇ ಸೀಮಿತವಾಗಿದೆ. ದುರದೃಷ್ಟವಶಾತ್, ಮುಂಗಾರು ಮಾರುತಗಳಿಗೆ ಪೂರಕವಾಗಿ ಬಂಗಾಳ ಕೊಲ್ಲಿಯಲ್ಲಿ ಹವಾಮಾನ ವ್ಯವಸ್ಥೆಗಳು ಅಭಿವೃದ್ಧಿಯಾಗುವ ಯಾವುದೇ ಲಕ್ಷಣಗಳೂ ಕಾಣುತ್ತಿಲ್ಲ. ನೈಋತ್ಯ ಮುಂಗಾರು ಮಾರುತಗಳು ಈ ಬಾರಿ ಜೂನ್ 1ರ ಬದಲಿಗೆ, ಒಂದು ವಾರ ವಿಳಂಬವಾಗಿ ಕೇರಳ ಪ್ರವೇಶಿಸಿವೆ ಎಂದು ಸ್ಕೈಮೆಟ್ ಹೇಳಿದೆ.



ಹಾವೇರಿ ದುರಂತ: ಎಚ್ಚೆತ್ತ ಸಾರಿಗೆ ಇಲಾಖೆ, ಸುರಕ್ಷತೆಗಾಗಿ ಮಾರ್ಗಸೂಚಿ ಬಿಡುಗಡೆ



ಮೈಸೂರು, ಜೂ.13(ಎಸ್‌ಪಿಎನ್)- ರಾಜ್ಯಾದ್ಯಂತ ಸುದ್ದಿಯಾಗಿದ್ದ ಹಾವೇರಿ ಜಿಲ್ಲೆಯಲ್ಲಿ ಶಾಲಾ ಬಾಲಕಿಯೊಬ್ಬರು ಕೆಎಸ್‌ಆರ್‌ಟಿಸಿ ಬಸ್‌ನಿಂದ ಬಿದ್ದು ಸಾವನ್ನಪ್ಪಿದ ಪ್ರಕರಣದಿಂದ ಎಚ್ಚೆತ್ತ ಸಾರಿಗೆ ಇಲಾಖೆ ಎಲ್ಲಾ ವಿಭಾಗೀಯ ಅಧಿಕಾರಿಗಳು ಪ್ರಯಾಣಿಕರ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡುವಂತೆ ಖಡಕ್ ಸೂಚನೆ ನೀಡಿ, ಮಂಗಳವಾರ ಮಾರ್ಗಸೂಚಿ ಬಿಡುಗಡೆಗೊಳಿಸಿದೆ.

ಸಾರಿಗೆ ಸಂಸ್ಥೆಗಳಲ್ಲಿ ಪ್ರಯಾಣಿಸುವ ಪ್ರಯಾಣಿಕರಿಗೆ ಸುರಕ್ಷತೆ ಒದಗಿಸಬೇಕಾಗಿರುವುದು ಆದ್ಯ ಕರ್ತವ್ಯವಾಗಿದೆ. ಇದೇ 12ರಂದು ವಾಕರಸಾ ಸಂಸ್ಥೆಯ ಹಾವೇರಿ ವಿಭಾಗ, ಹಾನಗಲ್ ಘಟಕದ ವಾಹನವು ಕಾರ್ಯಾಚರಣೆಯಲ್ಲಿರುವಾಗ ಓರ್ವ ವಿದ್ಯಾರ್ಥಿನಿಯು ವಾಹನದಿಂದ ಬಿದ್ದು, ತಲೆಗೆ ತೀವ್ರ ಪೆಟ್ಟಾಗಿ ಮೃತಪಟ್ಟಿರುವಂತಹ ಘಟನೆ ಬೇಸರದ ಸಂಗತಿ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಬೇಸರ ವ್ಯಕ್ತಪಡಿಸಿದ್ದಾರೆ. ಪ್ರಯಾಣಿಕರ ಸುರಕ್ಷತೆಗೆ ಆದ್ಯತೆ ನೀಡಬೇಕೆಂದು ವಿಭಾಗೀಯ ನಿಯಂತ್ರಣಾಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಮಾರ್ಗಸೂಚಿ ವಿವರ: ಚಾಲನಾ ಸಿಬ್ಬಂದಿಗಳು ಘಟಕದಿಂದ ಬಸ್‌ಗಳನ್ನು ಹೊರಗೆ ತೆಗೆದುಕೊಂಡು ಹೋಗುವಾಗ ವಾಹನದ ಬಾಗಿಲುಗಳು ಸುಸ್ಥಿತಿಯಲ್ಲಿವೆಯೇ ಎಂದು ಪರಿಶೀಲಿಸಿಕೊಳ್ಳಬೇಕು.

ಪ್ರತಿಯೊಂದು ನಿಲ್ದಾಣದಲ್ಲಿ ವಾಹನದ ನಿರ್ವಾಹಕರು ಬಸ್ ಹಿಂಬಾಗಿಲು ಹಾಕಿರುವ ಕುರಿತು ಖಚಿತಪಡಿಸಿಕೊಂಡು ಚಾಲಕರಿಗೆ ಸೂಚನೆ ನೀಡಿದ ನಂತರವೇ ಬಸ್ ಚಾಲನೆ ಮಾಡತಕ್ಕದ್ದು ಎಂದು ಸೂಚಿಸಿದ್ದಾರೆ. ವಾಹನದ ಫುಟ್‌ಬೋರ್ಡ್‌ನಲ್ಲಿ ಪ್ರಯಾಣಿಕರು ನಿಂತು ಪ್ರಯಾಣ ಮಾಡದಂತೆ ಎಚ್ಚರವಹಿಸಬೇಕು.

ಚಾಲಕರು ವಾಹನದ ಹೊರಡುವ ಮುನ್ನ ಮುಂದಿನ - ಹಿಂದಿನ ಬಾಗಿಲು ಮುಚ್ಚಿರುವ ಬಗ್ಗೆ ಮೊದಲು ಖಾತ್ರಿಪಡಿಸಿಕೊಂಡು ಹೊರಡಬೇಕು. ಬಸ್ ನಿಲ್ದಾಣ ತಲುಪುವ ಮುನ್ನ ವಾಹನದ ಬಾಗಿಲನ್ನು ತೆರೆಯದೇ ಬಸ್ ನಿಲ್ದಾಣ/ ನಿಲುಗಡೆ ಸ್ಥಳದಲ್ಲಿ ಬಸ್ ನಿಲ್ಲಿಸುವಂತೆ ಕೆಎಸ್‌ಆರ್‌ಟಿಸಿ ನಿರ್ದೇಶಕರು (ಸಿಬ್ಬಂದಿ ಮತ್ತು ಜಾಗೃತ) ಸುತ್ತೋಲೆ ಹೊರಡಿಸಿದ್ದಾರೆ.

ಅಂಬಾನಿ, ಅದಾನಿ ಬಂದರೂ ಉದ್ಯಮ ಆರಂಭಿಸಲು ಜಾಗ ಕೊಡ್ತೇವೆ...

● ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಘೋಷಣೆ ● ಕೈಗಾರಿಕೆಗಳಿಗೆ ಅನುಕೂಲ ಮಾಡಿಕೊಡಲು ಇರುವ ಏಕಗವಾಕ್ಷಿ ಯೋಜನೆಯಲ್ಲಿ ಲೋಪದೋಷ; ವರದಿ ನೀಡಲು ಅಧಿಕಾರಿಗಳಿಗೆ ಸೂಚನೆ

ಬೆಂಗಳೂರು, ಜೂ.13(ಕೆಎಂಶಿ)- ರಾಜ್ಯದಲ್ಲಿ ಕೈಗಾರಿಕೆ ಸ್ಥಾಪಿಸಲು ಅಂಬಾನಿ, ಅದಾನಿಯಂತಹ ಉದ್ಯಮಿಗಳು ಮುಂದೆ ಬಂದರೂ ಅವರಿಗೆ ಜಾಗ ಕೊಡುತ್ತೇವೆ ಎಂದು ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಂಬಾನಿ ಮತ್ತು ಅದಾನಿ ಕೂಡ ಉದ್ಯಮಿಗಳು. ಅವರು ಉದ್ಯಮ ಸ್ಥಾಪಿಸಲು ಮುಂದೆ ಬಂದರೆ ನಮ್ಮ ಕೈಗಾರಿಕಾ ನೀತಿಯ ಅಡಿ ಏನು ಕೊಡಬೇಕೋ ಅದನ್ನೆಲ್ಲ ಕೊಡುತ್ತೇವೆ ಎಂದರು.

ರಾಜ್ಯದಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಮುಂದೆ ಬಂದವರು ಅಲೆದಾಡುವ ಪರಿಸ್ಥಿತಿ ಇರಬಾರದು. ಕರ್ನಾಟಕದಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ಅನುಕೂಲ ಮಾಡಿಕೊಡಲು ರೂಪಿಸಲಾದ ಏಕಗವಾಕ್ಷಿ ಯೋಜನೆ ಸರಿ ಇಲ್ಲ. ಈ ಏಕಗವಾಕ್ಷಿ ಯೋಜನೆಯಲ್ಲಿ ಇರುವ ಲೋಪದೋಷಗಳನ್ನು ಸರಿಪಡಿಸಿ ವರದಿ ನೀಡಲು ಅಧಿಕಾರಿಗಳಿಗೆ ಸೂಚಿಸಿದ್ದು, ಒಂದೆರಡು ದಿನಗಳಲ್ಲಿ ಅದು ಲಭ್ಯವಾಗುವ ನಿರೀಕ್ಷೆ ಇದೆ ಎಂದು ಹೇಳಿದರು.



ಉಪನಗರ ರೈಲ್ವೆ ಕುರಿತು ಚರ್ಚೆ ನಡೆಸಲಾಗಿದ್ದು, ಇದನ್ನು ಮೈಸೂರು, ತುಮಕೂರು, ಉಲ್ಲಾಳ ಮತ್ತು ದಾಬಸ್‌ಪೇಟೆವರೆಗೆ ವಿಸ್ತರಣೆ ಮಾಡುವ ಅಗತ್ಯವಿದೆ. ರಾಜ್ಯದಲ್ಲಿ ನಿರ್ಮಾಣ ಮಾಡಲಾಗುತ್ತಿರುವ ವಿಮಾನ ನಿಲ್ದಾಣಗಳನ್ನು ಖಾಸಗಿಯವರಿಗೆ ಕೊಡುವ ಬದಲು ರಾಜ್ಯ ಸರ್ಕಾರವೇ ನಿರ್ವಹಿಸಬೇಕು ಎಂದು ಯೋಚಿಸಿದ್ದೇವೆ. ಮಹಾರಾಷ್ಟ್ರದ ಶಿರಡಿಯಲ್ಲಿರುವ ವಿಮಾನ ನಿಲ್ದಾಣವನ್ನು ಅಲ್ಲಿನ ಸರ್ಕಾರವೇ ನಿರ್ವಹಿಸುತ್ತಿದೆ. ರಾಜ್ಯದಲ್ಲೂ ಇದೇ ಮಾರ್ಗ ಅನುಸರಿಸಲು ನಿರ್ಧರಿಸಲಾಗಿದ್ದು ಈ ಸಂಬಂಧ ಕೇಂದ್ರ ಸರ್ಕಾರದ ಜತೆ ಮಾತುಕತೆ ನಡೆಸುವುದಾಗಿ ಅವರು ತಿಳಿಸಿದರು.

ವಿದ್ಯುತ್ ದರ ನಾವು ಏರಿಸಿಲ್ಲ: ರಾಜ್ಯದಲ್ಲಿ ವಿದ್ಯುತ್ ದರ ಏರಿಕೆ ಮಾಡಿರುವುದಕ್ಕೂ ನಮ್ಮ ಸರ್ಕಾರಕ್ಕೂ ಸಂಬಂಧವಿಲ್ಲ. ವಿದ್ಯುತ್ ದರ ಏರಿಕೆ ಮಾಡಲು ಕೆ.ಇ.ಆರ್.ಸಿ ಶಿಫಾರಸು ಮಾಡಿದಾಗ ಹಿಂದಿದ್ದ ಬಿಜೆಪಿ ಸರ್ಕಾರ ಅದನ್ನು ಒಪ್ಪಿಕೊಂಡಿದೆ. ದರ ಏರಿಕೆ ಬೇಡ ಎಂದಾಗಿದ್ದರೆ ಅದನ್ನು ಅವತ್ತೇ ಹೇಳಬಹುದಿತ್ತು.

ಆದರೆ ಅವತ್ತು ದರ ಏರಿಕೆಯ ಪ್ರಸ್ತಾಪವನ್ನು ಒಪ್ಪಿದ್ದು, ಈಗ ದರ ಏರಿಕೆಯ ವಿರುದ್ಧ ಹೋರಾಡುತ್ತೇವೆ ಎಂಬುದು ಸರಿ ಅಲ್ಲ ಎಂದು ವ್ಯಂಗ್ಯವಾಡಿದರು.

ಒಂದು ವೇಳೆ ಏರಿಕೆಯಾಗಿರುವ ವಿದ್ಯುತ್ ದರವನ್ನು ಕಡಿಮೆ ಮಾಡಬೇಕು ಎಂದರೆ ಸಚಿವ ಸಂಪುಟದಲ್ಲಿ ಆ ಕುರಿತು ಚರ್ಚೆ ನಡೆಯಬೇಕು ಎಂದು ಇದೇ ಸಂದರ್ಭದಲ್ಲಿ ಪ್ರಶ್ನೆಗೆ ಉತ್ತರಿಸಿದರು.

ಹೆಸರು ಬಹಿರಂಗಪಡಿಸಲಿ: ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಮತ್ತು ಕಾಂಗ್ರೆಸ್ ನಾಯಕರ ನಡುವೆ ಹೊಂದಾಣಿಕೆಯಾಗಿರುವ ಕುರಿತು ಸಂಸದ ಪ್ರತಾಪ್ ಸಿಂಹ ಮತ್ತು ಸಿ.ಟಿ.ರವಿ ಮಾಡಿರುವ ಆರೋಪದ ಬಗ್ಗೆ ಪ್ರತಿಕ್ರಿಯಿಸಿದ ಅವರು, ಇಂತಹ ಹೊಂದಾಣಿಕೆ ನಡೆದಿದ್ದರೆ ಅಂತಹವರ ಹೆಸರುಗಳನ್ನು ಬಹಿರಂಗಪಡಿಸುವಂತೆ ಆಗ್ರಹಿಸಿದರು.

ಒಂದು ವೇಳೆ ಹೊಂದಾಣಿಕೆ ಮಾಡಿಕೊಂಡಿದ್ದರೆ ಅದು ನಮಗೂ ಗೊತ್ತಾಗುತ್ತಿತ್ತು. ಆದರೆ ಈಗ ರವಿ ಮತ್ತು ಪ್ರತಾಪ್ ಸಿಂಹ ಅವರು ಹೇಳಿರುವ ಹೊಂದಾಣಿಕೆಯ ವಿವರ ನಮಗೆ ಗೊತ್ತಿಲ್ಲ. ಅವರು ಈ ಹೆಸರುಗಳನ್ನು ಬಹಿರಂಗಪಡಿಸಲಿ ಎಂದು ಸವಾಲು ಹಾಕಿದರು.

ನೇರ ಸಂದರ್ಶನ ಫೋನ್-ಇನ್ ಕಾರ್ಯಕ್ರಮ

ಮೈಸೂರು, ಜೂ.13-ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಪ್ರಭಾರ ವಿಭಾಗೀಯ ನಿಯಂತ್ರಣಾಧಿಕಾರಿ ಮರೀಗೌಡ ಅವರು 'KSRTC ಸೇವಾ ಸೌಲಭ್ಯಗಳು' ಬಗ್ಗೆ ನಾಳೆ (ಜೂ.14) ಬೆಳಗ್ಗೆ 11.30 ರಿಂದ 12.30ರವರೆಗೆ ಜೆಎಸ್‌ಎಸ್ ರೇಡಿಯೋ 91.2 ಎಫ್‌ಎಂನಲ್ಲಿ ನೇರ ಸಂದರ್ಶನ ಫೋನ್-ಇನ್ ಕಾರ್ಯಕ್ರಮದಲ್ಲಿ ಮಾತನಾಡಲಿದ್ದಾರೆ.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ ಲಭ್ಯವಿರುವ ಸೇವೆಗಳು, ಮಾಸಿಕ ಪಾಸ್, ವಿದ್ಯಾರ್ಥಿಗಳ ಪಾಸ್, ಮತ್ತು ಇದೀಗ ಜಾರಿಯಾಗಿರುವ ಶಕ್ತಿ ಯೋಜನೆಯಡಿ ಹೆಣ್ಣು ಮಕ್ಕಳಿಗೆ ಉಚಿತ ಬಸ್ ಪ್ರಯಾಣ ಹಾಗೂ ಇದಕ್ಕಿರುವ ನಿಯಮಗಳ ಕುರಿತು ಯಾವುದೇ ಪ್ರಶ್ನೆಗಳು ಅಥವಾ ಅನುಮಾನಗಳು ಇದ್ದಲ್ಲಿ ಕರೆಮಾಡಿ ನೇರವಾಗಿ ನಿಯಂತ್ರಣಾಧಿಕಾರಿಗಳ ಜೊತೆ ಮಾತನಾಡಬಹುದು. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ: 8296725912, 0821-2546563

ಕಾಶ್ಮೀರದಲ್ಲಿ ತೀವ್ರ ಭೂಕಂಪ; ದೆಹಲಿಯಲ್ಲೂ ಕಂಪನದ ಅನುಭವ

ನವದೆಹಲಿ: ಜಮ್ಮು ಮತ್ತು ಕಾಶ್ಮೀರದ ದೋಡಾದಲ್ಲಿ ಮಂಗಳವಾರ ರಿಕ್ಟರ್ ಮಾಪಕದಲ್ಲಿ 5.4 ತೀವ್ರತೆಯ ಭೂಕಂಪ ಸಂಭವಿಸಿದೆ ಎಂದು ರಾಷ್ಟ್ರೀಯ ಭೂಕಂಪ ಶಾಸ್ತ್ರ ಕೇಂದ್ರ(ಎನ್‌ಸಿಎಸ್) ತಿಳಿಸಿದೆ.

ಮಂಗಳವಾರ ಮಧ್ಯಾಹ್ನ 1.33ಕ್ಕೆ ಈ ಭೂಕಂಪ ಸಂಭವಿಸಿದೆ. ರಿಕ್ಟರ್ ಮಾಪಕದಲ್ಲಿ 5.4 ರಷ್ಟು ತೀವ್ರತೆ ದಾಖಲಾಗಿದೆ ಎನ್ ಸಿಎಸ್ ಟ್ವೀಟ್ ಮಾಡಿದೆ. ದೆಹಲಿ ಮತ್ತು ಉತ್ತರ ಭಾರತದ ಕೆಲವು ಭಾಗಗಳಲ್ಲಿಯೂ ಭೂಕಂಪನದ ಅನುಭವವಾಗಿದೆ. ಆದರೆ ಯಾವುದೇ ಜೀವಹಾನಿ ಅಥವಾ ಆಸ್ತಿಪಾಸ್ತಿ ಹಾನಿಯಾದ ಬಗ್ಗೆ ತಕ್ಷಣಕ್ಕೆ ವರದಿಯಾಗಿಲ್ಲ. "ಭೂಕಂಪದಿಂದಾಗಿ ಶಾಲಾ ಮಕ್ಕಳು ಭಯಭೀತರಾಗಿದ್ದಾರೆ. ಅಂಗಡಿಗಳಲ್ಲಿದ್ದ ಜನ ಹೊರಗೆ ಓಡಿ ಬಂದರು. ಇದು ಕಳೆದ ವಾರದ ಕಂಪನಕ್ಕಿಂತ ಹೆಚ್ಚು ತೀವ್ರವಾಗಿತ್ತು..." ಎಂದು ಶ್ರೀನಗರದ ಸ್ಥಳೀಯರೊಬ್ಬರು ತಿಳಿಸಿದ್ದಾರೆ.

ಎನ್‌ಸಿಎಸ್ ಪ್ರಕಾರ ಜೂನ್ 9ರಂದು ಕೇಂದ್ರಾಡಳಿತ ಪ್ರದೇಶವಾದ ಲಡಾಖ್‌ನಲ್ಲಿ 3.9 ತೀವ್ರತೆಯ ಭೂಕಂಪ ಸಂಭವಿಸಿತ್ತು

ನೈಜೀರಿಯಾ: ದೋಣಿ ಮಗುಚಿ 100 ಮಂದಿ ಸಾವು

ಅಬುಜಾ (ನೈಜೀರಿಯಾ): ಉತ್ತರ ನೈಜೀರಿಯಾದ ನೈಜರ್ ನದಿಯಲ್ಲಿ ದೋಣಿಯೊಂದು ಮಗುಚಿದ ಪರಿಣಾಮ ಕನಿಷ್ಠ 100 ಮಂದಿ ಮೃತಪಟ್ಟಿದ್ದಾರೆ ಎಂದು ಪೊಲೀಸರು ಹೇಳಿದ್ದಾರೆ. ಬದುಕುಳಿದವರ ಶೋಧ ಕಾರ್ಯ ತೀವ್ರಗೊಳಿಸಲಾಗಿದೆ ಎಂದು ಪೊಲೀಸ್ ವಕ್ತಾರ ಒಕಾಸಾನ್ಮಿ ಅಜಯಿ ಹೇಳಿದ್ದಾರೆ. ಮೃತರಲ್ಲಿ ಮಹಿಳೆಯರು ಮತ್ತು ಮಕ್ಕಳು ಸಹ ಇದ್ದು, ತಡ ರಾತ್ರಿ ಮದುವೆ ಕಾರ್ಯಕ್ರಮ ಮುಗಿಸಿಕೊಂಡು ಹಿಂದಿರುಗುತ್ತಿದ್ದರು. ತಡರಾತ್ರಿ 3 ಗಂಟೆ ಸುಮಾರಿಗೆ ಈ ಅವಘಡ ಸಂಭವಿಸಿದೆ.




ವಿದ್ಯುತ್ ದರ; ಎಫ್‌ಎಸಿ, ಎಫ್‌ಸಿ ದರ ಹೆಚ್ಚಳ ಕೈಬಿಡಿ

ಮೈಸೂರು ಸಂಘ ಸಂಸ್ಥೆಗಳ ಒಕ್ಕೂಟ

ಮೈಸೂರು,ಜೂ.13(ಪಿಎಂ)- ವಿದ್ಯುತ್ ದರಕ್ಕೆ ಸಂಬಂಧಿಸಿದಂತೆ ಎಫ್‌ಎಸಿ (ಹೊಂದಾಣಿಕೆ ಶುಲ್ಕ) ಮತ್ತು ಎಫ್‌ಸಿ (ಫಿಕ್ಸೆಡ್ ಚಾರ್ಜಸ್/ನಿಗದಿತ ಶುಲ್ಕ) ದರಗಳನ್ನು ಅವೈಜ್ಞಾನಿಕ ರೀತಿಯಲ್ಲಿ ಭಾರೀ ಪ್ರಮಾಣದಲ್ಲಿ ಹೆಚ್ಚಿಸಲಾಗಿದೆ ಎಂದು ಆಕ್ಷೇಪ ವ್ಯಕ್ತಪಡಿಸಿರುವ ಮೈಸೂರು ಸಂಘ ಸಂಸ್ಥೆಗಳ ಒಕ್ಕೂಟ, ಈ ಅವೈಜ್ಞಾನಿಕ ಹೆಚ್ಚಳವನ್ನು ಕೈಬಿಡುವ ಮೂಲಕ ಉದ್ಯಮಿಗಳು, ಜನಸಾಮಾನ್ಯರಿಗೆ ಆಗುತ್ತಿರುವ ಆರ್ಥಿಕ ಹೊರೆಯನ್ನು ತಪ್ಪಿಸಬೇಕೆಂದು ಒತ್ತಾಯಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಒಕ್ಕೂಟದ ಕಾರ್ಯದರ್ಶಿ ಎಂ.ಆರ್. ರಾಜಾರಾಮ್, ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗದ (ಕೆಇಆರ್‌ಸಿ) ಶಿಫಾರಸಿನಂತೆ ಸೆಸ್ಕ್ ಪ್ರತಿ ಯೂನಿಟ್‌ಗೆ 50 ಪೈಸೆ ಹೆಚ್ಚಳ ಮಾಡಿದ್ದು, ಈ ಬಗ್ಗೆ ನಮ್ಮ ಯಾವುದೇ ತಕರಾರು ಇಲ್ಲ. ಆದರೆ ಎಫ್‌ಎಸಿ ಮತ್ತು ಎಫ್‌ಸಿ ದರಗಳನ್ನು ಶೇ.60ರಷ್ಟಕ್ಕೆ ಹೆಚ್ಚಳ ಮಾಡಲಾಗಿದೆ. ಎಲ್ಲಾ ರೀತಿಯ ಮೀಟರ್‌ಗಳಿಗೆ ಅನ್ವಯವಾಗುವಂತೆ ಈ ಹೆಚ್ಚಳ ಮಾಡಲಾಗಿದೆ. ಇದು ಭಾರೀ ಹೊರೆಯಾಗಿ ಪರಿಣಮಿಸಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಗೃಹಬಳಕೆಗೆ ಶೇ.40ರಷ್ಟು ಹೆಚ್ಚಳವಾಗಿದ್ದರೆ, ವಾಣಿಜ್ಯ ಬಳಕೆಗೆ ಶೇ.70ರಿಂದ 90ರಷ್ಟು ಏರಿಕೆಯಾಗಿದೆ. ಉದಾಹರಣೆಗೆ ಡಿಆರ್‌ಸಿ ಮಾಲ್‌ನ ವಿದ್ಯುತ್ ಶುಲ್ಕ 5 ರಿಂದ 6 ಲಕ್ಷ ರೂ.ವರೆಗೆ ಬರುತ್ತಿತ್ತು. ಇದೀಗ 9 ಲಕ್ಷ ರೂ. ಶುಲ್ಕ ಬಂದಿದೆ. ತೆಲಂಗಾಣ, ತಮಿಳುನಾಡು, ಕೇರಳ ಮತ್ತು ಗೋವಾ ರಾಜ್ಯಗಳಲ್ಲಿ ಎಫ್‌ಎಸಿ ದರವೇ ಇಲ್ಲ. ಪ್ರತಿ ಯೂನಿಟ್ ದರವೂ ಕಡಿಮೆ ಇದೆ. ಎಫ್‌ಎಸಿ ಮತ್ತು ಎಫ್‌ಸಿ ದರದ ಅವೈಜ್ಞಾನಿಕ ಏರಿಕೆ ಕೈಬಿಡಬೇಕು. ಬೇಕಿದ್ದರೆ ಶೇ.5ರಿಂದ 10ರಷ್ಟು ಏರಿಕೆ ಮಾಡಿದರೆ ತೊಂದರೆ ಇಲ್ಲ ಎಂದು ತಿಳಿಸಿದರು.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮೈಸೂರು ಸಂಘ ಸಂಸ್ಥೆಗಳ ಒಕ್ಕೂಟದ ಅಧ್ಯಕ್ಷ ಬಿ.ಎಸ್.ಪ್ರಶಾಂತ್ (ಎಡದಿಂದ 3ನೇಯವರು) ಮಾತನಾಡಿದರು. (ಎಡದಿಂದ) ಒಕ್ಕೂಟದ ಜಂಟಿ ಕಾರ್ಯದರ್ಶಿ ಕೆ.ಆರ್.ಸತ್ಯನಾರಾಯಣ, ಕಾರ್ಯದರ್ಶಿ ಎಂ.ಆರ್.ರಾಜಾರಾಮ್, ಉಪಾಧ್ಯಕ್ಷ ಸಿ.ನಾರಾಯಣಗೌಡ, ನಿರ್ದೇಶಕ ಎ.ಸುಧೀಂದ್ರ ಇದ್ದಾರೆ.

ಸರ್ಕಾರ ಕಳೆದ ಹಲವು ವರ್ಷಗಳಿಂದ ಈ ದರಗಳನ್ನು ಏರಿಕೆ ಮಾಡಿಲ್ಲ ಎಂದಾದಲ್ಲಿ ಅದಕ್ಕೆ ನಮ್ಮನ್ನು ಹೊಣೆ ಮಾಡುವುದು ಸರಿಯಲ್ಲ. ಕಳೆದ ವರ್ಷಗಳ ಬಾಕಿಯನ್ನು ಸರಿದೂಗಿಸಲು ಕ್ರಮೇಣ ದರ ಏರಿಕೆ ಮಾಡಬೇಕೇ ಹೊರತು ಹೀಗೆ ಒಟ್ಟಿಗೆ ಮಾಡುವುದು ಸೂಕ್ತವಲ್ಲ. ವಿದ್ಯುತ್ ದರ ವಿಧಿಸುವ ಸಂಬಂಧ ವಿವಿಧ ಸ್ಲ್ಯಾಬ್‌ಗಳನ್ನು ಈಗ ಕೈಬಿಟ್ಟಿರುವುದು ಸೂಕ್ತವಲ್ಲ ಎಂದು ಹೇಳಿದರು.

ಒಕ್ಕೂಟದ ಅಧ್ಯಕ್ಷ ಬಿ.ಎಸ್.ಪ್ರಶಾಂತ್ ಮಾತನಾಡಿ, ಹೋಟೆಲ್, ಕಲ್ಯಾಣ ಮಂಟಪ ಸೇರಿದಂತೆ ವಿವಿಧ ವಾಣಿಜ್ಯೋದ್ಯಮಿಗಳು ತಮ್ಮ ಕಳೆದ ತಿಂಗಳಲ್ಲಿದ್ದ ವಿದ್ಯುತ್ ದರಕ್ಕೆ ಅನುಗುಣವಾಗಿ ಗ್ರಾಹಕರಿಗೆ ಶುಲ್ಕ ವಿಧಿಸಿದ್ದಾರೆ. ಈಗ ದರ ಹೆಚ್ಚಳ ಮಾಡಲಾಗಿದೆ. ಅವರು ಗ್ರಾಹಕರಲ್ಲಿ ಮತ್ತೆ ಹೆಚ್ಚುವರಿ ಶುಲ್ಕ ಕೇಳಲು ಸಾಧ್ಯವಿಲ್ಲ. ಹೀಗಾಗಿ ಉದ್ಯಮಿಗಳಿಗೆ ಭಾರೀ ನಷ್ಟ ಉಂಟಾಗಲಿದೆ. ಈ ಪ್ರಮಾಣದ ದರ ಏರಿಕೆಯಿಂದ ಇತರ ಸೇವೆಗಳ ಶುಲ್ಕವೂ ಹೆಚ್ಚಾಗಲಿದೆ ಎಂದರು.

ಬೃಹತ್, ಸಣ್ಣ ಹಾಗೂ ಮಧ್ಯಮ ಕೈಗಾರಿಕೆಗಳಿಗೆ ವಿದ್ಯುತ್ ದರ ಏರಿಕೆಯಿಂದ ಭಾರೀ ಹೊಡೆತ ಬೀಳಲಿದ್ದು, ಇದರಿಂದ ಕೈಗಾರಿಕೆಗಳು ಮುಚ್ಚಿಹೋಗುವ ಸಾಧ್ಯತೆ ಹೆಚ್ಚಿದೆ. ರಾಜ್ಯದ ನೆರೆ ರಾಜ್ಯಗಳಲ್ಲಿ ಎಫ್‌ಎಸಿ ಶುಲ್ಕವನ್ನು ವಿದ್ಯುತ್ ಶುಲ್ಕಕ್ಕೆ ಸೇರಿಸುವುದೇ ಇಲ್ಲ. ನಮ್ಮ ರಾಜ್ಯದಲ್ಲಿ ಮಾತ್ರ ಇದು ಚಾಲ್ತಿಯಲ್ಲಿದೆ. ಇದ್ದಕ್ಕಿದ್ದಂತೆ ಎಫ್‌ಎಸಿ ಶುಲ್ಕ ಹೆಚ್ಚಳ ಮಾಡಿರುವುದೇಕೆ? ಎಂದು ಪ್ರಶ್ನಿಸಿದರು.

ಬಳಕೆದಾರರ ಅಭಿಪ್ರಾಯ ಪಡೆಯದೇ ಅವೈಜ್ಞಾನಿಕವಾಗಿ ಈ ದರಗಳನ್ನು ಹೆಚ್ಚಳ ಮಾಡಿರುವುದು ಸರಿಯಲ್ಲ. ಸರ್ಕಾರ ಕೂಡಲೇ ಎಫ್‌ಎಸಿ ಮತ್ತು ಎಫ್‌ಸಿ ದರ ಏರಿಕೆಯನ್ನು ಮರು ಪರಿಶೀಲಿಸಿ ವೈಜ್ಞಾನಿಕವಾಗಿ ನಿಗದಿ ಮಾಡಲು ಕ್ರಮ ವಹಿಸಬೇಕು ಎಂದು ಒತ್ತಾಯಿಸಿದರು.

ಈ ದರಗಳ ಹೆಚ್ಚಳ ಕೈಬಿಡುವಂತೆ ಮುಖ್ಯಮಂತ್ರಿಗಳು ಮೈಸೂರಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಮನವಿ ಸಲ್ಲಿಸಲಿದ್ದೇವೆ ಅಥವಾ ಬೆಂಗಳೂರಿನಲ್ಲೇ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಮನವಿ ಸಲ್ಲಿಸಲಿದ್ದೇವೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಒಕ್ಕೂಟದ ಉಪಾಧ್ಯಕ್ಷ ಸಿ.ನಾರಾಯಣಗೌಡ ಮಾತನಾಡಿ, ನಮ್ಮ ಹೋಟೆಲ್ ಮಾಲೀಕರ ಸಂಘದ ವತಿಯಿಂದ ಈಗಾಗಲೇ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದೇವೆ. ಕೆಇಆರ್‌ಸಿ ಶಿಫಾರಸು ಇಲ್ಲವಾದರೂ ಎಫ್‌ಸಿ ಮತ್ತು ಎಫ್‌ಎಸಿ ದರದಲ್ಲಿ ಹೆಚ್ಚಳ ಮಾಡಿದ್ದು, ಅಧಿಕಾರಿಗಳು ಮಾಡುವ ಇಂತಹ ಕೆಲಸಗಳಿಂದ ಸರ್ಕಾರಕ್ಕೆ ಕೆಟ್ಟ ಹೆಸರು ಬರಲಿದೆ. ನಮ್ಮ ಊರಿನವರೇ ಆದ ಮುಖ್ಯಮಂತ್ರಿಗಳು ಜನತೆಗೆ ಕಷ್ಟ ಕೊಡುವ ಕೆಲಸ ಮಾಡುವುದಿಲ್ಲವೆಂಬ ವಿಶ್ವಾಸವಿದ್ದು, ಈ ದರಗಳನ್ನು ಕೈಬಿಡಬೇಕೆಂದು ಅವರನ್ನು ಒತ್ತಾಯಪೂರ್ವಕ ಮನವಿ ಮಾಡುತ್ತೇವೆ ಎಂದರು. ಒಕ್ಕೂಟದ ಜಂಟಿ ಕಾರ್ಯದರ್ಶಿ ಕೆ.ಆರ್.ಸತ್ಯನಾರಾಯಣ, ನಿರ್ದೇಶಕ ಎ.ಸುಧೀಂದ್ರ ಗೋಷ್ಠಿಯಲ್ಲಿದ್ದರು.




ಮಂಜಿನ ನಗರಿಯಲ್ಲಿ ರಾಜ್ಯದ ಪ್ರಥಮ ಗ್ಲಾಸ್ ಸ್ಕೈವಾಕ್

78 ಅಡಿ ಎತ್ತರದಿಂದ ಕೊಡಗಿನ ಪ್ರಕೃತಿ ಸೊಬಗು ವೀಕ್ಷಣೆಗೆ ಅವಕಾಶ

ಮಡಿಕೇರಿ, ಜೂ.13– ನೈಸರ್ಗಿಕ ಪ್ರಾಕೃತಿಕ ಸೌಂದರ್ಯದ ಮೂಲಕ ಪುಟ್ಟ ಕೊಡಗು ಜಿಲ್ಲೆ ಪ್ರವಾಸೋದ್ಯಮ ಕ್ಷೇತ್ರದಲ್ಲಿ ವಿಶ್ವದ ಭೂಪಟದಲ್ಲಿ ಗುರುತಿಸಿಕೊಂಡಿದೆ. ಪ್ರಸ್ತುತ ಈ ಪ್ರವಾಸೋದ್ಯಮಕ್ಕೆ ಗ್ಲಾಸ್ ಸ್ಕೈವಾಕ್ ಬ್ರಿಡ್ಜ್ ಹೊಸ ಸೇರ್ಪಡೆಯಾಗಿದೆ. ಖಾಸಗಿಯಾಗಿ ಆರಂಭವಾಗಿರುವ ಗ್ಲಾಸ್ ಸ್ಕೈ ವಾಕ್ ಬ್ರಿಡ್ಜ್ ಇಡೀ ದಕ್ಷಿಣ ಭಾರತದ ಗಮನ ಸೆಳೆಯುತ್ತಿದೆ.

ಈ ಸ್ಕೈ ವಾಕ್ ಬ್ರಿಡ್ಜ್ ಇರುವುದು ಮಂಜಿನ ನಗರಿ ಮಡಿಕೇರಿ ಹೊರವಲಯದ ಉಡೋತ್ ಎಂಬಲ್ಲಿ. ಮಡಿಕೇರಿಯಿಂದ ಭಾಗಮಂಡಲ ಕಡೆಗೆ ತೆರಳುವ ದಾರಿಯಲ್ಲಿ ಉಡೋತ್ ಎಂಬ ಸ್ಥಳದಲ್ಲಿ 32 ಮೀಟರ್ ಉದ್ದದ 2 ಮೀಟರ್ ಅಗಲದ 78 ಅಡಿ ಎತ್ತರದಲ್ಲಿರುವ ಈ ಗ್ಲಾಸ್ ಸ್ಕೈವಾಕ್ ಬ್ರಿಡ್ಜ್ ಇದೀಗ ಎಲ್ಲರ ಗಮನ ಸೆಳೆಯುತ್ತಿದೆ. ಸುಮಾರು 5 ಟನ್ ಭಾರ ಹೊರುವ ಸಾಮರ್ಥ್ಯದ ಈ ಬ್ರಿಡ್ಜ್‌ನ ಮೇಲೆ ಏಕಕಾಲದಲ್ಲಿ 40–50 ಮಂದಿ ನಿಂತು ಪ್ರಕೃತಿಯ ಸೌಂದರ್ಯ ಸವಿಯಬಹುದು. ವಿರಾಜಪೇಟೆ ಕ್ಷೇತ್ರದ ಶಾಸಕ ಎ.ಎಸ್.ಪೊನ್ನಣ್ಣ ಅವರು ಈ ಬ್ರಿಡ್ಜ್ ಅನ್ನು ಲೋಕಾರ್ಪಣೆಗೊಳಿಸಿದ್ದಾರೆ.





ಕೊಡಗಿನ ಪ್ರವಾಸೋದ್ಯಮಕ್ಕೆ ಖಾಸಗಿಯವರ ಇಂತಹ ಕೊಡುಗೆ ಬಗ್ಗೆ ಸಾಕಷ್ಟು ಮೆಚ್ಚುಗೆ ಕೂಡ ವ್ಯಕ್ತವಾಗಿದೆ.

ಬೆಟ್ಟದ ಇಕ್ಕೆಲಗಳ ನಡುವೆ ಖಾಸಗಿಯವರಿಂದ ನಿರ್ಮಾಣವಾಗಿರುವ ಹಸಿರ ಪ್ರಕೃತಿಯ ನಡುವೆ ಪಾರದರ್ಶಕ ಗಾಜಿನ ಮೇಲೆ ನಡೆಯುವುದು ರೋಮಾಂಚಕ ಅನುಭವ ನೀಡುತ್ತಿದೆ. ಒಟ್ಟಿನಲ್ಲಿ ಕೇರಳದ ಮಯನಾಡ್‌ನಲ್ಲಿ ಖಾಸಗಿಯಾಗಿ ನಿರ್ಮಾಣವಾಗಿದ್ದ ಗ್ಲಾಸ್ ಸ್ಕೈವಾಕ್ ಬ್ರಿಡ್ಜ್ ಬಿಟ್ಟರೆ ದಕ್ಷಿಣ ಭಾರತದಲ್ಲಿ ಇರುವ ಮತ್ತೊಂದು ಗ್ಲಾಸ್ ಬ್ರಿಡ್ಜ್ ಎನ್ನುವ ಖ್ಯಾತಿಗೆ ಕೊಡಗಿನ ಈ ಸ್ಕೈವಾಕ್ ಗ್ಲಾಸ್ ಬ್ರಿಡ್ಜ್ ಪಾತ್ರವಾಗಿದೆ. ಭವಿಷ್ಯದ ದಿನಗಳಲ್ಲಿ ಇದು ಪ್ರವಾಸಿಗರನ್ನು ಕೊಡಗಿನತ್ತ ಮತ್ತಷ್ಟು ಆಕರ್ಷಿಸಲಿದೆ ಎಂಬ ಅಭಿಪ್ರಾಯಗಳ ಕೇಳಿ ಬಂದಿವೆ.

ಸುಂಟಿಕೊಪ್ಪ ಸುತ್ತಮುತ್ತ ನಿಯಂತ್ರಣಕ್ಕೆ ಬಾರದ ಡೆಂಗ್ಯೂ



ಸುಂಟಿಕೊಪ್ಪ, ಜೂ.13– ಸುಂಟಿಕೊಪ್ಪ ವಿಭಾಗದಲ್ಲಿ ಡೆಂಗ್ಯೂ ಜ್ವರ ಜನರನ್ನು ಬಿಟ್ಟು ಬಿಡದೆ ಕಾಡುತ್ತಿದ್ದು, ಜ್ವರದಿಂದ ಬಳಲಿದ ಹಲವಾರು ಮಂದಿ ಮಡಿಕೇರಿ ಜಿಲ್ಲಾಸ್ಪತ್ರೆ, ಕುಶಾಲನಗರ ತಾಲೂಕು ಆರೋಗ್ಯ ಕೇಂದ್ರ ಸೇರಿದಂತೆ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆಗೆ ದಾಖಲಾಗಿದ್ದಾರೆ.

ಕಳೆದ 2 ತಿಂಗಳ ಹಿಂದೆ ಸುಂಟಿಕೊಪ್ಪ ಪಟ್ಟಣದ ನಿವಾಸಿಗಳಿಗೆ ಡೆಂಗ್ಯೂ ಕಾಣಿಸಿಕೊಂಡಿದ್ದು, ಆನಂತರ ಡೆಂಗ್ಯೂ ಸಾಂಕ್ರಾಮಿಕವಾಗಿ ಮಾರ್ಪಟ್ಟು ಒಬ್ಬರಿಂದ ಒಬ್ಬರಿಗೆ ವ್ಯಾಪಿಸಿದೆ. ಸುಂಟಿಕೊಪ್ಪ ಸರಕಾರಿ ಪ್ರಾಥಮಿಕ ಕೇಂದ್ರದಲ್ಲಿ ಪ್ರಥಮ ಚಿಕಿತ್ಸೆ ಪಡೆದ ರೋಗಿಗಳು ಈಗಲೂ ಡೆಂಗ್ಯೂ ಜ್ವರದಿಂದ ಬಳಲುತ್ತಿದ್ದು, ಪ್ರತಿನಿತ್ಯ ಸುಂಟಿಕೊಪ್ಪ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಬಂದು ಚಿಕಿತ್ಸೆ ಪಡೆಯುತ್ತಿದ್ದಾರೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಿಬ್ಬಂದಿಗಳು ಹಾಗೂ ಆಶಾ ಕಾರ್ಯಕರ್ತೆಯರ ತಂಡ ಸುಂಟಿಕೊಪ್ಪ ಪಟ್ಟಣದಲ್ಲಿ ಮನೆಗಳಿಗೆ ಭೇಟಿ ನೀಡಿ ಲಾರ್ವ ಸರ್ವೆ, ಸೇರಿದಂತೆ ಮನೆ ಸುತ್ತಮುತ್ತ ಸ್ವಚ್ಛತೆ ಬಗ್ಗೆ ಅರಿವು ಮೂಡಿಸಿದ್ದರೂ ಜ್ವರ ಮಾತ್ರ ನಿಯಂತ್ರಣಕ್ಕೆ ಬಂದಿಲ್ಲ. ಈ ಹಿನ್ನೆಲೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಸತೀಶ್ ಕುಮಾರ್ ಕೆಲವು ಬಡಾವಣೆಗಳಿಗೂ ಭೇಟಿ ನೀಡಿದ್ದನ್ನು ನಾವು ಇಲ್ಲಿ ಸ್ಮರಿಸಬಹುದಾಗಿದೆ.

ಆದರೂ ಜ್ವರ ಹಾಗೂ ಡೆಂಗ್ಯೂ ನಿಯಂತ್ರಣಕ್ಕೆ ಬಾರದೆ ಮಂದಿ ಇದರಿಂದ ನರಳುತ್ತಿರುವುದು ದಿನ ನಿತ್ಯ ಕಂಡು ಬರುತ್ತಿದ್ದು, ಶಾಲಾ ವಿದ್ಯಾರ್ಥಿಗಳಿಗೂ ಡೆಂಗ್ಯೂ ಜ್ವರ ಕಾಣಿಸಿಕೊಂಡಿದೆ. ಶುಚಿತ್ವ ಕಾಪಾಡುವ ಸಲುವಾಗಿ ಗ್ರಾಪಂ ವತಿಯಿಂದ ಫಾಗ್ ಔಷಧಿ ಸಿಂಪಡಿಸಿ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದ್ದರೂ ಜ್ವರ ಒಬ್ಬರಿಂದ ಒಬ್ಬರಿಗೆ ಹರಡುತ್ತಿರುವುದು ಸಾರ್ವಜನಿಕರ ಆತಂಕಕ್ಕೆ ಕಾರಣವಾಗಿದೆ.

ಶಿಕ್ಷಕರ ಹುದ್ದೆಗೆ ಅರ್ಜಿ ಆಹ್ವಾನ

ಮಡಿಕೇರಿ, ಜೂ.13– ಪ್ರಸಕ್ತ ಸಾಲಿನಲ್ಲಿ ವಿಶೇಷ ಅಗತ್ಯತೆಯುಳ್ಳ ಮಕ್ಕಳಿಗೆ ಸಮನ್ವಯ ಶಿಕ್ಷಣ ಮಧ್ಯವರ್ತನೆಯ ಕಾರ್ಯ ಚಟುವಟಿಕೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕ್ಷೇತ್ರ ಸಂಪನ್ಮೂಲ ಕೇಂದ್ರಗಳಲ್ಲಿ ಖಾಲಿಯಿರುವ 6 ಪ್ರೌಢ ಶಾಲಾ ಮತ್ತು 1 ಪ್ರಾಥಮಿಕ ವಿಭಾಗದ ವಿಶೇಷ ಸಂಪನ್ಮೂಲ ಶಿಕ್ಷಕರ ಹುದ್ದೆಗೆ ನೇರಗುತ್ತಿಗೆ ಮೂಲಕ ಶಿಕ್ಷಕರನ್ನು ತಾತ್ಕಾಲಿಕವಾಗಿ ನೇಮಕಾತಿ ಮಾಡಲು ವಿಶೇಷ ಡಿಎಡ್/ ಬಿಎಡ್ ವಿದ್ಯಾರ್ಹತೆ ಹೊಂದಿ ಆರ್‌ಸಿಐನಲ್ಲಿ ನೋಂದಣಿ ಮಾಡಿಕೊಂಡಿರುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಜೂ.15 ರಂದು ಸಂಜೆ 4 ಗಂಟೆಯೊಳಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಉಪನಿರ್ದೇಶಕರು ಹಾಗೂ ಜಿಲ್ಲಾ ಉಪಯೋಜನಾ ಸಮನ್ವಯಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಮಡಿಕೇರಿ, ಕೊಡಗು ಜಿಲ್ಲೆ ಇವರನ್ನು ಹಾಗೂ ದೂ.ಸಂ.9448999400 ನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ಮಳೆಗಾಲ ಸಮರ್ಥವಾಗಿ ಎದುರಿಸಲು ಸಜ್ಜಾಗಿ

ಅಧಿಕಾರಿಗಳಿಗೆ ಶಾಸಕ ಎ.ಎಸ್. ಪೊನ್ನಣ್ಣ ಸೂಚನೆ



ವಿರಾಜಪೇಟೆ, ಜೂ.13– ಮಳೆಗಾಲದಲ್ಲಿ ರಸ್ತೆಗೆ ಮರಗಳು ಬಿದ್ದ ಸಂದರ್ಭ ವಾಹನ ಸಂಚಾರಕ್ಕೆ ಸಮಸ್ಯೆ ಆಗದಂತೆ ಅರಣ್ಯ ಇಲಾಖೆ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ ಎ.ಎಸ್.ಪೊನ್ನಣ್ಣ ಅಧಿಕಾರಿಗಳಿಗೆ ಹೇಳಿದರು.

ವಿರಾಜಪೇಟೆ ಪುರಭವನದಲ್ಲಿ ನಡೆದ ಮಳೆಗಾಲದ ಮುಂಜಾಗ್ರತೆಯ ಅಂಗವಾಗಿ ಕೈಗೊಂಡ ಹಾಗೂ ಕೈಗೊಳ್ಳಬೇಕಾದ ಅಗತ್ಯ ಸಿದ್ಧತೆಗಳ ಕುರಿತು ವಿಧಾನಸಭಾ ಕ್ಷೇತ್ರದ ವಿವಿಧ ಇಲಾಖೆಗಳ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದರು.

ಸೆಸ್ಕಾಂ ಕುರಿತು ಸಾರ್ವಜನಿಕರಿಂದ ದೂರುಗಳು ಬರುತ್ತಿದ್ದು ಸಿಬ್ಬಂದಿ ಕೊರತೆಯಿರುವ ಕಡೆ ಅಗತ್ಯವಿದ್ದರೆ ತಾತ್ಕಾಲಿಕವಾಗಿ ಪಕ್ಷದ ಕಾರ್ಯಕರ್ತರೇ ಸಹಕಾರ ನೀಡಲಿದ್ದಾರೆ ಎಂದು ಶಾಸಕ ಪೊನ್ನಣ್ಣ ಹೇಳಿದರು. ಸೆಸ್ಕಾಂನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಸುರೇಶ್ ಮಾತನಾಡಿ, ಮಳೆಗಾಲವನ್ನು ಎದುರಿಸಲು ಇಲಾಖೆ ಸೂಕ್ತ ಸಿದ್ಧತೆ ಕೈಗೊಂಡಿದ್ದು. ಕಂಬಗಳ ಸಂಗ್ರಹವಿದೆ. ಆದರೆ ವಿಭಾಗದಲ್ಲಿ ಸಿಬ್ಬಂದಿಗಳ ಕೊರತೆ ಇದ್ದು ಕೆಲವೆಡೆ ಮರದ ಕೊಂಬೆಗಳನ್ನು ಅರಣ್ಯ ಇಲಾಖೆ ತೆರವುಗೊಳಿಸಿದರೆ ವಿದ್ಯುತ್ ಇಲಾಖೆ ಕೆಲಸ ಮಾಡಲು ಸಹಕಾರಿಯಾಗುತ್ತದೆ ಎಂದರು.

ಈ ಕುರಿತು ಅರಣ್ಯ ಇಲಾಖೆಯ ಅಧಿಕಾರಿಗಳಿಂದ ಮಾಹಿತಿ ಪಡೆದ ಶಾಸಕ ಪೊನ್ನಣ್ಣ, ಮಳೆಗಾಲದಲ್ಲಿ ರಸ್ತೆಗೆ ಮರಬಿದ್ದು ವಾಹನ ಸಂಚಾರಕ್ಕೆ ಅಡ್ಡಿಯಾದ ಸಂದರ್ಭ ಮಾಹಿತಿ ನೀಡಲು ಅರಣ್ಯ ಇಲಾಖೆ ಮತ್ತು ಸೆಸ್ಕಾಂ ಇಲಾಖೆಯ ದೂರವಾಣಿಯನ್ನು ಸಾರ್ವಜನಿಕರಿಗೆ ಕೂಡಲೇ ಒದಗಿಸುವಂತೆ ಸೂಚಿಸಿದರು.

ವಿರಾಜಪೇಟೆಯ ಸಾರ್ವಜನಿಕ ಆಸ್ಪತ್ರೆಯ ಕುರಿತು ಸಾಕಷ್ಟು ದೂರುಗಳು ಕೇಳಿ ಬರುತ್ತಿದ್ದು. ವೈದ್ಯರು ಸೇರಿದಂತೆ ಪ್ರಯೋಗಾಲಯದ ಕೆಲವೊಂದು ಸಿಬ್ಬಂದಿಗಳು ಸಮಯಕ್ಕೆ ಸರಿಯಾಗಿ ಕರ್ತವ್ಯಕ್ಕೆ ಹಾಜರಾಗುತ್ತಿಲ್ಲ. ಆಂಬುಲೆನ್ಸ್ ಸೇವೆ ಸಮರ್ಪಕವಾಗಿಲ್ಲ. ಹೆಚ್ಚಿನ ಪರೀಕ್ಷೆಗಳಿಗೆ ಖಾಸಗಿ ಲ್ಯಾಬ್‌ಗಳಿಗೆ ಕಳಿಸಲಾಗುತ್ತಿದೆ. ವಿಶೇಷವಾಗಿ ರಾತ್ರಿಯ ಹೊತ್ತು ತುರ್ತು ಸಂದರ್ಭಗಳಲ್ಲಿ ರೋಗಿಗಳನ್ನು ಪರೀಕ್ಷಿಸದೇ ನೇರವಾಗಿ ಜಿಲ್ಲಾ ಆಸ್ಪತ್ರೆಗೆ ಕಳುಹಿಸಲಾಗುತ್ತಿದೆ ಎನ್ನುವ ಆರೋಪಗಳು ಕೇಳಿ ಬರುತ್ತಿವೆ ಎಂದು ಶಾಸಕರು ಹೇಳಿದರು.

ಈ ಕುರಿತು ಪ್ರತಿಕ್ರಿಯಿಸಿದ ಆಸ್ಪತ್ರೆಯ ವೈದ್ಯೆ ಡಾ. ಹೇಮಾ ಪ್ರಿಯಾ ಅವರು ಆಸ್ಪತ್ರೆಯಲ್ಲಿ ಎಲ್ಲಾ ವ್ಯವಸ್ಥೆಗಳು ಸರಿಯಾಗಿದ್ದು, ಸಮರ್ಪಕವಾಗಿ ಕಾರ್ಯನಿರ್ವಹಿಸಲಾಗುತ್ತಿದೆ ಎಂದು ಸಮಜಾಯಿಷಿ ನೀಡಲು ಯತ್ನಿಸಿದರು. ಇದಕ್ಕೆ ಶಾಸಕ ಎ.ಎಸ್. ಪೊನ್ನಣ್ಣ ಈ ಮಾತನ್ನು ಸಾರ್ವಜನಿಕರು ಹೇಳಿದರೆ ನನ್ನ ಮಾತನ್ನು ಹಿಂದಕ್ಕೆ ಪಡೆಯುತ್ತೇನೆ. ನಾನೇ ಖುದ್ದಾಗಿ ಗಮನಿಸಿದ್ದೇನೆ. ಅದರಿಂದ ಈ ತಪ್ಪುಗಳನ್ನು ಸರಿಪಡಿಸಲು ಈ ಕುರಿತು ವಿಶೇಷ ಸಭೆಯೊಂದನ್ನು ಕರೆಯಲಾಗುವುದು ಎಂದರು.

ಪುರಸಭೆ ಸದಸ್ಯರಾದ ಪಿ.ರಂಜಿ ಪೂಣಚ್ಚ, ಮತ್ತೀನ್, ರಾಜೇಶ್, ಕಾಂಗ್ರೆಸ್ ನಗರ ಘಟಕದ ಅಧ್ಯಕ್ಷ ಮಾದಂಡ ತಿಮ್ಮಯ್ಯ, ವಿ.ಕೆ.ಸತೀಶ್ ಕುಮಾರ್ ಮತ್ತಿತರರು ಆಸ್ಪತ್ರೆಯಲ್ಲಿ ಸಾರ್ವಜನಿಕರಿಗೆ ಆಗುತ್ತಿರುವ ಸಮಸ್ಯೆಗಳನ್ನು ವಿವರಿಸಿದರು.

ಸಭೆಯಲ್ಲಿ ವಿರಾಜಪೇಟೆ ತಹಶೀಲ್ದಾರ್ ರಾಮಚಂದ್ರ, ಪೊನ್ನಂಪೇಟೆ ತಹಶೀಲ್ದಾರ್ ಪ್ರಶಾಂತ್, ಡಿವೈಎಸ್ಪಿ ಮೋಹನ್‌ಕುಮಾರ್, ಪುರಸಭೆಯ ಮುಖ್ಯಾಧಿಕಾರಿ ಚಂದ್ರಕುಮಾರ್, ಇಂಜಿನಿಯರ್ ಹೇಮಕುಮಾರ್ ಸೇರಿದಂತೆ ವಿರಾಜಪೇಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಗಾಂಜಾ ಮಾರಾಟಗಾರನ ಬಂಧನ

ಮಡಿಕೇರಿ, ಜೂ.13– ಗಾಂಜಾ ಮಾರಾಟಕ್ಕೆ ಯತ್ನಿಸುತ್ತಿದ್ದ ಅಂತರ ಜಿಲ್ಲಾ ಆರೋಪಿಯನ್ನು ಮಾಲು ಸಹಿತ ಬಂಧಿಸುವಲ್ಲಿ ನಾಪೋಕ್ಲು ಪೊಲೀಸರು ಯಶಸ್ವಿಯಾಗಿದ್ದಾರೆ. ನಾಪೋಕ್ಲು ಮೂರ್ನಾಡು ಮುಖ್ಯ ರಸ್ತೆಯಿಂದ ಹೊದವಾಡ ಗ್ರಾಮಕ್ಕೆ ತೆರಳುವ ಕೂಡು ರಸ್ತೆಯಲ್ಲಿರುವ ಬಸ್ ತಂಗುದಾಣದ ಬಳಿ ವ್ಯಕ್ತಿಯೊಬ್ಬ ಗಾಂಜಾ ಮಾರಾಟಕ್ಕೆ ಯತ್ನಿಸುತ್ತಿದ್ದ ಬಗ್ಗೆ ನಾಪೋಕ್ಲು ಪೊಲೀಸರಿಗೆ ಖಚಿತ ಮಾಹಿತಿ ಲಭಿಸಿತ್ತು.



ಈ ಹಿನ್ನೆಲೆಯಲ್ಲಿ ದಾಳಿ ನಡೆಸಿದಾಗ ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲೂಕಿನ ಸಂಪ್ಯ ಗ್ರಾಮದ ನಿವಾಸಿ ಸೈಯದ್ ಸಿ.ಎಚ್ ಎಂಬಾತನ ಬಳಿ 270 ಗ್ರಾಂ. ಗಾಂಜಾ ಇರುವುದು ಪತ್ತೆಯಾಗಿದೆ. ಆರೋಪಿ ಸಹಿತ ಗಾಂಜಾವನ್ನು ನಾಪೋಕ್ಲು ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಮತ್ತು ಹೆಚ್ಚುವರಿ ಪೊಲೀಸ್ ಉಪ ಅಧೀಕ್ಷಕ ಸುಂದರ್ ರಾಜ್ ನಿರ್ದೇಶನದಂತೆ ಡಿವೈಎಸ್‌ಪಿ ಜಗದೀಶ್, ವೃತ್ತ ನಿರೀಕ್ಷಕ ಅನೂಪ್ ಮಾದಪ್ಪ ಮಾರ್ಗದರ್ಶನದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ನಾಪೋಕ್ಲು ಠಾಣಾಧಿಕಾರಿ ಮಂಜುನಾಥ್, ಸಿಬ್ಬಂದಿಗಳಾದ ಸಾಜನ್, ಲವಕುಮಾರ್, ಪಂಚಲಿಂಗಪ್ಪ ಸತ್ತಿಗೇರಿ, ಶರತ್ ಕುಮಾರ್, ಪ್ರಸನ್ನ, ಗಿರೀಶ್ ಚಾಲಕ ಷರೀಫ್ ಪಾಲ್ಗೊಂಡಿದ್ದರು.

ಯಳಂದೂರು ಪಪಂ: ವಸತಿ ಯೋಜನೆಯಡಿ ಸಹಾಯಧನ

ಚಾಮರಾಜನಗರ, ಜೂ.13– ಯಳಂದೂರು ಪಟ್ಟಣ ಪಂಚಾಯಿತಿ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ವಿವಿಧ ನಗರ ವಸತಿ ಯೋಜನೆಗಳಡಿ ಇದುವರೆಗೂ ಮನೆ ನಿರ್ಮಿಸಿಕೊಳ್ಳದೇ ಇರುವ ಫಲಾನುಭವಿಗಳು ಮನೆ ನಿರ್ಮಿಸಲು ಇಚ್ಛಿಸಿದ್ದಲ್ಲಿ ಸಹಾಯಧನ ನೀಡಲಾಗುತ್ತದೆ.

ಡಾ. ಬಿ.ಆರ್.ಅಂಬೇಡ್ಕರ್ ನಿವಾಸ್ ಯೋಜನೆ (ನಗರ) ಹಾಗೂ ವಾಜಪೇಯಿ ನಗರ ವಸತಿ ಯೋಜನೆಯಡಿ 2015–16ನೇ ಸಾಲಿನಿಂದ 2017–18ನೇ ಸಾಲಿನವರೆಗೆ ಆಯ್ಕೆಯಾಗಿರುವ ಫಲಾನುಭವಿಗಳಲ್ಲಿ ಇದುವರೆವಿಗೂ ಹಲವಾರು ಫಲಾನುಭವಿಗಳು ಮನೆಯನ್ನು ನಿರ್ಮಿಸಿಕೊಂಡಿರುವುದಿಲ್ಲ. ಈಗಾಗಲೇ ಫಲಾನುಭವಿಗಳ ಮನೆಗೆ ಭೇಟಿ ನೀಡಿ ನಿರ್ಮಾಣ ಕಾಮಗಾರಿ ಪ್ರಾರಂಭಿಸಿ ಹಂತವಾರು ಜಿಪಿಎಸ್ ಮಾಡಿಸುವಂತೆ ತಿಳಿಸಲಾಗಿತ್ತು. ಆದಾಗ್ಯೂ ಬಹುತೇಕ ಫಲಾನುಭವಿಗಳು ಮನೆ ನಿರ್ಮಾಣ ಮಾಡಿರುವುದಿಲ್ಲ. ಫಲಾನುಭವಿಗಳು ಮನೆ ನಿರ್ಮಿಸಲು ಇಚ್ಛಿಸಿದ್ದಲ್ಲಿ ಜೂನ್ 20ರೊಳಗೆ ಪಟ್ಟಣ ಪಂಚಾಯಿತಿಗೆ ಭೇಟಿ ನೀಡಿ ಮನವಿ ಸಲ್ಲಿಸಿದ್ದಲ್ಲಿ ಪ್ರಧಾನಮಂತ್ರಿ ಅವಾಸ್ ಯೋಜನೆಯಡಿ 1.50 ಲಕ್ಷ ರೂ. ಸಹಾಯಧನ ನೀಡಲಾಗುವುದು. ಇಲ್ಲದಿದ್ದಲ್ಲಿ ಫಲಾನುಭವಿ ಆಯ್ಕೆಯನ್ನು ರದ್ದು ಮಾಡಲಾಗುವುದು.

ಮಾಹಿತಿಗಾಗಿ ಪಪಂ ವಸತಿ ಶಾಖೆಗೆ ಭೇಟಿ ನೀಡುವಂತೆ ಯಳಂದೂರು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚಾ.ನಗರ ಜಿಲ್ಲಾ ಅಭಿವೃದ್ಧಿಗೆ ಕ್ರಿಯಾ ಯೋಜನೆ

ಕೃತಜ್ಞತಾ ಸಮಾರಂಭದಲ್ಲಿ ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ. ಹೆಚ್.ಸಿ. ಮಹದೇವಪ್ಪ



ಚಾಮರಾಜನಗರ, ಜೂ.13– ಜಾನಪದ ಕಲೆಗಳ ತವರೂರು ಚಾಮರಾಜನಗರ ಜಿಲ್ಲೆಯ ಅಭಿವೃದ್ಧಿಗೆ ಕ್ರಿಯಾ ಯೋಜನೆ ರೂಪಿಸಲಾಗುವುದು ಎಂದು ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ. ಮಹದೇವಪ್ಪ ಭರವಸೆ ನೀಡಿದರು.

ನಗರದ ಎಪಿಎಂಸಿ ಬಳಿಯ ಅರಿಶಿನ ಮಾರುಕಟ್ಟೆ ಆವರಣದಲ್ಲಿ ಮಂಗಳವಾರ ಚಾಮರಾಜನಗರ ಬ್ಲಾಕ್ ಕಾಂಗ್ರೆಸ್ ಸಮಿತಿ ಹಾಗೂ ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಸಮಿತಿಯಿಂದ ನಡೆದ ಚಾಮರಾಜನಗರ ವಿಧಾನಸಭಾ ಕ್ಷೇತ್ರದ ಮತದಾರರಿಗೆ ಕೃತಜ್ಞತಾ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಸಾಧು–ಸಂತರ ನೆಲೆವಿಡು, ಯದುವಂಶದ ಕೊನೆಯ ರಾಜ ಚಾಮರಾಜ ಒಡೆಯರ್ ಅವರ ಜನ್ಮಭೂಮಿ ಚಾಮರಾಜನಗರ ಜಿಲ್ಲೆಯ ಅಭಿವೃದ್ಧಿಗೆ ಮುಂದಿನ ದಿನಗಳಲ್ಲಿ ಕ್ರಿಯಾ ಯೋಜನೆ ಸಿದ್ಧಪಡಿಸಿ, ಅಭಿವೃದ್ಧಿಪಡಿಸಲಾಗುವುದು ಎಂದು ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮೈಸೂರು ಪ್ರಾಂತ್ಯದ ಸ್ಥಳಗಳ ಬಗ್ಗೆ ವಿಶೇಷ ಕಾಳಜಿಯಿದ್ದು, ಜಿಲ್ಲೆಯ ಅಭಿವೃದ್ಧಿಗೆ ಕಾಂಗ್ರೆಸ್ ಸರ್ಕಾರ, ಮುಖ್ಯಮಂತ್ರಿಗಳು ಅಗತ್ಯವಾದ ಎಲ್ಲಾ ನೆರವು ನೀಡಲಾಗುವುದು. ಅದೇ ರೀತಿ ಚಾಮರಾಜನಗರ ಹಾಗೂ ಮೈಸೂರು ಭಾಗದ ಎಲ್ಲಾ ಶಾಸಕರು ಜಿಲ್ಲೆಯ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಸಲಹೆ ನೀಡಿದರು.

ರಾಜ್ಯ ಸರ್ಕಾರ ನುಡಿದಂತೆ ನಡೆದಿದೆ. ಚುನಾವಣಾ ಪೂರ್ವದಲ್ಲಿ ನಾವು ನೀಡಿದ ಗ್ಯಾರಂಟಿಗಳನ್ನು ಒಂದೊಂದಾಗಿ ಅನುಷ್ಠಾನಗೊಳಿಸಲಾಗಿದ್ದು, ಎರಡು ದಿನಗಳ ಹಿಂದೆ ಚಾಲನೆ ನೀಡಲಾದ ಶಕ್ತಿ ಯೋಜನೆಯಿಂದ ಮಹಿಳೆಯರಿಗೆ ಹೆಚ್ಚಿನ ಅನುಕೂಲವಾಗಿದೆ. ವಾರ್ಷಿಕವಾಗಿ ರಾಜ್ಯದಲ್ಲಿ ಅಂದಾಜು 51 ಲಕ್ಷ ಮಹಿಳೆಯರು ರಾಜ್ಯದ ವಿವಿಧೆಡೆ ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ಓಡಾಡುತ್ತಾರೆ. ಇವರಿಗೆಲ್ಲ ಪ್ರಸ್ತುತ ಉಚಿತ ಪ್ರಯಾಣ ಸೌಲಭ್ಯ ನೀಡಲಾಗಿದೆ ಎಂದು ತಿಳಿಸಿದರು.



ಚಾಮರಾಜನಗರ ಜಿಲ್ಲೆಯಲ್ಲಿ ಯೋಜನೆ ಚಾಲನೆಗೊಂಡ ಭಾನುವಾರದಂದು 16 ಸಾವಿರ ಮಹಿಳಾ ಪ್ರಯಾಣಿಕರು ಉಚಿತವಾಗಿ ಸಂಚರಿಸಿದ್ದಾರೆ. ಎರಡನೇ ದಿನವಾದ ಸೋಮವಾರ 60 ಸಾವಿರ ಮಹಿಳಾ ಪ್ರಯಾಣಿಕರು ಸಂಚರಿಸಿದ್ದಾರೆ ಎಂದು ಮಾಹಿತಿ ನೀಡಿದರು.

ರಾಜಕೀಯ ಶಕ್ತಿ ನೀಡಿದ ಜಿಲ್ಲೆ: ನನ್ನ ರಾಜಕೀಯ ಜೀವನಕ್ಕೆ ಚಾಮರಾಜನಗರ ಜಿಲ್ಲೆ ಶಕ್ತಿ ನೀಡಿದ್ದು, ಜಿಲ್ಲೆಯವರೇ ಆದ ಮಾಜಿ ರಾಜ್ಯಪಾಲ ಬಿ. ರಾಚಯ್ಯ ನಮ್ಮ ಗುರುಗಳು. ರಾಜಕೀಯವಾಗಿ ನಾನು ಬೆಳೆಯಲು ಎಲ್ಲ ರೀತಿಯ ಸಹಕಾರ ನೀಡಿದರು ಎಂದು ಸಚಿವ ಮಹದೇವಪ್ಪ ತಿಳಿಸಿದರು.

2013ರಿಂದ 2018ರ ಅವಧಿಯಲ್ಲಿ ಅಧಿಕಾರದಲ್ಲಿದ್ದ ಸಿದ್ದರಾಮಯ್ಯ ಅವರ ಸರ್ಕಾರದ ಅವಧಿಯಲ್ಲಿ ಜಿಲ್ಲೆಗೆ ಸಾಕಷ್ಟು ಕೊಡುಗೆ ನೀಡಲಾಗಿದೆ. ಜಿಲ್ಲೆಗೆ ಮೆಡಿಕಲ್ ಕಾಲೇಜು, ವಿಶ್ವವಿದ್ಯಾಲಯ, ಕೈಗಾರಿಕಾ ಪ್ರದೇಶದ ಅಭಿವೃದ್ಧಿ ಸೇರಿದಂತೆ ಶೈಕ್ಷಣಿಕವಾಗಿ ಜಿಲ್ಲೆಯು ಅಭಿವೃದ್ಧಿ ಹೊಂದಲು ಸಾಕಷ್ಟು ಅನುದಾನ ನೀಡಲಾಯಿತು. ನಗರದ ಬಿ. ರಾಚಯ್ಯ ಜೋಡಿ ರಸ್ತೆ ಅಭಿವೃದ್ಧಿಗೆ 35 ಕೋಟಿ ನೀಡಲಾಗಿತು ಎಂದು ತಿಳಿಸಿದರು.

ಬಿಜೆಪಿ ಸರ್ಕಾರದ ಅವ್ಯವಹಾರಗಳ ತನಿಖೆ

ಚಾಮರಾಜನಗರ, ಜೂ.13– ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಆಗಿರುವ ಹಣಕಾಸಿನ ದುರ್ಬಳಕೆ, ಕಾನೂನು ಉಲ್ಲಂಘನೆ, ಅವ್ಯವಹಾರಗಳು ಹಾಗೂ ಶೇ. 40ಕಮಿಷನ್ ಆರೋಪದ ಬಗ್ಗೆ ಕಾಂಗ್ರೆಸ್ ಸರ್ಕಾರ ತನಿಖೆ ನಡೆಸಲಿದೆ ಎಂದು ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ. ಮಹದೇವಪ್ಪ ಹೇಳಿದರು.

ನಗರದಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿ, ಈ ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಆಗಿರುವ ಲೋಪಗಳ ಬಗ್ಗೆ ತನಿಖೆಗೆ ಮೀನಾಮೇಷ ಎಣಿಸುವ ಪ್ರಶ್ನೆಯೇ ಇಲ್ಲ ಎಂದರು.

ಬಿಜೆಪಿ ಮತ್ತು ಕಾಂಗ್ರೆಸ್ ನಾಯಕರ ನಡುವೆ ಹೊಂದಾಣಿಕೆ ಇದ್ದಂತೆ ಕಾಣುತ್ತದೆ ಎಂದು ಮೈಸೂರು–ಕೊಡಗು ಸಂಸದ ಪ್ರತಾಪ ಸಿಂಹ ನೀಡಿರುವ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಪ್ರತಾಪ ಸಿಂಹ ಹೇಳಿಕೆಗೆ ಮಾನ್ಯತೆ ಇದೆಯಾ? ಗಾಂಭೀರ್ಯ, ತೂಕ, ಅರ್ಥ ಏನಾದರೂ ಇದೆಯೇ? ಅರ್ಥರಹಿತ ಮಾತುಗಳಿಗೆ ಪ್ರತಿಕ್ರಿಯೆ ಮಾಡುವ ಅಗತ್ಯವಿಲ್ಲ. ಹೊಂದಾಣಿಕೆಯ ಬಗ್ಗೆ ನನಗೆ ಗೊತ್ತಿಲ್ಲ. ಅದನ್ನು ಮಾಡಿಕೊಂಡವರು ಹೇಳಬೇಕು ಎಂದರು.

ವಿದ್ಯುತ್ ದರ ಹೆಚ್ಚಳ ಮಾಡಿರುವ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ವಿದ್ಯುತ್ ದರ ಏರಿಕೆ ಮಾಡಿದ್ದು, ಹಿಂದಿನ ಸರ್ಕಾರ. ಅದು ಈಗ ಜಾರಿಯಾಗಿದೆ ಅಷ್ಟೇ. ಯಾರು ದರ ಏರಿಕೆ ಮಾಡಿದರೇ ಅವರೇ ಟೀಕೆ ಮಾಡಿದರೆ ಹೇಗೆ? ಅವರಿಗೆ ಅನುಕೂಲವಾದಾಗ ಒಂದು ಮಾತು, ಅನಾನುಕುಲವಾದಾಗ ಇನ್ನೊಂದು ಮಾತು ಆಡುವುದು ಎಷ್ಟು ಸರಿ? ಎಂದು ಪ್ರಶ್ನಿಸಿದರು.

ಗ್ಯಾರಂಟಿ ಯೋಜನೆಗೆ ಹಣ ಕ್ರೋಢೀಕರಿಸುವುದು ಹಣಕಾಸು ಇಲಾಖೆಗೆ ಸಂಬಂಧಿಸಿದ ವಿಚಾರ. ಮುಖ್ಯಮಂತ್ರಿಯವರೇ ಹಣಕಾಸು ಸಚಿವರಾಗಿದ್ದಾರೆ. ಅವರು 13 ಬಜೆಟ್ ಮಂಡಿಸಿದ್ದಾರೆ. ಅವರಿಗೆ ಆಳವಾದ ಅನುಭವವಿದೆ. ಯೋಜನೆಗಳಿಗೆ ಹಣ ಹೇಗೆ ಸಂಗ್ರಹಿಸುತ್ತೇವೆ ಎಂದು ಪ್ರತಾಪ್ ಸಿಂಹಗೆ ನಾವು ಹೇಳುವುದಕ್ಕಾಗುತ್ತದೆಯೇ? ಎಂದು ಪ್ರಶ್ನಿಸಿದರು.

ಸಮಾಜ ಕಲ್ಯಾಣ ಇಲಾಖೆಯಲ್ಲಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುವುದು. ಇಲಾಖೆಯ ವಸತಿ ಶಾಲೆಗಳಲ್ಲಿ ಮತ್ತು ಹಾಸ್ಟೆಲ್‌ಗಳಿಗೆ ಹೆಚ್ಚು ಮಕ್ಕಳನ್ನು ದಾಖಲಿಸಲು ಕ್ರಮವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಈಗಾಗಲೇ ಸಭೆಗಳನ್ನು ನಡೆಸಿದ್ದೇನೆ ಎಂದರು.

ನಾಗಮಲ್ಲಮ್ಮ ನಿಧನ



ಚಾಮರಾಜನಗರ, ಜೂ.13– ತಾಲೂಕಿನ ಹೊನ್ನಾಳಿ ಗ್ರಾಮದ ನಿವಾಸಿ ನಾಗಮಲ್ಲಮ್ಮ (63) ಸೋಮವಾರ ರಾತ್ರಿ ನಿಧನರಾದರು.

ಮೃತರು ಪತಿ ಹೊನ್ನಾಳಿ ಪಟೇಲ್ ಪುಟ್ಟಮಾದಪ್ಪ, ಪುತ್ರ ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಪಿ. ವೃಷಬೇಂದ್ರಪ್ಪ, ಪುತ್ರಿ ರಾಣಿ ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆಯು ಸಂಜೆ ಅವರ ಸ್ವಗ್ರಾಮ ಹೊನ್ನಾಳಿಯಲ್ಲಿ ನಡೆಯಿತು.

ಮಾಜಿ ಶಾಸಕರಾದ ಎನ್. ಮಹೇಶ್, ಎಸ್. ಬಾಲರಾಜು, ಜಿ.ಎನ್. ನಂಜುಂಡಸ್ವಾಮಿ, ಪ್ರೊ ಕೆ.ಆರ್. ಮಲ್ಲಿಕಾರ್ಜುನಪ್ಪ ಸೇರಿದಂತೆ ಇತರರು ಮೃತರ ನಿವಾಸಕ್ಕೆ ತೆರಳಿ ಅಂತಿಮ ನಮನ ಸಲ್ಲಿಸಿದರು.

ಅ.15ರೊಳಗೆ ಐದೂ ಗ್ಯಾರಂಟಿಗಳ ಜಾರಿ: ಕೆ. ವೆಂಕಟೇಶ್

ಚಾಮರಾಜನಗರ, ಜೂ.13– ರಾಜ್ಯ ಕಾಂಗ್ರೆಸ್ ಸರ್ಕಾರ ಚುನಾವಣಾ ಪೂರ್ವದಲ್ಲಿ ಮತದಾರರಿಗೆ ನೀಡಿದ್ದ ಐದು ಗ್ಯಾರಂಟಿಗಳನ್ನು ಅಕ್ಟೋಬರ್ 15ರೊಳಗೆ ಜಾರಿಗೊಳಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ. ವೆಂಕಟೇಶ್ ತಿಳಿಸಿದರು.

ನಗರದಲ್ಲಿ ನಡೆದ ಕೃತಜ್ಞತಾ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿ, ನಾವು ನುಡಿದಂತೆ ನಡೆಯುತ್ತಿದ್ದೇವೆ. ಹೀಗಾಗಲೇ ರಾಜ್ಯದ ಜನರಿಗೆ ನೀಡಿದ ಐದು ಗ್ಯಾರಂಟಿಗಳನ್ನು ಒಂದೊಂದಾಗಿ ಅನುಷ್ಠಾನಗೊಳಿಸಲಾಗುತ್ತದೆ. ಇದಕ್ಕೆ ಪೂರಕವಾಗಿ ರಾಜ್ಯಾದ್ಯಂತ ಜೂ. 11ರಂದು ಶಕ್ತಿ ಯೋಜನೆ ಜಾರಿಗೊಳಿಸಲಾಗಿದೆ ಎಂದು ತಿಳಿಸಿದರು.

ಸರ್ಕಾರದ ಗ್ಯಾರಂಟಿ ಯೋಜನೆಗಳ ಬಗ್ಗೆ ವಿರೋಧ ಪಕ್ಷದವರು ಮಾಡುತ್ತಿದ್ದ ಟೀಕೆಗಳಿಗೆ ಉತ್ತರ ನೀಡಲಾಗಿದೆ. ನಮ್ಮ ಐದು ಗ್ಯಾರಂಟಿಗಳು ಜಾರಿಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳಲಾಗಿದ್ದು, ಇನ್ನುಳಿದ ನಾಲ್ಕು ಗ್ಯಾರಂಟಿಗಳ ಪೈಕಿ ಜುಲೈ 1ರಂದು ಅನ್ನಭಾಗ್ಯ, ಗೃಹಶಕ್ತಿ ಯೋಜನೆಗೆ ಹಾಗೂ ಆಗಸ್ಟ್ 15ರಂದು ಗೃಹಲಕ್ಷ್ಮೀ, ಯುವ ನಿಧಿ ಯೋಜನೆಗಳಿಗೆ ಚಾಲನೆ ನೀಡಲಾಗುವುದು ಎಂದು ಮಾಹಿತಿ ನೀಡಿದರು.

ಜು.1 ಮೈಸೂರಿನಲ್ಲಿ ಅನ್ನಭಾಗ್ಯಕ್ಕೆ ಚಾಲನೆ: ಸರ್ಕಾರದ ಮತ್ತೊಂದು ಮಹತ್ವಾಕಾಂಕ್ಷೆಯ ಯೋಜನೆಯಾದ ಅನ್ನಭಾಗ್ಯ ಯೋಜನೆಯನ್ನು ಜು.1ರಂದು ಮೈಸೂರಿನಲ್ಲಿ ಅಧಿಕೃತವಾಗಿ ಚಾಲನೆ ನೀಡಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ. ವೆಂಕಟೇಶ್ ತಿಳಿಸಿದರು.

ಅಂದಿನ ಕಾರ್ಯಕ್ರಮಕ್ಕೆ ಜಿಲ್ಲೆಯಿಂದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಬರಬೇಕು. ಇದೊಂದು ಕಾಂಗ್ರೆಸ್ ಸರ್ಕಾರ ಮಹತ್ವದ ಯೋಜನೆಯಾಗಿದ್ದು, ಈ ಯೋಜನೆಯ ಮೂಲಕ ಎಲ್ಲಾ ಬಿಪಿಎಲ್ ಹಾಗೂ ಅಂತ್ಯೋದಯ ಕಾರ್ಡ್‌ಗಳ ಕುಟುಂಬದ ಸದಸ್ಯರಿಗೆ ತಲಾ 10 ಕೆ.ಜಿ. ಅಕ್ಕಿಯನ್ನು ನೀಡಲಾಗುವುದು ಎಂದರು.

ಜಿಲ್ಲೆ ಅಭಿವೃದ್ಧಿಗೆ ಆದ್ಯತೆ: ಜಿಲ್ಲೆಯ ಹಾಲಿ ಹಾಗೂ ಮಾಜಿ ಶಾಸಕರು, ಪಕ್ಷದ ಮುಖಂಡರು, ಅಧಿಕಾರಿಗಳ ಸಲಹೆ, ಸಹಕಾರಗಳನ್ನು ಪಡೆದುಕೊಂಡು ಜಿಲ್ಲೆಯ ಅಭಿವೃದ್ಧಿಗೆ ಆದ್ಯತೆ ನೀಡಲಾಗುವುದು ಎಂದು ಸಚಿವ ಕೆ. ವೆಂಕಟೇಶ್ ತಿಳಿಸಿದರು.

ಪುಟ್ಟರಂಗಶೆಟ್ಟಿ ಅವರಿಗೆ ಕೊನೆ ಗಳಿಗೆಯಲ್ಲಿ ಸಚಿವ ಸ್ಥಾನ ಕೈ ತಪ್ಪಿದೆ. ಇದಕ್ಕೆ ನನಗೂ ಬೇಸರವಿದೆ. ಮುಖ್ಯಮಂತ್ರಿಗಳು ಕೂಡ ಇವರಿಗೆ ಸಚಿವ ಸ್ಥಾನ ತಪ್ಪಿದಕ್ಕೆ ಬೇಸರ ವ್ಯಕ್ತಪಡಿಸಿದರು. ಮುಂದಿನ ದಿನಗಳಲ್ಲಿ ಇವರಿಗೆ ಸೂಕ್ತ ಸ್ಥಾನ ನೀಡುವ ಭರವಸೆಯನ್ನು ಮುಖ್ಯಮಂತ್ರಿಗಳು ನೀಡಿದ್ದಾರೆ. ಪ್ರಸ್ತುತ ಪುಟ್ಟರಂಗಶೆಟ್ಟಿ ಅವರು ಉಪಸಭಾಪತಿ ಹುದ್ದೆಯನ್ನು ನಿರ್ವಹಿಸುವ ವಿಶ್ವಾಸವಿದೆ ಎಂದು ತಿಳಿಸಿದರು.

ಅಧಿಕಾರಕ್ಕೆ ಬಂದು 20 ದಿನ ಆಗಿಲ್ಲ... ಎಲ್ಲಿ ಪರ್ಸಂಟೇಜ್ ತಗೋಳ್ಳೋಕೆ ಆಗುತ್ತೆ?!



ಚಾಮರಾಜನಗರ, ಜೂ.13– ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಇನ್ನೂ 20ದಿನ ಆಗಿಲ್ಲ. ಎಲ್ಲಿ ಪರ್ಸೆಂಟೇಜ್ ತಗಳ್ಳೋಕ್ಕೆ ಆಗುತ್ತೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ. ವೆಂಕಟೇಶ್ ಅವರು ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರಿಗೆ ತಿರುಗೇಟು ನೀಡಿದರು.

ನಗರದಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಚ್.ಡಿ. ಕುಮಾರಸ್ವಾಮಿ ಅವರು ಸರ್ಕಾರದ ಬಗ್ಗೆ ಶೇ.45 ಕಮಿಷನ್ ಬಗ್ಗೆ ಆರೋಪಿಸಿದ್ದಕ್ಕೆ ಪ್ರತಿಕ್ರಿಯಿಸಿದರು. ಕುಮಾರಸ್ವಾಮಿ ಅವರು ತಿಳುವಳಿಕೆ ಇದ್ದು, ಮಾತಾಡ್ತಾರೋ, ಇಲ್ಲವೇ ಮಾತಾಡ್ತಾರೋ? ಅವರೊಬ್ಬ ಮಾಜಿ ಮುಖ್ಯಮಂತ್ರಿ ಜವಾಬ್ದಾರಿಯುತವಾಗಿ ಮಾತನಾಡಬೇಕು ಎಂದು ಸಲಹೆ ನೀಡಿದರು. ವಿದ್ಯುತ್ ದರ ಏರಿಕೆಯಿಂದ ಸರ್ಕಾರದ ವರ್ಚಸ್ಸಿಗೆ ಧಕ್ಕೆ ಆಗುತ್ತಿದೆ ಎಂದು ಶಾಸಕ ತನ್ವೀರ್‌ಸೇಠ್ ಅವರು ಸರ್ಕಾರಕ್ಕೆ ಪತ್ರ ಬರೆದಿರುವ ಬಗ್ಗೆ ಪ್ರತಿಕ್ರಿಯಿಸಿದ ಸಚಿವರು, ಅದು ಅವರ ವೈಯಕ್ತಿಕ ಅಭಿಪ್ರಾಯ ಎಂದಷ್ಟೇ ಹೇಳಿದರು.

ಇಂದು ಬಸವ ಭವನಕ್ಕೆ ಭೂಮಿ ಪೂಜೆ

ಚಾಮರಾಜನಗರ, ಜೂ.13– ಅಖಿಲ ಭಾರತ ವೀರಶೈವ ಲಿಂಗಾಯಿತ ಮಹಾಸಭಾ ಜಿಲ್ಲಾ ಘಟಕದಿಂದ ಜೂ.14ರಂದು ನಗರದ ಸತ್ಯಮಂಗಲ ರಸ್ತೆಯ ಶಿವಕುಮಾರಸ್ವಾಮಿ ಭವನದ ಪಕ್ಕ ಸರ್ಕಾರ ಮಂಜೂರು ಮಾಡಿರುವ 30 ಗುಂಟೆ ಜಾಗದಲ್ಲಿ ಬಸವ ಭವನ ನಿರ್ಮಾಣಕ್ಕೆ ಭೂಮಿಪೂಜೆ ಹಮ್ಮಿಕೊಳ್ಳಲಾಗಿದೆ ಎಂದು ಅಖಿಲ ಭಾರತ ವೀರಶೈವ ಲಿಂಗಾಯಿತ ಮಹಾಸಭಾ ಜಿಲ್ಲಾಧ್ಯಕ್ಷ ನಂದೀಶ್ ತಿಳಿಸಿದರು. ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 8 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸುತ್ತಿರುವ ಬಸವ ಭವನಕ್ಕೆ ಬೆಳಗ್ಗೆ 9.30ಕ್ಕೆ ಭೂಮಿ ಪೂಜೆ ನೆರವೇರಿಸಲಾಗುವುದು. ಈ ವೇಳೆ ಸುತ್ತೂರು, ಸಿದ್ಧಗಂಗಾ ಮಠದ ಶ್ರೀಗಳ ಸಾನ್ನಿಧ್ಯ ವಹಿಸುವರು, ಅಲ್ಲದೇ ವಿವಿಧ ಮಠಾಧೀಶರು ಉಪಸ್ಥಿತರಿರುವರು ಎಂದರು.

ಇಂದು ಜನಸಂಪರ್ಕ ಸಭೆ

ಹನೂರು, ಜೂ.13– ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದಿಂದ ಹನೂರು ಉಪವಿಭಾಗ ಕಚೇರಿ ಆವರಣದಲ್ಲಿ ಜೂ.14ರಂದು ಬುಧವಾರ ಮಧ್ಯಾಹ್ನ 12ರಿಂದ 1 ಗಂಟೆ ವರೆಗೆ ಜನಸಂಪರ್ಕ ಸಭೆ ಆಯೋಜಿಸಲಾಗಿದೆ.

ಗ್ರಾಹಕರು ಸಭೆಗೆ ಆಗಮಿಸಿ ತಮ್ಮ ವ್ಯಾಪ್ತಿಯ ವಿದ್ಯುತ್ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದಾಗಿದೆ ಎಂದು ಹನೂರು ಉಪವಿಭಾಗದ ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೂರನೇ ಪುಟದಿಂದ

3 ತಿಂಗಳ ಗಡುವು

ನರ್ಸ್ ಸಿಬ್ಬಂದಿ ಕೊರತೆ ಇರುವುದನ್ನು ಗಮನಿಸಿದ್ದೇನೆ. ವೈದ್ಯರೂ ಸೇರಿದಂತೆ ತಜ್ಞರಿಗೆ ವೇತನ ಹೆಚ್ಚಳ ಮಾಡುವಂತೆ ಪರಿಶೀಲಿಸಿ. ನೀವು ಸಬೂಬು ಹೇಳದೆ ಹುದ್ದೆಗಳ ಭರ್ತಿಗೆ ಕ್ರಮ ಕೈಗೊಳ್ಳಿ ಎಂದು ಸೂಚಿಸಿದರು. ರಾಷ್ಟ್ರೀಯ ಆರೋಗ್ಯ ಮಿಷನ್ ಅನುದಾನ ಸಕಾಲದಲ್ಲಿ ವೆಚ್ಚವಾಗದಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಮುಖ್ಯಮಂತ್ರಿ ಅವರು, ಇದರಿಂದ ಆರೋಗ್ಯ ವ್ಯವಸ್ಥೆ ಬಲಗೊಳಿಸಲು ಸಮಯ ವ್ಯರ್ಥವಾಗದೆ ಕೆಲಸ ಮಾಡಿ ಎಂದು ಕಿವಿಮಾತು ಹೇಳಿದರು. ಕೇಂದ್ರದಿಂದ ಬರುವ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಂಡು ಬಡವರ ಬಾಗಿಲಲ್ಲೇ ಆರೋಗ್ಯ ಸೇವೆ ಒದಗಿಸಲು ನೀವು ಏತಕ್ಕೆ ಮೀನಾಮೇಷ ಎಣಿಸುತ್ತಿದ್ದೀರಿ ಎಂದು ಪ್ರಶ್ನಿಸಿದರು.

ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯ ಬರಿ ಕಡತದಲ್ಲೇ ಇದೆ. ತಮಿಳುನಾಡು ಹಾಗೂ ರಾಜಸ್ಥಾನದಲ್ಲಿ ಜಾರಿಯಲ್ಲಿರುವ ವಿಮಾ ಮಾದರಿಯನ್ನು ಅಧ್ಯಯನ ಮಾಡಿ ವರದಿ ಕೊಡುವಂತೆ ಅಧಿಕಾರಿಗಳಿಗೆ ಆದೇಶಿಸಿದರು. ಮನುಷ್ಯರ ಸೇವೆ ಮಾಡಬೇಕು. ಆಗ ನಾವು ಮನುಷ್ಯರಾಗುತ್ತೇವೆ. ರೋಗಿಗಳ ಖಾಯಿಲೆ ವಾಸಿ ಮಾಡಲು ನಾವು ಪ್ರಯತ್ನ ಮಾಡಬೇಕು. ಲ್ಯಾಬ್ ಟೆಕ್ನೀಷಿಯನ್ ಸೇರಿದಂತೆ ಅತೀ ಅಗತ್ಯವಿರುವ ಅರೆ ವೈದ್ಯ ಸಿಬ್ಬಂದಿ ನೇಮಕಕ್ಕೆ ಆದ್ಯತೆ ನೀಡುವಂತೆ ಹಣಕಾಸು ಇಲಾಖೆಗೆ ಸೂಚಿಸಿದರು.

ಔಷಧ ಖರೀದಿ ಪ್ರಕ್ರಿಯೆ ನಿರಂತರವಾಗಿ ನಡೆಯಲು ಅನುವಾಗುವಂತೆ ಎರಡು ವರ್ಷಕ್ಕೊಮ್ಮೆ ಟೆಂಡರ್ ಕರೆಯಲು ಅಧಿಕಾರಿಗಳಿಗೆ ಆದೇಶ ಮಾಡಿದರು.

ಟೆಂಡರ್ ಪ್ರಕ್ರಿಯೆಗೆ ತಡೆ

ಮೈಸೂರಿನ ಹೃದಯ ಭಾಗದ ಕೆಲ ವಾಣಿಜ್ಯ ರಸ್ತೆಗಳಲ್ಲಿ ಸಾರ್ವಜನಿಕರಿಗೆ ವಾಹನ ನಿಲುಗಡೆಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ 'ಪೇ ಅಂಡ್ ಪಾರ್ಕ್' ವ್ಯವಸ್ಥೆ ಜಾರಿಗೊಳಿಸಲು ಮುಂದಾಗಿದ್ದೆವು. ಸೋಮವಾರ ಅದಕ್ಕೆ ಟೆಂಡರ್ ಕರೆಯಬೇಕಿತ್ತು. ಈ ನಡುವೆ ವಿರೋಧ ವ್ಯಕ್ತವಾದ ಕಾರಣ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದ್ದೇವೆ ಎಂದು ಮೇಯರ್ ತಿಳಿಸಿದರು.

ಶೀಘ್ರ ಪ್ರತ್ಯೇಕ ಸಭೆ ನಡೆಸಿ ಶಾಸಕರು, ಸಂಘ ಸಂಸ್ಥೆಗಳು, ಅಂಗಡಿ ಮಾಲೀಕರೊಂದಿಗೆ ಈ ರಸ್ತೆಗಳಲ್ಲಿ ವಾಹನ ನಿಲುಗಡೆಗೆ ಉಂಟಾಗುತ್ತಿರುವ ತೊಂದರೆಗಳನ್ನು ವಿವರಿಸಿ, ಪರಿಸ್ಥಿತಿ ಮನವರಿಕೆ ಮಾಡಿಕೊಟ್ಟು ಎಲ್ಲರನ್ನೂ ವಿಶ್ವಾಸಕ್ಕೆ ಪಡೆದ ನಂತರವೇ 'ಪೇ ಅಂಡ್ ಪಾರ್ಕ್' ವ್ಯವಸ್ಥೆಯನ್ನು ಜಾರಿಗೆ ತರಲಾಗುವುದು ಎಂದು ಶಿವಕುಮಾರ್ ತಿಳಿಸಿದರು. ಮೈಸೂರಿನ ಪ್ರಮುಖ ವಾಣಿಜ್ಯ ರಸ್ತೆಗಳಾದ ಡಿ. ದೇವರಾಜ ಅರಸು ರಸ್ತೆ, ಅಶೋಕ ರಸ್ತೆ, ಸಯ್ಯಾಜಿರಾವ್ ರಸ್ತೆ, ವಿನೋಬಾ ರಸ್ತೆ, ಧನ್ವಂತರಿ ರಸ್ತೆ, ಶ್ರೀ ಹರ್ಷ ರಸ್ತೆ ಹಾಗೂ ಟೌನ್‌ಹಾಲ್ ಆವರಣದಲ್ಲಿ 'ಪೇ ಅಂಡ್ ಪಾರ್ಕ್' ವ್ಯವಸ್ಥೆ ಜಾರಿಗೊಳಿಸಲು ಜೂನ್ 9 ರಂದು ನಡೆದ ಪಾಲಿಕೆ ಕೌನ್ಸಿಲ್ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಗಿತ್ತು. ಅದರನ್ವಯ ಟೆಂಡರ್ ಕರೆಯಲೂ ಸಿದ್ಧತೆ ಮಾಡಿಕೊಳ್ಳಲಾಗಿತ್ತು ಎಂದು ಮೇಯರ್ ತಿಳಿಸಿದರು.

ಪಾರ್ಕಿಂಗ್ ಶುಲ್ಕ ಸಂಗ್ರಹ ಮಾಡುವುದು ನಮ್ಮ ಉದ್ದೇಶವಲ್ಲ. ಬದಲಾಗಿ ಸಾರ್ವಜನಿಕರ ವಾಹನ ನಿಲುಗಡೆಗೆ ಅವಕಾಶ ಕಲ್ಪಿಸಿ ಪ್ರಮುಖ ವಾಣಿಜ್ಯ ರಸ್ತೆಗಳಲ್ಲಿನ ಪಾರ್ಕಿಂಗ್ ಸಮಸ್ಯೆ ಬಗೆಹರಿಸಲೆಂದೇ 'ಪೇ ಅಂಡ್ ಪಾರ್ಕ್' ವ್ಯವಸ್ಥೆ ಜಾರಿಗೆ ಮುಂದಾಗಿದ್ದೇವೆ ಈ ಪದ್ಧತಿಯನ್ನು ವಿರೋಧಿಸಿ ಕೆಲವರು ಪ್ರತಿಭಟನೆ ಮಾಡುತ್ತಿರು ವುದು ಹಾಗೂ ಸಾಮಾಜಿಕ ತಾಣಗಳಲ್ಲಿ ತಮ್ಮ ಆಕ್ಷೇಪ ವ್ಯಕ್ತಪಡಿಸಿರುವುದನ್ನು ಗಮನಿಸಿದ್ದೇವೆ. ಆದರೆ ಅವರಿಗೆ ಪ್ರಸ್ತುತ ವಸ್ತುಸ್ಥಿತಿ ಮನವರಿಕೆ ಮಾಡಿಕೊಡುತ್ತೇವೆ. ಶಾಸಕರನ್ನೂ ಸಭೆಗೆ ಆಹ್ವಾನಿಸಿ ಈ ರಸ್ತೆಗಳಲ್ಲಿ ವಾಹನ ನಿಲುಗಡೆ ಸಮಸ್ಯೆ ಬಗ್ಗೆ ವಿವರಿಸಿ ವಸ್ತುಸ್ಥಿತಿಯನ್ನು ಮನವರಿಕೆ ಮಾಡುತ್ತೇವೆ. ಪಾರ್ಕಿಂಗ್ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು 'ಪೇ ಅಂಡ್ ಪಾರ್ಕ್' ವ್ಯವಸ್ಥೆವೊಂದೇ ಪರ್ಯಾಯ ಮಾರ್ಗವಾಗಿದ್ದು, ಪಾರದರ್ಶಕವಾಗಿ ಗಣಕೀಕೃತ ರಶೀತಿ ನೀಡಲು ನಿರ್ಧರಿಸಲಾಗಿದೆ. ಒಂದು ವೇಳೆ ಪಾರ್ಕಿಂಗ್ ಶುಲ್ಕ ದುಬಾರಿಯಾಯಿತೆಂದರೆ ದರ ಕಡಿಮೆ ಮಾಡುವ ಬಗ್ಗೆ ಚಿಂತಿಸಬಹುದು ಎಂದು ಶಿವಕುಮಾರ್ ನುಡಿದರು.

ಮಹಿಳಾ ಭಕ್ತರ ಜಂಗುಳಿ

ಹೊರನಾಡಿನ ಶ್ರೀ ಅನ್ನಪೂರ್ಣೇಶ್ವರಿ, ಕಳಸದ ಶ್ರೀ ಕಳಸೇಶ್ವರ, ಕುಕ್ಕೆ ಸುಬ್ರಹ್ಮಣ್ಯದ ಶ್ರೀ ಸುಬ್ರಹ್ಮಣ್ಯೇಶ್ವರ, ಮುರುಡೇಶ್ವರದ ಈಶ್ವರ, ಗೋಕರ್ಣದ ಆತ್ಮಲಿಂಗ, ಗಣೇಶ, ಶಿವಮೊಗ್ಗದ ಸಿಗಂಧೂರಿನ ಶ್ರೀ ಚೌಡೇಶ್ವರಿ, ಶಿರಸಿಯ ಶ್ರೀ ಮಾರಿಕಾಂಬ, ಯಡಿಯೂರಿನ ಶ್ರೀ ಸಿದ್ದಲಿಂಗೇಶ್ವರ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿರುವ ಹಲವು ದೇವಾಲಯಗಳಲ್ಲಿ ಮಹಿಳಾ ಭಕ್ತಾದಿಗಳ ಸಂಖ್ಯೆ ಅಧಿಕವಾಗುತ್ತಿದೆ.

ಚಿಕ್ಕಮಗಳೂರು, ಉಡುಪಿ, ದಕ್ಷಿಣ ಕನ್ನಡ, ಕಾರವಾರ ಜಿಲ್ಲೆಗಳ ಪ್ರಸಿದ್ಧ ದೇವಾಲಯಗಳಲ್ಲಿ ಭಕ್ತರನ್ನು ನಿಭಾಯಿಸುವುದೇ ಕಷ್ಟವಾಗುತ್ತಿದೆ. ದೇವರ ದರ್ಶನ, ಧಾರ್ಮಿಕ ಸೇವಾ ಕೈಂಕರ್ಯಗಳು, ಮಧ್ಯಾಹ್ನ ಮತ್ತು ರಾತ್ರಿ ಪ್ರಸಾದ (ಭೋಜನ) ವಿತರಿಸಿ ಭಕ್ತರಿಗೆ ವಸತಿ ಸೌಕರ್ಯ ಒದಗಿಸುವುದು ಕಷ್ಟಸಾಧ್ಯವಾಗುತ್ತಿದೆ.

ಈವರೆಗೆ ಕೇವಲ ವಾರಾಂತ್ಯ ಹಾಗೂ ರಜಾ ದಿನಗಳಲ್ಲಿ ಮಾತ್ರ ಭಕ್ತರ ಜಂಗುಳಿ ಇದ್ದ ಈ ದೇವಾಲಯಗಳಲ್ಲಿ ಇದೀಗ ಉಚಿತ ಪ್ರಯಾಣದ 'ಶಕ್ತಿ' ಜಾರಿಯಾದ ನಂತರ ಕೆಲಸದ ದಿನಗಳಲ್ಲೂ ಯಾತ್ರಾರ್ಥಿಗಳ ಸಂಖ್ಯೆ ಹೆಚ್ಚಾಗತೊಡಗಿದೆ.

ಶಕ್ತಿ ಯೋಜನೆ: 2ನೇ ದಿನ 41.34 ಲಕ್ಷ ಮಹಿಳೆಯರು ಉಚಿತ ಪ್ರಯಾಣ; ಟಿಕೆಟ್ ವೆಚ್ಚ 8.83 ಕೋಟಿ!

ಬೆಂಗಳೂರು: ಸರ್ಕಾರಿ ಸ್ವಾಮ್ಯದ ಸಾರಿಗೆ ಬಸ್‌ಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣ ಕಲ್ಪಿಸುವ ಶಕ್ತಿ ಯೋಜನೆಗೆ ರಾಜ್ಯ ಸರ್ಕಾರ ಭಾನುವಾರ ಚಾಲನೆ ನೀಡಿದ್ದು, ಎರಡನೇ ದಿನವಾದ ಸೋಮವಾರ ಬರೋಬ್ಬರಿ 41. 34 ಲಕ್ಷ ಮಹಿಳೆಯರು ಉಚಿತವಾಗಿ ಪ್ರಯಾಣಿಸಿದ್ದಾರೆ. ಶಕ್ತಿ ಯೋಜನೆಗೆ ಉತ್ತಮ ಬೆಂಬಲ ವ್ಯಕ್ತವಾಗುತ್ತಿದ್ದು, ಮೊದಲ ದಿನವಾದ ಭಾನುವಾರ ಮಧ್ಯಾಹ್ನ 1 ಗಂಟೆಯಿಂದ ರಾತ್ರಿ 12ರವರೆಗೆ ಒಟ್ಟು 5.71 ಲಕ್ಷ ಮಹಿಳೆ ಯರು ಪ್ರಯಾಣಿಸಿದ್ದರು. ಎರಡನೇ ದಿನವಾದ ಸೋಮವಾರ ಒಟ್ಟು 41,34,726 ಮಹಿಳೆಯರು ಉಚಿತವಾಗಿ ಪ್ರಯಾಣಿಸಿದ್ದಾರೆ ಎಂದು ಸಾರಿಗೆ ಇಲಾಖೆ ತಿಳಿಸಿದೆ. ಬಿಎಂಟಿಸಿ ಬಸ್‌ನಲ್ಲಿ ಒಟ್ಟು 17,57,887, ಕೆಎಸ್‌ಆರ್‌ಟಿಸಿಯಲ್ಲಿ 11,40,057 ಮಹಿಳೆಯರು, ವಾಯವ್ಯ ಸಾರಿಗೆ ಬಸ್‌ನಲ್ಲಿ 8,31,840, ಕಲ್ಯಾಣ ಕರ್ನಾಟಕ ಸಾರಿಗೆಯಲ್ಲಿ 4,04,942 ಮಹಿಳೆಯರು ಪ್ರಯಾಣಿಸಿದ್ದು, ಇವರ ಪ್ರಯಾಣದ ಟಿಕೆಟ್ ವೆಚ್ಚ 8,83,53,434 ರೂ. ಆಗಿದೆ ಎಂದು ಸಾರಿಗೆ ಇಲಾಖೆ ತಿಳಿಸಿದೆ. ಭಾನುವಾರ ಶಕ್ತಿ ಯೋಜನೆಗೆ ಚಾಲನೆ ಸಿಕ್ಕಿದ್ದರೂ ವಾರಾಂತ್ಯವಾದ ಕಾರಣ ಕಚೇರಿಗಳಿಗೆ ರಜೆ ಇತ್ತು. ಆದರೆ ಸೋಮವಾರ ಕೆಲಸದ ದಿನವಾಗಿದ್ದರಿಂದ ಹೆಚ್ಚಿನಸಂಖ್ಯೆಯಲ್ಲಿ ಮಹಿಳೆಯರು ಸಂಚರಿಸಿದ್ದಾರೆ.

'ಅಡ್ಜೆಸ್ಟ್‌ಮೆಂಟ್ ಪಾಲಿಟಿಕ್ಸ್'

ಕಾರಣ ನಮ್ಮ ಪಕ್ಷ ಸೋಲ ಬೇಕಾಯಿತು ಎಂದು ಮಾಜಿ ಮುಖ್ಯಮಂತ್ರಿ, ಬಿಜೆಪಿ ಹಿರಿಯ ನಾಯಕ ಬಿ.ಎಸ್.ಯಡಿ ಯೂರಪ್ಪ ಸೇರಿ ಕೆಲವು ಹಿರಿಯ ನಾಯಕರ ಹೆಸರು ಹೇಳದೇ ಪರೋಕ್ಷವಾಗಿ ಹರಿಹಾಯ್ದದರು. ಕೆಂಪಣ್ಣ ಆಯೋಗದ

ವರದಿ ಬಿಡುಗಡೆ ಮಾಡುತ್ತೇವೆ, ಸಿದ್ದರಾಮಯ್ಯ ಅವರ ಅರ್ಕಾವತಿ ರೀಡೂ ಹಗರಣ ಬಯಲು ಮಾಡುತ್ತೇವೆ ಎಂದು ನಮ್ಮ ನಾಯಕರೇ ಅಬ್ಬರಿಸುತ್ತಿದ್ದರು. ಬುಟ್ಟಿಯಲ್ಲಿ ಹಾವು ಇದೆ ಬಿಡುತ್ತೇವೆ... ಬಿಡುತ್ತೇವೆ... ಎಂದು ಹೇಳುತ್ತಿದ್ದರೇ ಹೊರತು ಹಾವು ಬಿಡಲಿಲ್ಲ. ನಿನಗೆ ತುರಿಕೆ ಬಂದಾಗ ನಿನ್ನ ಬೆನ್ನು ನಾನು ಕೆರೆಯುವೆ, ನನಗೆ ತುರಿಕೆ ಬಂದಾಗ ನನ್ನ ಬೆನ್ನು ನೀನು ಕೆರಿ ಎಂದು ಒಬ್ಬರಿಗೊಬ್ಬರು ಹೊಂದಾಣಿಕೆ ರಾಜಕಾರಣ ಮಾಡಿಕೊಂಡಿದ್ದಾರೆ. ಇದು ಅವರ ಅಡ್ಜೆಸ್ಟ್‌ಮೆಂಟ್ ಪಾಲಿಟಿಕ್ಸ್. ಈ ಕಾರಣದಿಂದಲೇ ಬಿಜೆಪಿ ಸೋಲು ಕಂಡಿತು ಎಂದು ಪ್ರತಾಪ್ ಸಿಂಹ ತಮ್ಮ ನಾಯಕರ ಒಳಸಂಚಿನ ಮತ್ತು ಹೊಂದಾಣಿಕೆ ರಾಜಕಾರಣದ ವಿರುದ್ಧ ಕಿಡಿಕಾರಿದರು.

ಸಿದ್ದರಾಮಯ್ಯ ಕೂಡ ಬಿಜೆಪಿ ಮೇಲೆ ಪಿಎಸ್‌ಐ ಹಗರಣ, ಬಿಟ್ ಕಾಯಿನ್ ಹಗರಣ ಅಂತ ಅಬ್ಬರಿಸುತ್ತಿದ್ದರು. ಆದರೆ ಈಗ ಈ ಬಗ್ಗೆ ತುಟಿ ಬಿಚ್ಚುತ್ತಿಲ್ಲ. ಇದು ಸಿದ್ದರಾಮಯ್ಯ ಅವರ ಹೊಂದಾಣಿಕೆ ರಾಜಕಾರಣ ಅಲ್ಲವೇ. ಬಿಜೆಪಿಯ ಕೆಲ ನಾಯಕರ ಜೊತೆ ಹೊಂದಾಣಿಕೆ ಇಲ್ಲ ಅಂದರೆ ಬಿಜೆಪಿ ನಾಯಕರ ವಿರುದ್ಧ ನೀವು ಮಾಡುತ್ತಿದ್ದ ಆರೋಪಗಳ ಬಗ್ಗೆ ತನಿಖೆಗೆ ಆದೇಶ ಮಾಡಿ ಎಂದು ಸಿದ್ದರಾಮಯ್ಯಗೆ ಪ್ರತಾಪ್ ಸಿಂಹ ಸವಾಲು ಹಾಕಿದರು. ನಿಮ್ಮ ವಿರುದ್ಧ ಅವರು, ಅವರ ವಿರುದ್ಧ ನೀವು ಸಮಯ ಬಂದಾಗ ಮಾತ್ರ ಟೀಕೆ ಮಾಡಿಕೊಳ್ತಿರಾ. ಸಿದ್ದರಾಮಯ್ಯ ಬಗ್ಗೆ ಬಿಜೆಪಿಯ ಕೆಲವು ಅತಿರಥ ಮಹಾರಥರು ಮಾತನಾಡದೇ ಇರಬಹುದು. ಕೆಲವರು ಶಾಮೀಲು ಆಗಿರಬಹುದು. ಆದರೆ ನಮ್ಮ ಬಿಜೆಪಿ ಕಾರ್ಯಕರ್ತರ ಪಡೆ ಇಂತಹ ರಾಜೀ ರಾಜಕಾರಣ ಮಾಡಲ್ಲ. ಚುನಾವಣೆಯಲ್ಲಿ ಬಿಜೆಪಿಯ ಕೆಲವು ಮುಖಂಡರು ಸೋತಿರಬಹುದು. ಆದರೆ ನಮ್ಮ ಕಾರ್ಯಕರ್ತರು ಸೋತಿಲ್ಲ ಎಂದು ಪ್ರತಾಪ್ ಸಿಂಹ ಘರ್ಜಿಸಿದರು. ಬಿಜೆಪಿ ಸರ್ಕಾರದ ಹಗರಣಗಳು ಸೇರಿದಂತೆ ಕಾಂಗ್ರೆಸ್ ಸರ್ಕಾರದ ಹಗರಣಗಳನ್ನು ಸಮಗ್ರ ತನಿಖೆಗೆ ವಹಿಸಿದರೆ, ಕಾಲಿಗೆ ನಮಸ್ಕಾರ ಅಲ್ಲ, ಪಾದಪೂಜೆಯನ್ನೇ ಮಾಡುತ್ತೇನೆ ಎಂದು ಪ್ರತಾಪ್‌ಸಿಂಹ ಹೇಳಿದರು.

ನಿಮ್ಮ ಆಸ್ತಿ ಮಾರಿ ಗ್ಯಾರಂಟಿ ಜಾರಿ ಮಾಡ್ತೀರಾ: ಎಷ್ಟೇ ಕಷ್ಟ ಆದರೂ ಸರಿ ಗ್ಯಾರಂಟಿ ಸ್ಕೀಮ್ ಜಾರಿ ಮಾಡುತ್ತೇವೆ ಅಂತಿರಲ್ಲ, ನಿಮ್ಮ ಆಸ್ತಿ ಪಾಸ್ತಿ ಮಾರಾಟ ಮಾಡಿ ಅಥವಾ ಕೂಡಿಟ್ಟ ಹಣ ಇದಕ್ಕೆ ಕೊಡ್ತಿದ್ದೀರಾ ಎಂದು ಸಿದ್ದರಾಮಯ್ಯ ಅವರನ್ನು ಸಂಸದ ಪ್ರತಾಪ್ ಸಿಂಹ ಪ್ರಶ್ನಿಸಿದರು. ಕಷ್ಟಪಟ್ಟು ಹಣ ಕ್ರೋಢೀಕರಿಸಿ ಗ್ಯಾರಂಟಿ ಸ್ಕೀಮ್ ಕೊಡುತ್ತೇವೆ ಅಂತಾರೆ. ಸಿದ್ದರಾಮಯ್ಯ, ಎಂ.ಬಿ.ಪಾಟೀಲ್, ಕೆ.ಜಾರ್ಜ್ ಅವರೇ ನಿಮ್ಮ ಆಸ್ತಿ ಪಾಸ್ತಿ ಮಾರಾಟ ಮಾಡಿ, ಇಲ್ಲ ನೀವು ಕೂಡಿಟ್ಟ ಹಣ ಕೊಡುತ್ತಿದ್ದೀರಾ! ಗ್ಯಾರಂಟಿ ಸ್ಕೀಮ್‌ಗೆ ಹಣ ಎಲ್ಲಿಂದ ತರುತ್ತೀರಾ ಅಂತ ಕೇಳಿದ್ದೇವೆ. ಆದರೆ ಇದನ್ನು ಕೇಳಿದ್ರೆ ಮನುವಾದಿಗಳು ಅಂತ ತೆಗಳುತ್ತಾರೆ. ಕಾಂಗ್ರೆಸ್‌ನವರಿಗೆ ಹೀಗೆ ಹೇಳುವುದು ರೂಢಿ ಆಗಿದೆ ಎಂದು ಟಾಂಗ್ ಕೊಟ್ಟರು.

ಬಿಜೆಪಿ ಸರ್ಕಾರದಲ್ಲಿ ಕರೆಂಟ್ ಬಿಲ್ ಜಾಸ್ತಿ ಆಗಿದೆ ಅಂತಿರಲ್ಲ, ಅದನ್ನು ನೀವೇ ತಡೆ ಹಿಡಿಯಬಹುದಲ್ಲವೇ? ಬಿಜೆಪಿ ಸರ್ಕಾರ ಜಾರಿ ಮಾಡಿದ್ದ ಗೋ ಹತ್ಯೆ ನಿಷೇಧ ಕಾಯ್ದೆ ಹಾಗೂ ಮತಾಂತರ ನಿಷೇಧ ಕಾಯ್ದೆ ರದ್ದು ಮಾಡುತ್ತೇವೆ ಅಂತೀರಾ. ಹಾಗೆಯೇ ವಿದ್ಯುತ್ ದರ ಹೆಚ್ಚಳ ಆದೇಶ ಕೂಡ ರದ್ದು ಮಾಡಿ. ಈ ಹಕ್ಕು ರಾಜ್ಯ ಸರ್ಕಾರಕ್ಕೆ ಇಲ್ಲವೇ ಎಂದು ಸವಾಲು ಹಾಕಿದರು. ಗುತ್ತಿಗೆದಾರರಿಂದ ಕಮಿಷನ್ ಪಡೆಯಲು ಬಿಜೆಪಿ ಸರ್ಕಾರ ನೀಡಿದ್ದ ಟೆಂಡರ್ ಅನ್ನು ಕಾಂಗ್ರೆಸ್ ಸರ್ಕಾರ ತಡೆ ಹಿಡಿದಿದೆ. ಇವರು ಹಗಲು ದರೋಡೆ ಮಾಡಲು ಹೊರಟಿದ್ದಾರೆ ಎಂದು ಆರೋಪಿಸಿದರು. ಗ್ಯಾರಂಟಿ ಸ್ಕೀಮ್ ಕೊಟ್ಟು ಜನರನ್ನು ಮಂಗ ಮಾಡಿದ್ದಾರೆ. ಇರುಳು ಕಂಡ ಬಾವಿಗೆ ಹಗಲು ಬಿದ್ದಂತೆ ಜನರು ಬೇಸ್ತು ಬಿದ್ದಿದ್ದಾರೆ ಎಂದು ಪ್ರತಾಪ್‌ಸಿಂಹ ಹೇಳಿದರು.

ಉಚಿತ ಪ್ರಯಾಣದ ಹಿನ್ನೆಲೆ

ಸಾರಿಗೆ ಬಸ್‌ಗಳಲ್ಲಿ ನೂಕುನುಗ್ಗಲು: ಅಹಿತಕರ ಘಟನೆ ತಡೆಗೆ ಪೊಲೀಸರು, ಹೋಂ ಗಾರ್ಡ್ಸ್ ನಿಯೋಜನೆ



ಬಸ್ ನಿಲ್ದಾಣಗಳಲ್ಲಿ ಕಳ್ಳತನ, ಗಲಾಟೆ ಇನ್ನಿತರೆ ಅಹಿತಕರ ಘಟನೆಗಳು ನಡೆಯದಂತೆ ಮುಂಜಾಗ್ರತಾ ಕ್ರಮವಾಗಿ, ಕೆಎಸ್‌ಆರ್‌ಟಿಸಿ ಅಧಿಕಾರಿಗಳ ಕೋರಿಕೆ ಮೇರೆಗೆ ಹೆಚ್ಚುವರಿಯಾಗಿ 160 ಮಂದಿ ಹೋಂ ಗಾರ್ಡ್ಸ್ ಹಾಗೂ ಪೊಲೀಸ್ ಸಿಬ್ಬಂದಿ ನಿಂಯೋಜಿಸಲಾಗಿದೆ. ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಬಸ್ ನಿಲ್ದಾಣಗಳಲ್ಲಿ ಭದ್ರತೆ ಅವಶ್ಯವಾಗಿದೆ.
- ರಮೇಶ್ ಬಾನೋತ್,
ಮೈಸೂರು ನಗರ ಪೊಲೀಸ್ ಆಯುಕ್ತ

ಮೈಸೂರು, ಜೂ.13(ಎಂಕೆ)- ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣದ 'ಶಕ್ತಿ' ಯೋಜನೆ ಜಾರಿಯಾದ ಬಳಿಕ ಬಸ್ ನಿಲ್ದಾಣಗಳಲ್ಲಿ ಜನಜಂಗುಳಿ ಉಂಟಾಗಿದ್ದು, ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಎಚ್ಚರ ವಹಿಸಲು ಹೆಚ್ಚುವರಿಯಾಗಿ ಪೊಲೀಸರು, ಗೃಹರಕ್ಷಕ ಸಿಬ್ಬಂದಿ ನಿಯೋಜಿಸಲಾಗಿದೆ.

ಮೈಸೂರಿನ ಗ್ರಾಮಾಂತರ ಹಾಗೂ ನಗರ ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರ ಸಂಖ್ಯೆ ಕಳೆದ ಮೂರು ದಿನಗಳಿಂದ ಹೆಚ್ಚಾಗಿದ್ದು, ಸರಗಳ್ಳತನ, ಮೊಬೈಲ್, ಪರ್ಸ್ ಕಳವು ಹಾಗೂ ಗಲಾಟೆಗಳು ನಡೆಯದಂತೆ ಮುಂಜಾಗ್ರತಾ ಕ್ರಮವಾಗಿ ಹೆಚ್ಚುವರಿ ಭದ್ರತೆ ಒದಗಿಸಲಾಗಿದೆ.

ಬಸ್ ನಿಲ್ದಾಣಗಳ ಒಳಗೆ ಮತ್ತು ಹೊರಗೆ, ನಿಲ್ದಾಣದ ಸಮೀಪದಲ್ಲಿನ ಪ್ರಯಾಣಿಕರ ತಂಗುದಾಣಗಳಲ್ಲಿ ಪೊಲೀಸರು, ಗಸ್ತು ತಿರುಗುತ್ತಿದ್ದು, ಅನುಮಾನಾಸ್ಪದವಾಗಿ ಕಂಡು ಬರುವವರು, ಒಂದೇ ಸ್ಥಳದಲ್ಲಿ ಹೆಚ್ಚು ಕಾಲ ಕುಳಿತಿರುವವರನ್ನು ಮಾತನಾಡಿಸುವ ಮೂಲಕ ಅಹಿತಕರ ಘಟನೆ, ಕಳ್ಳತನ ನಡೆಯದಂತೆ ಎಚ್ಚರಿಕೆ ವಹಿಸಿದ್ದಾರೆ.

160 ಮಂದಿ ಹೋಂ ಗಾರ್ಡ್ಸ್ ನಿಯೋಜನೆ: ಬಸ್ ನಿಲ್ದಾಣಗಳಲ್ಲಿ ಹಾಗೂ ಜನಸಂದಣಿ ಹೆಚ್ಚಾಗಿರುವ ಸ್ಥಳಗಳಲ್ಲಿ ಮುಂಜಾಗ್ರತೆ ವಹಿಸಲು 160 ಮಂದಿ ಮಹಿಳಾ ಹೋಂ ಗಾರ್ಡ್ಸ್ ನಿಯೋಜನೆ ಮಾಡಲಾಗಿದೆ. ಬಸ್ ನಿಲ್ದಾಣಗಳಲ್ಲಿ ಮಹಿಳೆಯರ ಸಂಖ್ಯೆ ಹೆಚ್ಚಾಗಿರುವುದರಿಂದ ಮಹಿಳಾ ಹೋಂ ಗಾರ್ಡ್ಸ್ ನೇಮಕ ಮಾಡಲಾಗಿದೆ. ಅಗತ್ಯಕ್ಕೆ ತಕ್ಕಂತೆ ಹೋಂ ಗಾರ್ಡ್ಸ್‌ಗಳಿಗೆ ಸ್ಥಳ ನಿಗದಿಪಡಿಸಲಾಗಿದೆ.

ಮಹಿಳೆಯರು ಬಸ್ ಹತ್ತುವಾಗ, ಇಳಿಯುವಾಗ ನೂಕುನುಗ್ಗಲು ವಿಪರೀತವಾಗಿದ್ದು, ಕಳ್ಳತನ, ಗಲಾಟೆಯಾಗುವ ಸಾಧ್ಯತೆ ಹೆಚ್ಚಾಗಿದೆ. ಆದ್ದರಿಂದ ಬಸ್ ಹತ್ತುವಾಗ ಮತ್ತು ಇಳಿಯುವಾಗ ಮಹಿಳಾ ಹೋಂ ಗಾರ್ಡ್ಸ್‌ಗಳು ಸ್ಥಳದಲ್ಲೇ ಇದ್ದು, ಎಚ್ಚರವಹಿಸುತ್ತಿದ್ದಾರೆ.

ಮಹಿಳಾ ಸಾಮ್ರಾಜ್ಯ: ಬಸ್ ನಿಲ್ದಾಣಗಳಲ್ಲಿ ಮಹಿಳಾ ಸಾಮ್ರಾಜ್ಯ ನಿರ್ಮಾಣವಾಗಿದೆ ಎತ್ತ ನೋಡಿದರೂ ಮಹಿಳೆಯರ ದಂಡೇ ಕಾಣುತ್ತಿದೆ. ಮೈಸೂರಿನಿಂದ ಹೊರಡುವ ಎಲ್ಲಾ ಮಾರ್ಗಗಳ ಬಸ್‌ಗಳು ಫುಲ್ ರಷ್ ಆಗುತ್ತಿವೆ. 3 ಸಾವಿರ ಕಲೆಕ್ಷನ್ ಆಗುತ್ತಿದ್ದ ಬಸ್‌ಗಳಲ್ಲಿ 6 ಸಾವಿರ ರೂ. ಕಲೆಕ್ಷನ್ ಆಗುತ್ತಿದೆ ಧರ್ಮಸ್ಥಳ, ಕುಕ್ಕೆ ಸುಬ್ರಮ್ಮಣ್ಯ ಸೇರಿದಂತೆ ರಾಜ್ಯದಲ್ಲಿನ ಪ್ರಮುಖ ಯಾತ್ರಾ ಸ್ಥಳಗಳಿಗೆ ಹೋಗುವವರ ಸಂಖ್ಯೆ ಹೆಚ್ಚಾಗಿದೆ ಎಂದು ಮೈಸೂರು ಗ್ರಾಮಾಂತರ ಬಸ್ ನಿಲ್ದಾಣದಲ್ಲಿ ಬಸ್ ಸಂಚಾರ ಕುರಿತು ಪ್ರಯಾಣಿಕರಿಗೆ ಮಾಹಿತಿ ನೀಡುವ ಸಿಬ್ಬಂದಿಯೊಬ್ಬರು 'ಮೈಸೂರು ಮಿತ್ರ'ನಿಗೆ ತಿಳಿಸಿದರು.



ನಾಳೆಯಿಂದ 'ಕದಂಬ ರಂಗವೇದಿಕೆ 60ರ ಸಂಭ್ರಮ'

ನಾಟಕೋತ್ಸವ, ವಿಚಾರ ಸಂಕಿರಣ, ಛಾಯಾಚಿತ್ರ ಪ್ರದರ್ಶನ



ಮೈಸೂರು, ಜೂ.13(ಪಿಎಂ)- ಕದಂಬ ರಂಗವೇದಿಕೆಯು 60 ವರ್ಷ ಪೂರೈಸಿರುವ ಪ್ರಯುಕ್ತ ಜೂ.15ರಿಂದ 18ರವರೆಗೆ ನಾಟಕೋತ್ಸವ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ವೇದಿಕೆ ಅಧ್ಯಕ್ಷ ರಾಜಶೇಖರ ಕದಂಬ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 1963ರಲ್ಲಿ ಗೆಳೆಯರೊಡಗೂಡಿ ಈ ರಂಗವೇದಿಕೆ ಹುಟ್ಟುಹಾಕಿದೆ ಅಂದಿನಿಂದ ಈವರೆಗೆ ವೇದಿಕೆ ಕ್ರಿಯಾಶೀಲವಾಗಿ ತೊಡಗಿಸಿಕೊಂಡಿದೆ. 'ಕದಂಬ ರಂಗವೇದಿಕೆ 60ರ ಸಂಭ್ರಮ' ಶೀರ್ಷಿಕೆಯಡಿ ಕಲಾಮಂದಿರ ಆವರಣದ ಕಿರುರಂಗ ಮಂದಿರದಲ್ಲಿ ನಾಟಕೋತ್ಸವ, ವಿಚಾರ ಸಂಕಿರಣ ಮತ್ತು ಛಾಯಾಚಿತ್ರ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ ಎಂದರು.

ಜೂ.15ರಂದು ಸಂಜೆ 6.30ಕ್ಕೆ ಕಿರುತೆರೆ ನಟ ಬಾಬು ಹಿರಣ್ಣಯ್ಯ 60ರ ಸಂಭ್ರಮಕ್ಕೆ ಚಾಲನೆ ನೀಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ರಂಗಕರ್ಮಿ ಮಂಡ್ಯ ರಮೇಶ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಮಲ್ಲಿಕಾರ್ಜುನಸ್ವಾಮಿ, ಸಹಾಯಕ ನಿರ್ದೇಶಕ ಡಾ.ಎಂ.ಡಿ. ಸುದರ್ಶನ್ ಪಾಲ್ಗೊಳ್ಳಲಿದ್ದು, ರಂಗಕರ್ಮಿ ಪ್ರೊ.ಹೆಚ್.ಎಸ್.ಉಮೇಶ್ ಅಧ್ಯಕ್ಷತೆ ವಹಿಸಲಿದ್ದಾರೆ. ಇದೇ ವೇಳೆ ಕದಂಬ ರಂಗವೇದಿಕೆ ಪಕ್ಷಿನೋಟ, ಛಾಯಾಚಿತ್ರ ಪ್ರದರ್ಶನಕ್ಕೆ ಅಂತಾರಾಷ್ಟ್ರೀಯ ಛಾಯಾಗ್ರಾಹಕ ಎಸ್.ತಿಪ್ಪೇಸ್ವಾಮಿ ಚಾಲನೆ ನೀಡಲಿದ್ದಾರೆ ಎಂದು ತಿಳಿಸಿದರು.

ಜೂ.15ರಿಂದ 18ರವರೆಗೆ ಪ್ರತಿದಿನ ಸಂಜೆ 6.30ಕ್ಕೆ ಕಿರುರಂಗಮಂದಿರದಲ್ಲಿ ನಾಟಕಗಳ ಪ್ರದರ್ಶನ ನಡೆಯಲಿದ್ದು, ಸಾರ್ವಜನಿಕರಿಗೆ ಪ್ರವೇಶ ಉಚಿತವಿದೆ. ಜೂ.15ರಂದು ಚಾಮರಾಜನಗರದ ಶಾಂತಲಾ ತಂಡ ಕಲಾವಿದರು 'ಮೈ ತೆನ್ನು ಫಿರ್ ಮಿಲಾಂಗಿ' ನಾಟಕ ಪ್ರದರ್ಶಿಸಲಿದ್ದಾರೆ. ಜೂ.16ರಂದು ಬೆಂಗಳೂರು ಸೈಡ್‌ವಿಂಗ್ ವತಿಯಿಂದ 'ಸೀತೂ ಮದುವೆ', ಜೂ.17ರಂದು ಯಕ್ಷರಂಗ ಮೈಸೂರು ವತಿಯಿಂದ 'ಕರಿರಾಯನ ಚರಿತೆ' ಹಾಗೂ ಜೂ.18ರಂದು ಕದಂಬ ರಂಗವೇದಿಕೆ ವತಿಯಿಂದ 'ಇರುಳು ಹಗಲಾಗುವುದರೊಳಗೆ' ನಾಟಕಗಳ ಪ್ರದರ್ಶನ ನಡೆಯಲಿದೆ ಎಂದು ಹೇಳಿದರು.

ಜೂ.18ರಂದು ಬೆಳಗ್ಗೆ 11ಕ್ಕೆ ವಿಚಾರ ಸಂಕಿರಣ ನಡೆಯಲಿದ್ದು, 'ಕನ್ನಡ ರಂಗಭೂಮಿಯಲ್ಲಿ ಕದಂಬ ರಂಗವೇದಿಕೆ ಪಾತ್ರ' ಕುರಿತು ರಂಗಕರ್ಮಿ ಎನ್.ಧನಂಜಯ ಹಾಗೂ 'ಕದಂಬ ರಂಗವೇದಿಕೆಯ ಪ್ರದರ್ಶನಗಳು, ರಂಗ ತಂತ್ರಗಳು ಮತ್ತು ಸಂಘಟನೆ' ಕುರಿತು ಪತ್ರಕರ್ತ ಗಣೇಶ ಅಮೀನಗಡ ವಿಷಯ ಮಂಡಿಸಲಿದ್ದಾರೆ ಎಂದರು.

ವೇದಿಕೆ ಉಪಾಧ್ಯಕ್ಷ ಯು.ಎಸ್. ರಾಮಣ್ಣ, ಕಾರ್ಯದರ್ಶಿ ಸುಬ್ಬನರಸಿಂಹ, ಖಜಾಂಚಿ ಡಿ.ತಿಪ್ಪಣ್ಣ ಸದಸ್ಯರಾದ ಡಿ.ಅಶ್ವಥ್, ಸೂರಜ್ ಸುರೇಶ್ ಗೋಷ್ಠಿಯಲ್ಲಿದ್ದರು.

ಉನ್ನತ ಶಿಕ್ಷಣ ಇಲಾಖೆ ತಂತ್ರಾಂಶದಲ್ಲಿ ನ್ಯೂನತೆ; ಶೀಘ್ರವೇ ಸರಿಪಡಿಸಲು ಮನವಿ



ಮೈಸೂರು,ಜೂ.13(ಪಿಎಂ)- ಸಮಗ್ರ ವಿಶ್ವವಿದ್ಯಾನಿಲಯ ಮತ್ತು ಕಾಲೇಜು ನಿರ್ವಹಣಾ ವ್ಯವಸ್ಥೆ (ಯುಯುಸಿಎಂಎಸ್) ತಂತ್ರಾಂಶದಲ್ಲಿ ನ್ಯೂನತೆಗಳಿದ್ದು, ರಾಜ್ಯ ಸರ್ಕಾರ ಇದನ್ನು ಶೀಘ್ರವೇ ಸರಿಪಡಿಸಬೇಕೆಂದು ಮೈಸೂರು ವಿಶ್ವವಿದ್ಯಾನಿಲಯ ವ್ಯಾಪ್ತಿಯ ಬಿ.ಇಡಿ ಕಾಲೇಜುಗಳ ಅಧ್ಯಾಪಕರ ಸಂಘ ಮನವಿ ಮಾಡಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸಂಘದ ಕಾರ್ಯಾಧ್ಯಕ್ಷ ಡಾ.ರಾಜಗೋಪಾಲ್, ಕಳೆದ ಒಂದೂವರೆ ವರ್ಷಗಳ ಹಿಂದೆ 2020-21ನೇ ಸಾಲಿನಿಂದ ರಾಜ್ಯ ಸರ್ಕಾರದ ಉನ್ನತ ಶಿಕ್ಷಣ ಇಲಾಖೆ ಈ ತಂತ್ರಾಂಶ ಅನುಷ್ಠಾನಗೊಳಿಸಿ, ವಿಶ್ವವಿದ್ಯಾನಿಲಯ, ಕಾಲೇಜುಗಳ ಎಲ್ಲಾ ಪ್ರಕ್ರಿಯೆಗಳು ಇದರ ಮೂಲಕ ನಡೆಸಲು ಕ್ರಮ ವಹಿಸಿದೆ. ಆದರೆ ಆರಂಭದಿಂದಲೇ ಈ ತಂತ್ರಾಂಶದಲ್ಲಿ ನ್ಯೂನತೆ ಇರುವ ಕಾರಣ, ವಿಶ್ವವಿದ್ಯಾನಿಲಯಗಳು, ಕಾಲೇಜುಗಳು ಹಾಗೂ ವಿದ್ಯಾರ್ಥಿಗಳು ಅನೇಕ ರೀತಿಯ ಸಮಸ್ಯೆ ಎದುರಿಸುವಂತಾಗಿದೆ ಎಂದು ದೂರಿದರು.

ದಾಖಲಾತಿ, ಪರೀಕ್ಷಾ ಪ್ರಕ್ರಿಯೆ, ಫಲಿತಾಂಶ ಸೇರಿದಂತೆ ಎಲ್ಲಾ ಪ್ರಕ್ರಿಯೆಗಳನ್ನು ಈ ತಂತ್ರಾಂಶದ ಮೂಲಕವೇ ಮಾಡಬೇಕಿದೆ. ಇದರಿಂದ ವಿಶ್ವವಿದ್ಯಾನಿಲಯ ಮಟ್ಟದಲ್ಲಿ ಪರಿಹರಿಸಿಕೊಳ್ಳಬಹುದಾಗಿದ್ದ ಸಮಸ್ಯೆಗಳಿಗೂ ಬೆಂಗಳೂರಿನಲ್ಲಿರುವ ತಂತ್ರಾಂಶದ ಕೇಂದ್ರಕ್ಕೆ ಭೇಟಿ ನೀಡಬೇಕಾದ ಅನಿವಾರ್ಯತೆ ಸೃಷ್ಟಿಯಾಗಿದೆ. ಕೂಡಲೇ ತಂತ್ರಾಂಶದಲ್ಲಿರುವ ನ್ಯೂನತೆಗಳನ್ನು ಸರಿಪಡಿಸಿ ಇದನ್ನು ಬಳಕೆದಾರರ ಸ್ನೇಹಿಯಾಗಿ ಮಾಡಬೇಕು ಎಂದು ಕೋರಿದರು.

ಸಂಘದ ಗೌರವಾಧ್ಯಕ್ಷ ಡಾ.ಮೋಹನ್ ಕುಮಾರ್, ಕಾರ್ಯದರ್ಶಿ ಡಾ.ಆಂಥೋನಿ ಪಾಲ್‌ರಾಜ್, ಜಂಟಿ ಕಾರ್ಯದರ್ಶಿ ಡಾ.ಎಸ್.ಎಲ್.ಸುರೇಶ್, ಪ್ರಾಧ್ಯಾಪಕರಾದ ಡಾ.ಮಲ್ಲಿಕಾರ್ಜುನ, ಶಿವಕುಮಾರ್ ಗೋಷ್ಠಿಯಲ್ಲಿದ್ದರು.

ಎಸ್.ಸಿ.ಬಸವರಾಜುರಿಗೆ ಎಂಎಲ್‌ಸಿ ಸ್ಥಾನ ನೀಡಿ

ರಾಜ್ಯ ನಾಯಕರ ಹಿತರಕ್ಷಣಾ ವೇದಿಕೆ ಮನವಿ



ಮೈಸೂರು,ಜೂ.13(ಪಿಎಂ)- ನಾಯಕ ಸಮುದಾಯಕ್ಕೆ ಸೇರಿದ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಸ್.ಸಿ.ಬಸವರಾಜು ಅವರಿಗೆ ವಿಧಾನಪರಿಷತ್ ಸದಸ್ಯ ಸ್ಥಾನ ನೀಡಬೇಕೆಂದು ಕರ್ನಾಟಕ ರಾಜ್ಯ ನಾಯಕರ ಹಿತರಕ್ಷಣಾ ವೇದಿಕೆ ಮನವಿ ಮಾಡಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ವೇದಿಕೆ ರಾಜ್ಯಾಧ್ಯಕ್ಷ ದ್ಯಾವಪ್ಪ ನಾಯಕ, ಈ ಬಾರಿಯ ವಿಧಾನಸಭಾ ಚುನಾವಣೆಯಲ್ಲಿ ನಮ್ಮ ಸಮುದಾಯದ 15 ಮಂದಿ ಕಾಂಗ್ರೆಸ್ ಪಕ್ಷದಿಂದ ಶಾಸಕರಾಗಿ ಆಯ್ಕೆಯಾಗಿದ್ದು, ಸಮುದಾಯದ ಶೇ.63ರಷ್ಟು ಮತದಾರರು ಈ ಬಾರಿ ಕಾಂಗ್ರೆಸ್‌ಗೆ ಮತ ನೀಡಿ ರಾಜ್ಯದಲ್ಲಿ ಅಧಿಕಾರಕ್ಕೆ ಬರಲು ಪ್ರಮುಖ ಪಾತ್ರ ವಹಿಸಿದ್ದಾರೆ ಎಂದರು.

ಸಮುದಾಯದ ಹಿರಿಯ ಮುಖಂಡ ಎಸ್.ಸಿ.ಬಸವರಾಜು, ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷರು, ಮೂರು ಬಾರಿ ಜಿಪಂ ಸದಸ್ಯರು, ಒಂದು ಅವಧಿಗೆ ಜಿಪಂ ಅಧ್ಯಕ್ಷರಾಗಿ ಈ ಹಿಂದೆ ಸೇವೆ ಸಲ್ಲಿಸಿದ್ದಾರೆ. ಉಡುಪಿ ಮತ್ತು ಚಾಮರಾಜನಗರ ಜಿಲ್ಲಾ ಕಾಂಗ್ರೆಸ್ ಉಸ್ತುವಾರಿಯಾಗಿಯೂ ಪಕ್ಷ ಸಂಘಟನೆಗೆ ಶ್ರಮಿಸಿದ್ದಾರೆ. ಸುಮಾರು 35ಕ್ಕೂ ಅಧಿಕ ವರ್ಷಗಳಿಂದ ಸಕ್ರಿಯ ರಾಜಕಾರಣದಲ್ಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯನವರ ಬೆಂಬಲಿಗರಾಗಿ ನಿಷ್ಠೆಯಿಂದ ಕೆಲಸ ಮಾಡುತ್ತಿದ್ದಾರೆ ಎಂದು ಹೇಳಿದರು.

ಮೈಸೂರು ಭಾಗದಲ್ಲಿ ಈ ಬಾರಿಯ ಚುನಾವಣೆಯಲ್ಲಿ ಕಾಂಗ್ರೆಸ್ ಹೆಚ್ಚು ಸ್ಥಾನಗಳಿಸಲು ಎಸ್.ಸಿ.ಬಸವರಾಜು ಅವರೂ ಶ್ರಮಿಸಿದ್ದಾರೆ. ಇವರಿಗೆ ಪರಿಷತ್ ಸದಸ್ಯ ಸ್ಥಾನ ಕಲ್ಪಿಸಿದರೆ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಮೈಸೂರು, ಚಾಮರಾಜನಗರ ಜಿಲ್ಲೆಗಳಲ್ಲಿ ನಾಯಕ ಸಮುದಾಯ ಹೆಚ್ಚಿನ ಸಂಖ್ಯೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಲಿದೆ. ಜೊತೆಗೆ ನಿಗಮ ಮಂಡಳಿಗಳಲ್ಲಿ ಈ ಭಾಗದ ಸಮುದಾಯದವರಿಗೆ ಹೆಚ್ಚಿನ ಪ್ರಾತಿನಿಧ್ಯ ನೀಡಬೇಕೆಂದು ಕೋರಿದರು.

ವೇದಿಕೆ ಉಪಾಧ್ಯಕ್ಷ ಎಸ್.ಸಿದ್ದಯ್ಯ, ಸಮುದಾಯ ಮುಖಂಡರಾದ ಎಂ.ಎಸ್. ರಮೇಶ್, ಮಂಜುನಾಥ್, ಲೋಕೇಶ್ ನಾಯಕ, ಕೆಂಚನಾಯಕ ಗೋಷ್ಠಿಯಲ್ಲಿದ್ದರು.

ಇಂದಿನಿಂದ ಮೈಸೂರಲ್ಲಿ ಹೈ ಲೈಫ್ ಎಕ್ಸಿಬಿಷನ್


ಮೈಸೂರು,ಜೂ.13(ಪಿಎಂ)- ಹೈ ಲೈಫ್ ಎಕ್ಸಿಬಿಷನ್ಸ್ ಕಂಪನಿ ವತಿಯಿಂದ ಮೈಸೂರಿನ ರ‍್ಯಾಡಿಸನ್ ಬ್ಲೂ ಪ್ಲಾಜಾ ಹೋಟೆಲ್‌ನಲ್ಲಿ ಜೂ.14 ಮತ್ತು 15ರಂದು ಉಡುಪು,





ಆಭರಣ ಸೇರಿದಂತೆ ನವನವೀನ ಜೀವನ ಶೈಲಿಯ ಉತ್ಪನ್ನಗಳ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಆಯೋಜಿಸಲಾಗಿದೆ ಎಂದು ಕಂಪನಿಯ ವ್ಯವಸ್ಥಾಪಕ ನಿರ್ದೇಶಕ ಡೊಮಿನಿಕ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 'ಹೈ ಲೈಫ್ ಎಕ್ಸಿಬಿಷನ್ಸ್' ಸಿಗ್ನೇಚರ್ ಫ್ಯಾಷನ್, ಲೈಫ್‌ಸ್ಟೈಲ್ ಮತ್ತು ಐಷಾರಾಮಿ ಪ್ರದರ್ಶನದ ಭಾರತದ ಅತಿ ದೊಡ್ಡ ಕಂಪನಿಯಾಗಿದೆ. ಈ ಎರಡು ದಿನಗಳ ಪ್ರದರ್ಶನಕ್ಕೆ ಬೆಳಗ್ಗೆ 10ರಿಂದ ರಾತ್ರಿ 9ರವರೆಗೆ ಗ್ರಾಹಕರು ಭೇಟಿ ನೀಡಬಹುದು. ಪ್ರವೇಶ ಉಚಿತವಿದೆ ಎಂದರು.



ಪ್ರದರ್ಶನದಲ್ಲಿ ಒಂದೇ ಸೂರಿನಡಿ ಗ್ರಾಹಕರಿಗೆ ವಿಭಿನ್ನ ಬ್ರ್ಯಾಂಡೆಡ್ ಉಡುಪುಗಳು, ನವೀನ ಮಾದರಿಯ ಆಕರ್ಷಕ ಆಭರಣಗಳು, ಗೃಹ ಬಳಕೆ ಸಾಮಗ್ರಿಗಳು ದೊರೆಯಲಿವೆ ಬೆರಗುಗೊಳಿಸುವಂತಹ ಉಡುಗೆ ತೊಡುಗೆಗಳು ಲಭ್ಯವಿರಲಿವೆ ಎಂದು ತಿಳಿಸಿದರು.

ಕಂಪನಿ ಸಂಯೋಜಕಿ ಸೋಮಿಕಾ ಮಾತನಾಡಿ, ಪ್ರದರ್ಶನದಲ್ಲಿ ಹೊಸ ಟ್ರೆಂಡ್, ಬ್ರ್ಯಾಂಡ್‌ಗಳಿಂದ ಕೂಡಿದ ಉತ್ಪನ್ನಗಳನ್ನು ದೊರೆಯಲಿವೆ ಜೂ.14ರಂದು ಬೆಳಗ್ಗೆ 10.30ಕ್ಕೆ ಪ್ರದರ್ಶನದ ಉದ್ಘಾಟನಾ ಸಮಾರಂಭ ಹಮ್ಮಿಕೊಂಡಿದ್ದು, ಉದ್ಯಮಿ ಛಾಯಾ ನಂಜಪ್ಪ ಸೇರಿದಂತೆ ಮೊದಲಾದ ಗಣ್ಯರು ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದು ಹೇಳಿದರು. ಕಂಪನಿಯ ಶ್ರೀಕಾಂತ್ ಗೋಷ್ಠಿಯಲ್ಲಿದ್ದರು.

ಎಲ್ಲಾ ವಯಸ್ಸಿಗರಿಗೂ ಆಧ್ಯಾತ್ಮಿಕ ಶಿಕ್ಷಣ, ಧ್ಯಾನ ಅವಶ್ಯಕ

● ಶಾಸಕ ಕೆ.ಹರೀಶ್ ಗೌಡ ಅಭಿಮತ ● ಜಯಲಕ್ಷ್ಮಿಪುರಂನಲ್ಲಿ ಪ್ರಜಾಪಿತ ಬ್ರಹ್ಮಾಕುಮಾರಿ ರಾಜಯೋಗ ಶಿಕ್ಷಣ ಸೇವಾ ಕೇಂದ್ರ ಪ್ರಾರಂಭ

ಮೈಸೂರು, ಜೂ. 13- ಹಿಂದಿನ ಶತಮಾನಗಳಲ್ಲಿ ಆಧ್ಯಾತ್ಮಿಕ ಜ್ಞಾನ ಧ್ಯಾನ ಇತ್ಯಾದಿಗಳು 60 ವರ್ಷ ಮೇಲ್ಪಟ್ಟವರಿಗೆ ಎಂಬ ಮಾತಿತ್ತು. ಆದರೆ ಇಂದಿನ ದಿನಗಳು ಹಾಗಲ್ಲ. ಯಾವುದೇ ಮತ-ಧರ್ಮ, ಪಂಥ, ಪಂಗಡ ವರ್ಗದ ಎಲ್ಲಾ ವಯಸ್ಸಿನವರಿಗೂ ಆಧ್ಯಾತ್ಮಿಕ ಜ್ಞಾನ ಧ್ಯಾನಗಳ ಅವಶ್ಯಕತೆ ಇದೆ ಎಂದು ಚಾಮರಾಜ ಕ್ಷೇತ್ರದ ನೂತನ ಶಾಸಕರಾದ ಕೆ.ಹರೀಶ್‌ಗೌಡ ಅಭಿಪ್ರಾಯಪಟ್ಟರು.

ಅವರು ಅಂತಾರಾಷ್ಟ್ರೀಯ ಆಧ್ಯಾತ್ಮಿಕ ಸಂಸ್ಥೆ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ಯಾದವಗಿರಿ ಸೇವಾ ಕೇಂದ್ರದ ವತಿಯಿಂದ ಜಯಲಕ್ಷ್ಮಿಪುರಂ ಬಡಾವಣೆಯಲ್ಲಿ ನೂತನವಾಗಿ ತೆರೆಯಲಾಗಿರುವ ರಾಜಯೋಗ ಶಿಕ್ಷಣ ಸೇವಾ ಕೇಂದ್ರವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಇಲ್ಲಿ ಕಲಿಸುವ ರಾಜಯೋಗ ಶಿಕ್ಷಣವು ಮನುಷ್ಯನ ಮನಸ್ಸಿನಲ್ಲಿ ನಡೆಯುವ ನಕಾರಾತ್ಮಕತೆಯನ್ನು ಹೋಗಲಾಡಿಸಿ ಸಕಾರಾತ್ಮಕ ಚಿಂತನೆಯನ್ನು ಅಳವಡಿಸಿಕೊಳ್ಳುವ ವಿಧಿ-ವಿಧಾನವನ್ನು ಉಚಿತವಾಗಿ ಕಲಿಸುತ್ತಿರುವುದು ಶ್ಲಾಘನೀಯ ಎಂದರು.

ಶಿವ ಧ್ವಜಾರೋಹಣ ಮಾಡಿ ಮಾತನಾಡಿದ ಸೋಮೇಶ್ವರನಾಥ ಸ್ವಾಮೀಜಿ, ಹೃದಯದ ಶ್ರೀಮಂತಿಕೆ ಹೆಚ್ಚಿಸಿಕೊಳ್ಳಲು ಇಂತಹ ಸೇವಾಕೇಂದ್ರಗಳ



ಅವಶ್ಯಕತೆ ಇದೆ. ಇಲ್ಲಿ ಬೋಧಿಸುವ ವಿಷಯಗಳು ಶಾಶ್ವತವಾದದ್ದು, ಅನಂತವಾದದ್ದು, ಆನಂದಮಯವಾದದ್ದು, ನಿತ್ಯವಾದದ್ದು. ಅಂತಹ ಆನಂದವನ್ನು, ಸಂತೃಪ್ತಿಯನ್ನು, ಶಾಶ್ವತವನ್ನು ಕೊಡುವಂತಹದ್ದು ಯಾವುದು ಎಂದರೆ ಮನಸ್ಸಾಗಿದೆ. ಅಂತಹ ಮನಸ್ಸನ್ನು ಹತೋಟಿಯಲ್ಲಿಡುವ ತಂತ್ರವನ್ನು ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯವು ಜನರಿಗೆ ಬೋಧಿಸಲು ಉಚಿತ ಸೇವಾ ಕೇಂದ್ರವನ್ನು ಲೋಕಾರ್ಪಣೆಗೊಳಿಸಿದೆ ಎಂದರು.

ಸಾನ್ನಿಧ್ಯವನ್ನು ವಹಿಸಿ ಮಾತನಾಡಿದ ರಾಜಯೋಗಿನಿ ಬ್ರಹ್ಮಾಕುಮಾರಿ ಲಕ್ಷ್ಮೀಜೀ, ಈಶ್ವರೀಯ ವಿಶ್ವವಿದ್ಯಾಲಯ ಮೈಸೂರಿನಲ್ಲಿ ಆರಂಭವಾಗಿ 55 ವರ್ಷಗಳಾಗಿವೆ. ಬೇರೆ ಬೇರೆ ಜಿಲ್ಲೆಗಳಲ್ಲಿ ಕೇಂದ್ರಗಳಿವೆ. ಕೇರಳದಲ್ಲಿ ತೆರೆದಿದ್ದರೂ ಮೈಸೂರಲ್ಲಿ ಮಹಾರಾಜರ ಕಾಲದಲ್ಲೇ ಇದು ಸ್ಥಾಪನೆಯಾಗಿ ಆನಂತರ ಮೊಹಲ್ಲಾಗಳಲ್ಲಿ ಆರಂಭವಾಗಿ ಜನರ ಮನಸ್ಸಿನ ನೆಮ್ಮದಿಗಾಗಿ ಜ್ಞಾನ, ಧ್ಯಾನಗಳನ್ನು ಕಲಿಸಲಾಗುತ್ತಿದೆ ಎಂದರು.

ಅತಿಥಿಗಳಾಗಿ ಆಗಮಿಸಿದ್ದ ಕೈಗಾರಿಕೋದ್ಯಮಿ ಜಗನ್ನಾಥ ಶಣೈ, ವಿಜಯಲಕ್ಷ್ಮಿ ಭಾಗವತ್, ಡಾ. ಶಿಲ್ಪ ಅವರೇಬೀಳ್‌ರವರು ಮಾತನಾಡಿದರು. ಬಿ.ಕೆ. ರಂಗನಾಥ ಶಾಸ್ತ್ರೀಜಿ ಮಾತನಾಡಿ, ಸಾರ್ವಜನಿಕರ ಹಿತದೃಷ್ಟಿಯಿಂದ ಈ ಸೇವಾ ಕೇಂದ್ರದಲ್ಲಿ ಪ್ರತಿನಿತ್ಯ ಬೆಳಗ್ಗೆ 9 ರಿಂದ 12, ಸಂಜೆ 5 ರಿಂದ 8ರವರೆಗೆ ಎರಡೆರಡು ತಂಡಗಳಲ್ಲಿ ಉಚಿತ ರಾಜಯೋಗ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ. ಇದರ ಅನುಕೂಲ ಪಡೆದುಕೊಳ್ಳುವಂತೆ ಕರೆ ನೀಡಿದರು. ಕಾರ್ಯಕ್ರಮಕ್ಕೆ ಮೊದಲು ಬಡಾವಣೆಯ ರಾಜಬೀದಿಗಳಲ್ಲಿ ಶಿವ ಧ್ವಜದೊಂದಿಗೆ ಶ್ವೇತ ವಸ್ತ್ರಧಾರಿ ಬ್ರಹ್ಮಾಕುಮಾರ, ಬ್ರಹ್ಮಾಕುಮಾರಿಯರು ಪೂರ್ಣಕುಂಭದೊಂದಿಗೆ ಮಂಗಳವಾದ್ಯ ಶಿವಲಿಂಗದ ಮೆರವಣಿಗೆಯೊಂದಿಗೆ ಶಾಂತಿ ಶೋಭಾ ಯಾತ್ರೆ ನಡೆಸಿದರು.

ಮೈಸೂರು ಮಿತ್ರ

ರೋಜ್‌ಗಾರ್ ಮೇಳ ಬಿಜೆಪಿ ಸರ್ಕಾರದ ಹೊಸ ಹೆಗ್ಗುರುತು

●ಪ್ರಧಾನಿ ಮೋದಿ ಬಣ್ಣನೆ ●ದೇಶಾದ್ಯಂತ 70 ಸಾವಿರ ಮಂದಿಗೆ ನೇಮಕಾತಿ ಪತ್ರ ವಿತರಣೆ



ನವದೆಹಲಿ: ರೋಜ್‌ಗಾರ್ ಮೇಳವು ಬಿಜೆಪಿ ಸರ್ಕಾರದ ಹೊಸ ಹೆಗ್ಗುರುತಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಬಣ್ಣಿಸಿದ್ದಾರೆ.

ಸರ್ಕಾರದ ವಿವಿಧ ಇಲಾಖೆಗಳಿಗೆ ಆಯ್ಕೆಯಾಗಿರುವ 70 ಸಾವಿರ ಮಂದಿಗೆ ಮಂಗಳವಾರ ನೇಮಕಾತಿ ಪತ್ರಗಳನ್ನು ವಿತರಿಸಿ ಮಾತನಾಡಿದ ಅವರು, ಸರ್ಕಾರವು ಮೇಳದ ಮೂಲಕ ಯುವಜನರ ಭವಿಷ್ಯವನ್ನು ಉಜ್ವಲಗೊಳಿಸಲು ಮುಂದಾಗಿದೆ ಎಂದು ಪ್ರತಿಪಾದಿಸಿದರು.

ದೇಶದಲ್ಲಿ ವಂಶಪಾರಂಪರ್ಯ ಆಡಳಿತ ನಡೆಸಿದ ರಾಜಕೀಯ ಪಕ್ಷಗಳು ಸರ್ಕಾರಿ ನೇಮಕಾತಿಗಳಲ್ಲಿ ಸ್ವಜನಪಕ್ಷಪಾತ ಮತ್ತು ಭ್ರಷ್ಟಾಚಾರಕ್ಕೆ ಒತ್ತು ನೀಡಿವೆ. ವಿವಿಧ ಹುದ್ದೆಗಳಿಗೆ ದರ ಪಟ್ಟಿ ನಿಗದಿಪಡಿಸಿ, ಹಣವನ್ನು ಲೂಟಿ ಮಾಡಿವೆ. ಸರ್ಕಾರಿ ಹುದ್ದೆಯ ನಿರೀಕ್ಷೆಯಲ್ಲಿದ್ದ ಕೋಟ್ಯಾಂತರ ಯುವಜನರಿಗೆ ದ್ರೋಹ ಬಗೆದಿವೆ ಎಂದು ಟೀಕಿಸಿದರು.

ಹಿಂದೆ ನೇಮಕಾತಿ ಪ್ರಕ್ರಿಯೆಯು ಒಂದೂವರೆ ವರ್ಷ ಕಳೆದರೂ ಮುಗಿಯುತ್ತಿರಲಿಲ್ಲ. ಈಗ ಕೆಲವೇ ತಿಂಗಳಿನಲ್ಲಿ ಪೂರ್ಣಗೊಳ್ಳುತ್ತಿದೆ. 2014ರ ಬಳಿಕ ನೇಮಕಾತಿಯಲ್ಲಿ ಪಾರದರ್ಶಕತೆ ತರಲಾಗಿದೆ. ಹಾಗಾಗಿ, ಸ್ವಜನಪಕ್ಷಪಾತಕ್ಕೆ ಅವಕಾಶ ಇಲ್ಲದಂತಾಗಿದೆ ಎಂದರು. ರಾಜಕೀಯ ಭ್ರಷ್ಟಾಚಾರ, ಸರ್ಕಾರಿ ಯೋಜನೆಗಳಲ್ಲಿ ಸೋರಿಕೆ, ಸಾರ್ವಜನಿಕ ಹಣದ ದುರ್ಬಳಕೆಯೇ ಈ ಹಿಂದೆ ಆಡಳಿತ ನಡೆಸಿದ ಸರ್ಕಾರಗಳ ದೊಡ್ಡ ಸಾಧನೆಯಾಗಿದೆ ಎಂದು ವ್ಯಂಗ್ಯವಾಡಿದರು.


ಪ್ರಧಾನಿ ಹೇಳಿಕೆಗೆ ಕಾಂಗ್ರೆಸ್ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ್ದು, ದೇಶದ ವಿವಿಧ ವಲಯಗಳಲ್ಲಿ ಉದ್ಯೋಗ ನಾಶಪಡಿಸಿದವರೇ ಈಗ ಮೇಳ ಆಯೋಜಿಸುತ್ತಿರುವುದು ತಮಾಷೆಯ ಸಂಗತಿ. ಇದು ಬಿಜೆಪಿಯ ಅಸ್ತಿತ್ವಕ್ಕಾಗಿ ಪ್ರಧಾನಿ ಮೋದಿ ನಡೆಸುತ್ತಿರುವ ಪ್ರಚಾರದ ಗಿಮಿಕ್ ಆಗಿದೆ ಎಂದು ಟೀಕಾಪ್ರಹಾರ ನಡೆಸಿದೆ. ಮೇಳದ ಮೂಲಕ ಹೊಸ ಉದ್ಯೋಗ ಸೃಷ್ಟಿಸುತ್ತಿಲ್ಲ ಎಂಬುದು ಅರಿವಾಗಿದೆ. ಇದು ಸರ್ಕಾರದ ಅಸ್ತಿತ್ವವನ್ನು ಸಾಬೀತುಪಡಿಸುವ ಪ್ರಯತ್ನವಾಗಿದೆ. ಈಗಾಗಲೇ ಆಯ್ಕೆಯಾಗಿರುವ ಸಂಭಾವ್ಯ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರ ನೀಡುವ ಪ್ರಕ್ರಿಯೆ ನಡೆಯುತ್ತಿದೆ ಅಷ್ಟೇ ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ಜೈರಾಂ ರಮೇಶ್ ಟ್ವೀಟ್ ಮೂಲಕ ವ್ಯಂಗ್ಯವಾಡಿದ್ದಾರೆ. ಒಂಬತ್ತು ವರ್ಷಗಳ ಅಧಿಕಾರ ಅವಧಿಯಲ್ಲಿ ಹೊಸ ಉದ್ಯೋಗಗಳನ್ನು ಸೃಷ್ಟಿಸುವಲ್ಲಿ ಮೋದಿ ಸಂಪೂರ್ಣ ವಿಫಲರಾಗಿದ್ದಾರೆ. ಮತ್ತೊಂದೆಡೆ ಸಾರ್ವಜನಿಕ ವಲಯಗಳಲ್ಲಿನ ಉದ್ಯೋಗಗಳನ್ನು ಕಡಿತಗೊಳಿಸಿದ್ದಾರೆ ಎಂದು ಟೀಕಿಸಿದ್ದಾರೆ.

ದೇಶದ ಕೆಲವು ಪ್ರತಿಷ್ಠಿತ ಶಿಕ್ಷಣ ಸಂಸ್ಥೆಗಳು ಅರ್ಹರಿಗೆ ನೇಮಕಾತಿ ಪತ್ರ ನೀಡುತ್ತವೆ. ಇದನ್ನೂ ಕೇಂದ್ರ ಸರ್ಕಾರ ಸೃಷ್ಟಿಸಿರುವ ಉದ್ಯೋಗಗಳೆಂದು ಬಿಂಬಿಸಲಾಗುತ್ತಿದೆ. ಇದರ ಮೇಲೂ ಸ್ವಯಂ ಘೋಷಿತ ವಿಶ್ವಗುರುವಿನ ಪ್ರಭಾವವಿದೆ ಎಂದು ಲೇವಡಿ ಮಾಡಿದ್ದಾರೆ.

ಕಾಂಗ್ರೆಸ್ ಸರ್ಕಾರ ಜವಾಬ್ದಾರಿ ಇಲ್ಲದ ಸರ್ಕಾರ

ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ವಾಗ್ದಾಳಿ

ಹುಬ್ಬಳ್ಳಿ: ರಾಜ್ಯದಲ್ಲಿ ಆಡಳಿತದಲ್ಲಿರುವ ಕಾಂಗ್ರೆಸ್ ಸರ್ಕಾರ ಜವಾಬ್ದಾರಿ ಇಲ್ಲದ ಸರ್ಕಾರ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ವಾಗ್ದಾಳಿ ನಡೆಸಿದ್ದಾರೆ. ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಅಧಿಕಾರಕ್ಕೆ ಬಂದು ಒಂದು ತಿಂಗಳು ಹತ್ತಿರ ಬಂದಿದೆ. ರಾಜ್ಯಕ್ಕೆ ನೈಸರ್ಗಿಕ ಆಪತ್ತು ಬರುತ್ತಿವೆ. ಮಾನ್ಸೂನ್ ಮಳೆ ತಡವಾಗಿದ್ದರಿಂದ ಬಿತ್ತನೆ ಕೂಡ ತಡವಾಗಿ ಆಗುತ್ತಿದೆ. ಮಾನ್ಸೂನ್ ಮಳೆ ಸಕಾಲಕ್ಕೆ ಬಾರದಿದ್ದರೆ ರೈತರಿಗೆ ಬಹಳಷ್ಟು ಕಷ್ಟವಾಗುತ್ತದೆ. ಮತ್ತೊಂದು ಕಡೆ ಭೀಕರ ಚಂಡಮಾರುತದ ಸೂಚನೆ ಸಹ ಬರುತ್ತಿವೆ. ಹೀಗಿದ್ದರೂ ಸಿಎಂ ಇವುಗಳನ್ನು ನಿಭಾಯಿಸಲು ಯಾವುದೇ ರೀತಿ ಸನ್ನದ್ಧವಾಗಿಲ್ಲ ಎಂದರು.



ರಾಜ್ಯದಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ. ರಾಜ್ಯದಲ್ಲಿರುವ ಡ್ಯಾಂ ಗಳ ನೀರು ಅತ್ಯಂತ ಕೆಳಮಟ್ಟದಲ್ಲಿದೆ. ಆದರೆ ನಾನು ಇಷ್ಟು ಬೇಗ ರಾಜ್ಯದಲ್ಲಿ ಬರಗಾಲ ಬರಲಿದೆ ಎಂದು ಹೇಳುವುದಿಲ್ಲ. ಆದರೆ ರಾಜ್ಯ ಸರ್ಕಾರ ಸಮರ್ಪಕವಾಗಿ ಯೋಜನೆಗಳನ್ನು ಮಾಡಿಕೊಳ್ಳಬೇಕು. ತಾಲೂಕು ಮಟ್ಟದಲ್ಲಿ ಟಾಸ್ಕ್ ಫೋರ್ಸ್ ರಚನೆ ಮಾಡಿ ಅದರಲ್ಲಿ ಅಧಿಕಾರಿಗಳು, ಸ್ಥಳೀಯ ಜನಪ್ರತಿನಿಧಿಗಳನ್ನು ಸೇರಿಸಿ, ಅವರಿಂದ ಸಹಕಾರ ಪಡೆಯಬೇಕು. ಈ ಕೂಡಲೇ 100 ಕೋಟಿ ರೂ. ಅನುದಾನವನ್ನು ಬಿಡುಗಡೆ ಮಾಡಬೇಕು. ಎನ್‌ಡಿಆರ್‌ಎಫ್ ತಂಡಗಳನ್ನು ಚುರುಕುಗೊಳಸಬೇಕು. ನಗರ ಪ್ರದೇಶಗಳಲ್ಲಿಯೂ ಸಹ ಕುಡಿಯುವ ನೀರಿನ ಸಮಸ್ಯೆಯಿದೆ. ಈ ಸರ್ಕಾರ ಜನರಿಗೆ ಸಹಾಯಕವಲ್ಲದ ಸರ್ಕಾರವಾಗಿದೆ ಎಂದರು. ಗ್ಯಾರಂಟಿ ಬಗ್ಗೆ ಕಾದುನೋಡುವ ತಂತ್ರ ನಮ್ಮದಾಗಿದೆ. ಉಚಿತ ಬಸ್ ಪಾಸ್ ಆರಂಭದ ಶೂರತ್ವವನ್ನು ಸರ್ಕಾರ ತೋರಿಸುತ್ತಿದೆ. ಗ್ಯಾರಂಟಿ ರೂಪದಲ್ಲಿ ತಾಯಿಯಂದಿರಿಗೆ ಉಚಿತ ನೀಡುವ ಸಲುವಾಗಿ ಅವರಿಗೆ ಸಮರ್ಪಕ ಪ್ರಯಾಣ ಇಲ್ಲದಂತೆ ಆಗುತ್ತಿದೆ. ರಾಜ್ಯದಲ್ಲಿ ಬಸ್ ಗಳ ಸಮಸ್ಯೆ ಆಗುತ್ತಿದೆ. ಈಗಾಗಲೇ ನಾವು ಡೀಸೆಲ್ ಅನುದಾನ ಬಿಡುಗಡೆ ಮಾಡಿದ್ದೇವೆ. ಅದನ್ನು ಮುಂದುವರಿಕೆ ಮಾಡಬೇಕು. ಗ್ಯಾರಂಟಿಗಳಿಗೆ ಹಣಕಾಸಿನ ಹೊಂದಾಣಿಕೆ ಬಗ್ಗೆ ಸರ್ಕಾರ ಸ್ಪಷ್ಟವಾಗಿ ಹೇಳುತ್ತಿಲ್ಲ. ಹಣಕಾಸಿನ ವಿಚಾರದಲ್ಲಿ ಜನರನ್ನು ಕತ್ತಲಲ್ಲಿ ಇಡಲು ಸರ್ಕಾರ ಮುಂದಾಗಿದೆ. ಗ್ಯಾರಂಟಿ ವಿಚಾರದಲ್ಲಿ ಹಣಕಾಸಿನ ಬಗ್ಗೆ ಮಾಹಿತಿ ಪಡೆಯುವುದು ಪ್ರತಿಯೊಂದು ಕನ್ನಡಿಗನ ಹಕ್ಕು. ಇದು ಒಂದು ಕೈಯಲ್ಲಿ ತೆಗೆದುಕೊಂಡು ಮತ್ತೊಂದು ಕೈಯಲ್ಲಿ ಕೊಡುವಂತಾಗಿದೆ ಎಂದರು.

ವಿದ್ಯುತ್ ದರ ಏರಿಕೆ ನಾವು ಮಾಡಿಲ್ಲ

ನಾವು ವಿದ್ಯುತ್ ದರ ಏರಿಕೆ ಅನುಷ್ಠಾನ ತಂದಿಲ್ಲ. ವಿದ್ಯುತ್ ದರ ಏರಿಕೆ ಜಾರಿಗೆ ಮಾಡಿಲ್ಲ. ದರ ಏರಿಕೆ ವರದಿಯನ್ನು ನಾವು ಒಪ್ಪಿರಲಿಲ್ಲ. ಕಾಂಗ್ರೆಸ್ ಅಧಿಕಾರಕ್ಕೆ ಬಂದ ಮೇಲೆ ವಿದ್ಯುತ್ ದರ ಏರಿಕೆಯ ಪ್ರಸ್ತಾವನೆಗೆ ಒಪ್ಪಿಗೆ ನೀಡಿದೆ. ಇದರಿಂದಾಗಿ ದರ ಜಾಸ್ತಿ ಆಗಿದೆ ಎಂದು ರಾಜ್ಯ ಸರ್ಕಾರದ ನಡೆಯ ವಿರುದ್ಧ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅಸಮಾಧಾನ ಹೊರಹಾಕಿದರು.

ಅಧಿವೇಶನದ ವೇಳೆ ವಿಪಕ್ಷ ನಾಯಕನ ಆಯ್ಕೆ: ನಾನು ವಿಪಕ್ಷ ಸ್ಥಾನದ ಆಕಾಂಕ್ಷಿಯ ಪ್ರಶ್ನೆಯೇ ಇಲ್ಲ. ಈ ಸ್ಥಿತಿಯಲ್ಲಿ ವಿಳಂಬವಾಗುತ್ತಿಲ್ಲ. ಅಧಿವೇಶನ ಕರೆದ ಕೂಡಲೇ ವಿರೋಧ ಪಕ್ಷದ ನಾಯಕರ ಆಯ್ಕೆ ನಡೆಯುತ್ತದೆ. ಪ್ರತಿ ಬಾರಿ ನಡೆಯುವ ಸಂಪ್ರದಾಯ ಇದಾಗಿದೆ ಎಂದರು.

ಜನರು ಕೊಟ್ಟ ತೀರ್ಪು ಒಪ್ಪಿಕೊಂಡಿದ್ದೇವೆ: ಸೋಲಿನ ಬಗ್ಗೆ ರಾಷ್ಟ್ರೀಯ ನಾಯಕರು ಬೇಸರ ಮಾಡಿಕೊಳ್ಳುವ ಪ್ರಶ್ನೆಯಿಲ್ಲ. ಜನ ಕೊಟ್ಟ ತೀರ್ಪು ನಾವು ಒಪ್ಪಿಕೊಂಡಿದ್ದೇವೆ. ನಾನೇ ಸೋಲಿನ ನೈತಿಕ ಹೊಣೆ ಹೊತ್ತಿದ್ದೇನೆ. ಎಲ್ಲರ ಸೋಲಿಗೆ ನಾನೇ ಹೊಣೆ ಅಂದ ಮೇಲೆ ಶಾಸಕರ ಸೋಲಿನ ಆರೋಪದ ಬಗ್ಗೆ ಉತ್ತರಿಸುವ ಪ್ರಶ್ನೆಯಿಲ್ಲ. ಇನ್ನೂ ಇದೇ ವೇಳೆ ಶೆಟ್ಟರ್ ಮರಳಿ ಬಿಜೆಪಿ ಸೇರ್ಪಡೆ ವಿಚಾರಕ್ಕೆ ಸಂಬಂಧಿಸಿದಂತೆ, ಅವರೇ ಕಾಂಗ್ರೆಸ್‌ಗೆ ಹೋಗಿದ್ದರಿಂದ ಸಂತೃಪ್ತಿ ಇದೆ ಅಂದಿದ್ದಾರೆ. ಹಾಗಿದ್ದಾಗ ಮತ್ತೆ ಬಿಜೆಪಿಗೆ ಬರೋ ಪ್ರಶ್ನೆ ಬರಲ್ಲ. ಪ್ರಹ್ಲಾದ್ ಜೋಶಿಗೆ ಟಿಕೆಟ್ ಕೊಡಬಾರದೆಂಬ ಅಭಿಯಾನ ಪ್ರತಿಬಾರಿ ಚುನಾವಣಾ ಪೂರ್ವದಲ್ಲಿ ಇಂತಹದ್ದು ನಡೆಯುತ್ತದೆ ಎಂದರು.

ವಿಧಾನ ಪರಿಷತ್‌ನ ಮೂರು ಸ್ಥಾನಗಳಿಗೂ ಸ್ಪರ್ಧೆ: ವಿಧಾನ ಪರಿಷತ್ ಚುನಾವಣೆಯ ಮೂರೂ ಸ್ಥಾನಕ್ಕೆ ನಾವು ಸ್ಪರ್ಧಿಸುತ್ತೇವೆ. ಮೂರು ಸ್ಥಾನಗಳಲ್ಲಿ ಕಾಂಗ್ರೆಸ್ ಗೆಲ್ಲೋದು ಖಚಿತ. ಆದರೂ ಪ್ರತಿಪಕ್ಷವಾಗಿ ಸ್ಪರ್ಧಿಸುತ್ತೇವೆ ಎಂದು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ತಿಳಿಸಿದರು.

ವೈದ್ಯಕೀಯ ಪ್ರವೇಶಕ್ಕಾಗಿ ನಡೆದ ನೀಟ್–ಯುಜಿ ಫಲಿತಾಂಶ ಪ್ರಕಟ

ಮೊದಲ ರ್‍ಯಾಂಕ್ ಹಂಚಿಕೊಂಡ ತಮಿಳ್ನಾಡು, ಆಂಧ್ರ ವಿದ್ಯಾರ್ಥಿಗಳು



ನವದೆಹಲಿ: ವೈದ್ಯಕೀಯ ಪದವಿ ಕೋರ್ಸ್‌ಗಳ ಪ್ರವೇಶಕ್ಕೆ ನಡೆದ 'ನೀಟ್–2023'ರ ಫಲಿತಾಂಶ ಪ್ರಕಟವಾಗಿದ್ದು, ಮೊದಲ ರ್‍ಯಾಂಕ್ ಅನ್ನು ಇಬ್ಬರು ವಿದ್ಯಾರ್ಥಿಗಳು ಹಂಚಿಕೊಂಡಿದ್ದಾರೆ. ಉತ್ತರ ಪ್ರದೇಶದ ಅತ್ಯಧಿಕ ಅಭ್ಯರ್ಥಿಗಳು ಅರ್ಹತೆ ಪಡೆದಿದ್ದಾರೆ.

ತಮಿಳುನಾಡಿನ ಪ್ರಭಾಂಜನ್ ಜೆ ಮತ್ತು ಆಂಧ್ರಪ್ರದೇಶದ ಬೋರಾ ವರುಣ್ ಚಕ್ರವರ್ತಿ ಶೇ. 99.99ರಷ್ಟು ಅಂಕ ಗಳಿಸಿದ್ದು, ಪ್ರಥಮ ರ್‍ಯಾಂಕ್ ಹಂಚಿಕೊಂಡಿದ್ದಾರೆ ಎಂದು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ) ಮಂಗಳವಾರ ಪ್ರಕಟಿಸಿದೆ. ಪರೀಕ್ಷೆಯನ್ನು ಒಟ್ಟು 20.38 ಲಕ್ಷ ಅಭ್ಯರ್ಥಿಗಳು ಬರೆದಿದ್ದು, ಈ ಪೈಕಿ 11.45 ಲಕ್ಷ ಅಭ್ಯರ್ಥಿಗಳು ಅರ್ಹತೆ ಪಡೆದಿದ್ದಾರೆ. ರಾಜ್ಯಗಳ ಪೈಕಿ ಉತ್ತರ ಪ್ರದೇಶದಿಂದ ಗರಿಷ್ಠ ಅಂದರೆ 1.39 ಲಕ್ಷ ಅಭ್ಯರ್ಥಿಗಳು ಅರ್ಹತೆ ಪಡೆದಿದ್ದಾರೆ.

ನಂತರದ ಸ್ಥಾನದಲ್ಲಿ ಮಹಾರಾಷ್ಟ್ರ (1.31 ಲಕ್ಷ), ರಾಜಸ್ಥಾನ (1 ಲಕ್ಷಕ್ಕೂ ಅಧಿಕ) ಇದೆ. ಉತ್ತರಪ್ರದೇಶ ಮತ್ತು ಮಹಾರಾಷ್ಟ್ರ ಹೆಚ್ಚಿನ ಜನಸಂಖ್ಯೆ ಇರುವ ರಾಜ್ಯಗಳಾಗಿದ್ದು, ಜನಸಂಖ್ಯೆ ಆಧಾರದಲ್ಲಿ ಮೊದಲ 10 ರಾಜ್ಯಗಳ ಪಟ್ಟಿಯಲ್ಲಿ ರಾಜಸ್ಥಾನ ಕೂಡಾ ಇದೆ. ದೇಶದಾದ್ಯಂತ 499 ನಗರಗಳಲ್ಲಿನ 4,097 ಕೇಂದ್ರಗಳು ಹಾಗೂ ದೇಶದ ಹೊರಗಡೆ 14 ನಗರಗಳಲ್ಲಿ ಮೇ 7ರಂದು ಈ ವರ್ಷದ ನೀಟ್–2023 ಪರೀಕ್ಷೆಯನ್ನು ಎನ್‌ಟಿಎ ನಡೆಸಿತ್ತು. ಕನ್ನಡ ಸೇರಿದಂತೆ 13 ಭಾಷೆಗಳಲ್ಲಿ ಪರೀಕ್ಷೆಯನ್ನು ನಡೆಸಲಾಗಿತ್ತು.

ಅರ್ಹತೆ ಪಡೆದಿರುವ ಅಭ್ಯರ್ಥಿಗಳಿಗೆ ರಾಷ್ಟ್ರಮಟ್ಟದ ರ್‍ಯಾಂಕಿಂಗ್ ಅನ್ನು ನೀಡಿದೆ. ರ್‍ಯಾಂಕ್ ಆಧರಿಸಿ ಕೋರ್ಸ್‌ಗಳಿಗೆ ಪ್ರವೇಶ ಕಲ್ಪಿಸಲು ಆಯಾ ಸಂಸ್ಥೆಗಳು ತಮ್ಮ ವ್ಯಾಪ್ತಿಯ ಎಂಬಿಬಿಎಸ್, ಬಿಡಿಎಸ್ ಕೋರ್ಸ್‌ಗಳ ಸೀಟುಗಳಿಗೆ ಮೆರಿಟ್ ಪಟ್ಟಿ ಸಿದ್ಧಪಡಿಸಲಿವೆ ಎಂದು ಹೇಳಿದ್ದಾರೆ. ಅಭ್ಯರ್ಥಿಗಳು ತಮ್ಮ ರಾಜ್ಯಗಳಲ್ಲಿ ಪ್ರವೇಶಕ್ಕೆ ಅರ್ಜಿ ಸಲ್ಲಿಸುವಾಗ, ಪ್ರವರ್ಗವನ್ನು ನಮೂದಿಸಬೇಕು. ರಾಜ್ಯದ ಕೌನ್ಸೆಲಿಂಗ್ ಅಧಿಕಾರಿಗಳು ಅದಕ್ಕನುಗುಣವಾಗಿ ಮೆರಿಟ್ ಪಟ್ಟಿ ತಯಾರಿಸುವರು. ಇದರಲ್ಲಿ ಎನ್‌ಟಿಎ ಪಾತ್ರವಿರುವುದಿಲ್ಲ ಎಂದು ತಿಳಿಸಿದ್ದಾರೆ.

ನಾನೂ ಯಾಕೆ ಸಿಎಂ ಆಗಬಾರದು

ಬೆಂಗಳೂರು: ನಾನು ಯಾಕೆ ಸಿಎಂ ಆಗಬಾರದು, ಮುನಿಯಪ್ಪ ಯಾಕಾಗಬಾರದು, ಮಹಾದೇವಪ್ಪ ಯಾಕೆ ಆಗಬಾರದು ಎಂದು ಗೃಹ ಸಚಿವ ಡಾ. ಪರಮೇಶ್ವರ್ ಪ್ರಶ್ನಿಸಿದ್ದಾರೆ. ದಲಿತಪರ ಸಂಘಟನೆಗಳು ವಸಂತನಗರದ ಅಂಬೇಡ್ಕರ್ ಭವನದಲ್ಲಿ ಸರ್ಕಾರದ ದಲಿತ ಸಮುದಾಯದ ಸಚಿವರುಗಳಿಗೆ ಆಯೋಜಿಸಿದ್ದ ಅಭಿನಂದನಾ ಸಮಾವೇಶದಲ್ಲಿ ಪರಮೇಶ್ವರ್ ಮಾತನಾಡಿದರು. ನಮ್ಮಲ್ಲಿ ಕೀಳರಿಮೆ ಇರಬಾರದು. ಅದಕ್ಕೆ ಯಾವಾಗಲೂ ನಾನು ಸಿಎಂ ಆಗಬೇಕು ಅಂತ ಹೇಳುತ್ತೇನೆ. ನಮಗೆ ಸಿಎಂ ಆಗುವ ಅವಕಾಶಗಳನ್ನು ತಪ್ಪಿಸಿದ್ದಾರೆ. ನಮ್ಮಲ್ಲಿ ಒಗ್ಗಟ್ಟು ಇದ್ದರೆ ಮಾತ್ರ ನಾವು ಉಳಿದುಕೊಳ್ಳುತ್ತೇವೆ. ಅದು ಬಿಟ್ಟು ಎಡ, ಬಲ ಎಂದು ಹೇಳುತ್ತಿದ್ದರೆ ನಾವು ಏನು ಸಾಧನೆ ಮಾಡುವುದಿಲ್ಲ. ನಮ್ಮಲ್ಲಿ ಒಗ್ಗಟ್ಟಿನ ಮಂತ್ರ ಇರಬೇಕು ಎಂದರು. ಕಾಂಗ್ರೆಸ್‌ಗೆ 2018 ರಲ್ಲಿ ಸೋಲಾಯಿತು. ಯಾವ ಸಮುದಾಯವನ್ನು ಕಡೆಗಣಿಸಿದರೋ ಅದರಿಂದ ಪಾಠ ಕಲಿಯಬೇಕಾಯ್ತು ಎಂದು ಪರೋಕ್ಷವಾಗಿ ದಲಿತ ಸಿಎಂ ಮಾಡದ ಕಾರಣ ಕಾಂಗ್ರೆಸ್‌ಗೆ ಸೋಲಾಯಿತು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.



ನಮ್ಮ ಪಕ್ಷದ ಆಂತರಿಕ ವಲಯದಲ್ಲಿ ಗೆಲುವಿನ ಪರಾಮರ್ಶೆ ಮಾಡುವಾಗ ಈ ಬಾರಿ ದಲಿತರು ನಮ್ಮ ಕೈ ಹಿಡಿದಿದ್ದಾರೆ ಎಂಬ ಮಾತು ಬಂದಿದೆ. ಮುಸ್ಲಿಮರು 100% ನಮ್ಮ ಕೈ ಹಿಡಿದಿದ್ದಾರೆ ಅಂತ ಮಾತನಾಡುತ್ತಾರೆ. ನಮ್ಮ ಬಗ್ಗೆ ಈಗ ಎಲ್ಲರಿಗೂ ಗೊತ್ತಾಗಿದೆ. 51 ಮೀಸಲು ಕ್ಷೇತ್ರಗಳ ಪೈಕಿ 32ರಲ್ಲಿ ಗೆದ್ದಿದ್ದೇವೆ. ನಮ್ಮ ಪಕ್ಷದ ಪ್ರಣಾಳಿಕೆ ಸಮಿತಿಗೆ ನಾನೇ ಅಧ್ಯಕ್ಷನಾಗಿದ್ದೆ. ಪ್ರಣಾಳಿಕೆಯಲ್ಲಿ ಹೇಳಿದಂತೆ ಮೊದಲ ಅಧಿವೇಶನದಲ್ಲಿ ಸದಾಶಿವ ಆಯೋಗ ವರದಿ ಮಂಡಿಸುತ್ತೇವೆ ಎಂದರು.

ಚಾಮುಂಡಿಬೆಟ್ಟದಡಿ ಪರಿಸರ ಸಂರಕ್ಷಣೆ ಜಾಗೃತಿ 'ಪ್ಲಾಸ್ಟಿಕ್ ಬಿಡಿ ಬಟ್ಟೆ ಬ್ಯಾಗ್ ಹಿಡಿ'



ಮೈಸೂರು, ಜೂ.13(ಎಂಕೆ)– 'ಪ್ಲಾಸ್ಟಿಕ್ ಬಿಡಿ ಬಟ್ಟೆ ಬ್ಯಾಗ್ ಹಿಡಿ' ಘೋಷಣೆಯೊಂದಿಗೆ ಚಾಮುಂಡಿಬೆಟ್ಟದ ತಪ್ಪಲಿನಲ್ಲಿ ಪರಿಸರ ಸಂರಕ್ಷಣೆ ಜಾಗೃತಿ ಮೂಡಿಸಲಾಯಿತು.

ಪರಿಸರ ಸ್ನೇಹಿ ತಂಡ ಹಾಗೂ ಕೆಎಂಪಿಕೆ ಟ್ರಸ್ಟ್ ವತಿಯಿಂದ ಹಮ್ಮಿಕೊಂಡಿರುವ ಜಾಗೃತಿ ಅಭಿಯಾನದಲ್ಲಿ ಮೆಟ್ಟಿಲು ಮೂಲಕ ಚಾಮುಂಡಿ ಬೆಟ್ಟಕ್ಕೆ ತೆರಳುವ ಭಕ್ತರಿಗೆ ಬಟ್ಟೆ ಬ್ಯಾಗ್ ವಿತರಿಸುವ ಮೂಲಕ ಪ್ಲಾಸ್ಟಿಕ್ ತ್ಯಜಿಸುವಂತೆ ತಿಳಿಸಲಾಯಿತು. ಹಾಗೆಯೇ ಪ್ಲಾಸ್ಟಿಕ್ ಬಿಡಿ ಬಟ್ಟೆ ಬ್ಯಾಗ್ ಹಿಡಿ ಸಂದೇಶವುಳ್ಳ ಭಿತ್ತಿ ಚಿತ್ರ ಪ್ರದರ್ಶಿಸುತ್ತಾ ಪರಿಸರ ಸಂರಕ್ಷಣೆಗೆ ಸಹಕರಿಸುವಂತೆ ಮನವಿ ಮಾಡಲಾಯಿತು.

ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಮೈಸೂರು ತಾಪಂ ಇಓ ಹೆಚ್.ಜಿ.ಗಿರೀಶ್, ಚಾಮುಂಡಿಬೆಟ್ಟದಲ್ಲಿ ಸಂಪೂರ್ಣ ಪ್ಲಾಸ್ಟಿಕ್ ನಿಷೇಧಕ್ಕೆ ಪ್ರತಿಯೊಬ್ಬರು ಕೈಜೋಡಿಸಬೇಕು. ಬೆಟ್ಟಕ್ಕೆ ಬರುವ ಭಕ್ತರು ಮನೆಯಿಂದಲೇ ಪ್ಲಾಸ್ಟಿಕ್ ಬಳಕೆಗೆ ಕಡಿವಾಣ ಹಾಕಬೇಕು. ಮುಂದಿನ ದಿನದಲ್ಲಿ ಚಾಮುಂಡಿ ಬೆಟ್ಟದಲ್ಲಿ ಪ್ಲಾಸ್ಟಿಕ್ ತಡೆಗಟ್ಟಲು ತಿರುಪತಿ ಗೋಪಾಲಸ್ವಾಮಿ ಬೆಟ್ಟದ ಮಾದರಿಯಲ್ಲಿ ತಪಾಸಣೆಗೆ ಚಿಂತನೆ ನಡೆಸಲಾಗಿದೆ ಎಂದರು. ನಗರಪಾಲಿಕೆ ಆರೋಗ್ಯಾಧಿಕಾರಿ ಡಾ.ನಾಗರಾಜ್ ಮಾತನಾಡಿ, ಪ್ಲಾಸ್ಟಿಕ್ ಬಳಕೆ ಸಂಪೂರ್ಣವಾಗಿ ನಿಲ್ಲಿಸಲು ಸಾರ್ವಜನಿಕರ ಸಹಭಾಗಿತ್ವ ಬಹಳ ಮುಖ್ಯ ಮೈಸೂರು ಸ್ವಚ್ಛ ನಗರಿಯಾಗಿದೆ. ಆಷಾಡ ಮಾಸದಲ್ಲಿ ಬೆಟ್ಟಕ್ಕೆ ಲಕ್ಷಾಂತರ ಮಂದಿ ಭಕ್ತರು ಆಗಮಿಸಲಿದ್ದು, ಪ್ಲಾಸ್ಟಿಕ್ ಬಳಕೆ ತಡೆಗಟ್ಟಲು ಟಾಸ್ಕ್ ಫೋರ್ಸ್ ರಚಿಸಲಾಗುವುದು. ಇದಕ್ಕೆ ಸಾರ್ವಜನಿಕರು ಸಹಕರಿಸಬೇಕು ಎಂದು ಮನವಿ ಮಾಡಿದರು. ಕೆಎಂಪಿಕೆ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ವಿಕ್ರಂ ಅಯ್ಯಂಗಾರ್, ಪರಿಸರ ಸ್ನೇಹಿ ತಂಡದ ಅಧ್ಯಕ್ಷ ಲೋಹಿತ್, ಜೀವದಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಅಜಯ್ ಶಾಸ್ತ್ರಿ, ಚಿನ್ನ ಬೆಳ್ಳಿ ವ್ಯಾಪಾರಸ್ಥರ ಸಂಘದ ಅಧ್ಯಕ್ಷ ಸುರೇಶ್ ಗೋಲ್ಡ್, ಹಿರಿಯ ಆರೋಗ್ಯ ನಿರೀಕ್ಷಕ ಶಿವಪ್ರಸಾದ್, ಪರಿಸರ ಇಂಜಿನಿಯರ್ ಜ್ಯೋತಿ, ಕಿರಿಯ ಆರೋಗ್ಯ ನಿರೀಕ್ಷಕಿ ಪ್ರೀತಿ, ರಾಕೇಶ್, ಸಚಿಂದ್ರ, ಚಕ್ರಪಾಣಿ, ಚೇತನ್ ಆರಾಧ್ಯ, ಬಸವರಾಜು, ಮಂಜುನಾಥ, ಉಮಾ, ವನಜಾಕ್ಷಿ ರಂಗಸ್ವಾಮಿ, ಮಂಜುನಾಥ್ ಮತ್ತಿತರರಿದ್ದರು.

ಬೆಂಗಳೂರಿನ ಐಟಿ ಕಂಪನಿಗೆ ಬಾಂಬ್ ಬೆದರಿಕೆ

ಬೆಂಗಳೂರು: ಬೆಂಗಳೂರಿನ ಐಟಿ ಕಂಪನಿಗೆ ಮಂಗಳವಾರ ಬಾಂಬ್ ಬೆದರಿಕೆ ಕರೆ ಬಂದಿದ್ದು, ಇಕೋಸ್ಪೇಸ್ ಬ್ಯುಸಿನೆಸ್ ಪಾರ್ಕ್‌ನಲ್ಲಿ ಉದ್ವಿಗ್ನ ಪರಿಸ್ಥಿತಿ ಉಂಟಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಕ್ಯಾಂಪಸ್‌ನಲ್ಲಿರುವ ಐಡಿಬಿಐ ಕಂಪನಿಗೆ ಇಂದು ಮಧ್ಯಾಹ್ನ 2 ಗಂಟೆಗೆ ಬೆದರಿಕೆ ಕರೆ ಮಾಡಲಾಗಿದೆ. ಕಂಪನಿಗೆ ಕರೆ ಮಾಡಿದ ದುಷ್ಕರ್ಮಿಗಳು, ನಿಮ್ಮ ಕಂಪನಿಯ ಆವರಣದಲ್ಲಿ ಬಾಂಬ್ ಇಟ್ಟಿದ್ದು, ಶೀಘ್ರದಲ್ಲೇ ಸ್ಫೋಟಗೊಳ್ಳಲಿದೆ ಎಂದು ಬೆದರಿಕೆ ಹಾಕಿರುವುದಾಗಿ ಪೊಲೀಸ್ ಮೂಲಗಳು ತಿಳಿಸಿವೆ. ಬಾಂಬ್ ಬೆದರಿಕೆ ಕರೆ ಬಂದ ನಂತರ ಬಾಂಬ್ ನಿಷ್ಕ್ರಿಯ ದಳ, ಶ್ವಾನ ದಳ ಮತ್ತು ಆಂತರಿಕ ಭದ್ರತಾ ವಿಭಾಗದ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಕೂಂಬಿಂಗ್ ಕಾರ್ಯಾಚರಣೆ ಆರಂಭಿಸಿದ್ದಾರೆ. ನೌಕರರನ್ನು ಸುರಕ್ಷಿತ ಸ್ಥಳಕ್ಕೆ ಕಳುಹಿಸಲಾಗಿದೆ. ಪ್ರಕರಣದ ತನಿಖೆಯನ್ನು ಬೆಳ್ಳಂದೂರು ಪೊಲೀಸರು ವಹಿಸಿಕೊಂಡಿದ್ದಾರೆ. ಈ ಬಗ್ಗೆ ಪೊಲೀಸರು ಇನ್ನೂ ಅಧಿಕೃತ ಮಾಹಿತಿ ನೀಡಬೇಕಿದೆ.

ಪರೀಕ್ಷಾ ಕೇಂದ್ರದ ಸುತ್ತ ನಿಷೇಧಾಜ್ಞೆ ಜಾರಿ

ಮೈಸೂರು, ಜೂ.13– ಮೈಸೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯ 4 ಪರೀಕ್ಷಾ ಕೇಂದ್ರಗಳಲ್ಲಿ ಜೂ.26ರಿಂದ ಜುಲೈ 9ರವರೆಗೆ 2021ನೇ ಸಾಲಿನ ದ್ವಿತೀಯ ಅಧಿವೇಶನ ಇಲಾಖಾ ಪರೀಕ್ಷೆಗಳು ನಡೆಯಲಿದ್ದು, ಸದರಿ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಪರೀಕ್ಷಾ ದಿನಗಳಂದು ಬೆಳಿಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆವರೆಗೆ ದಂಡ ಪ್ರಕ್ರಿಯ ಸಂಹಿತೆ 1973ರ ಕಲಂ 144 ರೀತ್ಯಾ ನಿಷೇಧಾಜ್ಞೆಯನ್ನು ಜಾರಿಗೊಳಿಸಲಾಗಿದೆ.

ನಿಷೇಧಾಜ್ಞೆಗೆ ಒಳಪಡುವ ಪರೀಕ್ಷಾ ಕೇಂದ್ರಗಳು: ಲಕ್ಷ್ಮೀಪುರಂನ ಜೆಎಲ್‌ಬಿ ರಸ್ತೆಯಲ್ಲಿರುವ ಮಹಾರಾಜ ಸರ್ಕಾರಿ ಪದವಿ ಪೂರ್ವ ಕಾಲೇಜು, ನಜರ್ಬಾದ್‌ನಲ್ಲಿರುವ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು ಮತ್ತು ಸರ್ಕಾರಿ ವಿಭಜಿತ ಮಹಾರಾಜ ಪದವಿ ಪೂರ್ವ ಕಾಲೇಜು (ಪ್ರೌಢಶಾಲಾ ವಿಭಾಗ) ಹಾಗೂ ಮಂಡಿ ಮೊಹಲ್ಲಾದಲ್ಲಿನ ಕೈಲಾಸಪುರಂನಲ್ಲಿರುವ ಸರ್ಕಾರಿ ಪ್ರೌಢಶಾಲೆ ಸರ್ಕಾರಿ ಪ್ರೌಢಶಾಲೆಗಳಲ್ಲಿ ಪರೀಕ್ಷಾರ್ಥಿಗಳು ಹಾಗೂ ಪರೀಕ್ಷಾ ಸಿಬ್ಬಂದಿಗಳನ್ನು ಹೊರತುಪಡಿಸಿ ಅನಧಿಕೃತ ವ್ಯಕ್ತಿಗಳು ಸಂಚರಿಸಬಾರದು. ಯಾರು ಆಕ್ಷೇಪಾರ್ಹ ವಸ್ತುಗಳನ್ನು ಒಯ್ಯಬಾರದು ಹಾಗೂ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿರುವ ಜೆರಾಕ್ಸ್ ಅಂಗಡಿಗಳನ್ನು ಪರೀಕ್ಷಾ ಅವಧಿಯಲ್ಲಿ ಮುಚ್ಚುವಂತೆ ಮೈಸೂರು ನಗರದ ಪೊಲೀಸ್ ಆಯುಕ್ತರಾದ ರಮೇಶ್.ಬಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಳೆ ಪಿಂಚಣಿ ಜಾರಿ ಸಂಬಂಧ ಕ್ಯಾಬಿನೆಟ್‌ನಲ್ಲಿ ಚರ್ಚೆ ನಂತರ ನಿರ್ಧಾರ

ಬೆಂಗಳೂರು. ಜೂ.13.(ಬಿಎಲ್‌ಯು)– ಹಳೆ ಪಿಂಚಣಿ ಯೋಜನೆ ಮರು ಜಾರಿಗೆ ಸಂಬಂಧಿಸಿದಂತೆ ಸಚಿವ ಸಂಪುಟದಲ್ಲಿ ಚರ್ಚಿಸಿ, ಬಜೆಟ್‌ನಲ್ಲಿ ಘೋಷಿಸುವ ಸಂಬಂಧ ತೀರ್ಮಾನಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ.

ಹಳೆ ಪಿಂಚಣಿ ಯೋಜನೆ ಪುನರ್ ಜಾರಿಗೊಳಿಸುವಂತೆ ಕೋರಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳ ನಿಯೋಗ, ಬೆಂಗಳೂರಿನಲ್ಲಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ, ಮನವಿ ಸಲ್ಲಿಸಿತು.

ನ್ಯಾಷನಲ್ ಪೆನ್ಷನ್ ಸ್ಕೀಮ್ ಅರ್ಥಾತ್ ಎನ್‌ಪಿಎಸ್‌ನಿಂದ ಸರ್ಕಾರಿ ನೌಕರರಿಗೆ ಆರ್ಥಿಕವಾಗಿ ಏನೆಲ್ಲಾ ತೊಂದರೆ ಆಗುತ್ತದೆ ಎಂದು ಮನವರಿಕೆ ಮಾಡಿಕೊಟ್ಟ ನಿಯೋಗ, ಎನ್‌ಪಿಎಸ್ ರದ್ದು ಮಾಡಿ ಹಳೆ ಪಿಂಚಣಿ ಯೋಜನೆ ಜಾರಿ ಮಾಡುವಂತೆ ಸಿದ್ದರಾಮಯ್ಯ ಅವರ ಬಳಿ ಮನವಿ ಮಾಡಿತು. ಸರ್ಕಾರಿ ನೌಕರರ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಸಿದ್ದರಾಮಯ್ಯ, ಹಳೆ ಪಿಂಚಣಿ ಯೋಜನೆ ಜಾರಿ ಸಂಬಂಧ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ಮಾಡಿ, ತೀರ್ಮಾನ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ಈ ವೇಳೆ ಸರ್ಕಾರಿ ನೌಕರರಿಗೆ ಸಿದ್ದರಾಮಯ್ಯ ಕೆಲವು ಟಿಪ್ಸ್ ನೀಡಿದರು. ಸರ್ಕಾರ ಜಾರಿ ಮಾಡಿರುವ ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಜಾರಿಗೊಳಿಸುವತ್ತ ನೌಕರರು ಕೆಲಸ ಮಾಡಬೇಕು. ಸರ್ಕಾರದ ಕಾರ್ಯಕ್ರಮಗಳನ್ನು ಪ್ರಾಮಾಣಿಕವಾಗಿ ಜನರಿಗೆ ಮುಟ್ಟಿಸುವ ಕೆಲಸ ಮಾಡಬೇಕು ಎಂದು ಸಲಹೆ ನೀಡಿದರು.



ಇದೇ ವೇಳೆ ಮಾತನಾಡಿದ ಮಾಜಿ ವಿಧಾನ ಪರಿಷತ್ ಸದಸ್ಯ ವಿ.ಎಸ್ ಉಗ್ರಪ್ಪ, ಏಪ್ರಿಲ್ 1,2006ರಲ್ಲಿ ಎನ್.ಪಿ.ಎಸ್ ಜಾರಿಯಾಗಿದೆ. ಇದರ ವ್ಯಾಪ್ತಿಗೆ 2.98 ಲಕ್ಷ ನೌಕರರು ಒಳಪಡುತ್ತಾರೆ. ಪಿಂಚಣಿ ಮೊತ್ತವನ್ನು ಎನ್.ಎಸ್.ಡಿ.ಎಲ್‌ನಲ್ಲಿ ಠೇವಣಿ ಇಡಲಾಗಿದೆ. ಈ ಮೊತ್ತ ಬಳಕೆ ಮಾಡಿ ಇವರು ನಿವೃತ್ತಿಯಾಗುವ ವೇಳೆಗೆ ಲಭ್ಯವಾಗುವಂತೆ ಜನರಲ್ ಪ್ರಾವಿಡೆಂಡ್ ಫಂಡ್ (ಜಿಪಿಎಫ್)ನಲ್ಲಿ ಇಡಬಹುದು ಎಂದು ಮನವಿ ಮಾಡಿದರು.

ರಾಜಾಸ್ಥಾನ, ಛತ್ತೀಸ್‌ಗಢದಲ್ಲಿ ಈಗಾಗಲೇ ಎನ್‌ಪಿಎಸ್ ರದ್ದಾಗಿದೆ. ಕರ್ನಾಟಕದಲ್ಲಿಯೂ ಅದನ್ನು ರದ್ದುಗೊಳಿಸಿ, ಹಳೆ ಪಿಂಚಣಿ ಯೋಜನೆಯನ್ನು ಜಾರಿಗೊಳಿಸುವ ಅವಶ್ಯಕತೆ ಇದೆ. ಎನ್‌ಪಿಎಸ್ ರದ್ದು ಮಾಡುವುದರಿಂದ ಯೋಜನೆಯಡಿ ಲಭ್ಯವಿರುವ ಒಟ್ಟು 19 ಸಾವಿರ ಕೋಟಿ ಹಣವನ್ನು ಸರ್ಕಾರದ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಬಳಸಿಕೊಳ್ಳಬಹುದು. ನೌಕರರ ಪಾಲಿನ 9 ಸಾವಿರ ಕೋಟಿ ಜಿಪಿಎಫ್‌ಗೆ ಪರಿವರ್ತನೆ ಮಾಡಿಕೊಳ್ಳಬಹುದು. ಜೊತೆಗೆ ಸರ್ಕಾರದ 10 ಸಾವಿರ ಕೋಟಿ ರೂ. ಸರ್ಕಾರದ ಪಾಲನ್ನು ಅಭಿವೃದ್ಧಿ ಕಾರ್ಯಕ್ರಮಗಳಿಗೆ ಬಳಕೆ ಮಾಡಿಕೊಳ್ಳಬಹುದು ಎಂದು ಕರ್ನಾಟಕರಾಜ್ಯ ಎನ್‌ಪಿಎಸ್ ನೌಕರರ ಸಂಘದ ಅಧ್ಯಕ್ಷ ಶಾಂತಾರಾಂ ತೇಜ ತಿಳಿಸಿದರು. ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, ಕೆಪಿಟಿಸಿಎಲ್, ಆರೋಗ್ಯ, ಜಲ ಮಂಡಳಿ, ಕಂದಾಯ ಇಲಾಖೆ ನೌಕರರ ಸಂಘ ಸೇರಿದಂತೆ ಹಲವು ಸಂಘಟನೆಗಳ ನೂರಕ್ಕೂ ಹೆಚ್ಚು ಪ್ರತಿನಿಧಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.



ಕೆಆರ್ ವಿಧಾನಸಭಾ ಕ್ಷೇತ್ರದ ನೂತನ ಶಾಸಕ ಟಿ.ಎಸ್.ಶ್ರೀವತ್ಸ ಅವರನ್ನು ಗಿರೀಶ್‌ಗೌಡ ಅಭಿಮಾನಿ ಬಳಗದ ವತಿಯಿಂದ ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ನಗರಪಾಲಿಕೆ ಸದಸ್ಯರಾದ ಶ್ರೀಮತಿ ಚಂಪಕ, ಅಖಿಲ ಕರ್ನಾಟಕ ಬ್ರಾಹ್ಮಣ ಸಂಘದ ಅಧ್ಯಕ್ಷ ನಟರಾಜ್ ಜೋಯಿಸ್, ಕೊಪ್ಪಲ್ ರಾಕೇಶ್,ಪ್ರಕಾಶ್ ಪ್ರಿಯದರ್ಶನ, ಲೀಲಾ ಶಣಯ್ಯ, ಗಿರೀಶ್, ಕಾರ್ತಿಕ್‌ಗೌಡ, ಹರೀಶ್, ರೇವಣ್ಣ, ಶಿವಬಸಪ್ಪ, ಶ್ರೀಕಂಠ ಮೂರ್ತಿ, ರಮೇಶ್, ಹೇಮಂತ್‌ಗೌಡ, ತೇಜಸ್, ಲೋಕೇಶ್, ನಿಖಿಲ್‌ಗೌಡ, ಚಂದ್ರು, ರಾಜು ಹಾಗೂ ಸ್ನೇಹ ಬಳಗ ಮುಖಂಡರು, ಯುವಕರು, ಮಹಿಳೆಯರು ಉಪಸ್ಥಿತರಿದ್ದರು.

ಡಾ.ರಾಜೇಂದ್ರ ಶ್ರೀಗಳ ಜಯಂತಿ ಅಂಗವಾಗಿ 'ವನ್ಯಜೀವಿ ಮತ್ತು ಮಾನವ ಸಂಘರ್ಷ' ಲೇಖನ ಸ್ಪರ್ಧೆ

ಮೈಸೂರು, ಜೂ.13– ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿಯವರ ಜಯಂತಿ ಅಂಗವಾಗಿ 'ವನ್ಯಜೀವಿ ಮತ್ತು ಮಾನವ ಸಂಘರ್ಷ' ಕುರಿತು ಲೇಖನ ಸ್ಪರ್ಧೆ ಏರ್ಪಡಿಸಲಾಗಿದೆ. ಮೈಸೂರು, ಮಂಡ್ಯ, ಚಾ.ನಗರ, ಹಾಸನ ಹಾಗೂ ಮಡಿಕೇರಿ ಜಿಲ್ಲೆಯಲ್ಲಿ 2022–23ನೇ ಸಾಲಿನಲ್ಲಿ ಪಿಯುಸಿ, ಪದವಿ, ಸ್ನಾತಕೋತ್ತರ ಹಾಗೂ ಪಾಲಿಟೆಕ್ನಿಕ್ ವಿದ್ಯಾಭ್ಯಾಸ ಮಾಡುತ್ತಿರುವ ಕಾಲೇಜು ವಿದ್ಯಾರ್ಥಿಗಳು ಲೇಖನ ಸ್ಪರ್ಧೆಯಲ್ಲಿ ಭಾಗವಹಿಸಬಹುದಾಗಿದೆ. ಲೇಖನ ಸ್ವಂತದ್ದಾಗಿದ್ದು, 6–8 ಪುಟಗಳಷ್ಟು ವಿಸ್ತಾರವಾಗಿರಬೇಕು. ಲೇಖನ ಕಳುಹಿಸುವ ವಿದ್ಯಾರ್ಥಿಗಳು ಆಯಾ ಕಾಲೇಜು ಮುಖ್ಯಸ್ಥರಿಂದ ಫೋಟೋ ಸಮೇತ ಹೆಸರನ್ನು ದೃಢಿಕರಿಸಬೇಕು. ಪ್ರತೀ ಕಾಲೇಜಿನಿಂದ ಗರಿಷ್ಠ 5 ಲೇಖನಗಳನ್ನು ಮಾತ್ರ ಕಳುಹಿಸಲು ಅವಕಾಶವಿದ್ದು, ಜು.8ರೊಳಗೆ ಜೆಎಸ್‌ಎಸ್ ಮಹಾವಿದ್ಯಾಪೀಠ ಪ್ರಸರಣ ವಿಭಾಗಕ್ಕೆ ಕಳುಹಿಸುವಂತೆ ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ.0821–2548211/223 ಮತ್ತು 25482112/224 ಗೆ ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ಕೋರಲಾಗಿದೆ.

ಮೈಸೂರಲ್ಲಿ ಮುಂದಿನ ಐದು ದಿನ ತುಂತುರು ಮಳೆ ಸಾಧ್ಯತೆ

ಮುಂಗಾರು ಕಡೆ ಮುಖ ಮಾಡಿರುವ ಅನ್ನದಾತ

ಮೈಸೂರು, ಜೂ.13(ಎಸ್‌ಬಿಡಿ)– ಮುಂಗಾರು ವಿಳಂಬವಾಗಿದ್ದು ಮೈಸೂರು ಜಿಲ್ಲೆಯಲ್ಲಿ ಮುಂದಿನ ಐದು ದಿನ ತುಂತುರು ಮಳೆಯಾಗುವ ಸಾಧ್ಯತೆ ಇದೆ.

ಭಾರತೀಯ ಹವಾಮಾನ ಇಲಾಖೆ ಮಾಹಿತಿಯನ್ವಯ ಮೈಸೂರು ಜಿಲ್ಲೆಯಲ್ಲಿ ಜೂ.18ರವರೆಗೆ ಮೋಡ ಕವಿದ ವಾತಾವರಣವಿದ್ದು, ತುಂತುರು ಮಳೆಯಾಗುವ ಸಾಧ್ಯತೆ ಇದೆ ಎಂದು ನಾಗನಹಳ್ಳಿ ಕೃಷಿ ಹವಾಮಾನ ಕ್ಷೇತ್ರ ವಿಭಾಗದ ಪ್ರಕಟಣೆ ತಿಳಿಸಿದೆ. ಪೂರ್ವ ಮುಂಗಾರಿನಲ್ಲಿ ಒಟ್ಟಾರೆ ವಾಡಿಕೆಯಷ್ಟೇ ಮಳೆಯಾಗಿದ್ದರೂ ರೈತರಿಗೆ ನೆರವಾಗಲಿಲ್ಲ. ಅಗತ್ಯವಿದ್ದಾಗ ಮಳೆ ಕೈಕೊಟ್ಟ ಕಾರಣ ಬಿತ್ತನೆ ಗುರಿ ಸಾಧನೆಯಾಗಿಲ್ಲ. ಇದೀಗ ಮುಂಗಾರು ವಿಳಂಬವಾಗಿರುವುದು ರೈತರಲ್ಲಿ ಆತಂಕ ಮೂಡಿಸಿದೆ. ಇನ್ನೆರಡು ವಾರ ಮಳೆಯಾಗದಿದ್ದರೆ ಕುಡಿಯುವ ನೀರಿಗೂ ಸಮಸ್ಯೆಯಾಗಲಿದೆ.



ಆರು ತಿಂಗಳಲ್ಲಾದ ಮಳೆ: ಜನವರಿಯಿಂದ ಈವರೆಗೆ ಜಿಲ್ಲೆಯಲ್ಲಿ ಒಟ್ಟಾರೆ ವಾಡಿಕೆಯಷ್ಟು ಮಳೆಯಾಗಿದೆ. ಆದರೆ ಮಾಸಿಕವಾರು ಮಳೆ ಪ್ರಮಾಣದಲ್ಲಿ ವ್ಯತ್ಯಯವಾಗಿದೆ. ಜನವರಿಯಲ್ಲಿ 4.2 ಮಿ.ಮೀ.(ವಾಡಿಕೆ ಮಳೆ 2.7ಮಿ.ಮೀ), ಫೆಬ್ರವರಿಯಲ್ಲಿ 0.1 ಮಿ.ಮೀ(4.4 ಮಿ.ಮೀ), ಮಾರ್ಚ್‌ನಲ್ಲಿ 15.7 ಮಿ.ಮೀ.(15.2 ಮಿ.ಮೀ), ಏಪ್ರಿಲ್‌ನಲ್ಲಿ 33.7 ಮಿ.ಮೀ.(66.2 ಮಿ.ಮೀ.), ಮೇ ತಿಂಗಳಲ್ಲಿ 33.7 ಮಿ.ಮೀ(116.7 ಮಿ.ಮೀ.) ಹಾಗೂ ಜೂನ್‌ನಲ್ಲಿ(17ರವರೆಗೆ) 19.5 ಮಿ.ಮೀ.(24.9 ಮಿ.ಮೀ) ಸೇರಿ ಒಟ್ಟು 231 ಮಿ.ಮೀ.(230 ಮಿ.ಮೀ) ಮಳೆಯಾಗಿದೆ. ಕಳೆದ ವರ್ಷ ಇದೇ ವೇಳೆಗೆ 391.6 ಮಿ.ಮೀ. ಮಳೆಯಾಗಿತ್ತು.

ಪಿರಿಯಾಪಟ್ಟಣದಲ್ಲಿ ತೀವ್ರ ಕೊರತೆ: ತಾಲೂಕುವಾರು ಮಳೆ ಪ್ರಮಾಣ ಗಮನಿಸಿದರೆ ಪಿರಿಯಾಪಟ್ಟಣಕ್ಕೆ ತೀವ್ರ ಮಳೆ ಕೊರತೆ ಉಂಟಾಗಿದೆ. ತಾಲೂಕಿನಲ್ಲಿ ಜೂನ್‌ವರೆಗೆ ವಾಡಿಕೆ 235 ಮಿ.ಮೀ. ಮಳೆಯಾಗಬೇಕಿತ್ತು. ಆದರೆ 164 ಮಿ.ಮೀ. ಮಳೆಯಾಗಿದ್ದು, ಶೇ.30ರಷ್ಟು ಕೊರತೆಯಾಗಿದೆ. ಕಳೆದ ವರ್ಷ ಈ ಅವಧಿಗೆ 393 ಮಿ.ಮೀ. ಮಳೆಯಾಗಿತ್ತು. ಇನ್ನು ಕೆ.ಆರ್.ನಗರ ತಾಲೂಕಿನಲ್ಲಿ 183 ಮಿ.ಮೀ., ಹುಣಸೂರಿನಲ್ಲಿ 199 ಮಿ.ಮೀ ಹಾಗೂ ಮೈಸೂರು ತಾಲೂಕಿನಲ್ಲಿ 236 ಮಿ.ಮೀ ಮಳೆಯಾಗಿದ್ದು, ಈ ಮೂರು ತಾಲೂಕುಗಳಲ್ಲಿ ಕ್ರಮವಾಗಿ ಶೇ.16, ಶೇ.14 ಮತ್ತು ಶೇ.5)ರಷ್ಟು ಮಳೆ ಕಡಿಮೆ ಮಳೆಯಾಗಿದೆ. ಆದರೆ ನಂಜನಗೂಡಿನಲ್ಲಿ 248(ಶೇ.14 ಅಧಿಕ), ಸರಗೂರು ತಾಲೂಕಿನಲ್ಲಿ 292(+ಶೇ.12), ಹೆಚ್.ಡಿ. ಕೋಟೆಯಲ್ಲಿ 276 ಮಿ.ಮೀ.(+ಶೇ.9) ಹಾಗೂ ತಿ.ನರಸೀಪುರದಲ್ಲಿ 211 ಮಿ.ಮೀ. ಮಳೆಯಾಗಿದೆ.

ಸೂರ್ಯಕಾಂತಿಗೆ ಮೊರೆ: ಮಳೆ ವ್ಯತ್ಯಯದಿಂದ ಹತ್ತಿ ಬೆಳೆಯುತ್ತಿದ್ದ ಅನೇಕ ರೈತರು ಸೂರ್ಯಕಾಂತಿ ನೆಚ್ಚಿದ್ದಾರೆ. ಪರಿಣಾಮ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ 4590 ಹೆಕ್ಟೇರ್‌ನಲ್ಲಿ ಸೂರ್ಯಕಾಂತಿ ಬಿತ್ತನೆ ಮಾಡಿದೆ. ಬಿತ್ತನೆ ಗುರಿ(2715 ಹೆ.)ಗಿಂತ ಶೇ.169ರಷ್ಟು ಸೂರ್ಯಕಾಂತಿ ಬಿತ್ತನೆಯಾಗಿದೆ. ಹೆಸರು 6341 ಹೆಕ್ಟೇರ್ ಬಿತ್ತನೆಯಾಗಿದ್ದು, ಶೇ.130ರಷ್ಟು ಹೆಚ್ಚಾಗಿದೆ. ಹಾಗೆಯೇ ಉದ್ದು ಶೇ.121(9553 ಹೆ.), ಜೋಳ ಶೇ.104 (3850 ಹೆ.)ರಷ್ಟು ಹೆಚ್ಚು ಬಿತ್ತನೆಯಾಗಿದೆ. ಪ್ರಮುಖ ವಾಣಿಜ್ಯ ಬೆಳೆ ತಂಬಾಕು 64582 ಹೆಕ್ಟೇರ್‌ನಲ್ಲಿದ್ದು ಶೇ.97ರಷ್ಟು ಬಿತ್ತನೆ ಸಾಧನೆಯಾಗಿದೆ. ಹುಚ್ಚೆಳ್ಳು, ಹುರುಳಿ ಹಾಗೂ ಸಜ್ಜೆ ಬಿತ್ತನೆಯೇ ಆಗಿಲ್ಲ ಎಂದು ಕೃಷಿ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

41 ಗ್ರಾಪಂಗಳಲ್ಲೂ ಮಾದರಿ ಶಾಲೆ ನಿರ್ಮಾಣಕ್ಕೆ ಮುಂದಾಗಿ

ಪಂಚಾಯಿತಿಗಳಿಗೆ ಶಾಸಕ ಶಾಸಕ ಜಿ.ಡಿ.ಹರೀಶ್‌ಗೌಡ ಸೂಚನೆ

ಹುಣಸೂರು, ಜೂ.13– ನರೇಗಾ ಯೋಜನೆಯಡಿ ತಾಲೂಕಿನ 41 ಗ್ರಾಮ ಪಂಚಾಯಿತಿಗಳಲ್ಲೂ ಮಾದರಿ ಶಾಲೆಗಳನ್ನು ನಿರ್ಮಿಸುವ ನಿಟ್ಟಿನಲ್ಲಿ ಪಂಚಾಯಿತಿಗಳು ಮುಂದಾಗಬೇಕು ಎಂದು ಶಾಸಕ ಜಿ.ಡಿ.ಹರೀಶ್‌ಗೌಡ ಸೂಚಿಸಿದರು.

ನಗರದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಕ್ಷೇತ್ರದ ಶಾಲೆಗಳ ಅಭಿವೃದ್ಧಿಗೆ ಮೊದಲ ಆದ್ಯತೆ ನೀಡಬೇಕಿದೆ. ಅಲ್ಲದೇ ಅಂಗನವಾಡಿ, ಆಟದ ಮೈದಾನ, ಸ್ಮಶಾನ ಅಭಿವೃದ್ಧಿ ಸೇರಿದಂತೆ ತಾಲೂಕಿನ ಸಮಗ್ರ ಅಭಿವೃದ್ಧಿಗೆ ಶ್ರಮಿಸಲಾಗುವುದು ಎಂದರು.

ಸರ್ಕಾರದಿಂದ ಕ್ಷೇತ್ರದ ಅಭಿವೃದ್ಧಿಗೆ ನೀಡುವ ಅನುದಾನದ ಬಗ್ಗೆ ಕುತೂಹಲವಿದ್ದು, ಮುಂದಿನ ದಿನಗಳಲ್ಲಿ ನರೇಗಾದಿಂದ ಸಾರ್ವಜನಿಕರಿಗೆ ಆಗುವ ಅನುಕೂಲ ಮತ್ತು ಅನಾನುಕೂಲದ ಬಗ್ಗೆ ಅಧಿವೇಶನದಲ್ಲಿ ಚರ್ಚಿಸಲಾಗುವುದು ಎಂದರು.

ತಾಲೂಕಿನಲ್ಲಿ ನರೇಗಾ ಯೋಜನೆಗೆ ಹೆಚ್ಚು ಒತ್ತು



ನೀಡುವ ಜೊತೆಗೆ ಹೆಚ್ಚು ಮಾನವ ದಿನಗಳನ್ನು ಸೃಜಿಸಲು ಅಧಿಕಾರಿಗಳು ಶ್ರಮಿಸಬೇಕು ಎಂದು ತಿಳಿಸಿದರು.

ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಕ್ರಿಯಾಶೀಲರಾಗಿ ಕಾರ್ಯ ನಿರ್ವಹಿಸುವ ಮೂಲಕ ತಮ್ಮ ಗ್ರಾಪಂ ವ್ಯಾಪ್ತಿಯಲ್ಲಿ ಉದ್ಭವಿಸುವ ಸಮಸ್ಯೆಗಳನ್ನು ಬಗೆಹರಿಸಲು ಕ್ರಮ ವಹಿಸಬೇಕು ಎಂದು ಸಲಹೆ ನೀಡಿದರು.

ಇದೇ ವೇಳೆ ಕಂದಾಯ ವಸೂಲಿ, ಬಸವ ವಸತಿ ಯೋಜನೆ, ಅಂತ್ಯೋದಯ, 15ನೇ ಹಣಕಾಸು, ಎನ್‌ಆರ್‌ಎಲ್‌ಎಂ ಸಂಜೀವಿನಿ ಒಕ್ಕೂಟದಿಂದ ಮಹಿಳೆಯರಿಗೆ ದೊರೆಯುತ್ತಿರುವ ಸೌಲಭ್ಯಗಳು, ಡಿಜಿಟಲ್ ಗ್ರಂಥಾಲಯ ಹಾಗೂ ಮೂಲ ಸೌಕರ್ಯಗಳು ಸೇರಿದಂತೆ ಇನ್ನಿತರ ವಿಷಯಗಳ ಕುರಿತು ಶಾಸಕ ಜಿ.ಡಿ.ಹರೀಶ್‌ಗೌಡ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದರು.

ಸಭೆಗೂ ಮುನ್ನಾ ಶಾಸಕರು ತಾಪಂ ವ್ಯಾಪ್ತಿಗೆ ಬರುವ ಎಲ್ಲಾ ಗ್ರಾಪಂ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಪರಿಚಯ ಮಾಡಿಕೊಂಡರು. ಸಭೆಯಲ್ಲಿ ತಾಪಂ ಇಓ ಬಿ.ಕೆ.ಮನು, ನರೇಗಾ ಸಹಾಯಕ ನಿರ್ದೇಶಕ ಹೆಚ್.ಡಿ.ಲೋಕೇಶ್, ತಾಲೂಕು ಯೋಜನಾಧಿಕಾರಿ ರಾಜೇಶ್, ಸಹಾಯಕ ಲೆಕ್ಕಾಧಿಕಾರಿ ಸದಾಶಿವ, ಎಇಇ ನರಸಿಂಹಯ್ಯ, ಗ್ರಾಮೀಣ ಕುಡಿಯುವ ನೀರು ಮತ್ತು ನಿರ್ವಹಣೆ ಎಇಇ ಖಲೀಂ, ಎಡಿಪಿಆರ್ ಶ್ರೀಧರ್, ನರೇಗಾ ತಾಂತ್ರಿಕ ಸಂಯೋಜಕ ಅರವಿಂದ್, ಸಹಾಯಕ ತಾಂತ್ರಿಕ ಅಭಿಯಂತರರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ದ್ವಿತೀಯ ದರ್ಜೆ ಸಹಾಯಕರು ಸೇರಿದಂತೆ ತಾಪಂ ಸಿಬ್ಬಂದಿ ಹಾಜರಿದ್ದರು.



ವಾಲ್ಮೀಕಿ ನಿಗಮದ ಮಾಜಿ ಅಧ್ಯಕ್ಷ ಎಸ್.ಸಿ.ಬಸವರಾಜು ಅವರನ್ನು ವಿಧಾನ ಪರಿಷತ್ ಸದಸ್ಯರನ್ನಾಗಿ ಮಾಡುವಂತೆ ನಾಯಕ ಸಮಾಜದ ಮುಖಂಡರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಿದರು. ಈ ವೇಳೆ ಕೆಪಿಸಿಸಿ ಉಪಾಧ್ಯಕ್ಷ ಹೊನ್ನ ನಾಯಕ, ಭೈರಾಪುರ ಗ್ರಾಪಂ ಮಾಜಿ ಉಪಾಧ್ಯಕ್ಷ ತಿರುಮಕೂಡಲು ಪುಟ್ಟು, ತಾಲೂಕು ನಾಯಕರ ಸಂಘದ ಮಾಜಿ ಕಾರ್ಯದರ್ಶಿ ನಾಗರಾಜು, ಮಹದೇವ್, ಮೊಳೆಹುಂಡಿ ಮಹದೇವಣ್ಣ, ಡಣಾಯಕನಪುರ ಸ್ವಾಮಿ, ಕಿರಗಸೂರು ಗ್ರಾಪಂ ಮಾಜಿ ಅಧ್ಯಕ್ಷ ಹುಣಸೂರು ರವಿ, ಉಪಾಧ್ಯಕ್ಷ ನಾಗರಾಜು, ಸುಬ್ಬನಾಯಕ, ಜೋಗಿ ಕೃಷ್ಣ, ಕುಮಾರ, ಇಂಡವಾಳು ಬಸವರಾಜು ಮತ್ತಿತರಿದ್ದರು.



ಇತ್ತೀಚೆಗೆ ಅಪಘಾತದಲ್ಲಿ ನಿಧನರಾದ ಹುಣಸೂರು ಛಾಯಾಗ್ರಾಹಕರ ಸಂಘದ ಸದಸ್ಯ ಸನ್ನಿಧಿ ಮಂಜು ಅವರ ಕುಟುಂಬದ ಸದಸ್ಯರಿಗೆ ಛಾಯಾಗ್ರಾಹಕರ ಸಂಘದಿಂದ 55 ಸಾವಿರ ರೂ. ಸಹಾಯಧನ ನೀಡಿ ಸಾಂತ್ವನ ಹೇಳಲಾಯಿತು. ಈ ವೇಳೆ ಸಂಘದ ಅಧ್ಯಕ್ಷ ರಾಮಸ್ವಾಮಿ, ಸದಸ್ಯರಾದ ಗಜೇಂದ್ರ, ರಘು, ವೇಣು, ಕಾವೇರಿ, ಮಂಜು ಇತರರಿದ್ದರು.

ಕಾನೂನು ಸೇವಾ ಪ್ರಾಧಿಕಾರದಿಂದ ಎಲ್ಲಾ ವರ್ಗಕ್ಕೂ ನ್ಯಾಯ

ಹಿರಿಯ ಜೆಎಂಎಫ್‌ಸಿ ನ್ಯಾಯಧೀಶ ಕೆ.ಜೆ.ಸತೀಶ್



ಹೆಚ್.ಡಿ.ಕೋಟೆ, ಜೂ.13– ಸಮಾಜದ ಎಲ್ಲಾ ವರ್ಗದವರಿಗೂ ನ್ಯಾಯ ಒದಗಿಸುವುದು ಕಾನೂನು ಸೇವಾ ಪ್ರಾಧಿಕಾರದ ಉದ್ದೇಶ ಎಂದು ಸಿವಿಲ್ ಮತ್ತು ಹಿರಿಯ ಜೆಎಂಎಫ್‌ಸಿ ನ್ಯಾಯಧೀಶ ಕೆ.ಜೆ.ಸತೀಶ್ ತಿಳಿಸಿದರು.

ತಾಲೂಕಿನ ಬೀಚನಹಳ್ಳಿ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಮಂಗಳವಾರ ತಾಲೂಕು ಕಾನೂನು ಸೇವಾ ಸಮಿತಿ, ತಾಲೂಕು ವಕೀಲರ ಸಂಘ, ಸರ್ಕಾರಿ ಅಭಿಯೋಜನಾ ಇಲಾಖೆ, ಅರಣ್ಯ ಇಲಾಖೆ, ಬೀಚನಹಳ್ಳಿ ಪದವಿ ಪೂರ್ವ ಕಾಲೇಜು, ಸರ್ಕಾರಿ ಪ್ರೌಢಶಾಲೆ ಹಾಗೂ ಬೀಚನಹಳ್ಳಿ ಗ್ರಾಪಂ ಸಂಯುಕ್ತಾಶ್ರಯದಲ್ಲಿ ನಡೆದ ವಿಶ್ವ ಪರಿಸರ ದಿನ ಮತ್ತು ವಿಶ್ವಬಾಲ ಕಾರ್ಮಿಕ ವಿರೋಧಿ ದಿನದ ಕುರಿತು ಕಾನೂನು ಅರಿವು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರತಿದಿನ ನ್ಯಾಯಾಲಯಕ್ಕೆ ಬಡವರು ನ್ಯಾಯ ಬೇಡಿ ಬರುತ್ತಾರೆ. ಕೆಲವರಿಗೆ ಕಾನೂನು ಸೇವಾ ಪ್ರಾಧಿಕಾರದ ಬಗ್ಗೆ ಅರಿವಿರುವುದಿಲ್ಲ. ಮಹಿಳೆಯರು, ಮಕ್ಕಳಿಗೆ ಉಚಿತವಾಗಿ ಕಾನೂನು ಸೇವೆಯ ಅವಕಾಶ ಇದೆ. ನಿಮ್ಮ ಮೂಲ ಅವಶ್ಯಕತೆಗಳಿಗೆ ಧಕ್ಕೆಯಾದರೇ ಕಾನೂನು ಸೇವಾ ಕೇಂದ್ರಕ್ಕೆ ಮನವಿ ಸಲ್ಲಿಸಬಹುದು ಎಂದರು.

ಪ್ರಸ್ತುತ ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುತ್ತಿದೆ ಹೀಗಾಗಿ ವಿದ್ಯಾರ್ಥಿಗಳು ಕಷ್ಟಪಟ್ಟು ಓದುವ ಮೂಲಕ ಉತ್ತಮ ಅಧಿಕಾರಿಗಳಾಗಿ ಪರಿಸರ ಬೆಳವಣಿಗೆಗೆ ಪ್ರತಿಯೊಬ್ಬರೂ ಮುಂದಾಗಿ ಎಂದು ಸಲಹೆ ನೀಡಿದರು.

ಇದೇ ವೇಳೆ ಪರಿಸರ ಹಾಗೂ ಕಾನೂನಿನ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲಾಯಿತು. ನಂತರ ವಿದ್ಯಾರ್ಥಿಗಳಿಗೆ ಉಚಿತವಾಗಿ ಸಸಿಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ವಕೀಲರ ಸಂಘದ ತಾಲೂಕು ಅಧ್ಯಕ್ಷ ರವಿಕುಮಾರ್, ಉಪಾಧ್ಯಕ್ಷ ದಿನೇಶ್, ಪದವಿ ಪೂರ್ವ ಕಾಲೇಜಿನ ಎಸ್‌ಡಿಎಂಸಿ ಅಧ್ಯಕ್ಷ ಭಾಸ್ಕರ್, ವಕೀಲರಾದ ಸರಸ್ವತಿ, ಶಂಕರ್, ಕುಮಾರ್ ನಾಯಕ್, ನಾಗೇಶ್, ಪ್ರಾಂಶುಪಾಲ ಪರಮೇಶ್, ವಲಯ ಅರಣ್ಯಾಧಿಕಾರಿ ಪ್ರಸನ್ನ ಕುಮಾರ್, ಸಹಾಯಕ ವಲಯ ಅರಣ್ಯ ಅಧಿಕಾರಿ ಚಂದನ್, ಮುಖ್ಯ ಶಿಕ್ಷಕ ನಾಗಣ್ಣ, ದೈಹಿಕ ಶಿಕ್ಷಕ ರಮೇಶ್, ಉಪನ್ಯಾಸಕರಾದ ಸಿದ್ದನಾಯ್ಕ, ಕುಮಾರ್, ಪದ್ಮಾವತಿ, ಶಿಲ್ಪ, ಸ್ನೇಹ, ರವಿಕುಮಾರ್, ಮಹೇಶ್, ವಿನೋದ್, ಶ್ರೀನಿವಾಸ್, ವತ್ಸಲ, ಮಹೇಶ, ವಿನೋದ್, ಶ್ರೀನಿವಾಸ್, ಶಿಕ್ಷಕರಾದ ಮಮತಾ, ಸುಮಾ, ಗೋಕಿಲ ರಘು, ಚನ್ನನಾಯಕ, ವಿದ್ಯಾರ್ಥಿ, ವಿದ್ಯಾರ್ಥಿನಿಯರು ಅರಣ್ಯ ಇಲಾಖೆ ಸಿಬ್ಬಂದಿ ವರ್ಗದವರು ಇದ್ದರು.

ರೈತರು ತಮ್ಮ ಹಕ್ಕುಗಳಿಗಾಗಿ ಸಂಘಟಿತರಾಗಿ ಹೋರಾಡಿ

ರೈತಪರ್ವ ಸಂಘಟನೆ ರಾಜ್ಯಾಧ್ಯಕ್ಷ ಅರುಣ್‌ಕುಮಾರ್



ನಂಜನಗೂಡು, ಜೂ.13– ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ರೈತರ ಬದುಕನ್ನು ಹಸನುಗೊಳಿಸುವುದಾಗಿ ಅಧಿಕಾರಕ್ಕೆ ಬಂದು ರೈತರ ಬೆಳೆಗಳಿಗೆ ವೈಜ್ಞಾನಿಕ ಬೆಲೆ ಕೊಡದೆ ವಂಚಿಸುತ್ತಿವೆ. ಹೀಗಾಗಿ ರೈತರು ಜಾಗೃತರಾಗಿ ತಮ್ಮ ಹಕ್ಕುಗಳನ್ನು ಪಡೆಯಲು ಸಂಘಟಿತರಾಗಿ ಹೋರಾಡಬೇಕಾದ ಅನಿವಾರ್ಯತೆ ಎದುರಾಗಿದೆ ಎಂದು ರೈತಪರ್ವ ಸಂಘಟನೆ ರಾಜ್ಯಾಧ್ಯಕ್ಷ ಅರುಣ್‌ಕುಮಾರ್ ತಿಳಿಸಿದರು.

ತಾಲೂಕಿನ ಹೊರಳವಾಡಿ ಗ್ರಾಮದಲ್ಲಿ ರೈತಪರ್ವ ಗ್ರಾಮ ಘಟಕದ ನಾಮಫಲಕ ಉದ್ಘಾಟಿಸಿ ಮಾತನಾಡಿದ ಅವರು, ಎಲ್ಲಾ ಸರ್ಕಾರಗಳು ಕೃಷಿ ಪರಿಕರಗಳ ಬೆಲೆ ಕಡಿಮೆಗೊಳಿಸಿ, ರೈತರ ಆದಾಯ ದುಪ್ಪಟ್ಟುಗೊಳಿಸುವುದಾಗಿ ಹೇಳಿ ಅಧಿಕಾರಕ್ಕೆ ಬಂದ ಮೇಲೆ ರೈತರನ್ನು ವಂಚಿಸುತ್ತಿವೆ. ರೈತ ತಾನು ಬೆಳೆದ ಬೆಳೆಗಳಿಗೆ ವೈಜ್ಞಾನಿಕ ಬೆಲೆ ಸಿಗದೆ ಆರ್ಥಿಕ ಸಂಕಷ್ಟಕ್ಕೆ ಸಿಲುಕಿ ಆತ್ಮಹತ್ಯೆ ದಾರಿ ಹಿಡಿಯುತ್ತಿದ್ದಾನೆ. ಇಂದಿನ ಯುವ ಪೀಳಿಗೆ ಕೃಷಿಯಲ್ಲಿ ಆದಾಯ ವಿಲ್ಲ ಎಂದು ಕೃಷಿಯಿಂದ ವಿಮುಖರಾಗಿ ಕೂಲಿ ಕೆಲಸಗಳತ್ತ ಮುಖ ಮಾಡುತ್ತಿದ್ದಾರೆ. ನಮ್ಮ ಫಲವತ್ತಾದ ಕೃಷಿ ಭೂಮಿ ಕಾರ್ಪೋರೇಟ್ ಮಾಲೀಕರ ಪಾಲಾಗುತ್ತಿದೆ. ಅಲ್ಲದೇ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜೀವನ ನಡೆಸುವುದು ಕಷ್ಟವಾಗಿದೆ. ಕಳೆದ 75 ವರ್ಷಗಳಿಂದ ರೈತ ತನ್ನ ಬೆಳೆಗಳಿಗೆ ವೈಜ್ಞಾನಿಕ ಬೆಲೆ ನಿಗದಿಗೊಳಿಸುವಂತೆ ಹೋರಾಟ ನಡೆಸುತ್ತಿದ್ದರೂ ಸಹ ರೈತರ ಒಗ್ಗಟ್ಟಿನ ಕೊರತೆಯಿಂದ ಹೋರಾಟ ಸಫಲಗೊಂಡಿಲ್ಲ. ರಾಜಕಾರಣಿಗಳು ರೈತರನ್ನು ಒಡೆದು ಆಳುತ್ತಿದ್ದಾರೆ ಎಂದು ಆರೋಪಿಸಿದರು.

ಮುಂಬರುವ ದಿನಗಳಲ್ಲಿ ರೈತರು ಜಾಗೃತರಾಗಿ ತಮಗೆ ಸಿಗಬೇಕಾದ ಹಕ್ಕು, ಸವಲತ್ತುಗಳನ್ನು ಪಡೆಯಲು ಸಂಘಟಿತರಾಗಿ ಹೋರಾಡಲು ಮುಂದಾಗಬೇಕು. ಕರ್ನಾಟಕ ರಾಜ್ಯ ರೈತಪರ್ವ ಸಂಘಟನೆ ರೈತರ ಸಂಕಷ್ಟಗಳಿಗೆ ಸ್ಪಂದಿಸುತ್ತಾ, ರೈತರನ್ನು ಒಗ್ಗೂಡಿಸಿ ರೈತರ ಹಕ್ಕುಗಳ ಬಗ್ಗೆ ಅರಿವು ಮೂಡಿಸುವ ಕೆಲಸ ಮಾಡುತ್ತಾ ಬಂದಿದೆ. ಪ್ರತಿಯೊಬ್ಬ ರೈತರು ಸಹ ಸಂಘಟನೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದರು.

ಈ ವೇಳೆ ಪ್ರಧಾನ ಕಾರ್ಯದರ್ಶಿ ಮಂಜುಳಾ, ಜಿಲ್ಲಾಧ್ಯಕ್ಷೆ ಸುಮಲತಾ, ಮುಖಂಡರಾದ ಪ್ರವೀಣ್‌ಕುಮಾರ್, ತಾಲೂಕು ಅಧ್ಯಕ್ಷ ಕೃಷ್ಣನಾಯಕ, ಮಧುಸೂಧನ್ ಸೇರಿದಂತೆ ಹಲವರಿದ್ದರು.



ಹುಣಸೂರು ತಾಲೂಕಿನ ಗಾವಡಗೆರೆ ಹೋಬಳಿಯ ಹಿರೀಕ್ಯಾತನಹಳ್ಳಿ ಗ್ರಾಮದ ಹೊರವಲಯದಲ್ಲಿರುವ ಕೆರೆ ಅಂಗಳದಲ್ಲಿ ನೆಲೆಸಿರುವ ಅಮ್ಮನ ಗುಡಿ ಕಟ್ಟೆ ಪಟ್ಟಲದಮ್ಮ ದೇವಿಯ ಕೆರೆ ಹಬ್ಬವನ್ನು ಸಡಗರ ಸಂಭ್ರಮದಿಂದ ಗ್ರಾಮಸ್ಥರು ಆಚರಿಸಿದರು.

36 ಗ್ರಾಪಂ ವ್ಯಾಪ್ತಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಕ್ರಮವಹಿಸಿ

ಅಧಿಕಾರಿಗಳಿಗೆ ಜಿಪಂ ಸಿಇಓ ಕೆ.ಎಂ.ಗಾಯಿತ್ರಿ ಸೂಚನೆ



ಮೈಸೂರು, ಜೂ.13(ಎಂಕೆ)– ಟಿ.ನರಸೀಪುರ ತಾಲೂಕಿನ 36 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಬರುವಂತಹ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಮುಂಜಾಗ್ರತಾ ಕ್ರಮವಹಿಸಿ ಎಂದು ಜಿಪಂ ಸಿಇಓ ಕೆ.ಎಂ.ಗಾಯಿತ್ರಿ ಸೂಚಿಸಿದರು.


ಟಿ.ನರಸೀಪುರ ತಾಪಂ ಸಭಾಂಗಣದಲ್ಲಿ ಮಂಗಳವಾರ ಇಓ ಮತ್ತು ಪಿಡಿಓಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಗ್ರಾಮಸ್ಥರ ಜೊತೆಗೆ ಜಾನುವಾರುಗಳಿಗೂ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಕ್ರಮವಹಿಸಿ ಎಂದರು.

ಜೆಜೆಎಂ, ನರೇಗಾ ಯೋಜನೆ, ಸ್ವಚ್ಛ ಭಾರತ್ ಅಭಿಯಾನ, ಮಿಷನ್ ಅಂತ್ಯೋದಯ, ಎನ್‌ಆರ್‌ಎಲ್‌ಎಂ ಯೋಜನೆ, ಡಿಜಿಟಲ್ ಗ್ರಂಥಾಲಯ ಸೇರಿದಂತೆ ಹಲವು ಅಭಿವೃದ್ಧಿ ವಿಚಾರಗಳನ್ನು ಚರ್ಚಿಸಿದರಲ್ಲದೆ ನರೇಗಾ ಯೋಜನೆಯಡಿ ಕಡಿಮೆ ಮಾನವ ದಿನಗಳನ್ನು ಸಾಧಿಸಿರುವ ಗ್ರಾಮ ಪಂಚಾಯಿತಿಗಳಿಗೆ ಹೆಚ್ಚು ಮಾನವ ದಿನಗಳನ್ನು ಸಾಧಿಸಲು ಸೂಚನೆ ನೀಡಿದರು.

ನಂತರ ಗರ್ಗೇಶ್ವರಿ ಗ್ರಾಮ ಪಂಚಾಯಿತಿಯ ಘನ ತ್ಯಾಜ್ಯ ವಿಲೇವಾರಿ ಘಟಕ ಹಾಗೂ ಡಿಜಿಟಲ್ ಅಂಗನವಾಡಿಗೆ ಭೇಟಿ ನೀಡಿ ಪರಿಶೀಲಿಸಿದರು. ತಾಪಂ ಇಓ ಸಿ.ಕೃಷ್ಣ ತಾಲ್ಲೂಕಿನ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಎಇಇ ರಶ್ಮಿ, ಸಹಾಯಕ ನಿರ್ದೇಶಕ ಶಶಿಕುಮಾರ್, ಸಹಾಯಕ ನಿರ್ದೇಶಕ ಮಾದೇಶ್, ಸಹಾಯಕ ಲೆಕ್ಕಾಧಿಕಾರಿ ಸುರೇಖಾ, ತಾಲೂಕು ಯೋಜನಾಧಿಕಾರಿ ಜಯಂತಿ, ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು, ತಾಂತ್ರಿಕ ಸಂಯೋಜಕರು, ತಾಂತ್ರಿಕ ಸಹಾಯಕ ಅಭಿಯಂತರರು, ಎನ್‌ಆರ್‌ಎಲ್‌ಎಂ ಸಿಬ್ಬಂದಿಗಳು ಹಾಗೂ ತಾಲೂಕು ಪಂಚಾಯಿತಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಲೋಕಸಭಾ ಚುನಾವಣೆ: ಚಾ.ನಗರ ಕ್ಷೇತ್ರದ ಟಿಕೆಟ್ ನೀಡಿ

ಬಿ.ಎಲ್.ಸಂತೋಷ್‌ಗೆ ಅರ್ಜುನ್ ರಮೇಶ್ ಮನವಿ



ತಿ.ನರಸೀಪುರ, ಜೂ.13– ಕಳೆದ 15 ವರ್ಷಗಳಿಂದ ಪಕ್ಷ ಸಂಘಟನೆಯಲ್ಲಿ ತೊಡಗಿಸಿಕೊಂಡಿರುವ ನನ್ನನ್ನು ಮುಂಬರುವ ಲೋಕಸಭಾ ಚುನಾವಣೆ ವೇಳೆ ಪಕ್ಷದ ಟಿಕೆಟ್ ಕೊಡುವ ಸಂದರ್ಭ ಚಾಮರಾಜನಗರ ಕ್ಷೇತ್ರದಿಂದ ಪರಿಗಣಿಸಬೇಕು ಎಂದು ಪುರಸಭಾ ಸದಸ್ಯರೂ ಆದ ನಟ ಅರ್ಜುನ್ ರಮೇಶ್ ಮನವಿ ಮಾಡಿದರು.

ದೆಹಲಿಯ ಬಿಜೆಪಿ ಕಚೇರಿಯಲ್ಲಿ ಪಕ್ಷದ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್.ಸಂತೋಷ್ ಅವರನ್ನು ಭೇಟಿಯಾದ ಅರ್ಜುನ್, ಪ್ರಮುಖವಾಗಿ ಪಕ್ಷದಲ್ಲಿ ನನಗೆ ಯಾವುದಾದರೊಂದು ಸ್ಥಾನಮಾನ ನೀಡಿ ಸಂಘಟನೆಯಲ್ಲಿ ನನ್ನನ್ನು ತೊಡಗಿಸಿಕೊಳ್ಳಬೇಕು. ಭಾರತೀಯ ಜನತಾ ಪಕ್ಷದ ಚುನಾಯಿತ ಪ್ರತಿನಿಧಿಯಾಗಿ ತಾಲೂಕು ಕೇಂದ್ರದಲ್ಲಿ ಜನಸೇವಾ ಕೇಂದ್ರ ಕಚೇರಿ ತೆರೆದು ನಿರಂತರವಾಗಿ ಜನರೊಂದಿಗೆ ಸಂಪರ್ಕದಲ್ಲಿದ್ದೇನೆ. ಅಲ್ಲದೇ ಚಲನಚಿತ್ರ, ಕಿರುತೆರೆಯಲ್ಲಿ ನಟಿಸುವ ಮೂಲಕ ತಕ್ಕಮಟ್ಟಿಗೆ ಹೆಸರು ಮಾಡಿದ್ದೇನೆ. ಹೀಗಾಗಿ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ನನಗೊಂದು ಅವಕಾಶ ನೀಡುವಂತೆ ಮನವಿ ಮಾಡಿದ ಅವರು, ತಿ.ನರಸೀಪುರ ಕ್ಷೇತ್ರದ ಮತದಾರನಾಗಿರುವ ನಾನು ಸಿಎಂ ಕ್ಷೇತ್ರದಲ್ಲಿ ಚುನಾವಣೆಗೆ ಸ್ಪರ್ಧಿಸಿ ಹೆಚ್ಚಿನ ಮತ ಹಾಗೂ ಅಂತರದಿಂದ ಗೆದ್ದು ಪುರಸಭಾ ಸದಸ್ಯನಾಗಿದ್ದೇನೆ. ಯುವಕರಿಗೆ ಆದ್ಯತೆ ನೀಡುವ ನಿಟ್ಟಿನಲ್ಲಿ ಪಕ್ಷ ಸಂಘಟನೆ ಜವಾಬ್ದಾರಿ ವಹಿಸುವಂತೆ ಸಂತೋಷ್ ಅವರಿಗೆ ಮನವಿ ಸಲ್ಲಿಸಿದರು.

ಅರ್ಜುನ್ ಮನವಿ ಆಲಿಸಿದ ಬಿಜೆಪಿ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್.ಸಂತೋಷ್ ತಾವು ಎಲ್ಲವನ್ನೂ ಗಮನಿಸುತ್ತಿದ್ದು, ಎಲ್ಲವೂ ಒಳ್ಳೆಯದಾಗಲಿದೆ. ಹೀಗಾಗಿ ಪಕ್ಷ ಸಂಘಟನೆಯಲ್ಲಿ ತೊಡಗುವಂತೆ ತಿಳಿಸಿದರು. ಈ ವೇಳೆ ಮಾಜಿ ವಿಧಾನಪರಿಷತ್ ಸದಸ್ಯ ಸಿ.ರಮೇಶ್ ಹಾಜರಿದ್ದರು.

ತೋಟಪ್ಪಶೆಟ್ಟಿ ನಿಧನ



ಬೆಟ್ಟದಪುರ, ಜೂ.13– ಬೆಟ್ಟದಪುರ ನಿವಾಸಿ, ಮಾಜಿ ಗ್ರಾಪಂ ಸದಸ್ಯ ತೋಟಪ್ಪಶೆಟ್ಟಿ(65) ಮಂಗಳವಾರ ಅನಾರೋಗ್ಯದಿಂದ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಇದೇ ವೇಳೆ ಮೃತರ ಕಣ್ಣು, ಕಿಡ್ನಿ, ಚರ್ಮವನ್ನು ಮಣಿಪಾಲ್ ಆಸ್ಪತ್ರೆಗೆ ದಾನ ಮಾಡಲಾಯಿತು. ಮೃತರು ಪತ್ನಿ, ಮಾಜಿ ತಾಪಂ ಸದಸ್ಯರೂ ಆದ ಜಿಲ್ಲಾ ಮಹಿಳಾ ಕಾಂಗ್ರೆಸ್ ಉಪಾಧ್ಯಕ್ಷೆ ಬಿ.ವಿ.ಅನಿತಾ, ಓರ್ವ ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಬೆಂಗಳೂರಿನ ಬನಶಂಕರಿ ಹಿಂದೂ ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಅತಿಕ್ರಮ ತೆರವುಗೊಳಿಸಿ, ರೈತರಿಗೆ ಸಾಗುವಳಿ ಪತ್ರ ನೀಡಿ

ದಲಿತ ಸಂಘರ್ಷ ಸಮಿತಿ (ಬಣ ರಹಿತ) ಒತ್ತಾಯ



ತಿ.ನರಸೀಪುರ, ಜೂ.13– ತಲಕಾಡು ಹೋಬಳಿ ಪರಿಣಾಮಿಪುರ, ಮೇದನಿ, ಬಣವೆ, ಮಡವಾಡಿ ಭಾಗದ ಪರಿಶಿಷ್ಟ ಜಾತಿ ಮತ್ತು ಪಂಗಡದ ರೈತರ ಭೂಮಿಯನ್ನು ಕೆಲವರು ಅತಿಕ್ರಮ ಮಾಡಿಕೊಂಡಿರುವುದನ್ನು ತೆರವು ಗೊಳಿಸಿ, ರೈತರಿಗೆ ಅವರ ಅನುಭವದ ಆಧಾರದ ಮೇಲೆ ಸಾಗುವಳಿ ಪತ್ರ ನೀಡಿ ಖಾತೆ ಮಾಡಿಕೊಡಬೇಕೆಂದು ದಲಿತ ಸಂಘರ್ಷ ಸಮಿತಿ (ಬಣ ರಹಿತ) ಒತ್ತಾಯಿಸಿದೆ.

ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಮಿತಿಯ ಜಿಲ್ಲಾ ಸಂಚಾಲಕ ಸಿ.ಉಮಾ ಮಹದೇವ, ನರಸೀಪುರದಾದ್ಯಂತ ಸರ್ಕಾರಿ ಭೂಮಿಯನ್ನು ಭೂಗಳ್ಳರು ಕಬಳಿಸುತ್ತಿದ್ದಾರೆ. ತಾಲೂಕು ಆಡಳಿತ, ಜಿಲ್ಲಾಡಳಿತ ಯಾವುದೇ ಕ್ರಮ ಕೈಗೊಳ್ಳದಿರುವುದು ಆಘಾತಕಾರಿ ವಿಚಾರ. ತಲಕಾಡು ಹೋಬಳಿ ಮಡವಾಡಿ ಎಲ್ಲೆ ಸರ್ವೇ ನಂಬರ್ 93/1 ರಲ್ಲಿ 250 ಎಕರೆ ಹಾಗೂ ಹೊಳೆಸಾಲು ಎಲ್ಲೆ ಸರ್ವೇ ನಂಬರ್ 746ರಲ್ಲಿ 199 ಎಕರೆ ಸರ್ಕಾರಿ ದರಖಾಸ್ತು ಭೂಮಿ ಇದ್ದು, ಈ ಪೈಕಿ ಕಳೆದ 50 ವರ್ಷಗಳಿಗೂ ಹೆಚ್ಚು ಕಾಲ ಅನುಭೋಗದಲ್ಲಿರುವ ಭೂಮಿ ಇಲ್ಲದ ದಲಿತರಿಗೆ ಸರ್ಕಾರ ಸಾಗುವಳಿ ಚೀಟಿ ನೀಡಿ ಖಾತೆ ಕಂದಾಯ ಮಾಡಿ ಕೊಟ್ಟಿದೆ. ಆದರೂ ಕೆಲವು ವ್ಯಕ್ತಿಗಳು ಪರಿಶಿಷ್ಟ ವರ್ಗದ ರೈತರು ಸಾಗುವಳಿ ಮಾಡುತ್ತಿರುವ ಜಮೀನು ನಮಗೆ ಮಂಜೂರಾಗಿದೆ. ಈ ಎಲ್ಲಾ ಆಸ್ತಿ ನಮ್ಮದು ಎಂದು ಅತಿಕ್ರಮ ಪ್ರವೇಶ ಮಾಡಿ ತನ್ನ ಹೆಸರಿನಲ್ಲಿ ಯಾವುದೇ ದಾಖಲಾತಿಗಳು ಇಲ್ಲದಿದ್ದರೂ, ನನ್ನ ಹತ್ತಿರ ಎಲ್ಲಾ ದಾಖಲೆ ಇವೆ ಎಂದು ಬಿಂಬಿಸುತ್ತಾ ರೈತರ ಜಮೀನನ್ನು ಅತಿಕ್ರಮ ಮಾಡುತ್ತಿರುವ ಬಗ್ಗೆ ಸಾಕಷ್ಟು ದೂರುಗಳು ಕೇಳಿ ಬಂದಿವೆ ಎಂದರು.

ಈ ಬಗ್ಗೆ ಜಿಲ್ಲಾಧಿಕಾರಿಗಳು ಖುದ್ದು ಸ್ಥಳಕ್ಕೆ ಭೇಟಿ ನೀಡಿ ದಾಖಲಾತಿ ಪರಿಶೀಲಿಸಿ ಸಾಗುವಳಿ ಪತ್ರ ಮತ್ತು ಅನುಭವದ ಆಧಾರದ ಮೇಲೆ ರೈತರಿಗೆ ಖಾತೆ ಮಾಡಿ ಕೊಡಬೇಕು. ಇನ್ನು ಉಳಿಯುವ ನೂರಾರು ಎಕರೆ ಭೂಮಿಯನ್ನು ಸ್ಮಶಾನ ಮತ್ತು ಸಾರ್ವಜನಿಕ ಉದ್ದೇಶಕ್ಕೆ ತಮ್ಮ ಖಾಸಗಿ ಆಸ್ತಿ ಬಿಟ್ಟುಕೊಡುವ ರೈತರಿಗೆ ಸದರಿ ಭೂಮಿಯಲ್ಲಿ ದುಪ್ಪಟ್ಟು ಭೂಮಿ ನೀಡಬೇಕು. ಆ ಮೂಲಕ ರೈತರು ತಮ್ಮ ಖಾಸಗಿ ಜಮೀನನ್ನು ಸ್ಮಶಾನ ಸೇರಿದಂತೆ ಇತರ ಉದ್ದೇಶಗಳಿಗಾಗಿ ರೈತರು ಜಮೀನುಗಳನ್ನು ನೀಡುವಂತೆ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ದಲಿತ ಸಂಘರ್ಷ ಸಮಿತಿ ತಾಲೂಕು ಸಂಚಾಲಕ ಕೇತುಪುರ ಶಿವಪ್ರಕಾಶ್, ತಾಲೂಕು ಸಂಘಟನಾ ಸಂಚಾಲಕರಾದ ಚಂದಳ್ಳಿ ಮಲ್ಲೇಶ್, ಪರಿಣಾಮಿಪುರ ಕುಮಾರಸ್ವಾಮಿ, ಕಲಾವಿದರ ದಲಿತ ಕಲಾವಿದರ ಸಂಘದ ಪ್ರಧಾನ ಕಾರ್ಯದರ್ಶಿ ಸಿ.ಬಿ.ಹುಂಡಿ ನಾಗೇಶ್, ಮರೋಪುರ ಮಲ್ಲಿಕಾರ್ಜುನ, ಸಂತೋಷ್ ಕುಮಾರ್ ಪರಿಣಾಮಿಪುರ, ಮೇದನಿ ಗ್ರಾಮದವರಾದ ಬಸವರಾಜು, ಬಣವೆ ಗ್ರಾಮದ ರೈತರಾದ ಮಹೇಶ್ ಅರುಣ್, ದುಂಡು ಮಾದಯ್ಯ ಮತ್ತಿತರರಿದ್ದರು.

ಶಕ್ತಿ ಯೋಜನೆಯಿಂದ ಟ್ಯಾಕ್ಸಿ, ಆಟೋವಾಲಾಗಳಿಗೆ ಭಾರಿ ನಷ್ಟ

ಕೆಎಸ್‌ಆರ್‌ಟಿಸಿಯ ಉಚಿತ ಪ್ರಯಾಣದ ಮೊರೆ ಹೋಗುತ್ತಿರುವ ಮಹಿಳೆಯರು

ಮೈಸೂರು, ಜೂ.13(ಎಸ್‌ಪಿಎನ್)– ಕೆಎಸ್‌ಆರ್‌ಟಿಸಿಯಲ್ಲಿ 'ಶಕ್ತಿ ಯೋಜನೆ' ಮೂಲಕ ರಾಜ್ಯಾದ್ಯಂತ ಮಹಿಳೆಯರಿಗೆ ಉಚಿತ ಪ್ರಯಾಣಕ್ಕೆ ಅವಕಾಶ ಮಾಡಿಕೊಟ್ಟಿರುವ ಪರಿಣಾಮ ಇತರರು ಅನುಭವಿಸುತ್ತಿದ್ದಾರೆ. ಕಳೆದ ಎರಡು ದಿನಗಳಿಂದ ಪ್ರವಾಸಿ ಟ್ಯಾಕ್ಸಿ, ಟೆಂಪೊ ಟ್ರಾವಲರ್‌ಗಳು ಮತ್ತು ಆಟೋರಿಕ್ಷಾಗಳವರು ಭಾರಿ ನಷ್ಟ ಅನುಭವಿಸುತ್ತಿದ್ದಾರೆ.

ಎರಡು ದಿನಗಳ ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಬೆಂಗಳೂರು ವಿಧಾನಸೌಧ ಮುಂಭಾಗ ಶಕ್ತಿ ಯೋಜನೆಗೆ ಚಾಲನೆ ನೀಡಿದರು. ಇದರ ಪರಿಣಾಮ ಪ್ರವಾಸಿ ಟ್ಯಾಕ್ಸಿ, ಆಟೋರಿಕ್ಷಾಗಳ ಆದಾಯಕ್ಕೆ ತೀವ್ರ ಧಕ್ಕೆ ಉಂಟಾಗಿದೆ.

> ಶಕ್ತಿ ಯೋಜನೆ ಜಾರಿಯಾದ ದಿನದಿಂದ ನಮ್ಮ ಆದಾಯ ಸಂಪೂರ್ಣ ನೆಲ ಕಚ್ಚಿದೆ. ಈ ಯೋಜನೆ ಘೋಷಣೆ ಪೂರ್ವದಲ್ಲಿ ದಿನಕ್ಕೆ 600 ರಿಂದ 800 ರೂ. ದುಡಿಯುತ್ತಿದ್ದೆವು. ಈಗ 250ಕ್ಕೆ ಬಂದಿದೆ. ಇದರಲ್ಲಿ ಜೀವನ ನಡೆಸಲು ಸಾಧ್ಯವೇ? ರಾಜ್ಯ ಸರ್ಕಾರ ಮಹಿಳಾ ಮತದಾರರನ್ನು ಖುಷಿ ಪಡಿಸಲು ಹೋಗಿ, ಬಡಪಾಯಿ ಆಟೋ ಚಾಲಕರ ಹೊಟ್ಟೆ ಮೇಲೆ ಹೊಡೆದಿದೆ.
> - ಸೈಯದ್ ವಾಸಿಂ, ಆಟೋ ಚಾಲಕ



ಧಾರ್ಮಿಕ ಕ್ಷೇತ್ರದ ಯಾತ್ರೆಗಳು ಖಾಸಗಿ ಪ್ರವಾಸಿ ಟ್ಯಾಕ್ಸಿಗಳ ಆದಾಯದ ಜೀವಾಳವಾಗಿತ್ತು. ಕೆಎಸ್‌ಆರ್‌ಟಿಸಿಯಲ್ಲಿ ಉಚಿತ ಸಂಚಾರ ಅನುವು ಮಾಡಿಕೊಟ್ಟಿರುವುದರಿಂದ ಧಾರ್ಮಿಕ ಪ್ರವಾಸ ಕೈಗೊಳ್ಳುವ ಮಹಿಳೆಯರು ಕೆಎಸ್‌ಆರ್‌ಟಿಸಿಯತ್ತ ಮುಖ ಮಾಡಿದ್ದು, ಇದರ ಎಫೆಕ್ಟ್ ಎರಡೇ ದಿನಕ್ಕೆ ಶೇ.20ರಷ್ಟು ತಟ್ಟಿದೆ ಎಂದು ಮೈಸೂರು ಜಿಲ್ಲಾ ಪ್ರವಾಸಿ ಟ್ಯಾಕ್ಸಿ ಮಾಲೀಕರು ಮತ್ತು ಚಾಲಕರ ಸಂಘದ ಗೌರವಾಧ್ಯಕ್ಷ ಬಿ.ಎಸ್.ಪ್ರಶಾಂತ್ 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿದರು.

ಮೈಸೂರು ಜಿಲ್ಲೆಯಲ್ಲಿ 1,500ಕ್ಕೂ ಹೆಚ್ಚು ಟೆಂಪೊ ಟ್ರಾವಲರ್‌ಗಳಿವೆ. 18 ಸೀಟಿನ ವಾಹನಕ್ಕೆ 7 ರಿಂದ 8 ಸಾವಿರ ಹಾಗೂ 21 ಸೀಟಿನ ಆಸನದ ಗಾಡಿಗಳಿಗೆ 3 ತಿಂಗಳಿಗೊಮ್ಮೆ 17 ಸಾವಿರ ರೋಡ್ ಟ್ಯಾಕ್ಸ್ ಕಟ್ಟಬೇಕಿದೆ. ಉಚಿತ ಪ್ರಯಾಣ ಹೀಗೆ ಮುಂದುವರೆದರೆ ಎಲ್ಲಾ ಮಾಲೀಕರು ತಮ್ಮತಮ್ಮ ಗಾಡಿಗಳನ್ನು ನಿಲ್ಲಿಸಿ, ಉದ್ಯಮವನ್ನು ಬಿಡಬೇಕಾದ ಪರಿಸ್ಥಿತಿ ಎದುರಾಗಬಹುದು ಎಂದು ಆತಂಕ ವ್ಯಕ್ತಪಡಿಸಿದರು.

12 ಕೋಟಿ ಆದಾಯ ಖೋತಾ?: ಶ್ರಾವಣ ಮಾಸದಲ್ಲಿ ರಾಜ್ಯದ ಕೆಲವರು ಚೀಟಿ ಹಾಕಿಕೊಂಡು ಧರ್ಮಸ್ಥಳ, ಕುಕ್ಕೆ ಸುಬ್ರಹ್ಮಣ್ಯ, ಕೊಲ್ಲೂರು ಮೂಕಾಂಬಿಕಾ, ಹೊರನಾಡು ಅನ್ನಪೂರ್ಣೇಶ್ವರಿ ದೇವಸ್ಥಾನ, ಶೃಂಗೇರಿ ಸೇರಿದಂತೆ ಇತರೆ ಧಾರ್ಮಿಕ ಸ್ಥಳಗೆ ಖಾಸಗಿ ಟೆಂಪೋ ಟ್ರಾವಲರ್‌ಗಳಲ್ಲಿ ಪ್ರವಾಸ ಕೈಗೊಳ್ಳುತ್ತಿದ್ದರು. ಈಗ ಅವರೆಲ್ಲರೂ ಕೆಎಸ್‌ಆರ್‌ಟಿಸಿ ಘೋಷಿಸಿರುವ 'ಶಕ್ತಿ ಯೋಜನೆ'ಯಡಿ ಪ್ರಯಾಣ ಮಾಡುವುದರಿಂದ ಆದಾಯ ನಷ್ಟವಾಗಲಿದೆ. ರಾಜ್ಯ ಸರ್ಕಾರಕ್ಕೆ ಕನಿಷ್ಠವೆಂದರೂ 3 ಕೋಟಿ ತೆರಿಗೆ (3 ತಿಂಗಳ ಅವಧಿಗೆ) ಖೋತಾ ಆಗಲಿದೆ. ವಾರ್ಷಿಕ ಅಂದಾಜು 12 ಕೋಟಿಯಷ್ಟು ಆದಾಯ ಈ ಉದ್ಯಮದಿಂದ ಖೋತಾ ಆಗಲಿದೆ ಎಂದು ತಿಳಿಸಿದರು.



ರಾಜ್ಯ ಸರ್ಕಾರ ತನ್ನ ಚುನಾವಣಾ ಸಂದರ್ಭದಲ್ಲಿ ನೀಡಿದ್ದ ಐದು ಗ್ಯಾರಂಟಿ ಯೋಜನೆಗಳು ಈಡೇರಿಸಲು ರಾಜ್ಯ ಸರ್ಕಾರಕ್ಕೆ ಸಾವಿರಾರು ಕೋಟಿ ರೂ. ಹೊರೆ ಬೀಳಲಿದೆ. ಮತದಾರರ ಖುಷಿಪಡಿಸಿಲು ಹೋಗಿ, ಬೊಕ್ಕಸಕ್ಕೆ ಧಕ್ಕೆ ತರಲಿದ್ದಾರೆ ಎಂದು ಚಾಲಕ ಅಶೋಕ್ 'ಮೈಸೂರು ಮಿತ್ರ'ನ ಬಳಿ ಆತಂಕ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರ ಘೋಷಿಸುತ್ತಿರುವ ಐದು ಗ್ಯಾರಂಟಿ ಯೋಜನೆಗಳಿಂದ ಒಂದರ್ಥದಲ್ಲಿ ಸರ್ಕಾರದ ಗಂಟು–ನೆಂಟು ಎರಡಕ್ಕೂ ಖೋತಾ ಆಗುವ ಕಾಲ ದೂರವಿಲ್ಲ ಎಂದು ಹೇಳಿದರು.

ಪರ್ಯಾಯ ವ್ಯವಸ್ಥೆ ಕಲ್ಪಿಸದೇ ರಸ್ತೆ ಬದಿ ವ್ಯಾಪಾರಿಗಳ ತೆರವು ಬೇಡ

ಮೈಸೂರು,ಜೂ.13(ಪಿಎಂ)– ನಗರದಲ್ಲಿ ಹಲವರು ಕುಟುಂಬದ ನಿರ್ವಹಣೆಗಾಗಿ ಬೀದಿಬದಿ ವ್ಯಾಪಾರ ಆಶ್ರಯಿಸಿದ್ದಾರೆ. ಪರ್ಯಾಯ ವ್ಯವಸ್ಥೆ ಕಲ್ಪಿಸದೇ ರಸ್ತೆ ಬದಿಯಿಂದ ಅವರನ್ನು ತೆರವುಗೊಳಿಸಲು ಮೈಸೂರು ಮಹಾನಗರ ಪಾಲಿಕೆ ಮುಂದಾಗಬಾರದು ಎಂದು ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾದ (ಎಸ್‌ಡಿಪಿಐ) ಜಿಲ್ಲಾಧ್ಯಕ್ಷ ರಫತ್ ಖಾನ್ ಒತ್ತಾಯಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದಲ್ಲಿ ರಸ್ತೆ ಬದಿ ವ್ಯಾಪಾರ ನಿರ್ಬಂಧಿಸಲು ಕೆಲ ಪಾಲಿಕೆ ಸದಸ್ಯರು ದೂರು ನೀಡುತ್ತಿರುವುದು, ಕ್ರಮಕ್ಕೆ ಆಗ್ರಹಿಸುತ್ತಿರುವುದು ಕೇಳಿಬಂದಿದೆ. ಉದ್ಯೋಗ ನಷ್ಟ, ಬೆಲೆಯೇರಿಕೆಗಳಿಂದ ಸಂಕಷ್ಟಕ್ಕೆ ಸಿಲುಕಿದ ಸಾಕಷ್ಟು ಮಂದಿ ಬೀದಿಬದಿ ವ್ಯಾಪಾರ ಅವಲಂಬಿಸಿದ್ದಾರೆ. ಅವರಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸದೇ ಏಕಾಏಕಿ ತೆರವು ಮಾಡಿಸಲು ಮುಂದಾಗಬಾರದು ಎಂದರು.



ರಸ್ತೆಬದಿಯಲ್ಲಿ ತರಕಾರಿ, ಹೂವು, ಹಣ್ಣುಗಳ ವ್ಯಾಪಾರ, ಫಾಸ್ಟ್‌ಫುಡ್ ವ್ಯಾಪಾರ ನಡೆಸುತ್ತಿದ್ದಾರೆ. ಇವರಲ್ಲಿ ವಿದ್ಯಾವಂತ ನಿರುದ್ಯೋಗಿಗಳಿದ್ದು, ಯಾವುದೇ ಅಡ್ಡದಾರಿ ಹಿಡಿಯದೇ ಗೌರವಯುತವಾಗಿ ದುಡಿದು ಬದುಕುತ್ತಿದ್ದಾರೆ. ಅವರಿಗೆ ಜನಪ್ರತಿನಿಧಿಗಳು, ಅಧಿಕಾರಿಗಳು ನೆರವಾಗಬೇಕು. ವ್ಯಾಪಾರಕ್ಕೆಂದು ಫುಡ್‌ಸ್ಟ್ರೀಟ್‌ಗಳನ್ನು ನಿರ್ಮಿಸಬೇಕು. ಅದನ್ನು ಬಿಟ್ಟು ತೆರವುಗೊಳಿಸಲು ಮುಂದಾದರೆ ಎಸ್‌ಡಿಪಿಐ ಹೋರಾಟ ನಡೆಸಲಿದೆ ಎಂದು ಎಚ್ಚರಿಸಿದರು.

ಬೀದಿ ಬದಿ ವ್ಯಾಪಾರಿಗಳು ಯಾವುದೇ ಸಮಸ್ಯೆ ಎದುರಾದರೂ ಎಸ್‌ಡಿಪಿಐ ಕಚೇರಿ ಸಂಪರ್ಕಿಸಬಹುದು (ಮೊ.ಸಂ. 88844 08755) ಎಂದರು.

ಎಸ್‌ಡಿಪಿಐ ರಾಜ್ಯ ಉಪಾಧ್ಯಕ್ಷ ದೇವನೂರು ಪುಟ್ಟನಂಜಯ್ಯ, ಜಿಲ್ಲಾ ಉಪಾಧ್ಯಕ್ಷ ಎಸ್.ಸ್ವಾಮಿ, ಪ್ರಧಾನ ಕಾರ್ಯದರ್ಶಿ ಸಫಿಉಲ್ಲಾ, ಜಿಲ್ಲಾ ಸಮಿತಿ ಸದಸ್ಯ ಮನ್ಸೂರ್‌ಖಾನ್ ಗೋಷ್ಠಿಯಲ್ಲಿದ್ದರು.

ಬಿಜೆಪಿ 'ರೇಟ್ ಕಾರ್ಡ್ ಮಾನನಷ್ಟ ಮೊಕದ್ದಮೆ' ಪ್ರಕರಣ

ಸಿದ್ದು, ಡಿಕೆಶಿ ಸೇರಿ 36 ಕೈ ನಾಯಕರ ವಿರುದ್ಧ ಕೋರ್ಟ್ ಸಮನ್ಸ್

ಬೆಂಗಳೂರು: ಬಿಜೆಪಿ 'ರೇಟ್ ಕಾರ್ಡ್ ಮಾನನಷ್ಟ ಮೊಕದ್ದಮೆ' ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್, ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಸೇರಿ 36 ಕೈ ಮುಖಂಡರಿಗೆ ಕೋರ್ಟ್ ಸಮನ್ಸ್ ಜಾರಿ ಮಾಡಿದೆ.

ಬೆಂಗಳೂರಿನ ಜನಪ್ರತಿನಿಧಿಗಳ ಕೋರ್ಟ್‌ನಿಂದ ಸಮನ್ಸ್ ಜಾರಿ ಮಾಡಲಾಗಿದ್ದು, ಜುಲೈ 28ರಂದು ಖುದ್ದು ಹಾಜರಾಗುವಂತೆ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್‌ಗೆ ಸೂಚನೆ ನೀಡಿದೆ. ಈ ಹಿಂದೆ ಬಿಜೆಪಿ ಸರ್ಕಾರದ ವಿರುದ್ಧ ಪ್ರತಿಭಟನೆ ವೇಳೆ ನಿಯಮ ಉಲ್ಲಂಘನೆ ಮಾಡಿದ ಆರೋಪದ ಮೇಲೆ ಕಾಂಗ್ರೆಸ್ ಮುಖಂಡರ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿದ್ದರು. ಇದೀಗ ಈ ಪ್ರಕರಣವು ವಿಚಾರಣೆಗೆ ಯೋಗ್ಯ ಎಂದು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಅಭಿಪ್ರಾಯಪಟ್ಟಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಇಂದು(ಜೂನ್ 13) ಜನಪ್ರತಿನಿಧಿಗಳ ಕೋರ್ಟ್ ಸಮನ್ಸ್ ನೀಡಿದೆ.

ಅರ್ಜಿ ವಿಚಾರಣೆ ನಡೆಸಿದ ನ್ಯಾಯಾಲಯವು ಸೂಕ್ತ ಕ್ರಮ ಕೈಗೊಳ್ಳಲು ನಿರ್ದೇಶನ ನೀಡಿದೆ. ಅಲ್ಲದೆ, ಈ ಪ್ರಕರಣವು ವಿಚಾರಣೆಗೆ ಯೋಗ್ಯವೆಂದು ಪರಿಗಣಿಸಿದೆ. ಹೀಗಾಗಿ ದೂರುದಾರರು ಮತ್ತು ಸಾಕ್ಷಿಗಳ ಹೇಳಿಕೆ ದಾಖಲಿಸಲು ದಿನಾಂಕವನ್ನು ನಿಗದಿ ಮಾಡಿದೆ. ಅಂತೆಯೇ ಕಾಂಗ್ರೆಸ್ ಮತ್ತು ಕಾಂಗ್ರೆಸ್ ನಾಯಕರ ವಿರುದ್ಧ ದಾಖಲಿಸಿದ್ದ ಮಾನನಷ್ಟ ಮೊಕದ್ದಮೆ ಪ್ರಕರಣದ ವಿಚಾರಣೆಯನ್ನು ಜುಲೈ 27ಕ್ಕೆ ಮುಂದೂಡಲಾಗಿದೆ. ಬಿಜೆಪಿ ಪರವಾಗಿ ವಕೀಲ ವಿನೋದ್ ಕುಮಾರ್ ಅವರು ಅರ್ಜಿ ಸಲ್ಲಿಸಿದ್ದರು. ನ್ಯಾ. ಜೆ. ಪ್ರೀತ್ ಅವರ ನ್ಯಾಯಪೀಠವು ವಿಚಾರಣೆ ನಡೆಸಲು ಅನುಮತಿ ನೀಡಿದೆ.

ಗುತ್ತಿಗೆದಾರ ಸಂತೋಷ್ ಪಾಟೀಲ್ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವ ಕೆ.ಎಸ್.ಈಶ್ವರಪ್ಪ ಅವರನ್ನು ಸಂಪುಟದಿಂದ ಕೈಬಿಡುವಂತೆ ಕಾಂಗ್ರೆಸ್ ಮುಖಂಡರು, ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ ಅವರ ನಿವಾಸದ ಮುಂದೆ ಪ್ರತಿಭಟನೆ ನಡೆಸಿದ್ದರು. ಈ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ, ಡಿಕೆ ಶಿವಕುಮಾರ್ ಹಾಗೂ ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲ ಸೇರಿದಂತೆ ಒಟ್ಟು 36 ಕಾಂಗ್ರೆಸ್ ನಾಯಕರ ವಿರುದ್ಧ ಪ್ರಕರಣ ದಾಖಲಿಸಲಾಗಿತ್ತು. ಬೆಂಗಳೂರಿನ ಹೈಗ್ರೌಂಡ್ಸ್ ಪೊಲೀಸ್ ಠಾಣೆಯಲ್ಲಿ ಕಾಂಗ್ರೆಸ್ ನಾಯಕರ ವಿರುದ್ಧ ಸೆಕ್ಷನ್ 341,143 ಐಪಿಸಿ ಮತ್ತು 103 ಕೆಪಿ ಆಕ್ಟ್ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿತ್ತು.

ಇದೀಗ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಜನಪ್ರತಿನಿಧಿಗಳ ಕೋರ್ಟ್, ಜುಲೈ 28ರಂದು ಖುದ್ದು ಹಾಜರಾಗುವಂತೆ 36 ಕಾಂಗ್ರೆಸ್ ನಾಯಕರಿಗೆ ಸಮನ್ಸ್ ನೀಡಿದೆ.

ಪತ್ರಿಕೆಗಳಲ್ಲಿ ಸುಳ್ಳು ಸುದ್ದಿ ಮತ್ತು ಸುಳ್ಳು ಆರೋಪಗಳ ಜಾಹೀರಾತು ಪ್ರಕಟ ಮಾಡಿರುವ ಆರೋಪ ಈಗ ಈ ಜನಪ್ರತಿನಿಧಿಗಳ ಮೇಲೆ ಕೇಳಿಬಂದಿದೆ. ಸಾರ್ವಜನಿಕರಿಗೆ ಸುಳ್ಳು ಮಾಹಿತಿ ಕೊಡಲಾಗಿದೆ. ಇದರಿಂದ ಬಿಜೆಪಿ ಹಾಗೂ ಬಿಜೆಪಿ ನಾಯಕರ ತೇಜೋವಧೆಯಾಗಿದೆ ಎಂದು ಅರ್ಜಿಯಲ್ಲಿ ಉಲ್ಲೇಖ ಮಾಡಲಾಗಿದೆ. ಬಿಜೆಪಿ ಪರವಾಗಿ ವಿವೇಕ್ ಸುಬ್ಬಾರೆಡ್ಡಿ ವಾದಿಸಿದ್ದಾರೆ.

ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ವಿಜ್ಞಾನ ಕಲಿಕಾ ಸ್ಪಂದನ ಶಿಬಿರ

ಮೈಸೂರು, ಜೂ. 13–ಮೈಸೂರು ವಿಶ್ವವಿದ್ಯಾನಿಲಯವು ಶಾಲೆಗಳಲ್ಲಿ ವಿಜ್ಞಾನ ಶಿಕ್ಷಣ ಕೇಂದ್ರದ ವತಿಯಿಂದ ಜಿಲ್ಲೆಯ ಗ್ರಾಮೀಣ ಭಾಗದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಮಾನಸಗಂಗೋತ್ರಿಯ ವಿವಿಧ ವಿಜ್ಞಾನ ವಿಭಾಗಗಳಿಗೆ ಭೇಟಿ ನೀಡಲು ಅವಕಾಶ ಮಾಡಿಕೊಟ್ಟು ಅವರ ಕಲಿಕೆಯನ್ನು ಉತ್ತೇಜನಗೊಳಿಸಲು ಮತ್ತು ವಿಜ್ಞಾನ ವಿಷಯಗಳ ಕುರಿತು ಆಸಕ್ತಿ ಹೆಚ್ಚಿಸಲು ಜೂ. 19 ರಿಂದ 24 ರವರೆಗೆ ಒಂದು ವಾರ ಕಾಲ ಮೈಸೂರು ವಿಶ್ವವಿದ್ಯಾನಿಲಯದ ಭೌತವಿಜ್ಞಾನ ವಿಭಾಗದಲ್ಲಿ ವಿಜ್ಞಾನ ಕಲಿಕಾ ಸ್ಪಂದನ ಶಿಬಿರವನ್ನು ಆಯೋಜಿಸಲಾಗಿದೆ.

ಭಾಗವಹಿಸುವ ವಿದ್ಯಾರ್ಥಿಗಳು ಗಣಿತ, ಭೌತವಿಜ್ಞಾನ, ರಸಾಯನ ವಿಜ್ಞಾನ, ಸಸ್ಯ ವಿಜ್ಞಾನ, ಪ್ರಾಣಿ ವಿಜ್ಞಾನ, ಕಂಪ್ಯೂಟರ್ ವಿಜ್ಞಾನ, ಮನೋವಿಜ್ಞಾನ ಮತ್ತು ರೇಷ್ಮೆ ಬಗ್ಗೆ ಮಾಹಿತಿಯನ್ನು ಪಡೆದುಕೊಳ್ಳಬಹುದು. ಹೆಚ್ಚಿನ ಮಾಹಿತಿಗೆ ಮೊ. 9448600121 ಸಂಪರ್ಕಿಸಬಹುದು.



ಬಡವರ ಬಂಧು ಕನ್ನಡ ಯುವಕರ ಸಂಘದ ವತಿಯಿಂದ ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ ಮತ್ತು ಅವರ ಪತ್ನಿ ಶ್ರೀಮತಿ ಗೌರಿ ಹರೀಶ್‌ಗೌಡ ಅವರ ವಿವಾಹ ವಾರ್ಷಿಕೋತ್ಸವ ಆಚರಿಸಲಾಯಿತು. ಹೆಬ್ಬಾಳ ಪೊಲೀಸ್ ಠಾಣೆ ಇನ್ಸ್‌ಸ್ಪೆಕ್ಟರ್ ಪ್ರಸಾದ್, ಪಡುವಾರಹಳ್ಳಿ ಪಾಪಣ್ಣ, ಕೃಷ್ಣಮೂರ್ತಿ, ಸುಣ್ಣದಕೇರಿ ರಮೇಶ್, ಕೃಷ್ಣ, ಕೃಪಾ, ಸುರೇಶ್, ಪುರುಷೋತ್ತಮ, ಶಿವು, ಮಾದೇಶ್, ಸತೀಶ ಮತ್ತಿತರರು ಉಪಸ್ಥಿತರಿದ್ದರು.

ದಾಖಲೆ ಬರೆದ ಬೆಂಗಳೂರು ವಿವಿ: ನ್ಯಾಕ್ ಎ++ ಶ್ರೇಣಿ

ರಾಜ್ಯದ ಏಕೈಕ, ದೇಶದ 2ನೇ ಸರ್ಕಾರಿ ವಿವಿ

ಬೆಂಗಳೂರು: ಪ್ರತಿಷ್ಠಿತ ಬೆಂಗಳೂರು ವಿಶ್ವವಿದ್ಯಾಲಯ ಐತಿಹಾಸಿಕ ಸಾಧನೆಗೈದಿದ್ದು, ನ್ಯಾಕ್ ಎ++ ಶ್ರೇಣಿ ಪಡೆಯುವ ಮೂಲಕ ಈ ಕೀರ್ತಿಗೆ ಭಾಜನವಾದ ರಾಜ್ಯದ ಮೊದಲ ಮತ್ತು ದೇಶದ 2ನೇ ಸರ್ಕಾರಿ ವಿವಿ ಎಂಬ ಕೀರ್ತಿಗೆ ಭಾಜನವಾಗಿದೆ.

ಬೆಂಗಳೂರು ವಿಶ್ವವಿದ್ಯಾಲಯವು ರಾಜ್ಯದ ಸರ್ಕಾರಿ ವಿಶ್ವವಿದ್ಯಾಲಯಗಳ ಪೈಕಿ 'ಎ++' ಶ್ರೇಣಿ ಪಡೆದ ಏಕೈಕ ವಿಶ್ವವಿದ್ಯಾಲಯ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ದೇಶದಲ್ಲಿ ಜೆಎನ್‌ಯು (ಜವಾಹರ್ ಲಾಲ್ ನೆಹರೂ ವಿಶ್ವವಿದ್ಯಾಲಯ) ನಂತರ ಈ ಸಾಧನೆ ಮಾಡಿದ ಸರ್ಕಾರಿ ವಿಶ್ವವಿದ್ಯಾಲಯ ಎಂಬ ಕೀರ್ತಿಗೆ ಇದೀಗ ಬೆಂಗಳೂರು ವಿವಿ ಪಾತ್ರವಾಗಿದೆ.

ಈ ಬಗ್ಗೆ ಮಾಹಿತಿ ನೀಡಿರುವ ಬೆಂಗಳೂರು ವಿವಿ ಕುಲಪತಿ ಡಾ. ಎಸ್.ಎಂ. ಜಯಕರ್ ಅವರು, 'ವಿಶ್ವವಿದ್ಯಾಲಯವು 2018ರಿಂದ 2022ರವರೆಗಿನ ಮೌಲ್ಯಮಾಪನ ಅವಧಿಯ ಸ್ವಯಂ ಅಧ್ಯಯನ ವರದಿಯನ್ನು ನ್ಯಾಕ್‌ಗೆ ಸಲ್ಲಿಸಿತ್ತು. ದೇಶದ ಕೆಲವೇ ಶೈಕ್ಷಣಿಕ ಸಂಸ್ಥೆಗಳು ನಾಲ್ಕನೇ ಆವೃತ್ತಿಗೆ ಮಂಡಳಿಯಿಂದ ಮಾನ್ಯತೆ ಪಡೆದಿವೆ. ಇವುಗಳಲ್ಲಿ ದೆಹಲಿಯ ಜವಾಹರಲಾಲ್ ನೆಹರೂ ವಿಶ್ವವಿದ್ಯಾಲಯದ (ಜೆಎನ್‌ಯು) ನಂತರ ದೇಶದಲ್ಲಿ ಮೊದಲ ಬಾರಿಗೆ ಈ ಸಾಧನೆಗೈದಿರುವುದು ಬೆಂಗಳೂರು ವಿಶ್ವವಿದ್ಯಾಲಯ ಎಂಬುದು ಹೆಮ್ಮೆಯ ವಿಷಯ. ಈ ಮೂಲಕ ವಿಶ್ವವಿದ್ಯಾಲಯವು ಸಂಪೂರ್ಣ ಸ್ವಾಯತ್ತತೆಯನ್ನು ಪಡೆಯುವ ಅವಕಾಶ ಪಡೆದುಕೊಂಡಿದೆ' ಎಂದು ತಿಳಿಸಿದರು.



ಅಂತೆಯೇ 'ನ್ಯಾಕ್ ನಿಗದಿಪಡಿಸಿದ ಮಾನದಂಡಗಳಾದ ಪಠ್ಯಕ್ರಮ, ಬೋಧನೆ ಹಾಗೂ ಕಲಿಕೆ, ಮೌಲ್ಯಮಾಪನ, ಸಂಶೋಧನೆ, ಮೂಲ ಸೌಕರ್ಯ, ಕಲಿಕಾ ಸಂಪನ್ಮೂಲ, ವಿದ್ಯಾರ್ಥಿಗಳ ಪ್ರಗತಿ, ಆಡಳಿತ ಮತ್ತು ನಿರ್ವಹಣೆ, ಸಾಂಸ್ಥಿಕ ಮೌಲ್ಯಗಳಲ್ಲಿ ವಿಶ್ವವಿದ್ಯಾಲಯವು ಗರಿಷ್ಠ 4 ಅಂಕಗಳಲ್ಲಿ 3.75 ಅಂಕಗಳನ್ನು ಪಡೆದುಕೊಂಡಿದೆ. ಐದು ವರ್ಷಗಳವರೆಗೆ ಈ ಮಾನ್ಯತೆ ಇರಲಿದೆ. ನ್ಯಾಕ್ ತಂಡವು ಮೇ 17ರಿಂದ 19ರವರೆಗೆ ವಿಶ್ವವಿದ್ಯಾಲಯಕ್ಕೆ ಭೇಟಿ ನೀಡಿ, ಇಲ್ಲಿನ ಸೌಕರ್ಯ ಮತ್ತು ಶೈಕ್ಷಣಿಕ ಚಟುವಟಿಕೆಗಳ ಬಗ್ಗೆ ಮಾಹಿತಿ ಪಡೆದುಕೊಂಡಿತ್ತು' ಎಂದು ಅವರು ತಿಳಿಸಿದರು.

'ಕಳೆದ ಐದು ವರ್ಷಗಳಲ್ಲಿ ಶೈಕ್ಷಣಿಕ ಮತ್ತು ಮೂಲ ಸೌಕರ್ಯಕ್ಕೆ ಸಂಬಂಧಿಸಿದ ವಿವಿಧ ಕಾರ್ಯಗಳ ಮೂಲಕ ವಿವಿಯು ಶೈಕ್ಷಣಿಕ ಉತ್ಕೃಷ್ಟತೆಯನ್ನು ಸಾಧಿಸಿದೆ. ಹಿಂದಿನ ಎರಡು ಆವೃತ್ತಿಗಳಲ್ಲಿ 3.16 ಸಿಜಿಪಿಎಯೊಂದಿಗೆ ನ್ಯಾಕ್‌ನಿಂದ ಎ ಶ್ರೇಣಿ ಪಡೆದಿತ್ತು. ಹಲವು ಆಯಾಮಗಳಲ್ಲಿ ವಿವಿಯು ತನ್ನ ಕಾರ್ಯಕ್ಷಮತೆಯನ್ನು ಹೆಚ್ಚಿಸಿಕೊಂಡ ಪರಿಣಾಮ ಎ ಪ್ಲಸ್ ಪ್ಲಸ್ ಶ್ರೇಣಿ ಪಡೆಯಲು ಸಾಧ್ಯವಾಗಿದೆ' ಎಂದು ಡಾ. ಎಸ್.ಎಂ. ಜಯಕರ್ ತಿಳಿಸಿದರು.


11ನೇ ವರ್ಷದ ಪುಣ್ಯಸ್ಮರಣೆ



ದಿ|| ಸಿ.ಪುಟ್ಟಸ್ವಾಮಿ PSI
ಅಶೋಕ ನಗರ, ಮಳವಳ್ಳಿ
ಮರಣ: 14.06.2012

ನೀವು ನಮ್ಮನ್ನಗಲಿ ಇಂದಿಗೆ 11 ವರ್ಷ ಕಳೆದಿದೆ ನಿಮ್ಮ ನೆನಪು ನಮ್ಮೆಲ್ಲರ ಮನದಲ್ಲಿ ಹಚ್ಚ ಹಸಿರಾಗಿ ಉಳಿದಿದೆ. ನಿಮ್ಮ ಆತ್ಮದ ಬೆಳಕು ನಮಗೆಲ್ಲಾ ದಾರಿದೀಪವಾಗಿ ಮುನ್ನಡೆಸುತ್ತಿದೆ.
ದುಃಖತಪ್ತರು: ಪತ್ನಿ: ಉಮಾ ಮಹದೇವಮ್ಮ, ಮಕ್ಕಳು: ಅನಿರುದ್ಧ, ತ್ರಿಶೂಲ್ & ಭೈರವಿ, ಒಡಹುಟ್ಟಿದವರು & ಮಕ್ಕಳು ಹಾಗೂ ಕುಟುಂಬವರ್ಗ

10ನೇ ವರ್ಷದ ಪುಣ್ಯಸ್ಮರಣೆ



ಶ್ರೀ ಯು. ಶಿವಪ್ಪ ಆಳ್ವ
ಹೋಟೆಲ್ ಉದ್ಯಮಿ, ಮೈಸೂರು
ನಿಧನ: 14.06.2013
ನೀವು ನಮ್ಮನ್ನಗಲಿ ವರುಷ ಹತ್ತು ಸಂದರೂ, ನಿಮ್ಮ ಆದರ್ಶಗಳು ನಮಗೆ ದಾರಿದೀಪ
ದುಃಖತಪ್ತರು: ಪತ್ನಿ, ಮಕ್ಕಳು, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಬಂಧು ಮಿತ್ರರು.

17ನೇ ವರ್ಷದ ಸವಿನೆನಪು



ಶ್ರೀಮತಿ ಲಕ್ಷ್ಮಮ್ಮ
ದೊರೆಸ್ವಾಮಿಗೌಡರ ಧರ್ಮಪತ್ನಿ
ನಿಂಗಯ್ಯನಕೆರೆ ರಸ್ತೆ, ಕುಂಬಾರಕೊಪ್ಪಲು
ನಿಧನ: 13.06.2006
ದುಃಖತಪ್ತರು: ಗಂಡು ಮಕ್ಕಳು ಮತ್ತು ಸೊಸೆಯಂದಿರು, ಹೆಣ್ಣುಮಕ್ಕಳು ಮತ್ತು ಅಳಿಯಂದಿರು, ಮೊಮ್ಮಕ್ಕಳು ಹಾಗೂ ಮರಿಮೊಮ್ಮಕ್ಕಳು